ಸಂಪುಟ: 22, ಸಂಚಿಕೆ: 86, ಪುಟಗಳು: 8, ಭಾನುವಾರ, 5 ಜನವರಿ 2025 RNI NO. KARKAN/2002/08054
epaper: www.sanjemugilu.com

ಸುದ್ದಿಗಳ ಹೊನಲು
# ಸಂಜೆ ಮುಗಿಲು
ಕನ್ನಡ ಪ್ರಾದೇಶಿಕ ಸಂಜೆ ದಿನಪತ್ರಿಕೆ



ವೇಣು ಸಾರಥ್ಯದಲ್ಲಿ...

ಬೆಂಗಳೂರು। ಬೆಂಗಳೂರು ಗ್ರಾಮಾಂತರ। ಕೋಲಾರ। ಚಿಕ್ಕಬಳ್ಳಾಪುರ। ರಾಮನಗರ। ಮಂಡ್ಯ। ಮೈಸೂರು। ಚಾಮರಾಜನಗರ
₹3


ದಶಪ್ರಮತಿ ಮುದ್ರಣಾಲಯ
dashapramathi mudranalaya
PRE-PRESS PRINTERS
Contact: +91 9483589085 | e-mail: dashapramathimudranalaya@gmail.com
We Undertake Printing of
Newspapers | Tabloids | Magazines


### ಸುಭಾಷಿತ

ನೊಂದಾಗ ಸಮಾಧಾನ ಹೇಳಿ, ಎಡವಿ ಬಿದ್ದಾಗ ಮೇಲಕ್ಕೆ ಎತ್ತಿ, ಸುಖ ದುಃಖದಲ್ಲಿ ಭಾಗಿಯಾಗಿ, ಜೊತೆ ಜೊತೆಯಾಗಿ ಸಾಗುವ ಪವಿತ್ರ ಬಂಧವೇ ನಿಜವಾದ ಸ್ನೇಹ.

### ಪಂಚಾಂಗ

(ಭಾನುವಾರ 5, ಜನವರಿ-2025)

- ನಕ್ಷತ್ರ: ಪೂರ್ವಭದ್ರ,
- ಶ್ರೀ ಕ್ರೋಧಿ ನಾಮ ಸಂವತ್ಸರ,
- ದಕ್ಷಿಣಾಯನ, ಹೇಮಂತ ಋತು
- ಪುಷ್ಯ ಮಾಸ, ಶುಕ್ಲ ಪಕ್ಷ, • ತಿಥಿ: ಷಷ್ಠಿ
- ರಾಹುಕಾಲ: 4:46 ರಿಂದ 6:11
- ಗುಳಿಕಕಾಲ: 3:20 ರಿಂದ 4:46
- ಯಮಗಂಡಕಾಲ: 12:28 ರಿಂದ 1:54

## ಸಂಕ್ಷಿಪ್ತ ಸುದ್ದಿ

### ಡಿಕೆ ಶಿವಕುಮಾರ್ ಆರೇ ತಿಂಗಳಲ್ಲಿ ಸಿಎಂ ಆಗುವ ಪರಿಸ್ಥಿತಿ ಇದೆ



**ಚಿಕ್ಕಬಳ್ಳಾಪುರ:** ಇನ್ನೂ 6 ತಿಂಗಳಲ್ಲಿ ಡಿಸಿಎಂ ಡಿ.ಕೆ ಶಿವಕುಮಾರ್ ಮುಖ್ಯಮಂತ್ರಿ ಆಗುವ ಪರಿಸ್ಥಿತಿ ಇದೆ ಎಂದು ಸಂಸದ ಡಾ.ಕೆ ಸುಧಾಕರ್ ಭವಿಷ್ಯ ನುಡಿದಿದ್ದಾರೆ. ಸತೀಶ್ ಜಾರಕಿಹೊಳಿ ನಿವಾಸದಲ್ಲಿ ಸಿಎಂ ಡಿನ್ನರ್ ಮೀಟಿಂಗ್ ವಿಚಾರಕ್ಕೆ ಸಂಬಂಧಿಸಿದಂತೆ ಚಿಕ್ಕಬಳ್ಳಾಪುರದಲ್ಲಿ ಮಾಧ್ಯಮಗಳೊಂದಿಗೆ ಅವರು ಮಾತನಾಡಿದ್ದಾರೆ. ಬಿಜೆಪಿಯಲ್ಲಿ ಗುಂಪುಗಾರಿಕೆ ಇದೆ ಅನ್ನುವವರು ಕಾಂಗ್ರೆಸ್‌ನಲ್ಲಿ ಗುಂಪುಗಾರಿಕೆ ಇಲ್ಲವಾ? 35 ಮಂದಿ ನ್ಯೂ ಇಯರ್ ಪಾರ್ಟಿ ಡಿನ್ನರ್ ಮೀಟಿಂಗ್ ಮಾಡಿದ್ದಾರೆ. ಅದ್ರಲ್ಲೂ ಡಿಸಿಎಂ ಫಾರಿನ್ ಟೂರಲ್ಲಿ ಇರಬೇಕಾದ್ರೆ ಮಾಡಿದ್ರಲ್ಲ, ಇದು ಗುಂಪುಗಾರಿಕೆ ಅಲ್ಲವಾ..? ಎಂದು ಪ್ರಶ್ನಿಸಿದ್ದಾರೆ. ಇನ್ನೂ ಡಿಸಿಎಂ ಡಿಕೆ ಶಿವಕುಮಾರ್ 6 ತಿಂಗಳಲ್ಲಿ ಸಿಎಂ ಆಗುವ ಪರಿಸ್ಥಿತಿ ಇದೆ. ಹಾಗಾಗಿ ಸಿಎಂ ಡಿನ್ನರ್ ಮೀಟಿಂಗ್ ಮಾಡಿದ್ದಾರೆ ಎಂದು ಕುಟುಕಿದ್ದಾರೆ.

### ತಾಯಿ ಕೊಂದು ಬಳಿಗ ಮಗನೂ ನೇಣು ಬಿಗಿದುಕೊಂಡು ಆತ್ಮಹತ್ಯೆ




**ಬೆಂಗಳೂರು/ಅನೇಕಲ್:** ತಾಯಿಯನ್ನು ಕೊಂದು ಬಳಿಕ ಮಗನೂ ನೇಣು ಬಿಗಿದುಕೊಂಡು ಆತ್ಮಹತ್ಯೆ ಮಾಡಿಕೊಂಡಿರುವ ಘಟನೆ ಬೆಂಗಳೂರು ಹೊರವಲಯದ ಸೂರ್ಯಸಿಟಿ ಸಮೀಪದ ಹಳೆ ಚಂದಾಪುರದಲ್ಲಿ ನಡೆದಿದೆ. ಮಹಾಲಕ್ಷ್ಮಿ (41) ಕೊಲೆಯಾದ ಮಹಿಳೆ. ರಮೇಶ್ (21) ತಾಯಿಯನ್ನ ಕೊಲೆ ಮಾಡಿ ಆತ್ಮಹತ್ಯೆಗೆ ಶರಣಾದ ಮಗ. ಚಿತ್ರದುರ್ಗ ಮೂಲದ ಚಳ್ಳಕೆರೆಯ ಚಿಕ್ಕಹಳ್ಳಿ ಕುಟುಂಬ, ಕಳೆದ ಕೆಲ ವರ್ಷಗಳ ಹಿಂದೆ ಕೆಲಸ ಅರಸಿಕೊಂಡು ಬಂದಿದ್ದರು. ಕುಟುಂಬ ಕೂಲಿ ಕೆಲಸ ಮಾಡಿಕೊಂಡು ಜೀವನ ಸಾಗಿಸುತ್ತಿದ್ದರು. ಮಗ ಕುಡಿದು ಬಂದು ಆಗಾಗ್ಗೆ ಗಲಾಟೆ ಮಾಡುತ್ತಿದ್ದ. ನಿನ್ನೆ ರಾತ್ರಿಯೂ ಕುಡಿದು ಪುಟ 2

ತೆಲುಗು ಸಿನಿಮಾ ಟಿಕೆಟ್ ದರಗಳ ಹೆಚ್ಚಳ ಯಾಕೆ?
## ವಿವರಿಸಿದ ಪವನ್ ಕಲ್ಯಾಣ್

**ಆಂಧ್ರಪ್ರದೇಶ:** ತೆಲುಗು ಚಿತ್ರರಂಗದ ಭಾರತದ ಅತ್ಯಂತ ಯಶಸ್ವಿ ಚಿತ್ರರಂಗ. ಕಳೆದ ವರ್ಷ ಬಾಕ್ಸ್ ಆಫೀಸ್ ನಲ್ಲಿ ಅತಿ ಹೆಚ್ಚು ಹಣ ದೋಚಿದ ಚಿತ್ರರಂಗವೆಂದರೆ ಅದು ತೆಲುಗು ಚಿತ್ರರಂಗ. ಇಡೀ ದೇಶದಲ್ಲಿ ಇಲ್ಲದ ಒಂದು ವ್ಯವಸ್ಥೆ ಸಿನಿಮಾ ಟಿಕೆಟ್ ಗಳ ಕುರಿತಾಗಿ ತೆಲುಗು ರಾಜ್ಯಗಳಾದ ಆಂಧ್ರ ಮತ್ತು ತೆಲಂಗಾಣದಲ್ಲಿ ಇದೆ. ಅದುವೆ ಟಿಕೆಟ್ ಬೆಲೆಯ ಹೆಚ್ಚಳ ಮತ್ತು ಇಳಿಕೆ. ಈ ಟಿಕೆಟ್ ದರಗಳ ಏರಿಳಿತ ಯಾಕೆ ಅವಶ್ಯಕ ಎಂದು ಆಂಧ್ರ ಉಪ ಮುಖ್ಯಮಂತ್ರಿ ಮತ್ತು ಸ್ವತಃ ಸ್ಟಾರ್ ನಟರಾಗಿರುವ ಪವನ್ ಕಲ್ಯಾಣ್ ವಿವರಿಸಿದ್ದಾರೆ.



ರಾಮ್ ಚರಣ್ ನಟನೆಯ 'ಗೇಮ್ ಚೇಂಜರ್' ಸಿನಿಮಾದ ಪ್ರೀ ರಿಲೀಸ್ ಇವೆಂಟ್ ನಲ್ಲಿ ಭಾಗಿಯಾಗಿದ್ದ ಪವನ್ ಕಲ್ಯಾಣ್, ವೇದಿಕೆ ಮೇಲೆಯೇ 'ಗೇಮ್ ಚೇಂಜರ್' ಸಿನಿಮಾದ ಟಿಕೆಟ್ ದರ ಹೆಚ್ಚಳ ಮತ್ತು ಹೆಚ್ಚುವರಿ ಶೋಗೆ ಅನುಮತಿ ನೀಡಿರುವುದಾಗಿ ತಿಳಿಸಿದರು. ಅದರ ಜೊತೆಗೆ ಒಂದು ದೊಡ್ಡ ಸಿನಿಮಾಕ್ಕೆ ಟಿಕೆಟ್ ದರದ ಹೆಚ್ಚಳ ಯಾಕೆ ಅವಶ್ಯಕ ಎಂದೂ ಸಹ ಹೇಳಿದರು.

ಸಿನಿಮಾ ಟಿಕೆಟ್ ದರಗಳು ಡಿಮ್ಯಾಂಡ್ ಮತ್ತು ಸಪ್ಲೈ ಮಾದರಿಯನ್ನು ಅನುಸರಿಸುತ್ತಿವೆ. ಪುಟ 2

ಮದುವೆ ಮಾಡ್ಕೊಡಿ ಎಂದಿದ್ದಕ್ಕೆ
## ಅಟ್ಟಾಡಿಸಿ ಕೊಂದ್ರು

**ಕೋಲಾರ:** ವಿವಾಹಿತ ವ್ಯಕ್ತಿಯೊಬ್ಬ ತನ್ನ ಪ್ರೇಯಸಿಯ ಮನೆಗೆ ಹೋಗಿ ಹಿಂತಿರುಗುತ್ತಿದ್ದಾಗ ಆಕೆಯ ಕುಟುಂಬಸ್ಥರು ಹಾಗೂ ಸ್ಥಳೀಯರು ಅಟ್ಟಾಡಿಸಿ ಹೊಡೆದು ಹತ್ಯೆಗೈದ ಘಟನೆ ಕೋಲಾರದ ನೂರ್ ನಗರದಲ್ಲಿ ಶನಿವಾರ ಮಧ್ಯರಾತ್ರಿ ನಡೆದಿದೆ.

ಕೊಲೆಯಾದ ವ್ಯಕ್ತಿಯನ್ನು ಉಸ್ಮಾನ್ ಎಂದು ಗುರುತಿಸಲಾಗಿದೆ. ಆತ ತನ್ನ ಪ್ರೇಯಸಿ ಮನೆಗೆ ಹೋಗಿ



ಬರುವಾಗ ಆಕೆಯ ಕುಟುಂಬಸ್ಥರು ಹಾಗೂ ಸ್ಥಳೀಯರು ಅಟ್ಟಾಡಿಸಿ ಹೊಡೆದಿದ್ದಾರೆ. ಬಳಿಕ ಪೊಲೀಸರು ಆತನನ್ನು ಚಿಕಿತ್ಸೆಗಾಗಿ ಆಸ್ಪತ್ರೆಗೆ ದಾಖಲಿಸಿದ್ದರು. ಪುಟ 2

# ಸರ್ಕಾರಿ ಬಸ್ ಟಿಕೆಟ್ ದರ ಏರಿಕೆ ಬೆನ್ನಲ್ಲೇ ಬಂತು
# ಆಟೋ ದರವೂ ಹೆಚ್ಚಳ?

**ಬೆಂಗಳೂರು:** ಸರ್ಕಾರಿ ಬಸ್ ಗಳ ಟಿಕೆಟ್ ದರ ಏರಿಕೆ ಸಾರ್ವಜನಿಕರ ಜೇಬು ಸುಡುತ್ತಿದೆ. 7 ರೂಪಾಯಿಂದ 115 ರೂ.ವರೆಗೆ ಟಿಕೆಟ್ ದರ ಏರಿಕೆಯಾಗಿದ್ದು, ಜನರ ಜೇಬಿಗೆ ಕತ್ತರಿ ಬಿದ್ದಂತಾಗಿದೆ. ಈ ನಡುವೆ ಆಟೋರಿಕ್ಷಾ ಪ್ರಯಾಣ ದರ ಕೂಡ ಏರಿಕೆ ಮಾಡುವಂತೆ ಒತ್ತಡ ಹೇರಲಾಗುತ್ತಿದೆ. ಆಟೋರಿಕ್ಷಾ ಪ್ರಯಾಣ ದರ ಏರಿಕೆ ಮಾಡುವಂತೆ ಬೆಂಗಳೂರು ನಗರ ಜಿಲ್ಲಾಧಿಕಾರಿಗಳಿಗೆ ಕೆಲ ಆಟೋ ಚಾಲಕ ಸಂಘಟನೆಗಳು ಮನವಿ ಮಾಡಿವೆ.

ಒಂದು ಕಿಲೋಮೀಟರ್‌ಗೆ 5 ರೂಪಾಯಿ, ಎರಡು ಕಿಲೋಮೀಟರ್‌ಗೆ 10 ರೂಪಾಯಿ ಏರಿಕೆ ಮಾಡುವಂತೆ ಮಾಡಿವೆ. ಸದ್ಯ ಆಟೋರಿಕ್ಷಾ ಪ್ರಯಾಣ ದರ ಕಿಲೋಮೀಟರ್ ಗೆ 30 ರೂಪಾಯಿ ಇದೆ. ಇದೀಗ 40 ರೂಪಾಯಿಗೆ ಏರಿಕೆ ಮಾಡುವಂತೆ ಮನವಿ ಮಾಡಿವೆ.

ದರ ಏರಿಕೆ ಸಂಬಂಧ 2024ರ ಡಿಸೆಂಬರ್ 23 ರಂದು ಅಸೋಸಿಯೇಷನ್ ಗಳ ಸಭೆ ಕರೆಯಲಾಗಿತ್ತು. ಆದರೆ, ಕಾರಣಾಂತರಗಳಿಂದ ಸಭೆಯನ್ನು ಮುಂದೂಡಲಾಯಿತು. ಈಗ ಮತ್ತೆ ಇದೇ ತಿಂಗಳು ಮೂರನೇ ವಾರದಲ್ಲಿ ಸಭೆ ನಡೆಯಲಿದ್ದು, ಪ್ರಯಾಣ ದರ ಏರಿಕೆ ಬಗ್ಗೆ ತೀರ್ಮಾನ ಆಗಲಿದೆ.



ಆದರೆ, ಆಟೋ ಸಂಘಟನೆಗಳಲ್ಲೇ ದರ ಏರಿಕೆ ಬಗ್ಗೆ ಒಮ್ಮತವಿಲ್ಲ. ಬೈಕ್ ಟ್ಯಾಕ್ಸಿ ಬ್ಯಾನ್ ಆಗುವವರೆಗೂ ಆಟೋ ಪ್ರಯಣಾ ದರ ಏರಿಕೆ ಬೇಡ ಎನ್ನುತ್ತಿದ್ದಾರೆ. ಎಲ್ಲ ಚಾಲಕ ಸಂಘಟನೆಗಳಿಂದ ಒಂದೇ ಅಭಿಪ್ರಾಯ ನೀಡಿದ ಬಳಿಕ ಬೆಂಗಳೂರು ನಗರ ಜಿಲ್ಲಾಧಿಕಾರಿಗಳು ದರ ಏರಿಕೆ ಮಾಡಲಿದ್ದಾರೆ.

**ದರ ಏರಿಕೆ ಕಮಿಟಿಯಲ್ಲಿ ಯಾರೆಲ್ಲ ಇರುತ್ತಾರೆ :** ಬೆಂಗಳೂರು ನಗರ ಜಿಲ್ಲಾಧಿಕಾರಿ- ಪ್ರಾದೇಶಿಕ ಸಾರಿಗೆ ಪ್ರಾಧಿಕಾರದ ಅಧ್ಯಕ್ಷ, ಜಯನಗರ ಆರ್ ಟಿಓ ಕಚೇರಿಯ ಓರ್ವ ಅಧಿಕಾರಿ- ಕಾರ್ಯದರ್ಶಿ ಹಾಗೂ ಟ್ರಾಫಿಕ್ ಡಿಸಿಪಿ (ಯಾವುದಾದರು ಒಂದು ವಿಭಾಗ) ಕಾನೂನು ಮಾಪನಶಾಸ್ತ್ರ ಇಲಾಖೆಯ ಅಧಿಕಾರಿ, ಗ್ರಾಹಕರ ವೇದಿಕೆಯಿಂದ ಓರ್ವ ಅಧಿಕಾರಿ ಕಮಿಟಿ ಸದಸ್ಯರಾಗಿರುತ್ತಾರೆ.

ದೆಹಲಿಯಲ್ಲಿ 12,200 ಕೋಟಿ ರೂ.ಗಳ ಯೋಜನೆಗಳಿಗೆ ಇಂದು ಪ್ರಧಾನಿ ಮೋದಿ
## ಶಂಕುಸ್ಥಾಪನೆ

**ನವದೆಹಲಿ:** ಪ್ರಧಾನಮಂತ್ರಿ ನರೇಂದ್ರ ಮೋದಿ ರವಿವಾರ (ಜ.05) ದೆಹಲಿ ಮೆಟ್ರೋದ ನಾಲ್ಕನೇ ಹಂತ ಜನಕಪುರಿ ಮತ್ತು ಕೃಷ್ಣಾ ಪಾರ್ಕ್ ಮೆಟ್ರೋ ಮಾರ್ಗವನ್ನು ಉದ್ಘಾಟಿಸಲಿದ್ದಾರೆ. ಸುಮಾರು 1,200 ಕೋಟಿ ರೂ. ಮೌಲ್ಯದ ಯೋಜನೆ ಇದಾಗಿದೆ. ಇದೇ ವೇಳೆ, ದೆಹಲಿ ಮೆಟ್ರೋ 4ನೇ ಹಂತದ 26.5 ಕಿಲೋಮೀಟರ್ ರಿಥಾಲಾ-ಕುಂಡ್ಲಿ ಮಾರ್ಗಕ್ಕೆ ಶಂಕುಸ್ಥಾಪನೆ ನೆರವೇರಿಸುತ್ತಾರೆ. ಇದರ ಅಂದಾಜು ವೆಚ್ಚ 6,230 ಕೋಟಿ ರೂ. ಆಗಿದೆ. ಹೊಸ ಕಾರಿಡಾರ್ ದೆಹಲಿಯ ರಿಥಾಲಾವನ್ನು ಹರಿಯಾಣದ ನಾಥುಪುರ್ (ಕುಂಡ್ಲಿ) ಗೆ ಸಂಪರ್ಕಿಸುತ್ತದೆ. ಪುಟ 2



## ಎಂಎಲ್‌ಸಿ ಧನಂಜಯ ಹೆಸರಿನಲ್ಲಿ ವಿಷಪೂರಿತ ಸ್ವೀಟ್ ಬಾಕ್ಸ್ ಹಂಚಿಕೆ

**ಶಿವಮೊಗ್ಗ:** ಹೊಸವರ್ಷಕ್ಕೆ ಶುಭಾಶಯ ಕೋರುವ ನೆಪದಲ್ಲಿ ವಿಧಾನಪರಿಷತ್ ಸದಸ್ಯ ಡಾ. ಧನಂಜಯ ಸರ್ಜಿ ಹೆಸರಿನಲ್ಲಿ ನಗರದ ಮೂವರು ಗಣ್ಯ ವ್ಯಕ್ತಿಗಳಿಗೆ ವಿಷಪೂರಿತ ಸ್ವೀಟ್ ಬಾಕ್ಸ್ ಗಳನ್ನು ಡಿಟಿಡಿಸಿ ಕೋರಿಯರ್ ಮೂಲಕ ಕಳುಹಿಸಿರುವ ಆಘಾತಕಾರಿ ಘಟನೆ ಬೆಳಕಿಗೆ ಬಂದಿದೆ.

ಡಿಟಿಡಿಸಿ ಕೋರಿಯರ್ ಮೂಲಕ ಭದ್ರಾವತಿಯಿಂದ ಈ ಪಾರ್ಸೆಲ್ ಕಳುಹಿಸಲಾಗಿದೆ. ಒಬ್ಬರು ಇದನ್ನು ಬಾಯಲ್ಲಿ ಹಾಕಿಕೊಂಡ ತಕ್ಷಣ ಕಹಿ ಅಂಶ ಪತ್ತೆಯಾಗಿದೆ. ಕೂಡಲೇ ಪ್ರಕರಣ ಬೆಳಕಿಗೆ ಬಂದಿದ್ದು, ದೊಡ್ಡ ಗಂಡಾಂತರ ತಪ್ಪಿದಂತಾಗಿದೆ. ಈ ವಿಚಾರ ತಿಳಿಯುತ್ತಿದ್ದಂತೆ ಎಂಎಲ್ ಸಿ ಧನಂಜಯ ಸರ್ಜಿ ಅವರು ಸ್ವೀಟ್ ಅನ್ನು ಲ್ಯಾಬ್ ಗೆ ರವಾನೆ ಮಾಡಿದ್ದಾರೆ. ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿಯವರಿಗೆ ದೂರು ನೀಡಿದ್ದಾರೆ. ಸ್ವೀಟ್ ಬಾಕ್ಸ್ ಕಳುಹಿಸಿದ ಅನಾಮಧೇಯ ವ್ಯಕ್ತಿ ವಿರುದ್ಧ ಕ್ರಮ ಕೈಗೊಳ್ಳುವಂತೆ ಒತ್ತಾಯಿಸಿದ್ದಾರೆ.



**ಮಕ್ಕಳು ತಿಂದಿದ್ದರೆ ದೊಡ್ಡ ಅನಾವುತ ಆಗುತಿತ್ತು:** ನನ್ನ ಹೆಸರಿನಲ್ಲಿ ಅನಾಮಧೇಯ ವ್ಯಕ್ತಿ ಕಹಿ ಅಂಶ ಇರುವ ಸ್ವೀಟ್ ಬಾಕ್ಸ್ ಕೋರಿಯರ್ ಮಾಡಿದ್ದಾನೆ. ಈ ಬಗ್ಗೆ ಎಸ್ ಪಿ ಅವರಿಗೆ ದೂರು ನೀಡಿದ್ದೇವೆ. ಅನಾಮಧೇಯ ವ್ಯಕ್ತಿಯನ್ನು ಪತ್ತೆ ಹಚ್ಚಿ ಆತನ ವಿರುದ್ಧ ಕ್ರಮ ಕೈಗೊಳ್ಳುವಂತೆ ಒತ್ತಾಯಿಸಿದ್ದೇವೆ. ಈ ಬಗ್ಗೆ ಪೊಲೀಸರು ಕಾರ್ಯಾಚರಣೆ ನಡೆಸುತ್ತಿದ್ದಾರೆ. ಆರೋಪಿಯನ್ನು ಪತ್ತೆ ಹಚ್ಚಿ ಬಂಧಿಸುವ ಭರವಸೆ ಎಸ್ ಪಿ ನೀಡಿದ್ದಾರೆ ಎಂದು ಎಂಎಲ್ ಸಿ ಡಾ.ಧನಂಜಯ ಸರ್ಜಿ ಹೇಳಿದರು. ಈ ಕಹಿಭರಿತ ಸ್ವೀಟ್ ಬಾಕ್ಸ್ ಅನ್ನು ಮಕ್ಕಳು ತಿಂದಿದ್ದರೆ ದೊಡ್ಡ ಅನಾವುತ ಆಗುತಿತ್ತು. ಇಂತಹ ಘಟನೆ ಮತ್ತೆ ಮರುಕಳಿಸಬಾರದು ಆರೋಪಿಗೆ ತಕ್ಕ ಶಿಕ್ಷೆ ಆಗಬೇಕು ಎಂದು ಒತ್ತಾಯಿಸಿದರು. ಪುಟ 2

ಕಚೇರಿಯಲ್ಲೇ ಮಹಿಳೆ ಜತೆ ರಾಸಲೀಲೆ ಕೇಸ್
## ಡಿವೈಎಸ್‌ಪಿ ರಾಮಚಂದ್ರಪ್ಪಗೆ 14 ದಿನ ನ್ಯಾಯಾಂಗ ಬಂಧನ

**ತುಮಕೂರು:** ಕಚೇರಿಯಲ್ಲಿ ಮಹಿಳೆ ಜೊತೆ ರಾಸಲೀಲೆ ಪ್ರಕರಣಕ್ಕೆ ಸಂಬಂಧಿಸಿದಂತೆ ಡಿವೈಎಸ್ ಪಿ ರಾಮಚಂದ್ರಪ್ಪಗೆ ಒಟ್ಟು 14 ದಿನಗಳ ಕಾಲ ನ್ಯಾಯಾಂಗ ಬಂದನ ವಿಧಿಸಿ ಮಧುಗಿರಿ ಜೆಎಂಎಫ್ ಸಿ ಕೋರ್ಟ್ ಶನಿವಾರ ಆದೇಶ ಹೊರಡಿಸಿದೆ. ಸೋಮವಾರದವರೆಗೂ ಮಧುಗಿರಿ ಜೈಲಿನಲ್ಲಿರುವ ಡಿವೈಎಸ್ ಪಿ ರಾಮಚಂದ್ರಪ್ಪ, ಆ ಬಳಿಕ ತುಮಕೂರು ಜಿಲ್ಲಾ ಕಾರಾಗೃಹಕ್ಕೆ ಶಿಫ್ಟ್ ಮಾಡಲು ಆದೇಶಿಸಲಾಗಿದೆ.



ಜಿಲ್ಲೆಯ ಮಧುಗಿರಿ ಉಪವಿಭಾಗ ಡಿವೈಎಸ್ ಪಿ ಕಚೇರಿಗೆ ಪಾವಗಡ ಮೂಲದ ಮಹಿಳೆಯೊಬ್ಬರು ತಮ್ಮ ಜಮೀನಿನ ವ್ಯಾಜ್ಯ ವಿಚಾರಕ್ಕೆ ಮಧುಗಿರಿ ಡಿವೈಎಸ್ ಪಿ ರಾಮಚಂದ್ರಪ್ಪಗೆ ದೂರು ನೀಡಲು ಬಂದಿದ್ದರು. ಈ ವೇಳೆ ಡಿವೈಎಸ್ ಪಿ ಆಕೆಯನ್ನ ಪುಸಲಾಯಿಸಿ ಕಚೇರಿಯಲ್ಲಿರುವ ಆ ಯಂಟಿ ಚೇಂಬರ್ ಗೆ ಕರೆದೊಯ್ದು ಬಲವಂತವಾಗಿ ಲೈಂಗಿಕ ದೌರ್ಜನ್ಯ ಎಸಗಿದ್ದರು. ಈ ಕೃತ್ಯ ಮೊಬೈಲ್ ಯಲ್ಲಿ ಸೆರೆಯಾಗಿದ್ದು, ಎಲ್ಲೆಡೆ ಸಿಕ್ಕಾಪಟ್ಟೆ ವೈರಲ್ ಆಗಿತ್ತು.

ಯಾವಾಗ ತಮ್ಮ ಕಚೇರಿಯಲ್ಲಿ ಮಹಿಳೆಗೆ ಲೈಂಗಿಕ ದೌರ್ಜನ್ಯ ಮಾಡಿದರೋ ಡಿವೈಎಸ್ ಪಿ ವಿರುದ್ಧ ಸಾಕಷ್ಟು ಆಕ್ರೋಶ ಕೇಳಿಬಂತು. ಪುಟ 2

## ಅವೈಜ್ಞಾನಿಕ ರೋಡ್ ಹಂಪ್‌ಗೆ ಕೈ ಮುಖಂಡನ ಪುತ್ರ ಬಲಿ!

**ಮಂಡ್ಯ:** ರಸ್ತೆ ಅಪಘಾತ ತಪ್ಪಿಸಲು ವಾಹನ ಸವಾರರ ಸ್ಪೀಡ್ ಕಂಟ್ರೋಲ್‌ಗೆ ಅಂತಾ ರೋಡ್ ಹಂಪಗಳನ್ನು ಮಾಡಲಾಗುತ್ತದೆ. ಆದರೆ ಅದೇ ರೋಡ್ ಹಂಪ್‌ನಿಂದ ಕಾಂಗ್ರೆಸ್ ಮುಖಂಡರ ಮಗನೊಬ್ಬ ಜೀವ ಕಳೆದುಕೊಂಡಿರುವ ಘಟನೆ ಮಂಡ್ಯದ ವಿಸಿ ಫಾರಂ ಗೇಟ್ ಬಳಿ ನಡೆದಿದೆ.

ಬೆಂಗಳೂರು-ಮೈಸೂರು ಹಳೆ ಹೆದ್ದಾರಿಯಲ್ಲಿ ಅವೈಜ್ಞಾನಿಕ ರಸ್ತೆ ಹಂಪ್ ಹಾಕಿರುವುದರಿಂದ ಕಾಂಗ್ರೆಸ್ ಮುಖಂಡನ ಪುತ್ರ ಬಲಿಯಾಗಿದ್ದಾನೆ. ಮಂಡ್ಯದ ವಿಸಿ ಫಾರಂ ಗೇಟ್ ಬಳಿ ಹೆದ್ದಾರಿಯಲ್ಲಿ ಹಾಕಿದ್ದ ಅವೈಜ್ಞಾನಿಕ ರೋಡ್ ಹಂಪ್‌ನಿಂದ ಮೊನ್ನೆ ರಾತ್ರಿ ದ್ಯಾಪಸಂದ್ರ ಗ್ರಾಮದ ಕೈ ಮುಖಂಡ ಶಂಕರಲಿಂಗೇಗೌಡ ಪುತ್ರನಿಗೆ ಅಪಘಾತವಾಗಿತ್ತು. ಬೈಕ್‌ನಿಂದ ಬಿದ್ದು ರಸ್ತೆಯಲ್ಲಿ ನರಳಾಡಿದ್ದರು. ನಿನ್ನೆ ಚಿಕಿತ್ಸೆ ಫಲಕಾರಿಯಾಗದೇ ಸಾವನ್ನಪ್ಪಿದ್ದಾರೆ.

**ಸಾವಿನ ಬಳಿಕ ಎಚ್ಚೆತ್ತ ಹೆದ್ದಾರಿ ಪ್ರಾಧಿಕಾರ:** ಕಾಂಗ್ರೆಸ್ ಮುಖಂಡನ ಪುತ್ರ ಸಾವಿಗೀಡಾದ ಬಳಿಕ ಎಚ್ಚೆತ್ತ ಹೆದ್ದಾರಿ ಪ್ರಾಧಿಕಾರ, ರಸ್ತೆಗೆ ಹಾಕಿದ್ದ ಹಂಪ್



ತೆರವುಗೊಳಿಸಿದ್ದಾರೆ. ಒಂದು ವಾರದ ಹಿಂದೆ ಹೆದ್ದಾರಿ ಪ್ರಾಧಿಕಾರ ಈ ರೋಡ್ ಹಂಪ್ ನಿರ್ಮಿಸಿದ್ದರು. ಸ್ಥಳೀಯರ ಮನವಿ ಹಿನ್ನೆಲೆ ಕಾಟಾಚಾರಕ್ಕೆ ರಸ್ತೆ ಹಂಪ್ ನಿರ್ಮಾಣ ಮಾಡಿದ್ದರು. ಭಾರೀ ಗಾತ್ರದ ಹಂಪ್ ನಿರ್ಮಾಣ ಮಾಡಿ ರಿಫ್ಲೆಕ್ಟರ್ ಹಾಕದೆ ಹೆದ್ದಾರಿ ಪ್ರಾಧಿಕಾರದ ಅಧಿಕಾರಿಗಳು ನಿರ್ಲಕ್ಷ್ಯ ತೋರಿದ್ದಾರೆ. ಅಧಿಕಾರಿಗಳ ನಿರ್ಲಕ್ಷ್ಯಕ್ಕೆ 15ಕ್ಕೂ ಹೆಚ್ಚು ಅಪಘಾತಗಳಾಗಿದ್ದು, ಹಲವರಿಗೆ ಗಾಯ, ಒಂದು ಸಾವು ಸಂಭವಿಸಿದೆ. ಪುಟ 2

ಮಂಗಳೂರಿನಲ್ಲಿ ಜಲಸಿರಿ ಕಾಮಗಾರಿ ಕಿರಿಕಿರಿ
## ಕೊಳವೆ ಅಳವಡಿಸಲು ಅಲ್ಲಲ್ಲಿ ರಸ್ತೆ ಅಗೆತ

**ಮಂಗಳೂರು:** ಕಡಲನಗರಿ ಮಂಗಳೂರಿನಲ್ಲಿ ದಿನದ 24 ಗಂಟೆ ಕುಡಿಯುವ ನೀರು ಒದಗಿಸುವುದಕ್ಕಾಗಿ ಜಲಸಿರಿ ಯೋಜನೆ ಜಾರಿಗೊಳಿಸಲಾಗಿದೆ. ಆದರೆ, ಯೋಜನೆಯ ಅವ್ಯವಸ್ಥೆಯಿಂದಾಗಿ ಮಂಗಳೂರು ನಗರಕ್ಕೆ ಜಲಸಿರಿ ಶಾಪವಾಗಿ ಪರಿಣಮಿಸಿದೆ. ಕಾಮಗಾರಿ ಆರಂಭವಾಗಿ ಐದು ವರ್ಷವಾದರೂ ಒಂದೇ ಒಂದು ವಾರ್ಡ್‌ಗೂ ನೀರು ಪೂರೈಕೆ ಮಾಡದ ಗುತ್ತಿಗೆದಾರ್ಷ ಸಂಸ್ಥೆ ರಸ್ತೆ ಅಗೆಯುವುದರಲ್ಲೇ ಬ್ಯುಸಿಯಾಗಿದ್ದು, ಆಡಳಿತ ವ್ಯವಸ್ಥೆಗೆ ಜನ ಹಿಡಿಶಾಪ ಹಾಕುತ್ತಿದ್ದಾರೆ.

ದಿನದ ಇಪ್ಪತ್ತನಾಲ್ಕು ಗಂಟೆ ಕುಡಿಯುವ ನೀರು ಒದಗಿಸಬೇಕೆಂಬ ಉದ್ದೇಶಕ್ಕೆ ಮಹಾನಗರ ಪಾಲಿಕೆ, ನಗರಸಭೆ, ಪುರಸಭೆ ವ್ಯಾಪ್ತಿಯಲ್ಲಿ ಜಲಸಿರಿ



ಯೋಜನೆಯನ್ನು ಕೇಂದ್ರ, ರಾಜ್ಯ ಸರ್ಕಾರ ಜಾರಿಗೊಳಿಸಿದೆ. ಮಂಗಳೂರು ಮಹಾನಗರ ಪಾಲಿಕೆ ವ್ಯಾಪ್ತಿಯಲ್ಲೂ 2019ರಲ್ಲಿ ಯೋಜನೆಯನ್ನು ಜಾರಿಗೊಳಿಸಲಾಗಿದೆ. ಆದರೆ, ಯೋಜನೆ ಜಾರಿಯಾಗಿ ಐದು ವರ್ಷವಾದರೂ ಇನ್ನು ಸಹ ಕಾಮಗಾರಿ ಪೂರ್ತಿಯಾಗಿಲ್ಲ. ಪುಟ 2

ಮಹಿಳೆ, ಅವಳಿ ಮಕ್ಕಳ ಕೊಲೆ ಕೇಸ್
## 19 ವರ್ಷಗಳ ಬಳಿಕ ಇಬ್ಬರು ಮಾಜಿ ಸೈನಿಕರು ಅರೆಸ್ಟ್!

**ತಿರುವನಂತಪುರಂ:** ಮಹಿಳೆ ಹಾಗೂ ಆಕೆಯ 17 ದಿನದ ಅವಳಿ ಮಕ್ಕಳನ್ನು ಕೊಲೆಗೈದು 19 ವರ್ಷಗಳ ಕಾಲ ತಲೆಮರೆಸಿಕೊಂಡಿದ್ದ ಇಬ್ಬರು ಮಾಜಿ ಸೈನಿಕರನ್ನು ಕೇರಳ ಪೊಲೀಸರು ಬಂಧಿಸಿದ್ದಾರೆ.

ಬಂಧಿತ ಆರೋಪಿಗಳನ್ನು ದಿಬಿಲ್ ಕುಮಾರ್ ಬಿ ಹಾಗೂ ರಾಜೇಶ್.ಪಿ ಎಂದು ಗುರುತಿಸಲಾಗಿದೆ. ಆರೋಪಿಗಳು ಫೆಬ್ರವರಿ 10, 2006 ರಂದು ಕೃತ್ಯ ಎಸಗಿದ್ದರು. ಪಿತೃತ್ವ ಪರೀಕ್ಷೆಯಲ್ಲಿ ಅವಳಿ ಹೆಣ್ಣುಮಕ್ಕಳ ತಂದೆ ಎಂದು ಸಾಬೀತಾಗುತ್ತದೆ ಎಂದು ಹೆದರಿ ಆರೋಪಿ ಕುಮಾರ್ ತನ್ನ ಸಹ ಸೈನಿಕನ ಸಹಾಯದಿಂದ ಅವಳನ್ನು ಮತ್ತು ಶಿಶುಗಳನ್ನು ಕೊಲೆಗೈದಿದ್ದ. ಬಳಿಕ ಇಬ್ಬರು ಸೈನ್ಯವನ್ನು ತೊರೆದಿದ್ದರು.

ಕೇರಳದ ಕೊಲ್ಲಂ ಜಿಲ್ಲೆಯ ಆಂಚಲ್ ಬಳಿಯ ಯೆರಮ್‌ನಲ್ಲಿ ರಂಜಿನಿ (24) ಮತ್ತು ಅವಳ



ನವಜಾತ ಹೆಣ್ಣುಮಕ್ಕಳನ್ನು ಅವರ ಬಾಡಿಗೆ ಮನೆಯಲ್ಲಿ ಹತ್ಯೆ ಮಾಡಲಾಗಿತ್ತು. ಅವಳಿ ಮಕ್ಕಳ ಜನನ ಪ್ರಮಾಣ ಪತ್ರ ಪಡೆಯಲು ಹೋಗಿದ್ದ ರಂಜಿನಿ ಅವರ ತಾಯಿ ಪಂಚಾಯತ್ ಕಚೇರಿಯಿಂದ ಹಿಂತಿರುಗಿದಾಗ ಮನೆಯಲ್ಲಿ ಶವಗಳು ಪತ್ತೆಯಾಗಿದ್ದವು. ಪುಟ 2

## ಸಂಕ್ರಾಂತಿ ವೇಳೆಗೆ ದರ್ಶನ್ ಬೆನ್ನುನೋವಿಗೆ ಆಪರೇಷನ್

**ಮೈಸೂರು:** ರೇಣುಕಾಸ್ವಾಮಿ ಕೊಲೆ ಕೇಸ್‌ನಲ್ಲಿ ಜೈಲು ಸೇರಿ, ಜಾಮೀನಿನ ಮೇಲೆ ಹೊರಗೆ ಬಂದಿರುವ ನಟ ದರ್ಶನ್ ಬೆನ್ನುನೋವಿಗೆ ಶಸ್ತ್ರಚಿಕಿತ್ಸೆ ಮಾಡಿಸಿಕೊಳ್ಳಲು ಒಪ್ಪಿಕೊಂಡಿದ್ದಾರೆ ಎನ್ನಲಾಗಿದೆ. ಸಂಕ್ರಾಂತಿ ಹಬ್ಬದ ವೇಳೆ ದರ್ಶನ್‌ಗೆ ಆಪರೇಷನ್ ಫಿಕ್ಸ್ ಆಗಿದ್ದು, ಮೈಸೂರಿನ ಆಸ್ಪತ್ರೆಯೊಂದರಲ್ಲಿ ಆಪರೇಷನ್‌ಗೆ ಒಳಗಾಗಲಿದ್ದಾರೆ.



ಆಪರೇಷನ್ ಮಾಡಿದ ಒಂದೂವರೆ ತಿಂಗಳು ಫೈಟ್ ದೃಶ್ಯದಲ್ಲಿ ದರ್ಶನ್ ಭಾಗಿಯಾಗುವಂತಿಲ್ಲ, ಕೇವಲ ಚಿತ್ರೀಕರಣದಲ್ಲಿ ಮಾತ್ರ ಭಾಗಿಯಾಗಬಹುದು ಎಂದು ದರ್ಶನ್‌ಗೆ ಚಿಕಿತ್ಸೆ ನೀಡುತ್ತಿರುವ ವೈದ್ಯ ಡಾ.ಅಜಯ್ ಹೆಗ್ಡೆ ಮಾಹಿತಿ ನೀಡಿದ್ದಾರೆ. ಫೆಬ್ರವರಿಯಲ್ಲಿ ದರ್ಶನ್ ಚಿತ್ರೀಕರಣದಲ್ಲಿ ಭಾಗಿಯಾಗಲಿದ್ದಾರೆ. ಇದಕ್ಕಾಗಿ ಚಿತ್ರೀಕರಣಕ್ಕೂ ಮುನ್ನ ಆಪರೇಷನ್ ಮಾಡಿಸಿಕೊಳ್ಳಲು ನಿರ್ಧರಿಸಿದ್ದಾರೆ. ಆಪರೇಷನ್ ಬಳಿಕ 3 ದಿನ ವಿಶ್ರಾಂತಿಯಲ್ಲಿರಬೇಕು ಎಂದು ವೈದ್ಯರು ತಿಳಿಸಿದ್ದಾರೆ. ಈಗ ದರ್ಶನ್ ವರ್ಕೌಟ್ ಶುರು ಮಾಡಿದ್ದಾರೆ. ಆದರೆ ಅಪ್ಪರ್ ಬಾಡಿ, ಲೋಯರ್ ಬಾಡಿ ವರ್ಕೌಟ್ ಮಾಡಲು ಬಿಟ್ಟಿಲ್ಲ ಎಂದು ವೈದ್ಯರು ಮಾಹಿತಿ ಹಂಚಿಕೊಂಡಿದ್ದಾರೆ.

## ಬಿಬಿಎಂಪಿ ಕಸದ ಲಾರಿಗೆ ಅಕ್ಕ-ತಂಗಿ ಬಲಿ

**ಬೆಂಗಳೂರು:** ಬಿಬಿಎಂಪಿ ಕಸದ ಲಾರಿಗೆ ಇಬ್ಬರು ಮಹಿಳೆಯರು ಬಲಿಯಾಗಿರುವ ಘಟನೆ ಬೆಂಗಳೂರಿನಲ್ಲಿ ನಡೆದಿದೆ. ಗೋವಿಂದಪುರ ನಿವಾಸಿಗಳಾದ ನಾಜಿಯಾ ಸುಲ್ತಾನ್, ನಾಜಿಯಾ ಇರ್ಫಾನ್ ಮೃತ ಮಹಿಳೆಯರು. ಥಣಿಸಂದ್ರ ಮುಖ್ಯರಸ್ತೆಯಲ್ಲಿ ಘಟನೆ ನಡೆದಿದೆ. ಬೈಕ್ ಮೇಲೆ ಹೋಗುತ್ತಿದ್ದ ಇಬ್ಬರು ಮಹಿಳೆಯರ ಮೇಲೆ ಚಾಲಕ ಲಾರಿ ಹತ್ತಿಸಿದ್ದಾನೆ. ಯಲಹಂಕ ಸರ್ಕಾರಿ ಆಸ್ಪತ್ರೆಗೆ ಮೃತದೇಹಗಳ ರವಾನೆ ಮಾಡಲಾಗಿದೆ. ಲಾರಿ ಚಾಲಕನನ್ನು ಹೆಣ್ಣೂರು ಸಂಚಾರಿ ಪೊಲೀಸರು ವಶಕ್ಕೆ ಪಡೆದಿದ್ದಾರೆ.

## ತಂದೆಯನ್ನೇ ಹತ್ಯೆಗೈದು ಹೃದಯಾಘಾತದ ಕತೆಕಟ್ಟಿದ್ದ ಮಗ ಅರೆಸ್ಟ್

**ಹಾಸನ:** ತಂದೆಯನ್ನೇ ಹತ್ಯೆಗೈದು ಹೃದಯಾಘಾತ ಎಂದು ಬಿಂಬಿಸಿದ್ದ ಆರೋಪಿಯನ್ನು ಪೊಲೀಸರು ಸಕಲೇಶಪುರದ ಲಿಂಗಾಪುರ ಗ್ರಾಮದಲ್ಲಿ ಬಂಧಿಸಿದ್ದಾರೆ. ಬಂಧಿತ ಆರೋಪಿಯನ್ನು ದಿನೇಶ್ (34) ಎಂದು ಗುರುತಿಸಲಾಗಿದೆ. ಆರೋಪಿ ತನ್ನ ತಂದೆ ಶಶಿಧರ್ (58) ಎಂಬುವರನ್ನು ಹತ್ಯೆ ಮಾಡಿದ್ದ. ಆರೋಪಿ ಕಂಠಪೂರ್ತಿ ಕುಡಿದು ಬಂದು ತಂದೆ ಜೊತೆ ಜಗಳವಾಡಿದ್ದ. ಬಳಿಕ ತಂದೆಗೆ ಕಾಲಿನಿಂದ ಒದ್ದಿದ್ದ. ಈ ವೇಳೆ ಶಶಿಧರ್ ಕುಸಿದು ಬಿದ್ದಿದ್ದರು. ಇದನ್ನು ಕಂಡು ದಿನೇಶ್ ತಾಯಿ ಗಾಬರಿಗೊಂಡು ಮನೆಯಿಂದ ಸೋದರನ ಮನೆಗೆ ತೆರಳಿದ್ದರು. ನಂತರ ದಿನೇಶ್, ತಂದೆಗೆ ಹೃದಯಾಘಾತವಾಗಿದೆ ಎಂದು ಅರೇಹಳ್ಳಿ ಆಸ್ಪತ್ರೆಗೆ ದಾಖಲಿಸಿದ್ದ. ಆಸ್ಪತ್ರೆಯಲ್ಲಿ ಶಶಿಧರ್ ಮೃತಪಟ್ಟಿರುವುದನ್ನು ವೈದ್ಯರು ದೃಢಪಡಿಸಿದ್ದರು. ಬಳಿಕ ಮೃತದೇಹವನ್ನು ಅಂತ್ಯ ಸಂಸ್ಕಾರಕ್ಕೆ ತಂದಿದ್ದಾಗ ತಂದೆ ಜೊತೆ ಜಗಳವಾಡುವುದನ್ನು ನೋಡಿದ್ದ ಗ್ರಾಮಸ್ಥರು ಸಾವಿನ ಬಗ್ಗೆ ಅನುಮಾನ ವ್ಯಕ್ತಪಡಿಸಿದ್ದರು. ಬಳಿಕ ದಿನೇಶ್ ವಿರುದ್ಧ ಆತನ ತಾಯಿ ಅರೇಹಳ್ಳಿ ಪೊಲೀಸರಿಗೆ ದೂರು ನೀಡಿದ್ದರು. ಈ ಸಂಬಂಧ ಅರೇಹಳ್ಳಿ ಪೊಲೀಸರು ಆರೋಪಿಯನ್ನು ಹೆಚ್ಚಿನ ವಿಚಾರಣೆಗೆ ಒಳಪಡಿಸಿದ್ದಾರೆ.

# ಮಹಿಳಾ ಮತ್ತು ಮಕ್ಕಳ ಕಲ್ಯಾಣ ಇಲಾಖೆ ಸಚಿವರನ್ನ ಹುಡುಕಿ ಕೊಡಿ : ಬಿಜೆಪಿ ರಾಜ್ಯಾಧ್ಯಕ್ಷೆ ಮಂಜುಳಾ ಲೇವಡಿ

**ಬೆಂಗಳೂರು:** ಕೋಲಾರ ಜಿಲ್ಲೆಯ ಬಂಗಾರಪೇಟೆಯಲ್ಲಿ ಮೇಲ್ಚಾವಣಿ ಕುಸಿದು ಅಂಗನವಾಡಿ ಮಕ್ಕಳಿಗೆ ಗಾಯವಾಗಿರೋ ಪ್ರಕರಣದಲ್ಲಿ ಮಹಿಳಾ ಮತ್ತು ಮಕ್ಕಳ ಕಲ್ಯಾಣ ಅಭಿವೃದ್ಧಿ ಸಚಿವರು ರಾಜೀನಾಮೆ ನೀಡಬೇಕು ಅಂತ ಬಿಜೆಪಿ ಮಹಿಳಾ ಮೋರ್ಚಾ ರಾಜ್ಯಾಧ್ಯಕ್ಷೆ ಮಂಜುಳಾ ಆಗ್ರಹಿಸಿದ್ದಾರೆ.



ಈ ಕುರಿತು ಮಾಧ್ಯಮ ಹೇಳಿಕೆ ಬಿಡುಗಡೆ ಮಾಡಿರುವ ಅವರು, ಸಚಿವರನ್ನ ಹುಡುಕಿಕೊಂಡಿ ಅಂತ ಸಿಎಂ ವಿರುದ್ಧ ವಾಗ್ದಾಳಿ ನಡೆಸಿದ್ದಾರೆ. ಬಂಗಾರಪೇಟೆಯಲ್ಲಿ ಅಂಗನವಾಡಿ ಮೇಲ್ಚಾವಣಿ ಬಿದ್ದು 7 ಮಕ್ಕಳು ಆಸ್ಪತ್ರೆಗೆ ಸೇರಿದ್ದಾರೆ. 4 ಮಕ್ಕಳಿಗೆ ಗಂಭೀರ ಗಾಯಗಳಾಗಿವೆ. ಇದೇನಾ ಮುಖ್ಯಮಂತ್ರಿಗಳ ಬಡವರ ಪರ ಕಾಳಜಿ ಕಿಡಿಕಾರಿದ್ದು, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಸಚಿವರು ಎಲ್ಲಿದ್ದಾರೆ? ಅವರನ್ನು ಹುಡುಕಿಕೊಡಿ ಮುಖ್ಯಮಂತ್ರಿಗಳೇ ಎಂದು ಕೇಳಿದ್ದಾರೆ.

ಇಲ್ಲಿಗೆ ಬಡವರ- ಕೂಲಿಕಾರರ ಮಕ್ಕಳು ಬರುತ್ತಾರೆ. ಅವರಿಗೆ ಯಾವ ರಕ್ಷಣೆ ಇದೆ? ಈ ಸರಕಾರವು ಯಾವ ನೈತಿಕತೆ ಮೇಲೆ ಸದಾ ವಿಪಕ್ಷವನ್ನು ಟೀಕೆ ಮಾಡುತ್ತಿದೆ. ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಸಚಿವೆ ಲಕ್ಷ್ಮಿ ಹೆಬ್ಬಾಳ್ಕರ್ ಅವರು ತಮ್ಮ ಮನೆ ಮತ್ತು ಕಚೇರಿಯಿಂದ ಹೊರಕ್ಕೆ ಬಂದು ಇಲಾಖೆಯಲ್ಲಿ ಏನು ನಡೆಯುತ್ತಿದೆ ಎಂದು ಗಮನಿಸಿ ಸರಿಪಡಿಸಲಿ. ಇಲ್ಲವಾದರೆ ರಾಜೀನಾಮೆ ಕೊಟ್ಟು ಮನೆಗೆ ಹೋಗಲಿ ಎಂದು ಒತ್ತಾಯಿಸಿದರು.

ರಾಜ್ಯದಲ್ಲಿ ಬಾಣಂತಿಯರ ಸಾವು ನಿತ್ಯೋತ್ಸವವಾಗಿ ರಾಜ್ಯ ತಲ್ಲಣಗೊಂಡ ಸಂದರ್ಭದಲ್ಲೂ ಕೂಡ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಸಚಿವೆ ಲಕ್ಷ್ಮಿ ಹೆಬ್ಬಾಳ್ಕರ್ ಅವರು ತಮ್ಮ ಮನೆ ಮತ್ತು ಕಚೇರಿಯಿಂದ ಹೊರಗೆ ಬಂದು ಕೆಲಸ ಮಾಡುತ್ತಿಲ್ಲ. ಕಳೆದ ಒಂದೂವರೆ ವರ್ಷದಿಂದ ಅವರು ಸಚಿವೆಯಾಗಿದ್ದಾರೆ. ಇದೇನಾ ಈ ಸರ್ಕಾರ ಮಹಿಳೆಯರಿಗೆ ಕೊಡುವ ಗೌರವ ಮತ್ತು ನ್ಯಾಯ ಅಂತ ಕಿಡಿಕಾರಿದರು.

ಗೃಹ ಸಚಿವರ ತವರು ಜಿಲ್ಲೆ ಮಧುಗಿರಿಯಲ್ಲಿ ಡಿವೈಎಸ್ಪಿಯೊಬ್ಬರು ಠಾಣೆಗೆ ಬಂದ ಮಹಿಳೆಯ ಮೇಲೆ ಲೈಂಗಿಕ ದೌರ್ಜನ್ಯವನ್ನು ಠಾಣೆಯಲ್ಲೇ ಮಾಡಿದ್ದಾರೆ. ಇದು ರಾಜ್ಯದಲ್ಲಿ ಮಹಿಳೆಯರಿಗೆ ಪೊಲೀಸ್ ಠಾಣೆಯಲ್ಲೇ ರಕ್ಷಣೆ ಇಲ್ಲ ಎಂಬುದನ್ನು ಸಾಬೀತುಪಡಿಸಿದೆ. ಗೃಹ ಇಲಾಖೆಯಲ್ಲಿ ಹೊಕ್ಕಿರುವ ಹೆಗ್ಗಣಗಳನ್ನು ಹೊರಹಾಕಿ ಪೊಲೀಸ್ ಇಲಾಖೆಗೆ ಬರುವ ಮತ್ತು ರಾಜ್ಯದಲ್ಲಿ ಬದುಕುವ ಮಹಿಳೆಯರಿಗೆ ಈ ಸರ್ಕಾರ, ಮುಖ್ಯಮಂತ್ರಿಗಳು ಮತ್ತು ಗೃಹ ಸಚಿವರು ಸುರಕ್ಷತೆ ಕೊಡಬೇಕೆಂದು ಅವರು ಆಗ್ರಹಿಸಿದರು.

# ಮದುವೆ ಮಾಡಿಸಿ 4 ಲಕ್ಷ ಹಣ ಪಡೆದು ಬ್ರೋಕರ್ ಎಸ್ಕೇಪ್ : ಇತ್ತ ಮದುವೆಯಾದ ಹೆಣ್ಣೂ ಪರಾರಿ

**ಬಾಗಲಕೋಟೆ:** ಹೆಣ್ಣು ಸಿಗಲಿಲ್ಲ ಎಂಬ ಕೊರಗಿನಲ್ಲಿದ್ದ ವ್ಯಕ್ತಿಗೆ ಮದುವೆ ಮಾಡಿಸಿ ಲಕ್ಷಾಂತರ ಹಣ ಪಡೆದು ಬ್ರೋಕರ್ ವಂಚಿಸಿರುವ ಘಟನೆ ನಡೆದಿದೆ. ಮದುವೆ ಬಳಿಕ ಬ್ರೋಕರ್ ಮತ್ತು ವಿವಾಹವಾದ ಹೆಣ್ಣು ಇಬ್ಬರೂ ಪರಾರಿಯಾಗಿದ್ದಾರೆ.



ಮುಧೋಳದ ಸೋಮಶೇಖರ್ ಎಂಬಾತ ಮೋಸ ಹೋಗಿದ್ದಾರೆ. ತನಗಾದ ವಂಚನೆ ಬಗ್ಗೆ ಪೊಲೀಸ್ ಠಾಣೆಯಲ್ಲಿ ದೂರು ದಾಖಲಿಸಿದ್ದಾನೆ. ಶಿವಮೊಗ್ಗದ ಮಂಜುಳಾ ಎಂಬಾಕೆಯನ್ನು ಮದುವೆ ಮಾಡಿ ಮೋಸ ಮಾಡಿದ್ದಾರೆಂದು ದೂರಿದ್ದಾರೆ.

ಈಗಾಗಲೇ ಎರಡು ಮದುವೆಯಾಗಿದ್ದ ಶಿವಮೊಗ್ಗದ ಮಹಿಳೆ ಮಂಜುಳಾನ್ನ ಕರೆತಂದು ಬ್ರೋಕರ್ ಟೀಂ ಮದುವೆ ಮಾಡಿಸಿತ್ತು. ಇತ್ತ ಹೆಣ್ಣಿಗಾಗಿ ಅಲೆದಾಡುತ್ತಿದ್ದ ಸೋಮಶೇಖರನನ್ನ ಟಾರ್ಗೆಟ್ ಮಾಡಿದ್ದರು. ಹೆಣ್ಣು ಕೊಡಿಸ್ತೀವಿ ಅಂತ ಹೇಳಿ 4 ಲಕ್ಷ ಹಣಕ್ಕೆ ಡಿಮ್ಯಾಂಡ್ ಮಾಡಿದ್ದರು. ಹೆಣ್ಣು ಸಿಗದೇ ಕೊನೆಗೆ ಸೋಮಶೇಖರ್ ಮದುವೆಗೆ ಒಪ್ಪಿಕೊಂಡಿದ್ದ. ಬಾಗಲಕೋಟೆ ಮುಧೋಳದ ಕಾಳಿಕಾದೇವಿ ದೇಗುಲದಲ್ಲಿ ವರ್ಷದ ಹಿಂದೆ ಮದುವೆ ನಡೆದಿತ್ತು. ಮದುವೆ ದಿನವೇ ಬ್ರೋಕರ್ ತಂಡವು ಪೂರ್ಣ 4 ಲಕ್ಷ ಹಣ ಪಡೆದಿತ್ತು. ಮದುವೆಯಾದ ಒಂದೇ ತಿಂಗಳಲ್ಲಿ ಪತ್ನಿ ಮಂಜುಳಾ ಎಸ್ಕೇಪ್ ಆಗಿದ್ದಳು. ಪತ್ನಿ ಬಗ್ಗೆ ವಿಚಾರಿಸಲು ಹೋದ ವೇಳೆ ಈಗಾಗಲೇ ಆಕೆಗೆ ಎರಡು ಮದುವೆಯಾದ ಬಗ್ಗೆ ಸುಳಿವು ಸಿಕ್ಕಿದೆ. ಹಣ ಹೊಡೆಯಲು ಮದುವೆಯಾದ ಮಹಿಳೆಯನ್ನೇ ಶಿವಮೊಗ್ಗದಿಂದ ಮುಧೋಳಕ್ಕೆ ಬ್ರೋಕರ್ ಟೀಂ ಕರೆ ತಂದಿತ್ತು. ಬ್ರೋಕರ್ ಟೀಮ್‌ಗೆ ತಾನು ನೀಡಿದ 4 ಲಕ್ಷ ಹಣ ಮರಳಿಸುವಂತೆ ಸಂತ್ರಸ್ತ ಸೋಮಶೇಖರ್, ಪೊಲೀಸರ ಬಳಿ ಮನವಿ ಮಾಡಿದ್ದಾರೆ. ಕೊನೆಗೆ ಹಣ ಬಾರದೇ ಇದ್ದಾಗ ಮುಧೋಳ ಪೊಲೀಸ್ ಠಾಣೆಯಲ್ಲಿ 7 ಜನರ ವಿರುದ್ಧ ದೂರು ದಾಖಲಿಸಿದ್ದಾರೆ.

ಆರೋಪಿ ಸತ್ಯಪ್ಪ ಮತ್ತು ಮಂಜುಳಾ ಸೇರಿ 7 ಜನರ ವಿರುದ್ಧ ಪ್ರಕರಣ ದಾಖಲಾಗಿದೆ. ಆರೋಪಿಗಳ ಪತ್ತೆಗೆ ಮುಧೋಳ ಠಾಣೆ ಪೊಲೀಸರು ಮುಂದಾಗಿದ್ದಾರೆ. ಮದುವೆ ಮಾಡಿಸಿ ಹಣ ಹೊಡೆಯಲು ಇದೊಂದು ದೊಡ್ಡ ಜಾಲವೇ ಇದೆ. ಈ ಗ್ಯಾಂಗ್ ಎಲ್ಲಿ ಕಾರ್ಯಪ್ರವೃತ್ತಿಯಾಗಿದೆ ಅಂತ ಹುಡುಕಿ ತನಿಖೆ ಮಾಡುತ್ತಿದ್ದೇವೆ. ಈ ಜಾಲದಲ್ಲಿ ಆರೋಪಿಗಳು ಬೆಳಗಾವಿ, ರಾಮದುರ್ಗ, ಶಿವಮೊಗ್ಗ, ಧಾರವಾಡ ಮೂಲದವರಿದ್ದಾರೆ. ಅವರನ್ನ ಬಂಧಿಸಿ ವಿಚಾರಣೆಗೆ ಒಳಪಡಿಸುವ ಕೆಲಸ ಮಾಡುತ್ತೇವೆ. ಇವರಿಂದ ಈ ಹಿಂದೆಯೂ ಪ್ರಕರಣ ನಡೆದಿದೆ. ಎಲ್ಲವನ್ನ ಪರಿಶೀಲಿಸಿ ಕ್ರಮ ಕೈಗೊಳ್ಳುತ್ತೇವೆ ಎಂದು ಬಾಗಲಕೋಟೆ ಎಸ್.ಪಿ.ಅಮರನಾಥ ರೆಡ್ಡಿ ತಿಳಿಸಿದ್ದಾರೆ.

# 1 ವಾರದೊಳಗೆ ತೆರವು ಮಾಡಿ: ನೋಟಿಸ್

**ಬೆಂಗಳೂರು:** ಅನಧಿಕೃತ ನಿರ್ಮಾಣ ಹಂತದ ಕಟ್ಟಡಗಳ ಬಗ್ಗೆ ಕೊನೆಗೂ ಬಿಬಿಎಂಪಿ ಎಚ್ಚೆತ್ತುಕೊಂಡಿದ್ದು, ಅಂತಹ ಕಟ್ಟಡಗಳ ವಿರುದ್ಧ ಸಮರ ಸಾರುವ ಮೂಲಕ ತೆರವು ಸಂಬಂಧ ಮಾಲೀಕರಿಗೆ ಖಡಕ್ ವಾರ್ನಿಂಗ್ ನೀಡಿದೆ.



ಬಾಬುಸಾಪಾಳ್ಯ ನಿರ್ಮಾಣ ಹಂತದ ಕಟ್ಟಡ ದುರಂತ ಇಡಿ ಬೆಂಗಳೂರನ್ನ ಬೆಚ್ಚಿ ಬೀಳಿಸಿತ್ತು. 9 ಕಾರ್ಮಿಕರು ತಮ್ಮ ಘಟನೆಯಲ್ಲಿ ಪ್ರಾಣ ಕಳೆದಕೊಂಡಿದ್ದರು. ಆದಾದ ಬಳಿಕ ನಗರದ ಅನಧಿಕೃತ ಕಟ್ಟಡಗಳ ಸರ್ವೇಗೆ ಡಿಸಿಎಂ ಡಿ.ಕೆ.ಶಿವಕುಮಾರ್ ಖಡಕ್ ಆದೇಶ ನೀಡಿದ ಬಳಿಕ ಅಲರ್ಟ್ ಆಗಿದ್ದ ಬಿಬಿಎಂಪಿ, ನಗರದಲ್ಲಿ 2 ಸಾವಿರ ನಿರ್ಮಾಣ ಹಂತದ ಅನಧಿಕೃತ ಕಟ್ಟಡಗಳಿರುವ ಬಗ್ಗೆ ಸರ್ವೇ ಮಾಡಿದೆ. ಅವುಗಳ ತೆರವು ಸಂಬಂಧ ಪ್ರಕ್ರಿಯೆ ಕೂಡ ಆರಂಭಿಸಿದೆ.

ಬೆಂಗಳೂರು ಮಹಾನಗರ ಪಾಲಿಕೆ ರಾಜಧಾನಿಯ ಅನಧಿಕೃತ ಕಟ್ಟಡಗಳ ವಿರುದ್ಧ ಕಾರ್ಯಾಚರಣೆಯನ್ನು ಮತ್ತಷ್ಟು ತೀವ್ರಗೊಳಿಸಿದೆ. ಮಹದೇವಪುರ ವಲಯದಲ್ಲಿ ನಿರ್ಮಾಣ ಹಂತದಲ್ಲಿರುವ 400ಕ್ಕೂ ಹೆಚ್ಚು ಅನಧಿಕೃತ ಕಟ್ಟಡಗಳನ್ನು ನೆಲಸಮಗೊಳಿಸಲು ಆದೇಶಿ ಹೊರಡಿಸಿದೆ. ನವೆಂಬರ್ 28 ರಿಂದ ಬಿಬಿಎಂಪಿ ಅಧಿಕೃತವಾಗಿ ಅನಧಿಕೃತ ಕಟ್ಟಡಗಳ ಸರ್ವೇ ಆರಂಭಿಸಿತು. ಇದರಲ್ಲಿ 2 ಸಾವಿರಕ್ಕೂ ಹೆಚ್ಚು ಅಕ್ರಮ ಕಟ್ಟಡಗಳನ್ನು ಪತ್ತೆಹಚ್ಚಲಾಗಿದೆ. ಮಹದೇವಪುರ ವಲಯದಲ್ಲಿ ಅತ್ಯಧಿಕ ಅನಧಿಕೃತ ಕಟ್ಟಡಗಳು ಕಂಡುಬಂದಿದ್ದು, ಈಗ ನೋಟಿಸ್ ಜಾರಿ ಮಾಡಿ ಅವುಗಳನ್ನು ತೆರವುಗೊಳಿಸಲು ಕ್ರಮ ಕೈಗೊಳ್ಳಲಾಗಿದೆ. ಮಹದೇವಪುರ ಉಪ ವಿಭಾಗದ ವ್ಯಾಪ್ತಿಯ 285 ನಿರ್ಮಾಣ ಹಂತದ ಕಟ್ಟಡಗಳು ಹಾಗೂ ಕೆ.ಆರ್.ಪುರ ಉಪ ವಿಭಾಗದ 112 ಕಟ್ಟಡಗಳಿಗೆ ಈಗಾಗಲೇ ನೋಟಿಸ್ ಜಾರಿಯಾಗಿದೆ. ಮಹದೇವಪುರ ವಲಯದ ಮುಖ್ಯ ಎಂಜಿನಿಯರ್ ಲೋಕೇಶ್ ಅವರ ಪ್ರಕಾರ, ಇವುಗಳ ನಿರ್ಮಾಣದಲ್ಲಿ ನಿಯಮ ಉಲ್ಲಂಘನೆಯಾಗಿರುವುದರಿಂದ ಕಟ್ಟಡಗಳನ್ನು ನೆಲಸಮಗೊಳಿಸಲಾಗುತ್ತಿದೆ.

ನೋಟಿಸ್ ನೀಡಿದ ಕಟ್ಟಡಗಳಿಗೆ ಬ್ಯಾನರ್ ಹಾಕುವ ಮೂಲಕ ಅಧಿಕೃತವಾಗಿ ಇದು ಅನಧಿಕೃತ ಕಟ್ಟಡ ಅಂತ ಸಾರ್ವಜನಿಕರಿಗೆ ಮಾಹಿತಿ ನೀಡುವ ಕೆಲಸವನ್ನ ಮಾಡಿದೆ ಬಿಬಿಎಂಪಿ. ಅಲ್ಲದೆ ಈ ಕಟ್ಟಡಗಳನ್ನ ಒಂದು ವಾರದೊಳಗೆ ತೆರವು ಮಾಡುವಂತೆ ಆ ಕಟ್ಟಡದ ಮಾಲೀಕರಿಗೂ ಎಚ್ಚರಿಕೆ ನೀಡಲಾಗಿದೆ. ಒಂದೊಮ್ಮೆ ಮಾಲೀಕರು 7 ದಿನಗಳ ಒಳಗೆ ಈ ಕಟ್ಟಡ ತೆರವು ಕಾರ್ಯ ಆಗದಿದ್ದರೆ, ಖುದ್ದು ಬಿಬಿಎಂಪಿ ತೆರವು ಮಾಡುವುದರ ಜೊತೆಗೆ ಕಠಿಣ ಕ್ರಮದ ಎಚ್ಚರಿಕೆ ಕೂಡ ನೀಡಿದೆ.

## ಪ್ರೀತಿಸಿದ ಯುವತಿ-ಕುಟುಂಬಸ್ಥರ ಮೇಲೆ ಮಚ್ಚಿನಿಂದ ಹಲ್ಲೆ ಮಾಡಿ: ರೈಲಿಗೆ ತಲೆಕೊಟ್ಟು ಭಗ್ನ ಪ್ರೇಮಿ ಆತ್ಮಹತ್ಯೆ

**ಬಳ್ಳಾರಿ:** ಭಗ್ನ ಪ್ರೇಮಿಯೊಬ್ಬ ತಾನು ಪ್ರೀತಿಸಿದ ಯುವತಿ ಹಾಗೂ ಮತ್ತವರ ಮನೆಯವರ ಮೇಲೆ ಹಲ್ಲೆ ಮಾಡಿ, ಬಳಿಕ ತಾನೂ ರೈಲಿಗೆ ತಲೆ ಕೊಟ್ಟು ಆತ್ಮಹತ್ಯೆ ಮಾಡಿಕೊಂಡಿರುವ ಘಟನೆ ಬಳ್ಳಾರಿ ಜಿಲ್ಲೆಯ ಸಂಡೂರಿನ ಚರ್ಚ್ ಶಾಲೆ ರಸ್ತೆಯಲ್ಲಿ ನಡೆದಿದೆ.

ಹೊಸಪೇಟೆ ತಾಲೂಕಿನ ಪಿ.ಕೆ.ಹಳ್ಳಿ ಮೂಲದ ನವೀನ್ ಕುಮಾರ್ ಹಲ್ಲೆ ಮಾಡಿ, ಆತ್ಮಹತ್ಯೆ ಮಾಡಿಕೊಂಡಿರುವಾತ. ನವೀನ್ ಕುಮಾರ್ ಪ್ರೇಯಸಿ ಸೇರಿ ಕುಟುಂಬದ ಮೂವರ ಮೇಲೆ ಮಚ್ಚಿನಿಂದ ಹಲ್ಲೆ ಮಾಡಿದ್ದ. ಯುವತಿ ಮತ್ತವರ ತಾಯಿಗೆ ಸಣ್ಣಪುಟ್ಟ ಗಾಯಗಳಾಗಿದ್ದು, ಯುವತಿಯ ಅಣ್ಣನಿಗೆ ಬಲವಾಗಿ ಮಚ್ಚಿನೇಟು ಬಿದ್ದಿದೆ. ಚಿಕಿತ್ಸೆಗಾಗಿ ಮೂವರನ್ನೂ ತೋರಣಗಲ್ಲು ಜಿಂದಾಲ್ ಸಂಜೀವಿನಿ ಆಸ್ಪತ್ರೆಗೆ ದಾಖಲಿಸಲಾಗಿದೆ. ಯುವತಿ ಮತ್ತು ಕುಟುಂಬಸ್ಥರ ಮೇಲೆ ಹಲ್ಲೆ ಮಾಡಿದ ಬಳಿಕ ಆರೋಪಿ ನವೀನ್ ಕುಮಾರ್ ಯಶವಂತನಗರದ ಗಂಡಿ ಮಲಿಯಮ್ಮ ದೇಗುಲದ ಬಳಿ ಕಾರು ಬಿಟ್ಟು ಹೋಗಿದ್ದ. ಕಾರನ್ನು ವಶಕ್ಕೆ ಪಡೆದಿದ್ದ ಪೊಲೀಸರು, ಆರೋಪಿಯ ಪತ್ತೆಗೆ ಜಾಲ ಬೀಸಿದ್ದರು. ಆದರೆ ಇಂದು ಬೆಳಗಿನ ಜಾವ ಆರೋಪಿ ಯಶವಂತ ನಗರ ಬಳಿಯ ರೈಲ್ವೆ ಹಳಿಗೆ ತಲೆ ಕೊಟ್ಟು ಸಾವನ್ನಪ್ಪಿರೋದು ಬೆಳಕಿಗೆ ಬಂದಿದೆ.

ಯುವತಿ ಮತ್ತು ಆರೋಪಿ ನವೀನ್ ಹಲವು ವರ್ಷಗಳಿಂದ ಪರಸ್ಪರ ಪ್ರೀತಿಸ್ತಿದ್ದರು. ಬಾಳೆಹಣ್ಣು ವ್ಯಾಪಾರ ಮಾಡ್ತಿದ್ದ ನವೀನ್ ಮತ್ತು ಯುವತಿ ನಡುವೆ ಕಾಲೇಜು ಓದುವಾಗಲೇ ಪ್ರೇಮಾಂಕುರವಾಗಿತ್ತು. ಪ್ರೀತಿಸುವಾಗಲೇ ಪರಸ್ಪರ ಹಾರ ಬದಲಾಯಿಸಿಕೊಂಡಿದ್ದರು. ಎಂಎಸ್ಸಿ ಓದುವ ಹಿನ್ನೆಲೆ ಪ್ರೀತಿ ಪ್ರೇಮಕ್ಕೆ ಬ್ರೇಕ್ ಹಾಕೋದಾಗಿ ಯುವತಿ ಹೇಳಿದ್ದಳು. ಇದರಿಂದ ಅಸಮಾಧಾನಗೊಂಡಿದ್ದ ಪಾಪಿನಾಯಕನಹಳ್ಳಿ ಮೂಲದ ನವೀನ್ ನಿನ್ನೆ ಸಂಜೆ ಸಂಡೂರಿಗೆ ಬಂದು ಪ್ರೇಯಸಿ ಮನೆಯ ಮುಂದೆ ಗಲಾಟೆ ಮಾಡಿದ್ದಾನೆ.

ಈ ವೇಳೆ ಗಲಾಟೆ ನಡೆದು ಯುವತಿ ಮತ್ತವರ ತಾಯಿ ಮೇಲೆ ಹಲ್ಲೆ ಮಾಡಿದ್ದಾನೆ. ಬಿಡಿಸಲು ಬಂದ ಪ್ರೇಯಸಿಯ ಸಹೋದರನ ಮೇಲೂ ಮಚ್ಚು ಬೀಸಿದ್ದಾನೆ. ಗಲಾಟೆ ಜೋರಾಗುತ್ತಿದ್ದಂತೆ ಅಲ್ಲಿಂದ ಓಡಿ ಹೋಗಿದ್ದ ನವೀನ್. ಬಳಿಕ ನಿನ್ನೆ ಬೆಳಗ್ಗೆ ಶವವಾಗಿ ಪತ್ತೆಯಾಗಿದ್ದಾನೆ. ಸಂಡೂರು ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

## ಶಂಕುಸ್ಥಾಪನೆ

ಸಾಹಿಬಾಬಾದ್ ಮತ್ತು ನ್ಯೂ ಅಶೋಕ್ ನಗರ ನಡುವಿನ ದೆಹಲಿ-ಗಾಜಿಯಾಬಾದ್-ಮೀರತ್ ನಮೋ ಭಾರತ್ ಕಾರಿಡಾರ್‌ನ 13 ಕಿ.ಮೀ ವ್ಯಾಪ್ತಿಯ ಉದ್ಘಾಟನೆ ನಾಳೆಯ ಪ್ರಧಾನಿ ಮೋದಿಯವರ ಕಾರ್ಯಕ್ರಮದ ಪ್ರಮುಖ ಹೈಲೈಟ್ ಆಗಿರುತ್ತದೆ. ಇದರ ಮೌಲ್ಯ ಸುಮಾರು 4,600 ಕೋಟಿ ರೂ. ಆಗಿದೆ. ಇದರ ಹೊಸ ಸಂಪರ್ಕವು ದೆಹಲಿಗೆ ತನ್ನ ಮೊದಲ ನಮೋ ಭಾರತ್ ಲಿಂಕ್ ಅನ್ನು ಒದಗಿಸುತ್ತದೆ. ಇದು ದೆಹಲಿ ಮತ್ತು ಮೀರತ್ ನಡುವಿನ ಪ್ರಯಾಣವನ್ನು ಸುಗಮಗೊಳಿಸುತ್ತದೆ.

**ದೆಹಲಿ ಮೆಟ್ರೋ 4ನೇ ಹಂತದ ಉದ್ಘಾಟನೆ:** ಜನಕ್‌ಪುರಿ ಮತ್ತು ಕೃಷ್ಣ ಪಾರ್ಕ್ ನಡುವಿನ ದೆಹಲಿ ಮೆಟ್ರೋ 4ನೇ ಹಂತದ 2.8 ಕಿ.ಮೀ ವಿಭಾಗವನ್ನು ಪ್ರಧಾನಿ ನರೇಂದ್ರ ಮೋದಿ ಉದ್ಘಾಟಿಸಲಿದ್ದಾರೆ. ಸುಮಾರು 1,200 ಕೋಟಿ ರೂ. ಮೌಲ್ಯದ ಈ ಯೋಜನೆ 4ನೇ ಹಂತದ ಯೋಜನೆಯ ಮೊದಲ ಕಾರ್ಯಾಚರಣೆಯ ವಿಸ್ತರಣೆಯಾಗಿದೆ. ಇದು ಪಶ್ಚಿಮ ದೆಹಲಿಯ ಕೃಷ್ಣಾ ಪಾರ್ಕ್, ವಿಕಾಸಪುರಿಯ ಕೆಲವು ಭಾಗಗಳು ಮತ್ತು ಜನಕಪುರಿ ಪ್ರದೇಶಗಳಿಗೆ ಪ್ರಯೋಜನವನ್ನು ನೀಡುತ್ತದೆ.

ದೆಹಲಿ ಮೆಟ್ರೋ 4ನೇ ಹಂತದ 26.5 ಕಿಲೋಮೀಟರ್ ರಿಥಾಲಾ-ಕುಂಡ್ಲಿ ಮಾರ್ಗಕ್ಕೆ ಸಹ ನಾಳೆ ಶಂಕುಸ್ಥಾಪನೆ ಮಾಡಲಾಗುವುದು. ಇದರ ಅಂದಾಜು ವೆಚ್ಚ 6,230 ಕೋಟಿ ರೂ. ಹೊಸ ಕಾರಿಡಾರ್ ದೆಹಲಿಯ ರಿಥಾಲಾವನ್ನು ಹರಿಯಾಣದ ನಾಥುಪುರ್ (ಕುಂಡ್ಲಿ) ಗೆ ಸಂಪರ್ಕಿಸುತ್ತದೆ. ಇದು ರೋಹಿಣಿ, ಬವಾನಾ, ನರೇಲಾ ಮತ್ತು ಕುಂಡ್ಲಿಯಂತಹ ಪ್ರದೇಶಗಳನ್ನು ಒಳಗೊಂಡಂತೆ ದೆಹಲಿ ಮತ್ತು ಹರಿಯಾಣದ ವಾಯುವ್ಯ ಪ್ರದೇಶಗಳಲ್ಲಿ ಸಂಪರ್ಕವನ್ನು ಸುಧಾರಿಸುತ್ತದೆ.

ಇದರ ಜೊತೆಗೆ, ನವದೆಹಲಿಯ ರೋಹಿಣಿಯಲ್ಲಿ ಕೇಂದ್ರ ಆಯುರ್ವೇದ ಸಂಶೋಧನಾ ಸಂಸ್ಥೆ (ಸಿಎಆರ್‌ಐ)ಗಾಗಿ ಸುಮಾರು 185 ಕೋಟಿ ರೂ. ವೆಚ್ಚದಲ್ಲಿ ನಿರ್ಮಿಸಲಾಗಿರುವ ಅತ್ಯಾಧುನಿಕ ಕಟ್ಟಡಕ್ಕೆ ಪ್ರಧಾನಿ ಮೋದಿ ಶಂಕುಸ್ಥಾಪನೆ ನೆರವೇರಿಸಲಿದ್ದಾರೆ. ಹೊಸ ಕ್ಯಾಂಪಸ್ ಅಡ್ಮಿನಿಸ್ಟ್ರೇಟಿವ್ ಬ್ಲಾಕ್, ಒಪಿಡಿ ಬ್ಲಾಕ್, ಐಪಿಡಿ ಬ್ಲಾಕ್ ಮತ್ತು ಮೀಸಲಾದ ಟ್ರೀಟ್‌ಮೆಂಟ್ ಬ್ಲಾಕ್ ಸೇರಿದಂತೆ ಸುಧಾರಿತ ಆರೋಗ್ಯ ಮತ್ತು ಸಂಶೋಧನಾ ಸೌಲಭ್ಯಗಳನ್ನು ಇದು ನೀಡುತ್ತದೆ.

## ವಿವರಿಸಿದ ಪವನ್ ಕಲ್ಯಾಣ್

ತೆಲುಗು ಸಿನಿಮಾ ಮೇಕಿಂಗ್‌ನ ಸ್ಟಾಂಡರ್ಸ್ ಹೆಚ್ಚಾಗಿದ್ದು ಹಾಗಾಗಿ ಸಿನಿಮಾಗಳ ಬಜೆಟ್ ಬಹಳ ಅಧಿಕವಾಗಿದೆ. ಹೀಗಿರುವಾಗ ಸಿನಿಮಾ ಟಿಕೆಟ್ ದರ ಏರಿಕೆ ಎಂಬುದು ಅಗತ್ಯವಾಗುತ್ತದೆ. ಸಿನಿಮಾ ಟಿಕೆಟ್ ದರ ಏರಿಕೆ ಬಗ್ಗೆ ಸಾರ್ವಜನಿಕರಿಗೆ ಋಣಾತ್ಮಕ ಅಭಿಪ್ರಾಯ ಇದ್ದರೂ ಸಹ ಕೆಲವು ಸಿನಿಮಾಗಳಿಗೆ ಟಿಕೆಟ್ ದರ ಏರಿಕೆ ಅಗತ್ಯ ಆಗಿದೆ' ಎಂದರು ಪವನ್.

ತಮ್ಮದೇ ಸಿನಿಮಾದ ಉದಾಹರಣೆ ನೀಡಿದ ಪವನ್ ಕಲ್ಯಾಣ್, ಸಿನಿಮಾ ಟಿಕೆಟ್ ದರದ ಸಮಸ್ಯೆಯಿಂದಾಗಿ ನಮ್ಮ 'ಭೀಮ್ಲಾ ನಾಯಕ್' ಸಿನಿಮಾ ತೊಂದರೆ ಅನುಭವಿಸಿತು. ಸಿನಿಮಾಕ್ಕೆ ಹಾಕಿದ್ದ ಬಂಡವಾಳ ವಾಪಸ್ಸಾಗಲಿಲ್ಲ ಎಂದರು. 'ಭೀಮ್ಲಾ ನಾಯಕ್' ಸಿನಿಮಾ ಬಿಡುಗಡೆ ಸಂದರ್ಭದಲ್ಲಿ ಆಂಧ್ರ ಸಿಎಂ ಜಗನ್, ರಾಜ್ಯದಾದ್ಯಂತ ಚಿತ್ರಮಂದಿರಗಳ ಟಿಕೆಟ್ ದರವನ್ನು ಧಾರುಣವಾಗಿ ತಗ್ಗಿಸಿದ್ದರು.

ಮುಂದುವರೆದು ಮಾತನಾಡಿದ ಪವನ್ ಕಲ್ಯಾಣ್, 'ನಮ್ಮ ಸರ್ಕಾರ ಯಾವುದೇ ಸಿನಿಮಾ ತಾರೆಯ ಬಗ್ಗೆ ಪೂರ್ವಾಗ್ರಹ ಪೀಡಿತವಾಗಿಲ್ಲ. ಎಷ್ಟೋ ಮಂದಿ ನಟರು ನಮಗೆ ಬೆಂಬಲ ನೀಡಿಲ್ಲ ಹಾಗೆಂದು ನಾವು ಅವರ ವಿರುದ್ಧ ನಿಂತಿಲ್ಲ. ಚಿತ್ರರಂಗಕ್ಕೆ ರಾಜಕೀಯ ಸೋಕಬಾರದು ಆ ಕಾರ್ಯವನ್ನು ನಮ್ಮ ಸರ್ಕಾರ ಮಾಡುವುದಿಲ್ಲ. ಚಿತ್ರರಂಗದಲ್ಲಿ ರಾಜಕೀಯ ಇರಬಾರದು, ಚಿತ್ರರಂಗ ಪ್ರತ್ಯೇಕವಾಗಿ, ಸ್ವತಂತ್ರ್ಯವಾಗಿರಬೇಕು' ಎಂದಿದ್ದಾರೆ ಪವನ್ ಕಲ್ಯಾಣ್.

ನೆರೆಯ ತೆಲಂಗಾಣದಲ್ಲಿ ಕಾಂಗ್ರೆಸ್ ಸರ್ಕಾರ, ಚಿತ್ರರಂಗಕ್ಕೆ ನೀಡಲಾಗುತ್ತಿದ್ದ ಟಿಕೆಟ್ ದರ ಹೆಚ್ಚಳ, ವಿಶೇಷ ಶೋ ಎಲ್ಲವನ್ನೂ ರದ್ದು ಮಾಡಿದೆ. ಮಾತ್ರವಲ್ಲದೆ ಚಿತ್ರರಂಗದ ಮೇಲೆ ಜಿದ್ದಿಗೆ ಬಿದ್ದಂತೆ ವರ್ತಿಸುತ್ತಿದೆ. ಹಾಗಾಗಿ ಪವನ್ ಕಲ್ಯಾಣ್, ತಮ್ಮ ಸರ್ಕಾರ ಹೀಗೆ ಮಾಡುವುದಿಲ್ಲ ಎಂಬ ಭರವಸೆ ನೀಡಿದ್ದಾರೆ.

## ಅಟ್ಟಾಡಿಸಿ ಕೊಂದ್ರು

ಆದರೆ ಚಿಕಿತ್ಸೆ ಫಲಕಾರಿಯಾಗದೆ ಆತ ಸಾವನ್ನಪ್ಪಿದ್ದಾನೆ.

## ಮೊದಲನೇ ಪುಟದಿಂದ...

ಉಸ್ಮಾನ್ ಕಳೆದೆ ಐದು ವರ್ಷಗಳ ಹಿಂದೆ ಜಬೀನ್ ಎಂಬಾಕೆಯನ್ನು ಪ್ರೀತಿಸಿ ಮದುವೆಯಾಗಿದ್ದ. ಆಕೆಗೆ ಕಿಡ್ನಿ ವಿಫಲವಾಗಿ ಅನಾರೋಗ್ಯದಿಂದ ಬಳಲುತ್ತಿದ್ದು, ಈ ವೇಳೆ ಆರೋಗ್ಯ ವಿಚಾರಿಸಲು ಬಂದಿದ್ದ ಜಬೀನಾ ಸಂಬಂಧಿ ಯುವತಿಯೊಂದಿಗೆ ಉಸ್ಮಾನ್‌ಗೆ ಪ್ರೀತಿಯಾಗಿದೆ. ಈ ವಿಷಯ ತಿಳಿದು ಆತನ ಪತ್ನಿ ಮಹಿಳಾ ಠಾಣೆಗೆ ದೂರು ನೀಡಿದ್ದಳು. ಬಳಿಕ ತನ್ನ ಪತಿಯಿಂದ ದೂರಾಗಿ ತವರು ಮನೆ ಸೇರಿದ್ದಳು ಎಂದು ತಿಳಿದು ಬಂದಿದೆ.

ಕೊಲೆಯಾದ ಉಸ್ಮಾನ್ ಕಳೆದ ರಾತ್ರಿ ತನ್ನ ಪ್ರೇಯಸಿಯ ಮನೆಗೆ ತೆರಳಿದ್ದ. ಅಲ್ಲದೇ ಆಕೆಯನ್ನು ಮದುವೆ ಮಾಡಿಕೊಡುವಂತೆ ಹೇಳಿದ್ದ. ಇದರಿಂದ ಆತ ವಾಪಸ್ ತೆರಳುತ್ತಿದ್ದಾಗ ಯುವತಿಯ ಕುಟುಂಬಸ್ಥರು ಹಾಗೂ ಸ್ಥಳೀಯರು, ಉಸ್ಮಾನ್‌ನನ್ನು ಏರಿಯಾದಲ್ಲಿ ಅಟ್ಟಾಡಿಸಿ ಹಲ್ಲೆ ನಡೆಸಿದ್ದರು.

ಗಲ್ ಪೇಟೆ ಪೊಲೀಸ್ ಠಾಣಾ ವ್ಯಾಪ್ತಿಯಲ್ಲಿ ಈ ಘಟನೆ ನಡೆದಿದೆ.

## ನ್ಯಾಯಾಂಗ ಬಂಧನ

ಅಲ್ಲದೇ ಪ್ರಕರಣವನ್ನ ಗಂಭೀರವಾಗಿ ತೆಗೆದುಕೊಂಡ ತುಮಕೂರು ಎಸ್ ಪಿ ಅಶೋಕ್ ವೆಂಕಟ್ ರಿಪೋರ್ಟ್ ತರಿಸಿಕೊಂಡು ಮೇಲಾಧಿಕಾರಿಗಳಿಗೆ ಕಳಿಸಿದ್ದಾರೆ. ಕೂಡಲೇ ಸಂಜೆ ವೇಳೆಗೆ ಡಿಜಿ ಆ ಯಂಡ್ ಐಜಿಪಿ ಅಲೋಕ್ ಮೋಹನ್ ರಾಸಲಿಲೆ ಪ್ರಕರಣ ಕಂಡು ಡಿವೈಎಸ್ ಪಿ ರಾಮಚಂದ್ರಪ್ಪರನ್ನ ಅಮಾನತು ಮಾಡಿದ್ದರು. ಇನ್ನೂ ಇದಾದ ಬಳಿಕ ನೊಂದ ಮಹಿಳೆ ನೀಡಿದ ದೂರಿನ ಮೇರೆಗೆ ಮನೆಯಲ್ಲಿಯೇ ಇದ್ದ ಡಿವೈಎಸ್ ಪಿ ರಾಮಚಂದ್ರಪ್ಪರನ್ನ ಮಧುಗಿರಿ ಪೊಲೀಸರು ಬಂಧಿಸಿದ್ದರು.

ಅತ್ಯಾಚಾರ ಕೇಸ್ ಅಡಿ ದೂರು ದಾಖಲಿಸಿಕೊಂಡು ರಾಮಚಂದ್ರಪ್ಪರನ್ನ ಬಂಧಿಸಿ ಮಧುಗಿರಿ ಪೊಲೀಸ್ ಠಾಣೆಗೆ ಕರೆತಂದಿದ್ದಾರೆ. ಬಳಿಕ ಮೆಡಿಕಲ್ ಗಾಗಿ ಮಧುಗಿರಿ ಸಾರ್ವಜನಿಕ ಆಸ್ಪತ್ರೆಗೆ ಕರೆದುಕೊಂಡು ಹೋಗಿ ಮೆಡಿಕಲ್ ಚೆಕಪ್ ಮಾಡಿಸಿದ್ದಾರೆ. ಇನ್ನೂ ಇದಾದ ಬಳಿಕ ಮಧುಗಿರಿ ಜೆಎಂಎಫ್ ಸಿ ಕೋರ್ಟ್ ಜಡ್ಜ್ ಬಳಿ ಹಾಜರುಪಡಿಸಿದ್ದರು. ಇದೀಗ ಮಧುಗಿರಿ ಜೆಎಂಎಫ್ ಸಿ ನ್ಯಾಯಾಲಯದಿಂದ 14 ದಿನ ನ್ಯಾಯಾಂಗ ಬಂಧನ ನೀಡ ಆದೇಶ ಹೊರಡಿಸಲಾಗಿದೆ.

## ಬಾಕ್ಸ್ ಹಂಚಿಕೆ

**ಕಿಡಿಗೇಡಿಯನ್ನು ಪತ್ತೆ ಹಚ್ಚಿ ಬಂಧಿಸಬೇಕು:** ಡಾ.ಧನಂಜಯ ಸರ್ಜಿ ಅವರು ಹಬ್ಬ ಹರಿದಿನಗಳಲ್ಲಿ ಬೇವು-ಬೆಲ್ಲ, ಎಳ್ಳು-ಬೆಲ್ಲ ಹಂಚುತ್ತಾರೆ. ಆದರೆ, ಈಗ ಅವರ ಹೆಸರಿನಲ್ಲಿ ಕಹಿ ಭರಿತ ಸ್ವೀಟ್ ಬಾಕ್ಸ್ ಬೇರೆ ಯಾರೋ ಹಂಚಿದ್ದಾರೆ. ಈ ಕಹಿ ಘಟನೆ ಅವರ ಮನಸ್ಸಿಗೆ ಆಘಾತ ಉಂಟು ಮಾಡಿದೆ. ಈ ಘಟನೆಯನ್ನು ಪೊಲೀಸ್ ಇಲಾಖೆ ಗಂಭೀರವಾಗಿ ಪರಿಗಣಿಸಬೇಕು. ಕಿಡಿಗೇಡಿಯನ್ನು ಪತ್ತೆ ಹಚ್ಚಿ ಬಂಧಿಸಬೇಕು. ಕಿಡಿಗೇಡಿ ವಿರುದ್ಧ ಸೂಕ್ತ ಕಾನೂನು ಕ್ರಮ ಕೈಗೊಳ್ಳಬೇಕು ಎಂದು ಶಾಸಕ ಎಸ್.ಎನ್.ಚನ್ನಬಸಪ್ಪ ಹೇಳಿದರು.

## ಸೈನಿಕರು ಅರೆಸ್ಟ್!

ಈ ಸಂಬಂಧ ಪೊಲೀಸರು ತನಿಖೆ ಆರಂಭಿಸಿದಾಗ, ಪಠಾಣ್ ಕೋಟ್‌ನಲ್ಲಿ ಭಾರತೀಯ ಸೇನೆಯ 45 ಎಡಿ ರೆಜಿಮೆಂಟ್‌ನಲ್ಲಿ ಕಾರ್ಯನಿರ್ವಹಿಸುತ್ತಿದ್ದ ಆಂಚಲ್‌ನ ದಿಬಿಲ್ ಕುಮಾರ್ ಬಿ (28) ರಂಜಿನಿ ಅವರೊಂದಿಗೆ ಸಂಬಂಧ ಹೊಂದಿದ್ದ ಎಂದು ತಿಳಿದುಬಂದಿತ್ತು. ಜನವರಿ 24, 2006 ರಂದು ಅವಳಿ ಮಕ್ಕಳು ಜನಿಸಿದ ನಂತರ, ಅವರು ಅವಳಿಂದ ದೂರವಾಗಲು ಪ್ರಾರಂಭಿಸಿದ್ದರು.

ನಂತರ ಮಹಿಳೆಯ ತಾಯಿ ಕೇರಳ ರಾಜ್ಯ ಮಹಿಳಾ ಆಯೋಗವನ್ನು ಸಂಪರ್ಕಿಸಿದ್ದರು. ಇದು ಅವಳಿ ಮಕ್ಕಳ ಡಿಎನ್‌ಎ ಪರೀಕ್ಷೆಗೆ ಆದೇಶಿಸಿತ್ತು. ಇದರಿಂದ ಕುಮಾರ್ ಆಕೆಯ ಕೊಲೆಗೆ ಸಂಚು ರೂಪಿಸಿದ್ದ. ಬಳಿಕ ಸೈನ್ಯದಲ್ಲಿದ್ದ ರಾಜೇಶ್.ಪಿ ಎಂಬಾತ ರಂಜಿನಿಯನ್ನು ಮದುವೆಯಾಗಲು ಕುಮಾರ್‌ಗೆ ಮನವರಿಕೆ ಮಾಡಿಕೊಡುವುದಾಗಿ ಭರವಸೆ ನೀಡಿದ್ದ. ಆದರೆ ಆತ ಕುಮಾರ್ ಜೊತೆ ಸೇರಿಕೊಂಡು ಹತ್ಯೆಗೆ ಕೈ ಜೋಡಿಸಿದ್ದ.

ಸ್ಥಳೀಯ ಪೊಲೀಸರು ವ್ಯಾಪಕ ತನಿಖೆ ನಡೆಸಿದರೂ ಮತ್ತು ಅವರ ಸೆರೆಗೆ ಕಾರಣವಾಗುವ ಮಾಹಿತಿಗೆ 2 ಲಕ್ಷ ರೂಪಾಯಿ ಬಹುಮಾನ ನೀಡಿದ್ದರೂ ಸಹ ಇಬ್ಬರ ಸುಳಿವು ಸಿಕ್ಕಿರಲಿಲ್ಲ. ಕೇರಳ ಹೈಕೋರ್ಟ್‌ನ ಆದೇಶದ ಮೇರೆಗೆ 2010 ರಲ್ಲಿ ಪ್ರಕರಣವನ್ನು ಸಿಬಿಐಗೆ ಹಸ್ತಾಂತರಿಸಿತು.

ಸಿಬಿಐ ತನಿಖೆ ವೇಳೆ ಕುಮಾರ್ ಮತ್ತು ರಾಜೇಶ್ ಪುದುಚೇರಿಯಲ್ಲಿ ನಕಲಿ ಹೆಸರಿನಲ್ಲಿ ವಾಸಿಸುತ್ತಿದ್ದಾರೆ ಮತ್ತು ಆಧಾರ್ ಕಾರ್ಡ್ ಸೇರಿದಂತೆ ಹೊಸ ದಾಖಲೆಗಳನ್ನು ಮಾಡುವಲ್ಲಿ ಯಶಸ್ವಿಯಾಗಿದ್ದಾರೆ ಎಂದು ಸುಳಿವು ಸಿಕ್ಕಿತ್ತು. ಅಲ್ಲದೇ ಇಬ್ಬರು ಶಿಕ್ಷಕಿಯರನ್ನು ಮದುವೆಯಾಗಿದ್ದರು ಎಂದು ತಿಳಿದು ಬಂದಿತ್ತು.

ಸಿಬಿಐನ ಚೆನ್ನೈ ಘಟಕವು ಶುಕ್ರವಾರ ಇಬ್ಬರನ್ನು ಬಂಧಿಸಿ ಕೊಚ್ಚಿಗೆ ಕರೆತಂದಿದೆ. ಅಲ್ಲಿ ಅವರನ್ನು ಶನಿವಾರ ಎರ್ನಾಕುಲಂ ನ್ಯಾಯಾಲಯಕ್ಕೆ ಹಾಜರುಪಡಿಸಲಾಗಿದ್ದು, ಆರೋಪಿಗಳನ್ನು ಜ.18ರವರೆಗೆ ಪೊಲೀಸ್ ಕಸ್ಟಡಿಗೆ ಒಪ್ಪಿಸಲಾಗಿದೆ.

## ಅಲ್ಲಲ್ಲಿ ರಸ್ತೆ ಅಗೆತ

ಇದರ ಜೊತೆ ನಗರದ ಅಲ್ಲಲ್ಲಿ ರಸ್ತೆ ಅಗೆದು, ಸರಿಯಾಗಿ ಮುಚ್ಚದೇ ಅರ್ಧಕ್ಕೆ ಹೋಗುತ್ತಿರುವುದರಿಂದ ವಾಹನ ಸವಾರರು ನಿತ್ಯ ಪರದಾಡುವಂತಾಗಿದೆ.

ಮಂಗಳೂರಿನಲ್ಲಿ ಹೊಸದಾದ ಕಾಂಕ್ರಿಟ್ ರಸ್ತೆಯನ್ನು ಮರುದಿನ ಅಗೆದರೂ ಸಹ ಯಾವುದೇ ಆಶ್ಚರ್ಯ ಪಡಬೇಕಾಗಿಲ್ಲ ಎಂಬಂತಾಗಿದೆ. ಎರಡೆರಡು ಸಾರಿ ಕಾಮಗಾರಿಯ ಗಡುವನ್ನು ವಿಸ್ತರಣೆ ಮಾಡಿದರೂ ಸಹ ಕಾಮಗಾರಿ ಆಮೆಗತಿಯಲ್ಲಿ ಸಾಗುತ್ತಿದೆ. ಈವರೆಗೂ ಒಂದೇ ಒಂದು ವಾರ್ಡ್‌ಗೂ ಸಮರ್ಪಕವಾಗಿ ನೀರು ಪೂರೈಕೆ ಮಾಡೋದಕ್ಕೆ ಗುತ್ತಿಗೆದಾರ ಸಂಸ್ಥೆಗೆ ಸಾಧ್ಯವಾಗಿಲ್ಲ. ಹೀಗಾಗಿ ಜನ ಆಡಳಿತ ವ್ಯವಸ್ಥೆಗೆ, ಅಧಿಕಾರಿಗಳಿಗೆ ಹಿಡಿಶಾಪ ಹಾಕುತ್ತಿದ್ದಾರೆ.

ಮಹಾನಗರ ಪಾಲಿಕೆ ವ್ಯಾಪ್ತಿಯಲ್ಲಿ ಒಟ್ಟು 792.4 ಕೋಟಿ ವೆಚ್ಚದಲ್ಲಿ ಈ ಯೋಜನೆ ನಡೆಯುತ್ತಿದೆ. ಕಾಮಗಾರಿಯ ಗುತ್ತಿಗೆಯನ್ನು ಸೂಯೆಜ್ ಇಂಡಿಯಾ ಪ್ರೈವೇಟ್ ಲಿಮಿಟೆಡ್ ಸಂಸ್ಥೆ ವಹಿಸಿಕೊಂಡಿದ್ದು, ಯೋಜನೆ ಅನುಷ್ಠಾನದ ಜವಾಬ್ದಾರಿಯನ್ನು ಕರ್ನಾಟಕ ನಗರ ಮೂಲ ಸೌಕರ್ಯ ಅಭಿವೃದ್ಧಿ ಮತ್ತು ಹಣಕಾಸು ಸಂಸ್ಥೆ ವಹಿಸಿದೆ. ಆದರೆ, ಇಲ್ಲಿ ಕಾಮಗಾರಿ ವಹಿಸಿಕೊಂಡಿರುವ ಸಂಸ್ಥೆಯೇ ಬ್ಲ್ಯಾಕ್ ಲಿಸ್ಟ್‌ನಲ್ಲಿದೆ. ಇನ್ನು ಯೋಜನೆ ಹಳ್ಳ ಹಿಡಿದಿರುವುದಕ್ಕೆ ನಗರದ ಮೇರಿಹಿಲ್‌ನಲ್ಲಿ ರಸ್ತೆ ಬದಿ ಇಟ್ಟಿರುವ ಬೃಹತ್ತಾದ ಕೊಳವೆಗಳೆ ಸಾಕ್ಷಿಯಂತಿದೆ. ಪೈಪ್‌ಗಳ ಡಂಪ್ ಮಾಡಿರುವ ಜಾಗದಲ್ಲಿ ಗಿಡಗಂಟಿಗಳು ಬೆಳೆದಿದೆ.

ಮುಖ್ಯ ಕೊಳವೆ ಅಳವಡಿಕೆ 54.16 ಕಿಲೋಮೀಟರ್ ನಲ್ಲಿ ಆಗಬೇಕಾಗಿದ್ದು, ಇಲ್ಲಿ 12.26 ಕಿ.ಮೀ ಮಾತ್ರ ಪೂರ್ಣಗೊಳಿಸಲಾಗಿದೆ. ಇದರ ಜೊತೆ ಮನೆ ಮನೆಗೆ ನೀರು ವಿತರಣಾ ಜಾಲದ ಕೊಳವೆ ಅಳವಡಿಕೆ 1,288 ಕಿಲೋಮೀಟರ್‌ನಲ್ಲಿ ಆಗಬೇಕಾಗಿದ್ದು, ಕೇವಲ 740 ಕಿ.ಮೀ. ಮಾತ್ರ ಅಳವಡಿಕೆಯಾಗಿದೆ. ಇದರ ಜೊತೆ ಮೇಲ್ಮಟ್ಟದ ಜಲಸಂಗ್ರಹಗಾರ, ನೆಲಮಟ್ಟದ ಜಲಸಂಗ್ರಹಗಾರ, ಪಂಪ್ ಹೌಸ್, ನೀರು ಶುದ್ಧೀಕರಣ ಘಟಕಗಳ ಕಾಮಗಾರಿಯು ಪೆಂಡಿಂಗ್ ಇದೆ.

ಪ್ರತಿ ವಾರ್ಡ್‌ನಲ್ಲಿಯೂ ಯೋಜನೆಯಿಂದಾಗಿ ಸಮಸ್ಯೆ ಉದ್ಭವಿಸಿದ್ದು, ಆಡಳಿತ ಪಕ್ಷ ಬಿಜೆಪಿಯ ಸದಸ್ಯರು ಸಹ ಪಾಲಿಕೆಯ ಸಾಮಾನ್ಯ ಸಭೆಯಲ್ಲಿ ಅಧಿಕಾರಿಗಳ ವಿರುದ್ಧ ಆಕ್ರೋಶ ವ್ಯಕ್ತಪಡಿಸಿದ್ದಾರೆ. ಜನ ದಿನದಲ್ಲಿ 24 ಗಂಟೆ ಬೇಡ ಕನಿಷ್ಟ 3 ಗಂಟೆ ಆದರೂ ವ್ಯವಸ್ಥಿತವಾಗಿ ನೀರು ಸರಬರಾಜು ಮಾಡಿ ಎಂದು ಹೇಳುತ್ತಿದ್ದಾರೆ. ಒಟ್ಟಿನಲ್ಲಿ ಜಲಸಿರಿ ಯೋಜನೆಯ ಸಾಕಷ್ಟು ಅಧ್ವಾನಗಳಿಂದ ಜನರು, ಜನಪ್ರತಿನಿಧಿಗಳು ರೋಸಿ ಹೋಗಿರೊದಂತು ಸುಳ್ಳಲ್ಲ.

## ಪುತ್ರ ಬಲಿ!

ಅಪಘಾತಗಳ ಬಳಿಕ ರೋಡ್ ಹಂಪ್ ಬಗ್ಗೆ ಸಾಕಷ್ಟು ದೂರುಗಳು ಬಂದರೂ ಅಧಿಕಾರಿಗಳು ನಿರ್ಲಕ್ಷ್ಯ ತೋರಿದ್ದಾರೆ. ಮೊನ್ನೆ ರಾತ್ರಿಯ ಕೈ ಮುಖಂಡನ ಮಗನ ಅಪಘಾತದ ಬಳಿಕ ಎಚ್ಚೆತ್ತು ನಿನ್ನೆ ಸಂಜೆ ರೋಡ್ ಹಂಪ್ ತೆರವುಗೊಳಿಸಿದ್ದಾರೆ.

## ಆತ್ಮಹತ್ಯೆ

ಬಂದು ತಾಯಿ ಮಹಾಲಕ್ಷ್ಮಿ ಜೊತೆ ಗಲಾಟೆ ಮಾಡಿದ್ದ. ಗಲಾಟೆ ವಿಕೋಪಕ್ಕೆ ತಿರುಗಿ ಕತ್ತು ಹಿಸುಕಿ ಕೊಲೆ ಮಾಡಿದ್ದಾನೆ. ಮೊಬೈಲ್ ಚಾರ್ಜಿಂಗ್ ವೈರ್‌ನಿಂದ ಕುತ್ತಿಗೆಗೆ ಬಿಗಿದು ತಾಯಿ ಹತ್ಯೆ ಮಾಡಿದ್ದಾನೆ. ಬಳಿಕ ತಾನು ನೇಣು ಬಿಗಿದುಕೊಂಡು ಆತ್ಮಹತ್ಯೆಗೆ ಶರಣಾಗಿದ್ದಾನೆ. ಸ್ಥಳಕ್ಕೆ ಸೂರ್ಯನಗರ ಪೊಲೀಸರ ಮತ್ತು ಬೆಂಗಳೂರು ಗ್ರಾಮಾಂತರ ಎಸ್‌ಪಿ ನಾಗೇಶ್ ಕುಮಾರ್ ಭೇಟಿ ಪರಿಶೀಲನೆ ನಡೆಸಿದ್ದಾರೆ. ಮೃತ ದೇಹಗಳನ್ನು ಅತ್ತಿಬೆಲೆ ಆಕ್ಸ್‌ಫರ್ಡ್ ಆಸ್ಪತ್ರೆಗೆ ರವಾನಿಸಲಾಗಿದೆ.

# ಮಕ್ಕಳು ಫೇಸ್‌ಬುಕ್, ಇನ್‌ಸ್ಟಾಗ್ರಾಂ ಖಾತೆ ತೆರೆಯಲು ಪೋಷಕರ ಅನುಮತಿ ಕಡ್ಡಾಯ?

**ನವದೆಹಲಿ:** 18 ವರ್ಷಕ್ಕಿಂತ ಕಡಿಮೆ ವಯಸ್ಸಿನ ಮಕ್ಕಳು ಸಾಮಾಜಿಕ ಜಾಲತಾಣ ಖಾತೆ ತೆರೆಯಲು ಪೋಷಕರ ಅನುಮತಿ ಕಡ್ಡಾಯಗೊಳಿಸುವ ನೀತಿ ಜಾರಿಗೆ ಕೇಂದ್ರ ಸರ್ಕಾರ ನಿರ್ಧರಿಸಿದೆ. 2023ರಲ್ಲೇ ಸಂಸತ್ತಿನ ಅನುಮೋದನೆ ಪಡೆದುಕೊಂಡಿರುವ ಡಿಜಿಟಲ್ ಖಾಸಗಿ ಮಾಹಿತಿ ರಕ್ಷಣಾ ಕಾಯ್ದೆಗೆ ಕೇಂದ್ರ ಸರ್ಕಾರ ಕೆಲವೊಂದು ತಿದ್ದುಪಡಿ ಮಾಡಿ ಹೊಸ ಕರಡು ವರದಿಯನ್ನು ಶುಕ್ರವಾರ ಬಿಡುಗಡೆ ಮಾಡಿದೆ.



ಈ ಮಹತ್ವದ ನಿರ್ಧಾರದ ಬಗ್ಗೆ ಜನರು ಅಭಿಪ್ರಾಯಗಳನ್ನು ತಿಳಿಸಲು ಫೆ.18ರವರೆಗೆ ಅವಕಾಶ ಕಲ್ಪಿಸಲಾಗಿದೆ. ಹೀಗೆ ಸಂಗ್ರಹವಾಗುವ ಅಭಿಪ್ರಾಯಗಳನ್ನು ಆಧರಿಸಿ ಅಂತಿಮ ವರದಿ ಬಿಡುಗಡೆಗೆ ಸರ್ಕಾರ ಮುಂದಾಗಿದೆ. ಕರಡು ವರದಿ ಅನ್ವಯ, ಮಕ್ಕಳು ಸಾಮಾಜಿಕ ಜಾಲತಾಣಗಳಲ್ಲಿ ಖಾತೆ ತೆರೆಯಬೇಕಾದರೆ ಪೋಷಕರ ಅನುಮತಿ ಕಡ್ಡಾಯವಾಗಿದೆ. ಇದರ ಜೊತೆಗೆ ಕಂಪನಿಗಳು ತಮ್ಮ ದಾಖಲೆಗಳನ್ನು ಅಳಿಸುವಂತೆ ಮತ್ತು ದಾಖಲೆಗಳನ್ನು ಏಕೆ ಕಲೆಹಾಕುತ್ತಿದ್ದೀರಿ ಎಂದು ಮಾಹಿತಿ ಪಡೆಯುವ ಮತ್ತು ಖಾಸಗಿ ಮಾಹಿತಿ ರಕ್ಷಣೆ ಮಾಡಿಕೊಳ್ಳುವ ಅಧಿಕಾರ ಬಳಕೆದಾರನಿಗೆ ಇದೆ.

ಕಂಪನಿಗಳು ಬಳಕೆದಾರನ ಡಾಟಾ ಲೀಕ್ ಮಾಡಿದರೆ ರೂ.250 ದಂಡ ಹಾಕುವ ಅಧಿಕಾರ ಕೇಂದ್ರ ಸರ್ಕಾರಕ್ಕಿದೆ.

# ಕೆಪಿಟಿಸಿಎಲ್, ಎಸ್ಕಾಂ ಹೊರಗುತ್ತಿಗೆ ನೌಕರರ ಬೇಡಿಕೆ ಈಡೇರಿಕೆಗೆ ಆಗ್ರಹ




**ಬೆಂಗಳೂರು:** ಇಂಧನ ಇಲಾಖೆಯಲ್ಲಿ ಪ್ರಾಣ ಒತ್ತೆಯಿಟ್ಟು ಕೆಲಸ ಮಾಡುತ್ತಿರುವ ಕಾರ್ಮಿಕರಿಗೆ ಸೇವಾ ಭದ್ರತೆಗೆ ಒತ್ತಾಯಿಸಿ ಸರ್ಕಾರದ ಗಮನ ಸೆಳೆಯಲು ರಾಜ್ಯದಲ್ಲಿರುವ ವಿದ್ಯುತ್ ಉಪ ಕೇಂದ್ರಗಳಲ್ಲಿ ವಿದ್ಯುತ್ ಸ್ಥಗಿತಗೊಳಿಸಿ ಹೊರ ಗುತ್ತಿಗೆ ನೌಕರರು ತಮ್ಮ ಕುಟುಂಬದೊಂದಿಗೆ ಜನವರಿ 28ರಂದು ಬೃಹತ್ ಪ್ರತಿಭಟನೆ ಮಾಡುವುದಾಗಿ ಕರ್ನಾಟಕ ರಾಜ್ಯ ಏಕಖಿಅಐ ಮತ್ತು ಎಸ್ಕಮ್ ಹೊರ ಗುತ್ತಿಗೆ ನೌಕರರ ಹಿತರಕ್ಷಣಾ ವೇದಿಕೆ ಗೌರವ ಅಧ್ಯಕ್ಷ ಮೇಲುಕೋಟೆ ಬೆಟ್ಟಸ್ವಾಮಿ ಗೌಡ್ರು ತಿಳಿಸಿದರು.

ಬೆಂಗಳೂರಿನ ಪ್ರೆಸ್ ಕ್ಲಬ್ ನಲ್ಲಿ ಪತ್ರಿಕಾಗೋಷ್ಠಿ ನಡೆಸಿ ಮಾತನಾಡಿದ ಅವರು, ಕರ್ನಾಟಕ ರಾಜ್ಯ ಕೆಪಿಟಿಸಿಎಲ್ ಮತ್ತು ಎಸ್ಕಮ್ ಹೊರ ಗುತ್ತಿಗೆ ಆಧಾರದಲ್ಲಿ ಕೆಲಸ ಮಾಡುವ ನೌಕರರು ಹೊರಗುತ್ತಿಗೆ ನೌಕರರನ್ನು ಒಳಗುತ್ತಿಗೆ ಮಾಡಬೇಕು, ಕೆಲಸದಿಂದ ತೆಗೆದು ಹಾಕಿರುವ ನೌಕರರನ್ನು ಮರು ನೇಮಕ ಮಾಡಬೇಕು ಎಂಬ

ಬೇಡಿಕೆಗಳನ್ನು ಇಟ್ಟಿದ್ದಾರೆ ಈ ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ ಈಗಾಗಲೇ 2023 ಆಗಸ್ಟ್ ನಲ್ಲಿ ಸತತ 5 ದಿನಗಳ ಕಾಲ ಬೆಂಗಳೂರಿನ ಫ್ರೀಡಂ ಪಾರ್ಕ್ ನಲ್ಲಿ ಪ್ರತಿಭಟನೆ ಮಾಡಿ ಸರ್ಕಾರದ ಗಮನಸೆಳೆದು, ಇಂಧನ ಸಚಿವರಾದ ಕೆಜೆ ಜಾರ್ಜ್‌ಗೆ ನಮ್ಮ ಬೇಡಿಕೆಗಳನ್ನು ಈಡೇರಿಸುವಂತೆ ಮನವಿ ನೀಡಿದ್ದೆವು. ನಮ್ಮ ಮನವಿಗೆ ಸಚಿವರು ಸಕಾರಾತ್ಮಕವಾಗಿ ಸ್ಪಂದಿಸಿ ಹಂತ ಹಂತವಾಗಿ ನಿಮ್ಮ ಬೇಡಿಕೆಗಳನ್ನು ಈಡೇರಿಸುತ್ತೇವೆಂದು ಹೇಳಿ ನಮ್ಮ ಹೋರಾಟವನ್ನು ಹಿಂಪಡೆಯಲು ಮನವೊಲಿಸಿದ್ದರು.

ಅದರಂತೆ ನಾವು ಒಂದು ವರ್ಷ ನಾಲ್ಕು ತಿಂಗಳು ಕಾಲ ಕಾಯ್ದರೂ ನಮ್ಮ ಯಾವುದೇ ಬೇಡಿಕೆಗಳನ್ನು ಈಡೇರಿಸದ ಸರ್ಕಾರ ಮತ್ತು ಇಂಧನ ಇಲಾಖೆಯ ವಿರುದ್ಧ ಜೀವ ಪಣಕ್ಕಿಟ್ಟು ಕೆಲಸ ಮಾಡುತ್ತಿರುವ ಸ್ಟೇಷನ್ ಆಪರೇಟರ್ಸ್, ಸ್ಟೇಷನ್ ಹೆಲ್ಪರ್ಸ್, ಗ್ಯಾಂಗ್ ಮ್ಯಾನ್, ಮೀಟರ್ ರೀಡರ್ಸ್ ಮತ್ತು ಚಾಲಕರು ಹಾಗು ಮತ್ತಿತರರ ಹೊರ ಗುತ್ತಿಗೆ ನೌಕರರಿಗೆ ಸೇವಾ ಭದ್ರತೆ ನೀಡಿ ಎಂದು ಒತ್ತಾಯಿಸಿ ಬೆಂಗಳೂರಿನ ಫ್ರೀಡಂ ಪಾರ್ಕ್ ನಲ್ಲಿ ಜನವರಿ 28 ರಿಂದ ಅನಿರ್ದಿಷ್ಟಾವಧಿ ಪ್ರತಿಭಟನೆಗೆ ಕರ್ನಾಟಕ ರಾಜ್ಯ ಕೆಪಿಟಿಸಿಎಲ್ ಮತ್ತು ಎಸ್ಕಾಂ ಗುತ್ತಿಗೆ ನೌಕರ ಹಿತರಕ್ಷಣಾ ವೇದಿಕೆ ಹಾಗು ಕೆಪಿಟಿಸಿಎಲ್ ಮತ್ತು ಎಸ್ಕಾಂ ಹೊರಗುತ್ತಿಗೆ ಚಾಲಕರ ಕ್ಷೇಮಾಭಿವೃದ್ಧಿ ಸಂಘದ ರಾಜ್ಯ ಪದಾಧಿಕಾರಿಗಳು ಮತ್ತು ಜಿಲ್ಲಾ ಪದಾಧಿಕಾರಿಗಳು ಸಭೆಯಲ್ಲಿ ನಿರ್ಣಯ ಕೈಗೊಳ್ಳಲಾಗಿದೆ. ಈ ಪ್ರತಿಭಟನೆಗೆ ಅವಕಾಶ ಮಾಡಿಕೊಡದೆ ಸರ್ಕಾರ ಮತ್ತು ಇಂದನ ಇಲಾಖೆ ನೌಕರರನ್ನು ಹೊರಗೆ ಹಾಕಿರುವವರನ್ನು ಜನವರಿ 27ರ ಒಳಗಾಗಿ ಮರು ನೇಮಕ ಮಾಡಬೇಕು ಎಂದು ಸರ್ಕಾರಕ್ಕೆ ವಿನಂತಿ ಮಾಡಿಕೊಂಡರು.

# ವಿಶೇಷಚೇತನರಿಗೆ ತ್ರಿಚಕ್ರ ವಾಹನ ವಿತರಿಸಿ ನೆರವು

**ಚಾಮರಾಜನಗರ:** ಮೈಸೂರಿನ ರೋಟರಿ ಪಂಚಶೀಲ, ಸಾಯಿ ಫೌಂಡೇಶನ್ ವತಿಯಿಂದ ವಿಶೇಷಚೇತನರೋರ್ವರಿಗೆ ತ್ರಿಚಕ್ರ ವಾಹನವನ್ನು ಜಿಲ್ಲಾಧಿಕಾರಿ ಶಿಲ್ಪಾ ನಾಗ್ ವಿತರಿಸಿದರು.

ರೋಟರಿ ಪಂಚಶೀಲ ಸಾಯಿ ಫೌಂಡೇಶನ್ ಸದಸ್ಯರಾದ ಡಾ. ಎಂ. ಅನಿಲ್ ಕುಮಾರ್ ಅವರು ತಮ್ಮ ಸ್ವಂತ ಹಣದಿಂದ ಖರೀದಿಸಿರುವ ಟಿ.ವಿ.ಎಸ್ ತ್ರಿಚಕ್ರ ವಾಹನವನ್ನು ವಿಶೇಷಚೇತನರಾದ ಯಳಂದೂರು ತಾಲೂಕಿನ ಮೆಲ್ಲಹಳ್ಳಿ ಗ್ರಾಮದ ಎಂ. ವಜ್ರಮಣಿ ಅವರಿಗೆ ನಗರದ ಜಿಲ್ಲಾಡಳಿತ ಭವನದ ಮುಂಭಾಗದಲ್ಲಿಂದು ಕೀ ಹಸ್ತಾಂತರಿಸುವ ಮೂಲಕ ನೀಡಲಾಯಿತು.

ವಿಶೇಷಚೇತನರ ಸೌಲಭ್ಯಗಳಿಗೆ ಸೇವೆ ಸಲ್ಲಿಸುವ ಗ್ರಾಮೀಣ ಪುನರ್ವಸತಿ ಕಾರ್ಯಕರ್ತರಾದ ವಜ್ರಮಣಿ ಅವರು ತಮಗೆ ತ್ರಿಚಕ್ರ ವಾಹನ ನೀಡಬೇಕೆಂದು ಜಿಲ್ಲಾಧಿಕಾರಿಗಳಿಗೆ ಮನವಿ ಮಾಡಿದ್ದರು. ಈ ಹಿನ್ನೆಲೆಯಲ್ಲಿ ಜಿಲ್ಲಾಧಿಕಾರಿಗಳಾದ ಶಿಲ್ಪಾ ನಾಗ್ ಅವರು ರೋಟರಿ ಪಂಚಶೀಲ ಮತ್ತು ಸಾಯಿ ಫೌಂಡೇಶನ್ ಅವರಿಗೆ ವಿಶೇಷಚೇತನರಿಗೆ ನೆರವಾಗಲು ಪ್ರಸ್ತಾಪಿಸಿದ್ದರು.



ಈ ಹಿನ್ನೆಲೆಯಲ್ಲಿ ರೋಟರಿ ಹಾಗೂ ಪಂಚಶೀಲ ಸಾಯಿ ಫೌಂಡೇಶನ್ ಸದಸ್ಯರಾದ ಡಾ. ಅನಿಲ್ ಕುಮಾರ್ ಅವರು ಸ್ಪಂದಿಸಿ ವಿಶೇಷಚೇತನರಾದ ವಜ್ರಮಣಿ ಅವರಿಗೆ ತ್ರಿಚಕ್ರ ವಾಹನ ನೀಡಲು ಮುಂದೆ ಬಂದರು. ಡಾ. ಅನಿಲ್ ಹಾಗೂ ಅವರ ಕುಟುಂಬದವರು ಇಂದು ಖುದ್ದು ಉಪಸ್ಥಿತರಿದ್ದು ವಜ್ರಮಣಿ ಅವರಿಗೆ ವಾಹನದ ಕೀ ಹಸ್ತಾಂತರ ಮಾಡಿದರು.

ಜಿಲ್ಲಾಧಿಕಾರಿ ಶಿಲ್ಪಾ ನಾಗ್ ಅವರು ತ್ರಿಚಕ್ರ ವಾಹನ ನೀಡಿ ವಿಶೇಷಚೇತನರಿಗೆ ನೆರವಾದ ಡಾ. ಅನಿಲ್ ಕುಮಾರ್ ಮತ್ತು ಕುಟುಂಬ, ರೋಟರಿ ಪಂಚಶೀಲ ಸಾಯಿ ಫೌಂಡೇಶನ್ ಗೆ ಕೃತಜ್ಞತೆ ಸಲ್ಲಿಸಿದರು. ಜಿಲ್ಲಾಡಳಿತದ ವತಿಯಿಂದ ಪ್ರಶಂಸೆ ವ್ಯಕ್ತಪಡಿಸಿ ಅಭಿನಂದನಾ ಪತ್ರವನ್ನು ನೀಡಿದರು.

77 ಸಾವಿರ ರೂ. ಮೌಲ್ಯದ ಟಿವಿಎಸ್ ತ್ರಿಚಕ್ರ ವಾಹನವನ್ನು ವಿಶೇಷಚೇತನರಿಗಾಗಿಯೇ ವಿಶೇಷವಾಗಿ ವಿನ್ಯಾಸ ಗೊಳಿಸಲಾಗಿದೆ. ವಾಹನ ಸ್ವೀಕರಿಸಿದ ವಜ್ರಮಣಿ ಅವರು ಜಿಲ್ಲಾಧಿಕಾರಿಗಳಾದ ಶಿಲ್ಪಾ ನಾಗ್, ಡಾ. ಅನಿಲ್ ಹಾಗೂ ರೋಟರಿ ಪಂಚಶೀಲ ಮತ್ತು ಸಾಯಿ ಫೌಂಡೇಶನ್ ನೀಡಿರುವ ಸಹಾಯಕ್ಕಾಗಿ ಧನ್ಯವಾದ ತಿಳಿಸಿದರು.

ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಮೋನಾ ರೋತ್, ಉಪ ಕಾರ್ಯದರ್ಶಿ ಪಿ. ಲಕ್ಷ್ಮೀ, ಮೈಸೂರಿನ ರೋಟರಿ ಜೋನಲ್ ಲೆಫ್ಟಿನೆಂಟ್ ಕಿರಣ್ ರಾಬರ್ಟ್, ರೋಟರಿ ಅಧ್ಯಕ್ಷರಾದ ಅಶ್ವಿನ್ ಪಾಳೆಗಾರ್, ಮಹೇಶ್, ಡಾ. ಪಂಕಜ, ಶೀತಲ್ ಕೊಟ್ಟಾಯನ್, ಜಿಲ್ಲಾ ಅಂಗವಿಕಲರ ಕಲ್ಯಾಣಾಧಿಕಾರಿ ಮೀನಾಕ್ಷಿ, ಇನ್ನಿತರರು ಈ ಸಂದರ್ಭದಲ್ಲಿ ಇದ್ದರು.

## ಪೂರ್ವಸಭೆ ಮುಂದೂಡಿಕೆ

**ಕೋಲಾರ:** ಕೋಲಾರ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್ ಹಾಗೂ ಕನ್ನಡ ಮತ್ತು ಸಂಸ್ಕೃತಿ ಇಲಾಖೆ ವತಿಯಿಂದ ಜನವರಿ 14 ರಂದು ಶಿವಯೋಗಿ ಸಿದ್ಧರಾಮೇಶ್ವರ ಜಯಂತಿ, ಜನವರಿ 19 ರಂದು ಮಹಾಯೋಗಿ ವೇಮನ ಜಯಂತಿ ಹಾಗೂ ಜನವರಿ 21 ರಂದು ಅಂಬಿಗರ ಚೌಡಯ್ಯ ಜಯಂತಿ ಅಚರಣೆ ಪೂರ್ವಬಾವಿ ಸಭೆ ಜನವರಿ 06 ರಂದು ಮಾನ್ಯ ಅಪರ ಜಿಲ್ಲಾಧಿಕಾರಿಗಳು, ಕೋಲಾರ ಜಿಲ್ಲೆ, ಕೋಲಾರ ಇವರ ಅಧ್ಯತೆಯಲ್ಲಿ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಸಭೆಯನ್ನು ಕರೆಯಲಾಗಿದ್ದು, ಈ ದಿನಾಂಕದಂದು ಕನ್ನಡ ಮತ್ತು ಸಂಸ್ಕೃತಿ ಇಲಾಖೆ, ಬೆಂಗಳೂರು ಕೇಂದ್ರ ಕಛೇರಿಯಲ್ಲಿ ತುರ್ತು ಸಭೆ ಹಾಗೂ ಜಿಲ್ಲಾ ಪಂಚಾಯತ್ ಕಛೇರಿಯಲ್ಲಿ 'ದಿಶಾ' ಸಭೆಯನ್ನು ಕರೆಯಲಾಗಿರುತ್ತದೆ. ಆದಕಾರಣ ಸದರಿ ಸಭೆಯನ್ನು ಮುಂದೂಡಲಾಗಿದ್ದು, ದಿನಾಂಕ ತಿಳಿಸಲಾಗುವುದು. ಸಮುದಾಯದವರು, ಸಂಘ ಸಂಸ್ಥೆಗಳವರು ಸಹಕರಿಸಬೇಕೆಂದು ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಾಯಕ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ವಿಶ್ವ ಕರ್ಮ ಅಮರ ಶಿಲ್ಪಿ ಜಕಣಾಚಾರಿ ಜಯಂತಿ

**ಕೋಲಾರ:** ಕೋಲಾರ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್ ಹಾಗೂ ಕನ್ನಡ ಮತ್ತು ಸಂಸ್ಕೃತಿ ಇಲಾಖೆ ವತಿಯಿಂದ ಜನವರಿ 01 ರಂದು ಹಮ್ಮಿಕೊಳ್ಳಲಾಗಿದ್ದ, ವಿಶ್ವ ಕರ್ಮ ಅಮರ ಶಿಲ್ಪಿ ಜಕಣಾಚಾರಿ ಜಯಂತಿ ಅಚರಣೆ ಕಾರ್ಯಕ್ರಮವನ್ನು ಮಾಜಿ ಪ್ರಧಾನಿ ಡಾ. ಮನಮೋಹನ್ ಸಿಂಗ್ ರವರು ನಿಧನರಾಗಿದ್ದು, ಏಳು ದಿನಗಳು ಶೋಕಾಚರಣೆಯಿದ್ದುರಿಂದ ಕಾರ್ಯಕ್ರಮ ಮುಂದೂಡಲಾಗಿರುತ್ತದೆ. ಈ ಕಾರ್ಯಕ್ರಮವನ್ನು ಜನವರಿ 08 ರಂದು ಶ್ರೀ ಟಿ.ಚೆನ್ನಯ್ಯ ರಂಗಮಂದಿರದಲ್ಲಿ ಬುಧವಾರ ಬೆಳಗ್ಗೆ 11.00 ಗಂಟೆಗೆ ಹಮ್ಮಿಕೊಳ್ಳಲಾಗಿದೆ. ಸದರಿ ಕಾರ್ಯಕ್ರಮಕ್ಕೆ ಗಣ್ಯರು, ಜಿಲ್ಲಾಮಟ್ಟದ ಅಧಿಕಾರಿಗಳು, ಕಲಾವಿದರು, ವಿಶ್ವಕರ್ಮ ಸಮುದಾಯದವರು, ಹಾಗೂ ಸಂಘ ಸಂಸ್ಥೆಗಳವರು, ಸಾರ್ವಜನಿಕರು ಭಾಗವಹಿಸಿ ಕಾರ್ಯಕ್ರಮವನ್ನು ಯಶಸ್ವಿಗೊಳಿಸಬೇಕೆಂದು ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಾಯಕ ನಿರ್ದೇಶಕರು ತಿಳಿಸಿದ್ದಾರೆ.

## ಪೋಷಕರ ಪತ್ತೆಗಾಗಿ ಮನವಿ

**ಕೋಲಾರ:** ಮಗುವಿನ ಹೆಸರು: ರಾಗ, ವಯಸ್ಸು: 09 ತಿಂಗಳ, ಹೆಣ್ಣು ಮಗು, ತಂದೆ: ನಾಗರಾಜು, ತಾಯಿ: ರಂಗಮ್ಮ, ಧರ್ಮ, ಜಾತಿ ಮತ್ತು ಭಾಷೆ ಗೊತ್ತಿಲ್ಲ, ಗೋಧಿ ಮೈಬಣ್ಣ, ಎತ್ತರ 58 ಸೆಂ. ಮೀ, ತೂಕ: 05ಕೆ.ಜಿ, ಬಂಗಾರಪೇಟೆ ತಾಲ್ಲೂಕಿನ ದೇಶಿಹಳ್ಳಿ ಗ್ರಾಮದಲ್ಲಿ ಪೋಷಕರ ವಾಸವಾಗಿರುತ್ತಾರೆ ಎಂದು ಜಿಲ್ಲಾ ಮಕ್ಕಳ ರಕ್ಷಣಾಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಕಾವೇರಿ ನದಿಯಲ್ಲಿ ಮುಳುಗಿ ಬಾಲಕ ಸಾವು

**ಹನೂರು:** ತಾಲೂಕಿನ ದಂಟಳ್ಳಿ ಗ್ರಾಮ ಸಮೀಪದ ಅರಣ್ಯ ಪ್ರದೇಶದ ಅಂಚಿನಲ್ಲಿರುವ ಕಾವೇರಿ ನದಿಯಲ್ಲಿ ಬಾಲಕನೋರ್ವ ಈಜಲು ಬಾರದೆ ಮುಳುಗಿ ಸಾವನ್ನಪ್ಪಿರುವ ಘಟನೆ ಜರುಗಿದೆ.



ವಡಕೆಹಳ್ಳ ಗ್ರಾಮದ ರಾಜೇಶ್ ಎಂಬುವವರ ಪುತ್ರ, ಕೌದಳ್ಳಿ ಸರ್ಕಾರಿ ಪ್ರೌಢಶಾಲೆಯಲ್ಲಿ 8ನೇ ತರಗತಿ ಓದುತ್ತಿದ್ದ ವಿದ್ಯಾರ್ಥಿ ಶಿವು (13) ನದಿಯಲ್ಲಿ ಈಜಲು ಹೋಗಿ ಮುಳುಗಿ ಮೃತಪಟ್ಟ ಬಾಲಕನಾಗಿದ್ದು, ಹೊಸ ವರ್ಷದ ಪ್ರಯುಕ್ತ ಬುಧವಾರ ಮಧ್ಯಾಹ್ನ ತಂದೆ ಹಾಗೂ ಕುಟುಂಬಸ್ಥರೊಂದಿಗೆ ದಬ್ಬದಗುಳಿ ದೇಗುಲಕ್ಕೆ ತೆರಳಿದ್ದ. ಈ ವೇಳೆ ಸಮೀಪದ ಕಾವೇರಿ ನದಿಯಲ್ಲಿ ಕುಟುಂಬಸ್ಥರೊಂದಿಗೆ ಸ್ನಾನ ಮಾಡುವ ವೇಳೆ ಶಿವು ಕಣ್ಮರೆಯಾಗಿದ್ದರು. ನದಿಯಲ್ಲಿ ಮುಳುಗಿರುವುದಾಗಿ ತಿಳಿದು ಗಾಬರಿಗೊಂಡ ಕುಟುಂಬಸ್ಥರು ಹೊಗೆನಕಲ್ ನ ನುರಿತ ಈಜುದಾರರ ತಂಡ ಹುಡುಕಾಟ ನಡೆಸಿ ಮೃತದೇಹವನ್ನು ಶುಕ್ರವಾರ ಹೊರತೆಗದು ವಾರಸುದಾರರಿಗೆ ಒಪ್ಪಿಸಿದ್ದಾರೆ.

## ಅರ್ಜಿ ಆಹ್ವಾನ

**ರಾಮನಗರ:** 2025-26ನೇ ಸಾಲಿನ ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ, ಬೆಂಗಳೂರು ನಿಮ್ಹಾನ್ಸ್‌ನ ಎಪಿಡೀಮಿಯಾಲಜಿ ವಿಭಾಗದ ಜನ ಆರೋಗ್ಯ ಸಂಸ್ಥೆಯು ಅನುಷ್ಠಾನಗೊಳ್ಳುತ್ತಿರುವ ಹಾಗೂ ರಾಜ್ಯ ಸರ್ಕಾರದ ಅನುದಾನಿತ ಯೋಜನೆಯಾದ ಯುವ ಜನರ ಮಾನಸಿಕ ಆರೋಗ್ಯಕ್ಕೆ ಪೂರಕ ಯುವ ಸ್ಪಂದನ ಸೇವೆಗಳ ಸಮಗ್ರ ಅಭಿವೃದ್ಧಿ ಮತ್ತು ಅನುಷ್ಠಾನ ಯೋಜನೆ ಯುವ ಸ್ಪಂದನ ಅಡಿಯಲ್ಲಿ ಯುವ ಪರಿವರ್ತಕರ ಕೆಲಸ ನಿರ್ವಹಿಸಲು ಅರ್ಹ ಅಭ್ಯರ್ಥಿಗಳಿಂದ ಅರ್ಜಿ ಆಹ್ವಾನಿಸಲಾಗಿದೆ. ಹೆಚ್ಚಿನ ಮಾಹಿತಿಗೆ ಕ್ಷೇತ್ರ ಸಂಪರ್ಕಾಧಿಕಾರಿಗಳು ಮೊ.ನಂ. 9632104204, ಯುವ ಸ್ಪಂದನ ಕೇಂದ್ರದ ಯುವ ಸಮಾಲೋಚಕರು ಮೊ.ನಂ. 8310610831, ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆಯ ಅಧೀಕ್ಷಕರು ಮೊ.ನಂ. 9448153308 ಅನ್ನು ಸಂಪರ್ಕಿಸುವಂತೆ ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆಯ ಸಹಾಯಕ ನಿರ್ದೇಶಕರು ತಿಳಿಸಿದ್ದಾರೆ.

## ವಾರಸುದಾರರ ಪತ್ತೆಗೆ ಮನವಿ

**ರಾಮನಗರ:** ಇಲ್ಲಿನ ಕೆಂಪೇಗೌಡನದೊಡ್ಡಿ ಗ್ರಾಮದ ಸರ್ವೀಸ್ ರಸ್ತೆಯ ಬಳಿಯಿರುವ ಹೊಂಗೆ ಮರದ ಕೆಳಗೆ ಸುಮಾರು 65-70 ವರ್ಷದ ಅಪರಿಚಿತ ವ್ಯಕ್ತಿ ಮೃತಪಟ್ಟಿರುತ್ತಾರೆ. ಮೃತರ ಹೆಸರು ಹಾಗೂ ವಿಳಾಸ ತಿಳಿದುಬಂದಿರುವುದಿಲ್ಲ.ಶವ ಕೊಳೆತ ಸ್ಥಿತಿಯಲ್ಲಿರುತ್ತದೆ. ಸಾಧಾರಣ ಶರೀರ, 5.5 ಅಡಿ ಎತ್ತರ, ಇವರು ನೀಲಿ ಬಣ್ಣದ ಶರ್ಟ್ ಧರಿಸಿರುತ್ತಾರೆ. ಇವರ ವಾರಸುದಾರರು ಯಾರದರು ಇದ್ದಲ್ಲಿ ಆರಕ್ಷಕ ನಿರೀಕ್ಷಕರು, ರಾಮನಗರ ಗ್ರಾಮಾಂತರ ಪೊಲೀಸ್ ಠಾಣೆ ರಾಮನಗರ ಜಿಲ್ಲೆ ಇವರನ್ನು ಸಂಪರ್ಕಿಸುವಂತೆ ಕೋರಲಾಗಿದೆ.

# ಎಸ್‌ಎಸ್‌ಎಲ್ ಸಿ ವಿದ್ಯಾರ್ಥಿಗಳ ಫಲಿತಾಂಶಕ್ಕೆ ಹೆಚ್ಚು ಒತ್ತು ನೀಡಿ

**ಮಂಡ್ಯ:** ಎಸ್‌ಎಸ್‌ಎಲ್ ಸಿ ವಿದ್ಯಾರ್ಥಿಗಳ ಫಲಿತಾಂಶದತ್ತ ಹೆಚ್ಚು ಗಮನವಹಿಸಿ ಜಿಲ್ಲೆಯ ಶೇಕಡ ಫಲಿತಾಂಶ ಹೆಚ್ಚಿಸಿ ಎಂದು ಮಂಡ್ಯ ಜಿಲ್ಲಾ ಉಸ್ತುವಾರಿ ಕಾರ್ಯ ದರ್ಶಿಗಳಾದ ವಿ. ಅನ್ಬುಕುಮಾರ್‌ಅವರು ತಿಳಿಸಿದರು,

ಜಿಲ್ಲಾ ಪಂಚಾಯತ್ ಸಭಾಂಗಣದಲ್ಲಿ ವಿವಿಧಇಲಾಖೆಯ ಅಧಿಕಾರಿಗಳೊಡನೆ ಪ್ರಗತಿ ಪರಿಶೀಲನಾ ಸಭೆಯಅಧ್ಯಕ್ಷತೆ ವಹಿಸಿ ಮಾತನಾಡಿದರು.ಎಸ್.ಎಸ್.ಎಲ್.ಸಿ ವಿದ್ಯಾರ್ಥಿಗಳಿಗೆ ಈಗಗಲೇ ನಿಗದಿಯಾಗಿರುವ ಪಠ್ಯಗಳ ಪ್ರವಚನ ಪೂರ್ಣಗೊಂಡಿದ್ದು, ಅವುಗಳ ಪುನರಾವರ್ತನೆ ಮಾಡಿ.ಪೂರ್ವ ಸಿದ್ಧತಾ ಪರೀಕ್ಷೆಗಳನ್ನು ನಡೆಸಿ ಎಂದರು.

ವಿದ್ಯಾರ್ಥಿಗಳ ಪ್ರತಿಕಿರು ಪರೀಕ್ಷೆಯ ಫಲಿತಾಂಶವನ್ನುಅಧ್ಯಯನ ನಡೆಸಿ ವಿದ್ಯಾರ್ಥಿಗಳಿಗೆ ಅವಶ್ಯಕವಿರುವಕಡೆ ಹೆಚ್ಚಿನಆತ್ಮವಿಶ್ವಾಸ ಹಾಗೂ ವಿಶೇಷತರಗತಿಗಳನ್ನು ನಡೆಸಿ ಎಂದರು.

ಜಿಲ್ಲಾಧಿಕಾರಿಡಾ: ಕುಮಾರಅವರು ಮಾತನಾಡಿ, 024-25 ನೇ ಆರ್ಥಿಕ ಸಾಲು ಅಂತ್ಯವಾಗುತ್ತಿದ್ದು,ಇಲಾಖೆಗಳು ನಿಗದಿಪಡಿಸಿರುವ ಗುರಿಗಳನ್ನು ಶೇ 100 ಸಾಧನೆಯಾಗಬೇಕು ಇದರೊಂದಿಗೆ ಜನವರಿ ಅಂತ್ಯದಲ್ಲಿ ಮಾನ್ಯ ಮುಖ್ಯಮಂತ್ರಿಗಳು ರಾಜ್ಯ ಮಟ್ಟದಲ್ಲಿ ಜಿಲ್ಲಾಧಿಕಾರಿಗಳು ಹಾಗೂ ಮುಖ್ಯಕಾರ್ಯನಿರ್ವಹಕ ಅಧಿಕಾರಿಗಳ ಸಭೆ ನಡೆಸಲಿದ್ದಾರೆ. ಇಲಾಖೆಗಳು ತಮ್ಮ ಸಾಧನೆಯ ನಿಖರ ಮಾಹಿತಿ ನೀಡುವಂತೆ ತಿಳಿಸಿದರು.

ಜಿಲ್ಲೆಯಲ್ಲಿ ನೀರಾವರಿ ಸಲಹಾ ಸಮಿತಿ ಸಭೆಜನವರಿ 7 ರಂದು ನಡೆಯಲಿದ್ದು, ಕಾವೇರಿ ನೀರಾವರಿ ನಿಗಮದ ವ್ಯಾಪ್ತಿಗೆ ಬರುವ ಕೆರೆಗಳು ತುಂಬಿರುವ ಬಗ್ಗೆ ನಿಖರ ಮಾಹಿತಿ ಹಾಗೂ ನೀರುತುಂಬಿಸಲು ಸಾಧ್ಯವಾಗದ ಕೆರೆಗಳಿಗೆ ಸಂಬಂಧಿಸಿದಂತೆ ಸರಿಯಾದಕಾರಣ ಒದಗಿಸಬೇಕು ಎಂದರು.

ಪಿ.ಎಂ.ಕಿಶನ್ ಯೋಜನೆಯ18 ನೇ ಕಂತು ಸಹಾಯಧನರೈತರಿಗೆ ಬಿಡುಗಡೆಯಾಗಿದೆ. ಬಹಳಷ್ಟು ಜನ ಹಣ ಪಾವತಿಯಾಗಿಲ್ಲಎಂದು ಮನವಿ ಸಲ್ಲಿಸುತ್ತಿದ್ದು, ಇದರ ಬಗ್ಗೆ ಇಲಾಖೆ ಅವರು ಫಲಾನುಭವಿಗಳ ಬ್ಯಾಂಕ್‌ಖಾತೆ ಇ.ಕೆ.ವೈ.ಸಿ ಬಗ್ಗೆ ಪರಿಶೀಲಿಸಿ ಎಲ್ಲರಿಗೂತಲುಪಿರುವ ಬಗ್ಗೆ ಖಾತ್ರಿ ಪಡಿಸಿಕೊಳ್ಳಿ ಎಂದರು.

ಇಂದಿರಾಕ್ಯಾಂಟೀನ್ ನಲ್ಲಿ ಸಾರ್ವಜನಿಕರಿಗೆ ಗುಣಮಟ್ಟದ ಶುಚಿ-ರುಚಿಆಹಾರಒದಗಿಸುತ್ತಿರುವ ಬಗ್ಗೆ ಖಾತ್ರಿ ಪಡಿಸಿಕೊಳ್ಳಲು ಅಧಿಕಾರಿಗಳು ಅನಿರೀಕ್ಷಿತ ಭೇಟಿ ನೀಡಿ ಪರಿಶೀಲಿಸಬೇಕು ಎಂದರು.

ಜಿಲ್ಲೆಯಲ್ಲಿ 8 ಇಂದಿರಾಕ್ಯಾಂಟೀನ್ ಗಳು ಕಾರ್ಯ ನಿರ್ವಹಿಸುತ್ತಿದ್ದು ಮತ್ತೊಂದು ಇಂದಿರಾಕ್ಯಾಂಟೀನ್‌ಅನ್ನು ನಾಗಮಂಗಲದ ಬೆಳ್ಳೂರುನಲ್ಲಿ ಹೊಸದಾಗಿ ನಿರ್ಮಿಸಲಾಗುತ್ತಿದೆಎಂದು ತಿಳಿಸಿದರು. ಜಿಲ್ಲಾ ಪಂಚಾಯತ್ ಮುಖ್ಯಕಾರ್ಯ ನಿರ್ವಾಹಕಅಧಿಕಾರಿ ಶೇಕ್‌ತನ್ವೀರ್ ಆಸಿಫ್ ಅವರು ಮಾತನಾಡಿ ನರೇಗಾಯೋಜನೆ, ಜಲ ಜೀವನ್ ಮಿಷನ್, ಬಹು ಗ್ರಾಮಕುಡಿಯುವ ನೀರಿನಯೋಜನೆ, ಸ್ವಚ್ಛ ಭಾರತ್ ಮಿಷನ್ ಯೋಜನೆಗಳ ಬಗ್ಗೆ ಸಭೆಗೆ ಮಾಹಿತಿ ನೀಡಿದರು.

ಸಭೆಯಲ್ಲಿ ಅಪರಜಿಲ್ಲಾಧಿಕಾರಿ ಬಿ.ಸಿ ಶಿವಾನಂದಮೂರ್ತಿ, ಉಪವಿಭಾಗಾಧಿಕಾರಿ ಶಿವಮೂರ್ತಿ, ಶ್ರೀನಿವಾಸ್, ಜಿಲ್ಲಾಆರೋಗ್ಯ ಮತ್ತುಕುಟುಂಬ ಕಲ್ಯಾಣಅಧಿಕಾರಿಡಾ. ಕೆ.ಮೋಹನ್, ಸಾರ್ವಜನಿಕ ಶಿಕ್ಷಣ ಇಲಾಖೆ ಉಪನಿರ್ದೇಶಕಎಚ್ ಶಿವರಾಮೇಗೌಡ, ಪದವಿ ಪೂರ್ವ ಶಿಕ್ಷಣ ಇಲಾಖೆಯಉಪನಿರ್ದೇಶಕ ಸಿ.ಚೆಲುವಯ್ಯ ಉಪಸ್ಥಿತರಿದ್ದರು.

### ವಿದ್ವಾಂಸ ಡಾ. ಚಕ್ಕೆರೆ ಶಿವ ಶಂಕರ್ ಬಣ್ಣನೆ

# ಕುವೆಂಪು ವರ್ತಮಾನದ ಬೆಳಕು

**ರಾಮನಗರ:** ಅವಿದ್ಯೆ, ಮೂಢನಂಬಿಕೆ ಹಾಗೂ ರೋಗಗ್ರಸ್ತ ವಾತಾವರಣದಲ್ಲಿ ಶಿಕ್ಷಣ ಪಡೆದು, ಸಾರಸ್ವತ ಲೋಕದ ಮೊದಲ ಶೂದ್ರ ಮಹಾ ಕವಿಯಾಗಿ ಹೊರಹೊಮ್ಮಿದ ಕುವೆಂಪು ಅವರು ವರ್ತಮಾನದ ಬೆಳಕಾಗಿದ್ದಾರೆ ಎಂದು ಮಹಾಕವಿ ಕುವೆಂಪು ಅವರನ್ನು ಜಾನಪದ ವಿದ್ವಾಂಸ ಡಾ. ಚಕ್ಕೆರೆ ಶಿವ ಶಂಕರ್ ಬಣ್ಣಿಸಿದರು.

ತಾಲ್ಲೂಕಿನ ಬಿಡದಿಯ ತ್ಯಾಗರಾಜು ಸೆಂಟ್ರಲ್ ಶಾಲೆ ಆವರಣದಲ್ಲಿ ಬಿಡದಿಯ ನಾಡ ಪ್ರಭು ಶ್ರೀ ಕೆಂಪೇಗೌಡ ಒಕ್ಕಲಿಗರ ಟ್ರಸ್ಟ್ ಹಾಗೂ ತ್ಯಾಗರಾಜ ಶಾಲೆಯ ಸಹಯೋಗದೊಂದಿಗೆ ಏರ್ಪಡಿಸಿದ್ದ ರಾಷ್ಟ್ರ ಕವಿ ಕುವೆಂಪು ಅವರ 120ನೇ ಜಯಂತೋತ್ಸವ ಕಾರ್ಯಕ್ರಮಕ್ಕೆ ಚಾಲನೆ ನೀಡಿ, ಕನ್ನಡ ನಾಡಿನ ಅಸ್ಮಿತೆಯನ್ನು ಕುವೆಂಪು ಅವರು ನಮಗೆ ಕಲಿಸಿದರು. ಶ್ರೀಸಾಮನ್ಯ, ಮಹಿಳೆಯರು, ಯುವಕರು ಹಾಗೂ ಶೋಷಿತರ ಬದುಕಿನ ಕುರಿತು ವಿಶೇಷ ಕಾಳಜಿ ಹೊಂದಿದ್ದರು. ಶ್ರೀಸಾಮಾನ್ಯರೆ ಭಗವದ್ ಮಾನ್ಯಂ ಎಂಬುದನ್ನು ಜಗತ್ತಿಗೆ ಸಾರಿದರಲ್ಲದೇ, ಸರ್ವ ಸಮಭಾವದ ಜಗತ್ತಿಗಾಗಿ ಅವರ ಮನ ಸದಾಕಾಲವೂ ತುಡಿಯುತ್ತಿತ್ತು ಎಂದರು.

ಕುವೆಂಪು ಅವರ ಬಗ್ಗೆ ಯುವ ಸಮಯದ ಇತ್ತೀಚೆಗೆ ಹೆಚ್ಚು ಪ್ರಚಾರ ಮಾಡುತ್ತಿದ್ದಾರೆ. ಈ ಹಿಂದೆ ಇದೇ ಪ್ರಚಾರ ಮಾಡಿದ್ದರೆ ಕುವೆಂಪು ಅವರಿಗೆ ನೋಬಲ್ ಪ್ರಶಸ್ತಿ ಬರುತಿತ್ತು ಎಂದು ವಿಶ್ವ ಒಕ್ಕಲಿಗ ಮಠದ ನಿಶ್ಚಲಾನಂದನಾಥ ಸ್ವಾಮೀಜಿ ಅಭಿಪ್ರಾಯಪಟ್ಟರು.

ಕುವೆಂಪು ಅವರು ಹತ್ತು ಹಲವು ನಾಟಕಗಳನ್ನ ರಚನೆ ಮಾಡಿದ್ದಾರೆ ಅದರಲ್ಲಿ ಸಮಾಜವನ್ನ ತಿದ್ದುವ ನಾಟಕಗಳನ್ನ ಸಹ ಬರೆದಿದ್ದಾರೆ ಎಂದರು.

ಇತ್ತೀಚೆಗೆ ಮೌಢ್ಯದ ಕಡೆಗೆ ಹೆಚ್ಚು ಜನರು ಜಾರುತ್ತಿದ್ದಾರೆ ಇದು ಸರಿಯಾದ ಕ್ರಮವಲ್ಲ ಮೌಢ್ಯದ ಕಡೆಗೆ ಹೆಚ್ಚು ಜಾರಿದರೆ ನೆಮ್ಮದಿಯಿಂದ ಬದಕು ಸಾಗಿಸಲು ಸಾಧ್ಯವಿಲ್ಲ, ಸ್ವಾಮಿ ವಿವೇಕಾನಂದರ ಮತ್ತೊಂದು ಜನ್ಮವೆ ಕುವೆಂಪು ಅವರು. ಇತ್ತೀಚಿನ ದಿನಗಳಲ್ಲಿ ಎಲ್ಲರು ಬುದ್ದಿವಂತರಾಗುತ್ತಿದ್ದಾರೆ ಆದರೆ ಹೃದಯವಂತರಾಗುತ್ತಿಲ್ಲ, ರೈತರಿಗೆ ಮಹತ್ವ ಕೊಟ್ಟು ಗೀತೆಯನ್ನೆ ರಚನೆ ಮಾಡಿದ್ದರು ಆದರೆ ಇಂದು ಆ ಮಹತ್ವ ರೈತರಿಗೆ ಸಿಗುತ್ತಿಲ್ಲ ಎಂದು ಬೇಸರ ವ್ಯಕ್ತಪಡಿಸಿದರು.



ಮಾಜಿ ವಿಧಾನ ಪರಿಷತ್ ಸದಸ್ಯ ಅಶ್ವಥ ನಾರಾಯಣ್ ಮಾತನಾಡಿ, ಕುವೆಂಪು ಅವರ ನಾಟಕಗಳು ಪ್ರಸ್ತುತ ಜಗತ್ತಿಗೆ ಕನ್ನಡಿ ಹಿಡಿದಂತಿವೆ. ಸಮಾಜದ ಕಟ್ಟಕಡೆಯ ವ್ಯಕ್ತಿ ಹಾಗೂ ತೆರೆ ಮರೆಯ ಸಾಮಾಜಿಕ ಸಂಕಷ್ಟಗಳನ್ನು ಸಮಾಜದೆದರು ತೆರೆದಿಟ್ಟು ದಿಟ್ಟತನದ ಬರಹಗಳಿಂದ ಪ್ರಾತಃ ಸ್ಮರಣೀಯರಾಗಿ ಉಳಿದಿದ್ದಾರೆ. ಕನ್ನಡ ಸಾಹಿತ್ಯದ ಎಲ್ಲಾ ಪ್ರಕಾರಗಳಲ್ಲಿ ಕೈಯಾಡಿಸಿ, ಕನ್ನಡ ಸಾಹಿತ್ಯ ಕ್ಷೇತ್ರವನ್ನು ಶ್ರೀಮಂತಗೊಳಿಸಿದರು. ಅವರು ಪಡೆಯದ ಪ್ರಶಸ್ತಿಗಳಿಲ್ಲ,ಬರೆಯದ ಸಾಹಿತ್ಯವಿಲ್ಲ. ಅವರು ಹಾಕಿಕೊಟ್ಟ ವೈಚಾರಿಕತೆಯ ಮೇಲ್ಪಂಕ್ತಿಯಲ್ಲಿ ಯುವಜನರು ಸಾಗಬೇಕು ಎಂದು ಕರೆನೀಡಿದರು. ತ್ಯಾಗರಾಜ ಶಿಕ್ಷಣ ಸಂಸ್ಥೆಯ ಅಧ್ಯಕ್ಷ ಸಂದೀಪ್ ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿ ಮಾತನಾಡಿದರು.

ವೇದಿಕೆಯಲ್ಲಿ ರಾಮನಗರ ಜಿಲ್ಲಾ ಕಸಾಪ ಅಧ್ಯಕ್ಷ ಬಿ.ಟಿ. ನಾಗೇಶ್, ಬಾನಂದೂರು ನಂಜುಂಡಿ, ನಾಡ ಪ್ರಭು ಶ್ರೀ ಕೆಂಪೇಗೌಡ ಒಕ್ಕಲಿಗರ ಟ್ರಸ್ಟ್ ಅಧ್ಯಕ್ಷ ಲೋಕೇಶ್, ಸಾಹಿತಿ ಡಾ. ವಿಜಯ್ ರಾಂಪುರ ಮುಂತಾದವರು ಹಾಜರಿದ್ದರು.

ಇದೇ ಸಂದರ್ಭದಲ್ಲಿ ವಿಶ್ವವಿದ್ಯಾಲಯದಿಂದ ಪಿಎಚ್.ಡಿ. ಪದವಿ ಪಡೆದ ಡಾ. ವಿಜಯ್ ರಾಂಪುರ, ಚಿನ್ನದ ಪದಕ ಪಡೆದ ಬಾನಂದೂರು ಸಾಗರ್ ಮತ್ತು ಬಿಡದಿಯ ವಿಜಯಲಕ್ಷ್ಮಿ ಚವ್ಹಾಣ್ ಅವರನ್ನು ಸನ್ಮಾನಿಸಲಾಯಿತು.

ಕಾರ್ಯಕ್ರಮದಲ್ಲಿ ಉಪಾಧ್ಯಕ್ಷರಾದ ಸಂದೀಪ್, ರವಿರಾಜ್, ಕಾರ್ಯಾಧ್ಯಕ್ಷ ನಿತ್ಯಾನಂದ, ಖಜಾಂಚಿ ಪಾರ್ಥ ಸದಸ್ಯರಾದ ನಂಜುಡಿ ಬಾನಂದೂರು, ಷಣ್ಮುಘ, ಬಸವರಾಜು, ರಾಧಕೃಷ್ಣ, ಮಾದೇಶ್, ವೆಂಕಟೇಶ್, ಶಾಲೆಯ ಪ್ರಾಂಶುಪಾಲರಾದ ವಿದ್ಯಾಲಕ್ಷ್ಮಿ ಉಪಸ್ಥಿತರಿದ್ದರು.

# ನ್ಯಾಷನಲ್ ಶೂಟಿಂಗ್‌ನಲ್ಲಿ ಮಿಂಚಿದ ಮಂಡ್ಯದ ಮಗಳು

**ಬೆಂಗಳೂರು :** ಭೋಪಾಲ್ನಲ್ಲಿ ನಡೆದ 67ನೇ ರಾಷ್ಟ್ರೀಯ ಶೂಟಿಂಗ್ ಚಾಂಪಿಯನ್ಷಿಪ್ನಲ್ಲಿ (ಎನ್‌ಎಸ್ಸಿಸಿ) ಮೈಸೂರು ಶೂಟಿಂಗ್ ಕ್ಲಬ್ ತರಬೇತಿದಾರ ಬಿ.ಆರ್. ದರ್ಶನ್ ಕುಮಾರ್ ಹಾಗೂ ಜೆಎಸ್‌ಎಸ್ ಕಾಲೇಜು ವಿದ್ಯಾರ್ಥಿನಿ ಮಂಡ್ಯದ ಎಂ.ಎಸ್.ಪುಣ್ಯ ಅತ್ಯುತ್ತಮ ಶೂಟಿಂಗ್ ನಡೆಸಿ ರಿನೌಂಡ್ ಶೂಟರ್ಗಳಾಗಿ ಹೊರಹೊಮ್ಮಿದ್ದಾರೆ.

ದರ್ಶನ್ಕುಮಾರ್ ಅವರ ಮೈಸೂರು ಶೂಟಿಂಗ್ ಕ್ಲಬ್ನಲ್ಲಿ ತರಬೇತಿ ಪಡೆದ ಎಂ.ಎಸ್.ಪುಣ್ಯ ಉತ್ತಮ ಅಂಕಗಳನ್ನು ಗಳಿಸುವ ಮೂಲಕ ಭಾರತೀಯ ತಂಡದ ಟ್ರಯಲ್ಸ್ಗೆ ಅರ್ಹತೆ ಪಡೆದು ಹೆಸರಾಂತ ಶೂಟರ್ ಖ್ಯಾತಿಗೆ ಭಾಜನರಾಗಿದ್ದಾರೆ. ಮೈಸೂರಿನ ಶೂಟಿಂಗ್ ಇತಿಹಾಸದಲ್ಲಿ ರಾಷ್ಟ್ರಮಟ್ಟದ ಮೊದಲ ನಾಗರಿಕ ಮಹಿಳಾ ಶೂಟರ್ ಖ್ಯಾತಿ ಪಡೆದಿರುವ ಜೆಎಸ್‌ಎಸ್ ಕಾಲೇಜಿನ ವಿದ್ಯಾರ್ಥಿನಿ ಎಂ.ಎಸ್.ಪುಣ್ಯ ಎಲ್ಲಾ ವಿಭಾಗದ ಸ್ಪರ್ಧೆಯಲ್ಲಿ ಅತ್ಯುತ್ತಮ ಶೂಟರ್ ಎನಿಸಿಕೊಂಡಿದ್ದಾರೆ. 22 ಈವೆಂಟ್ಗಳಲ್ಲಿ ಭಾರತೀಯ ತಂಡದ ಟ್ರಯಲ್ಸ್ಗೆ ಅರ್ಹತೆ ಪಡೆದಿರುವ ಎಂ.ಎಸ್.ಪುಣ್ಯ ಪ್ರೋನ್ ಈವೆಂಟ್ನಲ್ಲಿ 603.4 ಅಂಕ ಹಾಗೂ 3ಪಿ ಈವೆಂಟ್ ಜೂನಿಯರ್ ಮಹಿಳಾ ವಿಭಾಗದಲ್ಲಿ 558 ಅಂಕ ಗಳಿಸಿ ಮೈಸೂರಿಗೆ ಕೀರ್ತಿ ತಂದಿದ್ದಾರೆ.

9ನೇ ತರಗತಿಯಲ್ಲಿ ಓದುತ್ತಿರುವ ಹಾಸನದ ತನಯ್ ಚಂದ್ರ 10 ಮೀಟರ್ ಏರ್ ರೈಫಲ್ ಸಬ್ ಯೂತ್ ಮೆನ್ ವಿಭಾಗದಲ್ಲಿ 588.7 ಅಂಕ ಗಳಿಸುವ ಮೂಲಕ ಹೆಸರಾಂತ ಶೂಟರ್ ಆಗಿದ್ದಾರೆ. ಕ್ರೈಸ್ಟ್ ಕಾಲೇಜಿನಲ್ಲಿ ಓದುತ್ತಿರುವ ಮೈಸೂರಿನ ಪಿ.ವರ್ಷಿಣಿ 10 ಮೀಟರ್ ಏರ್ ರೈಫಲ್ ಯುವ ಮತ್ತು ಜೂನಿಯರ್ ಮಹಿಳೆಯರ ವಿಭಾಗದಲ್ಲಿ ಭಾಗವಹಿಸಿದ್ದರು. ಮೈಸೂರಿನ ಪ್ಯಾರಾಶೂಟರ್ ಬಿ.ಆರ್.ದರ್ಶನ್ಕುಮಾರ್ ಅವರು ಪ್ಯಾರ ಒಲಂಪಿಕ್ ಕಮಿಟಿ ಪುಣೆಯಲ್ಲಿ ಆಯೋಜಿಸಿದ್ದ ಪ್ಯಾರಾ ನ್ಯಾಷನಲ್ ಶೂಟರ್ ಸ್ಪರ್ಧೆಯಲ್ಲಿ ಭಾಗವಹಿಸಿ ಉನ್ನತ ಅಂಕಗಳನ್ನು ಪಡೆದು ಇಂಡಿಯಾ ಟ್ರಯಲ್ಸ್ಗೆ ಆಯ್ಕೆಯಾಗಿದ್ದಾರೆ.

ಸಂತಸ : ರಾಷ್ಟ್ರಮಟ್ಟದಲ್ಲಿ ಮೈಸೂರಿನ ಕೀರ್ತಿಯನ್ನು ಎತ್ತಿಹಿಡಿದಿರುವ ಶೂಟರ್ಗಳ ಬಗ್ಗೆ ಸಂತಸ ವ್ಯಕ್ತಪಡಿಸಿರುವ ಕ್ಲಬ್ ತರಬೇತುದಾರರಾದ ಬಿ.ಆರ್.ದರ್ಶನ್ಕುಮಾರ್ ಸಾಹಸ ಕ್ರೀಡೆಗೆ ಪ್ರೋತ್ಸಾಹ ನೀಡುತ್ತಿರುವ ಹುಬ್ಬಳ್ಳಿ ಕ್ರೀಡಾ ಶೂಟಿಂಗ್ ಅಕಾಡೆಮಿಯ ಕೋಚ್ ರವಿಚಂದ್ರನ್ ಬಾಳೆಹೊಸೂರು ಹಾಗೂ ಜೆಎಸ್ ಎಸ್ ಕಾಲೇಜು ಆಡಳಿತಮಂಡಳಿಗೆ ಕೃತಜ್ಞತೆ ಸಲ್ಲಿಸಿದ್ದಾರೆ.

## ಜಿಲ್ಲೆಯ ಅಂತಿಮ ಮತದಾರರ ಪಟ್ಟಿ ಪ್ರಕಟ: ವಿ ಅನ್ಬುಕುಮಾರ್

**ಮಂಡ್ಯ:** ಚುನಾವಣಾಆಯೋಗದ ನಿರ್ದೇಶನದಂತೆ 01-01-2025 ಕ್ಕೆ ಕೈಗೊಂಡಿದ್ದ ಮತದಾರರ ಪಟ್ಟಿ ಪರಿಷ್ಕರಣೆಯ ಅಂತಿಮ ಮತದಾರರ ಪಟ್ಟಿಯನ್ನು ಜ.6 ರಂದು ಪ್ರಕಟಿಸಲಾಗುವುದು ಎಂದು ಮಂಡ್ಯ ಜಿಲ್ಲಾ ಉಸ್ತುವಾರಿ ಕಾರ್ಯದರ್ಶಿ ಹಾಗೂ ಜಿಲ್ಲಾ ಮತದಾರರ ಪಟ್ಟಿ ವೀಕ್ಷಕರು ವಿ ಅನ್ಬುಕುಮಾರ್‌ಅವರು ತಿಳಿಸಿದರು.ಅಜಿಲ್ಲಾ ಪಂಚಾಯತ್ ನ ಸಭಾಂಗಣದಲ್ಲಿ ಮತದಾರರ ಪಟ್ಟಿ ಪರಿ?ಕರಣೆ ಸಂಬಂಧ ಸಭೆ ನಡೆಸಿ ಅಧಿಕಾರಿಗಳಿಗೆ ಸಲಹೆ ಸೂಚನೆ ನೀಡಿದರು. ಜಿಲ್ಲಾಧಿಕಾರಿಡಾಕುಮಾರ, ಜಿಲ್ಲಾ ಪಂಚಾಯತ್ ನ ಮುಖ್ಯಕಾರ್ಯ ನಿರ್ವಹಣಾಧಿಕಾರಿ ಶೇಖ್‌ತನ್ವೀರ್ ಆಸೀಫ್, ಅಪರಜಿಲ್ಲಾಧಿಕಾರಿ ಬಿ ಸಿ ಶಿವಾನಂದಮೂರ್ತಿ, ಉಪ ವಿಭಾಗಾಧಿಕಾರಿ ಶಿವಮೂರ್ತಿ ಸೇರಿದಂತೆಇನ್ನಿತರರು ಉಪಸ್ಥಿತರಿದ್ದರು.

## ಉದರದರ್ಶಕ ಶಸ್ತ್ರಚಿಕಿತ್ಸಾ ಶಿಬಿರ

**ಮಂಡ್ಯ:** ಜಿಲ್ಲಾ ಪಂಚಾಯತ್‌ಜಿಲ್ಲಾಆರೋಗ್ಯ ಮತ್ತುಕುಟುಂಬ ಕಲ್ಯಾಣಇಲಾಖೆಯ ವತಿಯಿಂದಜನವರಿ 2025ರ ಮಾಹೆಯಜನವರಿ7 ರಿಂದ 28ರವರೆಗೆ ಉದರದರ್ಶಕ ಶಸ್ತ್ರಚಿಕಿತ್ಸಾ ಶಿಬಿರವನ್ನು ಆಯೋಜಿಸಲಾಗಿದೆ. ಜನವರಿ 7 ರಂದುಶಿವಳ್ಳಿ ಸರ್ಕಾರಿಆರೋಗ್ಯಕೇಂದ್ರ, 8 ರಂದುಕೀಲಾರ ಸರ್ಕಾರಿಆರೋಗ್ಯಕೇಂದ್ರ, 10 ರಂದುಕೆ. ಎಂ ದೊಡ್ಡಿ ಸರ್ಕಾರಿಆರೋಗ್ಯಕೇಂದ್ರ, 15 ರಂದುಬಿಂಡಿಗನವಿಲೆ ಸರ್ಕಾರಿಆರೋಗ್ಯಕೇಂದ್ರ ಹಾಗೂ ಮಧ್ಯಾಹ್ನ 1 ಗಂಟೆಗೆ ನಾಗಮಂಗಲ ಸಾರ್ವಜನಿಕಆಸ್ಪತ್ರೆಯಲ್ಲಿ, 16 ರಂದುಕಿರುಗಾವಲು ಸರ್ಕಾರಿಆರೋಗ್ಯಕೇಂದ್ರ, 17 ರಂದುಮದ್ದೂರುತಾಲ್ಲೂಕುಆಸ್ಪತ್ರೆ, 22 ರಂದುಪಾಂಡವಪುರ ಉಪ ವಿಭಾಗ ಸರ್ಕಾರಿಆರೋಗ್ಯಕೇಂದ್ರ, 23 ರಂದು ಬಸರಾಳು ಪ್ರಾಥಮಿಕಆರೋಗ್ಯಕೇಂದ್ರ, 24 ರಂದುಅರಕೆರೆ ಸರ್ಕಾರಿಆರೋಗ್ಯಕೇಂದ್ರ, 28 ರಂದು ಕೆ.ಆರ್.ಪೇಟೆತಾಲ್ಲೂಕು ಆಸ್ಪತ್ರೆಗಳಲ್ಲಿ ಬೆಳಿಗ್ಗೆ 10 ಗಂಟೆಗೆಉದರದರ್ಶಕ ಶಸ್ತ್ರಚಿಕಿತ್ಸಾ ಶಿಬಿರ ನಡೆಯಲಿದೆಎಂದುಜಿಲ್ಲಾ ಪಂಚಾಯತ್‌ಜಿಲ್ಲಾಆರೋಗ್ಯ ಮತ್ತುಕುಟುಂಬ ಕಲ್ಯಾಣಅಧಿಕಾರಿರವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಶಿಷ್ಯ ವೇತನ ಅರ್ಜಿ ಸಲ್ಲಿಕೆ ಅವಧಿ ವಿಸ್ತರಣೆ

**ಮಂಡ್ಯ:** 2024-25ನೇ ಸಾಲಿನಲ್ಲಿ ವಿದೇಶಿ ವಿಶ್ವ ವಿದ್ಯಾನಿಲಯಗಳಲ್ಲಿ ಸ್ನಾತಕೋತ್ತರ ಪದವಿ ಹಾಗೂ ಪಿ.ಹೆಚ್.ಡಿ. ಮಾಡುವ ಹಿಂದುಳಿದ ವರ್ಗಗಳ ಪ್ರವರ್ಗ-1, 2ಎ, 3ಎ, ಹಾಗೂ 3ಬಿ ಗಳಿಗೆ ಸೇರಿದಅರ್ಹ ವಿದ್ಯಾರ್ಥಿಗಳಿಂದ ಹಿಂದುಳಿದ ವರ್ಗಗಳ ಕಲ್ಯಾಣಇಲಾಖೆಯು ನೀಡುವಡಿ.ದೇವರಾಜಅರಸು ವಿದೇಶಿ ವ್ಯಾಸಂಗ ವೇತನಕ್ಕೆಆನ್ ಲೈನ್ ಮೂಲಕ ಅರ್ಜಿಗಳನ್ನು ಆಹ್ವಾನಿಸಲಾಗಿದೆ.ಆನ್‌ಲೈನ್ ಮೂಲಕಅರ್ಜಿ ಸಲ್ಲಿಸಲುಕೊನೆಯಜನವರಿ 15ರವರೆಗೆ ವಿಸ್ತರಿಸಲಾಗಿದೆ. ಹೆಚ್ಚಿನ ವಿವರಗಳಿಗಾಗಿ ಇಲಾಖಾ ವೆಬ್‌ಸೈಟ್http://bcwd.karnataka.gov.in ನ್ನುಅಥವಾಸಹಾಯವಾಣಿ ಸಂಖ್ಯೆ:-8050770004.ನ್ನು ಸಂಪರ್ಕಿಸಬಹುದು ಎಂದು ಮಂಡ್ಯ ಹಿಂದುಳಿದ ವರ್ಗಗಳ ಕಲ್ಯಾಣಇಲಾಖೆಯತಾಲ್ಲೂಕುಕಲ್ಯಾಣಾಧಿಕಾರಿಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಜೈ ಹಿಂದ್ ಅಭಿಯಾನ ಯಶಸ್ವಿಯಾಗಲಿ

### ಕರ್ನಾಟಕ ಬ್ರಾಹ್ಮಣ ಮಹಾಸಭಾ ರಾಜ್ಯಾಧ್ಯಕ್ಷ ಅಶೋಕ ಹಾರನಹಳ್ಳಿ ಆಶಯ

**ಚಾಮರಾಜನಗರ:** ಜೈ ಹಿಂದ್ ಪ್ರತಿಷ್ಠಾನ ಮತ್ತು ಋಗ್ವೇದಿ ಯೂಥ್ ಕ್ಲಬ್ ಸ್ವಾಮಿ ವಿವೇಕಾನಂದ ಜಯಂತಿ ಹಾಗೂ ನೇತಾಜಿ ಜನ್ಮದಿನ ಅಂಗವಾಗಿ ಹಮ್ಮಿಕೊಂಡಿರುವ ಜೈ ಹಿಂದ್ ಅಭಿಯಾನ ಕಾರ್ಯಕ್ರಮಕ್ಕೆ ರಾಷ್ಟ್ರದ ಪ್ರಸಿದ್ಧ ನ್ಯಾಯವಾದಿ ಹಾಗೂ ಅಖಿಲ ಕರ್ನಾಟಕ ಬ್ರಾಹ್ಮಣ ಮಹಾಸಭಾ ರಾಜ್ಯಾಧ್ಯಕ್ಷರಾದ ಅಶೋಕ ಹಾರನಹಳ್ಳಿ ರವರು ಪುಷ್ಪ ಸಲ್ಲಿಸಿ ಉದ್ಘಾಟಿಸಿದರು.

ಶಂಕರಪುರದ ಋಗ್ವೇದಿ ಕುಟೀರದ ಜೈ ಹಿಂದ್ ಕಟ್ಟೆಯ ಮುಂಭಾಗದಲ್ಲಿ ಹಮ್ಮಿಕೊಂಡಿದ್ದ ಜೈ ಹಿಂದ್ ಅಭಿಯಾನ ಕಾರ್ಯಕ್ರಮದ ಉದ್ಘಾಟನಾ ಸಮಾರಂಭದಲ್ಲಿ ಮಾತನಾಡಿ ಭಾರತದ ಸ್ವಾತಂತ್ರ್ಯ ಚಳುವಳಿ ಹೊಸ ಸ್ವರೂಪವನ್ನು ಪಡೆಯಲು ನೇತಾಜಿ ಸುಭಾಷ್ ಚಂದ್ರ ಬೋಸ್ ರವರು ಕಾರಣರಾಗಿದ್ದಾರೆ. ಭಾರತೀಯ ರಾಷ್ಟ್ರೀಯ ಸೈನ್ಯ ಐಎನ್‌ಎ ಹೋರಾಟವನ್ನು ಭಾರತೀಯರು ಸದಾ ಕಾಲ ಸ್ಮರಿಸಬೇಕು. ನೇತಾಜಿಯವರ ಇತಿಹಾಸದ ಹೋರಾಟದ ಅಂಶಗಳನ್ನು ತಿಳಿಸಲು ಹಮ್ಮಿಕೊಂಡಿರುವ ಜೈ ಹಿಂದ್ ಅಭಿಯಾನ ಎಲ್ಲೆಡೇ ಯಶಸ್ವಿಯಾಗಲಿ ಎಂದು ತಿಳಿಸಿದರು.

ಅಖಿಲ ಕರ್ನಾಟಕ ಬ್ರಾಹ್ಮಣ ಮಹಾಸಭಾ ರಾಜ್ಯ ಉಪಾಧ್ಯಕ್ಷರಾದ ವೇದ ಬ್ರಹ್ಮ ಶ್ರೀ ರಾಘವೇಂದ್ರ ಭಟ್ ವೇದ ಮಂತ್ರಗಳೊಂದಿಗೆ ಶುಭ ಹಾರೈಸಿದರು. ಸ್ವಾಮಿ ವಿವೇಕಾನಂದರು ಭಾರತದ ರಾಷ್ಟ್ರೀಯ ಸಂತರು. ತಮ್ಮ ಚಿಕಾಗೋ ಭಾಷಣದ ಮೂಲಕ ಇಡೀ ಜಗತ್ತಿಗೆ ಭಾರತದ ಸಂಸ್ಕೃತಿ ಪರಂಪರೆ, ಗೌರವ ,ಸ್ನೇಹ, ವಿಶ್ವಾಸ ಸಹಕಾರ ,ಮಾತೃ ಶಕ್ತಿ ಹಾಗೂ ಸೌಹಾರ್ದತೆ, ಮಾನವೀಯ ಮೌಲ್ಯಗಳ ಚಿಂತನೆ,ಏಕತೆಯ ಶ್ರೇಷ್ಠತೆಯ ಅಂಶವನ್ನು ಸಾರಿದವರು. ವಿವೇಕಾನಂದರ ಚಿಂತನೆಗಳು ಎಂದು ವಿಶ್ವದ ಎಲ್ಲೆಡೆ ಹರಡಿ ಯುವ ಶಕ್ತಿಗೆ ಹೊಸ ಚೈತನ್ಯವನ್ನು ನೀಡುತ್ತಿದೆ. ಋಗ್ವೇದಿ ಯೂತ್ ಕ್ಲಬ್ ವಿಶೇಷವಾಗಿ ಜೈ ಹಿಂದ್ ಅಭಿಯಾನವನ್ನು ಹಮ್ಮಿಕೊಂಡಿರುವುದು ರಾಷ್ಟ್ರದಲ್ಲೆ ವಿಶೇಷವಾದದ್ದು. ಜೈ ಹಿಂದ್ ಘೋಷಣೆ ಪ್ರತಿ ಭಾರತೀಯನಲ್ಲೂ ಮೊಳಗಬೇಕು, ಅನುಷ್ಠಾನವಾಗಬೇಕು. ಪ್ರತಿ ಕಾರ್ಯದಲ್ಲು ಭಾರತೀಯತೆ, ಮುನ್ನಡೆಯಬೇಕು ಎಂದರು. ಆಧ್ಯಾತ್ಮಿಕ ಗುರುಗಳಾದ ಶ್ರೀರಂಗಪಟ್ಟಣದ ವೇದ ಬ್ರಹ್ಮ ಶ್ರೀ ಭಾನುಪ್ರಕಾಶ್ ಶರ್ಮ ಮಾತನಾಡಿ ಋಗ್ವೇದಿ ಯೂತ್ ಕ್ಲಬ್ ಅಪಾರ ರಾಷ್ಟ್ರೀಯ ಸೇವೆಯನ್ನು, ಕಾರ್ಯಕ್ರಮಗಳನ್ನು ರೂಪಿಸಿ ರಾಷ್ಟ್ರಕ್ಕೆ ಅರ್ಪಿಸಿಕೊಂಡ ಮಹಾನ್ ಚೇತನಗಳನ್ನು ಸ್ಮರಿಸಿ, ಗೌರವಿಸುವ ,ವಿಶೇಷ ಧ್ಯೇಯ ಉದ್ದೇಶಗಳು ಯುವಕರಲ್ಲಿ ವಿದ್ಯಾರ್ಥಿಗಳಲ್ಲಿ ಹಾಗೂ ಸಮಾಜದಲ್ಲಿ ಹೊಸ ಪರಿವರ್ತನೆಯನ್ನು ಉಂಟುಮಾಡುತ್ತದೆ ಎಂದರು. ಅಧ್ಯಕ್ಷತೆಯನ್ನು ವಹಿಸಿದ್ದ ಜೈ ಹಿಂದ್ ಪ್ರತಿಷ್ಠಾನದ ಅಧ್ಯಕ್ಷರು ಮತ್ತು ರಾಷ್ಟ್ರ ಯುವ ಪ್ರಶಸ್ತಿ ಪುರಸ್ಕೃತರಾದ ಸುರೇಶ್ ಎನ್ ಋಗ್ವೇದಿ ಮಾತನಾಡಿ ಜೈ ಹಿಂದ್ ಪ್ರತಿಷ್ಠಾನ ಹಾಗೂ ಋಗ್ವೇದಿ ಯೂತ್ ಕ್ಲಬ್ ಭಾರತೀಯ ಸಂಸ್ಕೃತಿ, ಪರಂಪರೆ ಹಾಗೂ ರಾಷ್ಟ್ರೀಯ ಚಿಂತನೆಗಳ ಮೂಲಕ ದೇಶಭಕ್ತಿ, ದೇಶದ ಇತಿಹಾಸ ಕಲೆ, ಸಾಹಿತ್ಯ, ಸಂಗೀತ, ಆಧ್ಯಾತ್ಮ ಹಾಗೂ ರಾಷ್ಟ್ರೀಯ ಮೌಲ್ಯಗಳ ಬಗ್ಗೆ ವಿಶೇಷ ಉಪನ್ಯಾಸಗಳು, ಜಾಗೃತಿಯ ಅರಿವಿನ ಕಾರ್ಯಕ್ರಮವನ್ನು ಸರಳವಾಗಿ ಸದಾಕಾಲ ಆಚರಿಸಿಕೊಂಡು ಸಾವಿರಾರು ಕಾರ್ಯಕ್ರಮಗಳನ್ನು ಜೈ ಹಿಂದ್ ಕಟ್ಟೆಯಲ್ಲಿ ರೂಪಿಸಿ, ಮಹಾನ್ ವ್ಯಕ್ತಿಗಳು ಭಾಗವಹಿಸಿ ಸರ್ವರಿಗೂ ಸ್ಪೂರ್ತಿಯನ್ನು ಉಂಟುಮಾಡಿದೆ. ಜೈ ಹಿಂದ್ ಕಟ್ಟೆಯಲ್ಲಿ ಇದುವರೆಗೂ ಎರಡು ಸಾವಿರಕ್ಕೂ ಹೆಚ್ಚು ಜಯಂತಿ ಹಾಗೂ ಸ್ಮರಣೆ ಹಾಗೂ ವಿಶೇಷ ಕಾರ್ಯಕ್ರಮಗಳನ್ನು ರೂಪಿಸಿರುವುದು ಆತ್ಮ ಸಂತೋಷ ನೀಡುವ ಕಾರ್ಯವಾಗಿದೆ. ಸಮಾಜದ ಎಲ್ಲ ಗಣ್ಯರು ಆಗಮಿಸಿ ಪ್ರೋತ್ಸಾಹಿಸುವುದು ನಮಗೆ ಮತ್ತಷ್ಟು ಬಲವನ್ನು ನೀಡಿದೆ ಎಂದರು. ಅಖಿಲ ಬ್ರಾಹ್ಮಣ ಅಭಿವೃದ್ಧಿ ನಿಗಮದ ಅಧ್ಯಕ್ಷರಾದ ಅಸಗೋಡು ಜಯಸಿಂಹ, ಸುಧಾಕರ್ ಬಾಬು, ಸುನಿಲ್ ಶಾಸ್ತ್ರಿ ,ಶಂಕರ್ ಪ್ರಸಾದ್ ಋಗ್ವೇದಿ ಯೂತ್ ಕ್ಲಬ್ ಅಧ್ಯಕ್ಷರಾದ ಶರಣ್ಯ ಎಸ್ ಋಗ್ವೇದಿ, ರವಿ ಉಪಸ್ಥಿತರಿದ್ದರು.




## ಬೆಂಗಳೂರು ಅಂತರಾಷ್ಟ್ರೀಯ ವಿಮಾನ ನಿಲ್ದಾಣ ಪ್ರದೇಶ ಯೋಜನಾ ಪ್ರಾಧಿಕಾರ, ದೇವನಹಳ್ಳಿ

ನಂ. 333/1, 1ನೇ ಮಹಡಿ, ವಿ.ಜೆ. ಕಾಂಪ್ಲೆಕ್ಸ್, ಸೂಲಿಬೆಲೆ ರಸ್ತೆ, ದೇವನಹಳ್ಳಿ ಟೌನ್, ಬೆಂಗಳೂರು ಗ್ರಾಮಾಂತರ ಜಿಲ್ಲೆ-562 110.

ಸಂ: ಬಿಐಎಪಿಎ/ಟಿಪಿ/ಭೂಉಬ/101/2024-25/2318 ದಿನಾಂಕ : 04.01.2025

### ಪ್ರಕಟಣೆ

ಕರ್ನಾಟಕ ನಗರ ಮತ್ತು ಗ್ರಾಮಾಂತರ ಯೋಜನಾ ಕಾಯ್ದೆ 1961 ರ ಕಲಂ 14 (ಎ) ರ ಅಡಿಯಲ್ಲಿ ಈ ಕೆಳಕಂಡ ಅರ್ಜಿದಾರರು ವ್ಯವಸಾಯ ಭೂಉಪಯೋಗ ವಲಯದಿಂದ ವಸತಿ ವಲಯಕ್ಕೆ ಭೂಉಪಯೋಗ ಬದಲಾವಣೆ ಕೋರಿ ಅರ್ಜಿ ಸಲ್ಲಿಸಿರುತ್ತಾರೆ. ಭೂಉಪಯೋಗ ಬದಲಾವಣೆಯ ಪ್ರಸ್ತಾವನೆಯ ವಿವರಗಳು ಈ ಕೆಳಕಂಡಂತೆ ಇರುತ್ತದೆ. ಸದರಿ ಭೂಉಪಯೋಗ ಬದಲಾವಣೆ ಪ್ರಸ್ತಾವನೆ ಬಗ್ಗೆ ಯಾವುದೇ ಆಕ್ಷೇಪಣೆಗಳಿದ್ದರೆ, ಈ ಪ್ರಕಟಣೆ ಪ್ರಕಟವಾದ ದಿನಾಂಕದಿಂದ 15 ದಿವಸಗಳೊಳಗಾಗಿ ಆಕ್ಷೇಪಣೆಗಳನ್ನು ಲಿಖಿತವಾಗಿ ಸದಸ್ಯ ಕಾರ್ಯದರ್ಶಿಗಳು, ಬೆಂಗಳೂರು ಅಂತರಾಷ್ಟ್ರೀಯ ವಿಮಾನ ನಿಲ್ದಾಣ ಪ್ರದೇಶ ಯೋಜನಾ ಪ್ರಾಧಿಕಾರ, ದೇವನಹಳ್ಳಿ ಕಛೇರಿಗೆ ಸಲ್ಲಿಸಲು ತಿಳಿಸಲಾಗಿದೆ. ನಿಗಧಿತ ಅವಧಿಯ ನಂತರ ಬರುವ ಯಾವುದೇ ಆಕ್ಷೇಪಣೆಗಳನ್ನು ಪರಿಗಣಿಸುವುದಿಲ್ಲ.

| ಕ್ರ. ಸಂ. | ಅರ್ಜಿದಾರರ ಹೆಸರು | ತಾಲ್ಲೂಕು | ಹೋಬಳಿ | ಗ್ರಾಮದ ವಿವರ | ಸರ್ವೆ ನಂ. | ವಿಸ್ತೀರ್ಣ ಎ-ಗು | ಮಹಾ ಯೋಜನೆಯ ಪ್ರಕಾರ ಭೂ ಉಪಯೋಗ | ಬದಲಾವಣೆ ಕೋರಿರುವ ಭೂ ಉಪಯೋಗ |
|---|---|---|---|---|---|---|---|---|
| 1. | ಶ್ರೀಮತಿ ಯಶೋಧ ಕೋಂ ಲೇ॥ ಎನ್.ಆಂಜಿನಪ್ಪ | ದೇವನಹಳ್ಳಿ | ವಿಜಯಪುರ | ವೆಂಕಟಗಿರಿಕೋಟೆ | 39/3 | 1-19 | ವ್ಯವಸಾಯ | ವಸತಿ |
| 2. | | ದೇವನಹಳ್ಳಿ | ವಿಜಯಪುರ | ವೆಂಕಟಗಿರಿಕೋಟೆ | 39/6 | 1-18 | ವ್ಯವಸಾಯ | ವಸತಿ |
| 3. | ಶ್ರೀ ಸುಹಾಸ್ ಕೆ.ಆರ್ ಬಿನ್ ರಮಾನಂದ ರೆಡ್ಡಿ ಕೆ.ಎಂ | ದೇವನಹಳ್ಳಿ | ವಿಜಯಪುರ | ವೆಂಕಟಗಿರಿಕೋಟೆ | 39/5 | 0-02.12 | ವ್ಯವಸಾಯ | ವಸತಿ |
| 4. | ಶ್ರೀ ಕೆ.ಎಂ.ರಮಾನಂದ ರೆಡ್ಡಿ ಬಿನ್ ಕೆ.ಹೆಚ್.ಮುನಿಶಾಮಪ್ಪ | ದೇವನಹಳ್ಳಿ | ವಿಜಯಪುರ | ವೆಂಕಟಗಿರಿಕೋಟೆ | 39/2 | 0-01 | ವ್ಯವಸಾಯ | ವಸತಿ |
| 5. | ಶ್ರೀಮತಿ ಯಶೋಧ ಕೋಂ ಲೇ॥ ಎನ್.ಆಂಜಿನಪ್ಪ | ದೇವನಹಳ್ಳಿ | ವಿಜಯಪುರ | ವೆಂಕಟಗಿರಿಕೋಟೆ | 39/4 | 0-01.04 | ವ್ಯವಸಾಯ | ವಸತಿ |

**ಷರಾ :-** ಪ್ರಸ್ತಾವನೆಯಲ್ಲಿನ ಅರ್ಜಿದಾರರುಗಳು ಪ್ರಶ್ನಿತ ಜಮೀನುಗಳನ್ನು ವ್ಯವಸಾಯ ಉಪಯೋಗಕ್ಕೆ ಬಳಸಿಕೊಳ್ಳಲು ಸಾಧ್ಯವಾಗುತ್ತಿಲ್ಲವೆಂದೂ, ಹಾಗೂ ಪರಿಸರದಲ್ಲಿ ವಾಸದ ಬೆಳವಣಿಗೆಗೆ ಅತಿ ಹೆಚ್ಚು ಬೇಡಿಕೆ ಇದ್ದು, ಸದರಿ ಜಮೀನುಗಳನ್ನು ವ್ಯವಸಾಯ ವಲಯದಿಂದ ವಸತಿ ವಲಯಕ್ಕೆ ಭೂಉಪಯೋಗ ಬದಲಾವಣೆಗೊಂಡ ನಂತರ ವಸತಿ ಉದ್ದೇಶಕ್ಕೆ ಭೂಪರಿವರ್ತಿಸಿ, ಪ್ರಾಧಿಕಾರದಿಂದ ಅನುಮೋದನೆ ಪಡೆದು, ಯೋಜನಾ ಬದ್ದ ಅಭಿವೃದ್ಧಿ ಕಾರ್ಯಗಳಿಂದ ಸ್ಥಳೀಯರಿಗೆ ಉದ್ಯೋಗಾವಕಾಶ ಸೃಷ್ಟಿ ಹಾಗೂ ಮೂಲ ಸೌಕರ್ಯ ಅಭಿವೃದ್ಧಿಯಾಗುವುದರಿಂದ ಸಾರ್ವಜನಿಕ ಹಿತಾಸಕ್ತಿ ಅಂಶ ಅಡಗಿದೆ ಎಂದು ತಿಳಿಸುತ್ತಾ ಸದರಿ ಪ್ರದೇಶವನ್ನು 'ವ್ಯವಸಾಯ ಭೂಉಪಯೋಗ ವಲಯ' ದಿಂದ 'ವಸತಿ ವಲಯ' ಕ್ಕೆ ಭೂಉಪಯೋಗ ಬದಲಾವಣೆ ಮಾಡಿಕೊಳ್ಳಲು ಇಚ್ಛಿಸಿರುವುದಾಗಿ ತಿಳಿಸಿರುತ್ತಾರೆ.

ಸಹಿ/-
ನಗರ ಮತ್ತು ಗ್ರಾಮಾಂತರ ಯೋಜನಾ ಜಂಟಿ ನಿರ್ದೇಶಕರು
ಹಾಗೂ ಸದಸ್ಯ ಕಾರ್ಯದರ್ಶಿಗಳು, ಬಿ.ಐ.ಎ.ಪಿ.ಎ, ದೇವನಹಳ್ಳಿ

ವಾಸಾಸಂಇ/ವಾಪ್ರ/4128/ಆಕಾರ್/2024-25

# ಮನರೇಗಾ ಯೋಜನೆಯಡಿ ಕುರಿ ಮೇಕೆಗೂ ಸೂರು

**ಗುಡಿಬಂಡೆ:** ಬಂಡೆಗಳ ಬೀಡು ಅಂತಾನೆ ಕರೆಯುವ ಗುಡಿಬಂಡೆಯಲ್ಲಿ ಕುರಿ ಮತ್ತು ಮೇಕೆ ಸಾಕಾಣಿಕೆಯಲ್ಲಿ ತೊಡಗಿಸಿಕೊಂಡಿರುವವರಿಗೆ ಮಹಾತ್ಮ ಗಾಂಧಿ ರಾಷ್ಟ್ರೀಯ ಉದ್ಯೋಗ ಖಾತರಿ (ನರೇಗಾ) ಯೋಜನೆಯನ್ನು ಸದ್ಬಳಕೆ ಮಾಡಿಕೊಂಡ ರೈತರು ಲಾಭ ಕಂಡಿದ್ದಾರೆ.

ಏರಿರುವ ಪಶು ಆಹಾರ, ವೆಚ್ಚಕ್ಕೆ ಸರಿದೂಗದ ಹಾಲಿನ ದರದಿಂದ ಹಸು ಮತ್ತು ಎಮ್ಮೆ ಸಾಕಲು ರೈತರಿಗೆ ದುಬಾರಿ ವೆಚ್ಚ ತಗುತ್ತಿರುವ ಪರಿಣಾಮ ಹಸು ಮತ್ತು ಎಮ್ಮೆ ಸಾಕುವ ಬದಲಿಗೆ ಪರ್ಯಾಯವಾಗಿ ಸರಕಾರದ ನರೇಗಾ ಯೋಜನೆ ಬಳಸಿಕೊಂಡು ಕುರಿ ಮತ್ತು ಮೇಕೆ ಸಾಕಾಣಿಕೆ ಮಾಡಲು ರೈತರು ಹೆಚ್ಚು ಆಸಕ್ತಿ ವಹಿಸಿರುವುದು ವಿಶೇಷವಾಗಿದೆ.

ಇಲ್ಲೊಬ್ಬ ಮಾದರಿ ರೈತ: ಗುಡಿಬಂಡೆ ತಾಲ್ಲೂಕಿನ ದಪ್ಪರ್ತಿ ಗ್ರಾಮದ ನಾರಾಯಣಸ್ವಾಮಿ ಎಂಬ ಯುವ ರೈತ ಸರಕಾರದ ನರೇಗಾ ಬಳಕೆ ಮಾಡಿಕೊಂಡು ಕುರಿ ದೊಡ್ಡಿ ನಿರ್ಮಿಸಿ ಕುರಿ ಮತ್ತು ಮೇಕೆ ಮರಿಗಳನ್ನು ಸಾಕಿ, ಅವುಗಳನ್ನ ಮಾರಾಟ ಮಾಡಿ ಅಧಿಕ ಲಾಭ ಗಳಿಸುವ ಮೂಲಕ ಇತರರಿಗೆ ಮಾದರಿ ಆಗಿದ್ದಾರೆ.

ನರೇಗಾದಿಂದ ಶೆಡ್ ನಿರ್ಮಾಣ: ನರೇಗಾ ವೈಯಕ್ತಿಕ ಆಧಾರಿತ ಕಾಮಗಾರಿ ಅಡಿಯಲ್ಲಿ ಆಡು (ಮೇಕೆ) ಸಾಕಾಣಿಕೆ ಶೆಡ್ ಕಟ್ಟಡ ನಿರ್ಮಾಣಕ್ಕೆ ನರೇಗಾ ಯೋಜನೆಯಡಿಯಲ್ಲಿ ಒಟ್ಟು 68 ಸಾವಿರ ಹಣ ನೀಡಲಾಗಿದೆ. ಆಡು ಸಾಕಾಣಿದಾರರು



ತಮ್ಮಲ್ಲಿರುವ ಸ್ಥಳದ ಅನುಕೂಲಕ್ಕೆ ತಕ್ಕಂತೆ ಕುರಿ ಶೆಡ್ ನಿರ್ಮಿಸಿದ್ದಾರೆ.

ನರೇಗಾದಿಂದ ಪಡೆದ ಕುರಿ ಶೆಡ್ ಅನ್ನು ಸುಸಜ್ಜಿತವಾಗಿ ನಿರ್ಮಿಸಿಕೊಂಡಿರುವ ನಾರಾಯಣಸ್ವಾಮಿ ಅವರು ಆರಂಭಿಕ ಹಂತದಲ್ಲಿ ಖರೀದಿಸಿದ್ದ ಕುರಿ ಮರಿಗಳಿಗೆ ಚೆನ್ನಾಗಿ ಉಪಚಾರ ಮಾಡಿ, ಮೇಯಿಸಿ ದೊಡ್ಡದಾಗಿ ಮಾಡಿ ಆರು ತಿಂಗಳ ಬಳಿಕ ಮಾರಾಟ ಮಾಡಿ ಉತ್ತಮ ಲಾಭ ಪಡೆದಿದ್ದಾರೆ.

30 ಕುರಿ ಒಡೆಯ: ಮನರೇಗಾ ಯೋಜನೆಯಡಿ ಸಹಾಯ ಧನ ಪಡೆದಿರುವ ಅವರು 30ಕ್ಕೂ ಹೆಚ್ಚು ಕುರಿಗಳನ್ನು ಸಾಕಬಹುದಾದ ಶೆಡ್ನ್ನ ನಿರ್ಮಿಸಿದ್ದಾರೆ. ಈ ಶೆಡ್ನಲ್ಲಿ 30

> **“ನರೇಗಾ ಯೋಜನೆ ಸದ್ಬಳಕೆಯಿಂದ ಶ್ರಮಕ್ಕೆ ತಕ್ಕ ಪ್ರತಿಫಲವಿದೆ. ಈ ಯೋಜನೆ ಇದೀಗ ಗ್ರಾಮೀಣ ಜನರ ಬದುಕಲ್ಲಿ ಹೊಸ ಭರವಸೆ ಹುಟ್ಟಿಸಿದೆ. ನಾನು ನರೇಗಾ ಯೋಜನೆಯಿಂದ ಶೆಡ್ ನಿರ್ಮಿಸಿ ಕುರಿ ಮತ್ತು ಮೇಕೆ ಸಾಕಾಣಿಕೆ ಮಾಡುವ ಮೂಲಕ ಉತ್ತಮ ಆದಾಯಗಳಿಸುತ್ತಿದ್ದಾನೆ. ನರೇಗಾ ಯೋಜನೆ ಕೈ ಹಿಡಿದಿದೆ ನಾರಾಯಣಸ್ವಾಮಿ, ಕುರಿ, ಮೇಕೆ ಸಾಕಾಣಿಕೆಗಾರ**
>
> **ರಾಮಾಂಜನೇಯ ಜೆ.ವಿ**
> **ತಾಲ್ಲುಕು ಐ.ಇ.ಸಿ ಸಂಯೋಜಕರು ಗುಡಿಬಂಡೆ**

ಕುರಿಗಳನ್ನು ಬಿಟ್ಟಿದ್ದು, ಚೆನ್ನಾಗಿ ಆಹಾರ ನೀಡಿ ಕುರಿಗಳನ್ನು ಆರೋಗ್ಯಕರವಾಗಿ ನೋಡಿಕೊಳ್ಳುತ್ತಿದ್ದಾರೆ. ಕುರಿಗಳಿಗೆ ಪೌಷ್ಟಿಕ ಆಹಾರ ನೀಡಲು ರಸ ಮೇವನ್ನು ಅವರೇ ತಯಾಸಿಕೊಳ್ಳುತ್ತಾರೆ. ಈ ರಸಮೇವು ನಮ್ಮಲ್ಲಿ ಹೆಚ್ಚು ಹುಲ್ಲು ಮತ್ತು ರೇಷ್ಮೆ ಸೊಪ್ಪು ಅಧಿಕಾವಾಗಿದ್ದಾಗ ಅದನ್ನು ಒಂದು ಡ್ರಮ್ ನಲ್ಲಿ 40 ದಿನಗಳ ಕಾಲ ಶೇಕರಿಸಿ ಅದಕ್ಕೆ ಬೆಲ್ಲ, ಮಜ್ಜಿಕೆ ಹಾಕಿ ರಸ ಮೇವು ತಯಾರಿಸಿಕೊಳ್ಳಲಾಗುತ್ತದೆ ಇದನ್ನು ನಾವು ಒಂದು ವರ್ಷಗಳ ಕಾಲ ಬಳಸಬಹುದು ಎನ್ನುತ್ತಾರೆ ರೈತ ನಾರಾಯಣಸ್ವಾಮಿ.

ಕುರಿ ಮತ್ತು ಮೇಕೆ ತಳಿಗಳು: ಬನ್ನೂರು, ಈ3ಡಾರ್ಪರ್ ಎಂಬ ತಳಿ ಟಗರನ್ನು ದಕ್ಷಿಣ ಆಫ್ರಿಕಾದಿಂದ ಹಾಗೂ ನಾರಿ ಸುವರ್ಣ ಎಂಬ ಟಗರನ್ನು ಗುಜರಾತ್ ನಿಂದ ತರಿಸಿಕೊಳ್ಳಲಾಗಿದೆ. ಇವುಗಳಿಂದ ಕುರಿಗಳಿಗೆ ಕ್ರಾಂಸಿಂಗ್ ಮಾಡಲಾಗುತ್ತದೆ.

ಶೆಡ್ ನಿರ್ಮಿಸಿದ ಬಳಿಕ ರೈತ ಕುರಿ ಸಾಕಾಣಿಕೆಯಿಂದ ವರ್ಷಕ್ಕೆ 2 ರಿಂದ 3 ಲಕ್ಷದವರೆಗೆ ಸಂಪಾದಿಸುವ ಮೂಲಕ ಆರ್ಥಿಕವಾಗಿ ಉತ್ತಮ ಬದುಕು ಸಾಗಿಸುತ್ತಿದ್ದೇವೆ. ಇದಕ್ಕೆ ನಮಗೆ ಗ್ರಾಮ ಪಂಚಾಯಿತಿ ಮತ್ತು ತಾಲ್ಲೂಕು ಪಂಚಾಯಿತಿ ಅಧಿಕಾರಿಗಳು ಹೆಚ್ಚಿನ ಸಹಕಾರ ನೀಡಿದ್ದಾರೆ. ಗ್ರಾಮೀಣ ಭಾಗದಲ್ಲಿ ಸಾಕಷ್ಟು ರೈತರಿಗೆ ಸ್ಥಳದ ಲಭ್ಯತೆ ಇದ್ದರೂ ಸೂಕ್ತ ಹಣಕಾಸಿನ ಸಹಾಯ ಇಲ್ಲದೆ ಶೆಡ್ ಗಳನ್ನು ನಿರ್ಮಿಸಲು ಸಾಧ್ಯವಾಗುತ್ತಿಲ್ಲ. ಹಾಗಾಗಿ ಸಾಕಷ್ಟು ಮಂದಿ ರೈತರು ಮೇಕೆಗಳನ್ನು ತಮ್ಮ ಮನೆಯ ಹಿತ್ತಲು ಸೇರಿದಂತೆ ಅಲ್ಲಲ್ಲಿ ಕಟ್ಟಿಹಾಕಿಕೊಂಡು ಸಾಕಾಣಿಕೆ ಮಾಡುತ್ತಿದ್ದಾರೆ. ಇವರಿಗೆ ಈ ನರೇಗಾ ಯೋಜನೆ ಅನುಕೂಲ ಕಲ್ಪಿಸಿದೆ ಶೆಡ್ ನಿರ್ಮಾಣದಿಂದಾಗಿ ಮೇಕೆಗಳನ್ನು ರಕ್ಷಿಸಿಕೊಳ್ಳಬಹುದಾಗಿದೆ. ರಾತ್ರಿ ವೇಳೆ ಸೂಕ್ತ ಭದ್ರತೆಯಿಲ್ಲದೆ ಮನೆಯ ಮುಂಭಾಗದಲ್ಲಿ ಕಟ್ಟಿಹಾಕಿರುವ ಮೇಕೆಗಳನ್ನು ಟಾಟಾ ಏಸ್ ನಂಥ ವಾಹನಗಳಲ್ಲಿ ಬಂದು ಸದ್ದಿಲ್ಲದೆ ತುಂಬಿಕೊಂಡು ಹೋಗುವ ಪ್ರಕರಣಗಳು ನಡೆಯುತ್ತಿವೆ. ಶೆಡ್ ನಿರ್ಮಾಣವಾದರೆ ಅವುಗಳನ್ನು ಕಳ್ಳರಿಂದ ರಕ್ಷಣೆ ಮಾಡಲು ಸಾಧ್ಯವಾಗಲಿದೆ.

## ಕ್ಯಾಲಿಪರ್ ಬೃಹತ್ ಜೋಡಣಾ ಶಿಬಿರ : ಫಲಾನುಭವಿಗಳು ತೆರಳುವ ವಾಹನಕ್ಕೆ ಚಾಲನೆ

**ಚಾಮರಾಜನಗರ:** ಪೋಲಿಯೋ ಪೀಡಿತರಿಗಾಗಿ ಕ್ಯಾಲಿಪರ್‌ಗಳನ್ನು ಉಚಿತವಾಗಿ ನೀಡುತ್ತಿದ್ದು, ಇದಕ್ಕಾಗಿ ಬೆಂಗಳೂರಿನಲ್ಲಿ ಆಯೋಜಿಸಲಾಗಿರುವ ಕೃತಕ ಕಾಲು ಮತ್ತು ಮುಂಗೈ ಬೃಹತ್ ಜೋಡಣಾ ಶಿಬಿರಕ್ಕೆ ತೆರಳುತ್ತಿರುವ ಜಿಲ್ಲೆಯ ಫಲಾನುಭವಿಗಳ ವಾಹನಕ್ಕೆ ಜನವರಿ 5ರಂದು ಬೆಳಿಗ್ಗೆ 8.30 ಗಂಟೆಗೆ ಶಾಸಕರಾದ ಸಿ. ಪುಟ್ಟರಂಗಶೆಟ್ಟಿ ಅವರು ಚಾಲನೆ ನೀಡಲಿದ್ದಾರೆ. ಶಿಬಿರಕ್ಕೆ ಕ್ಯಾಲಿಪರ್ಸ್ ಅಗತ್ಯವಿರುವ ಜಿಲ್ಲೆಯ ವಿಶೇಷಚೇತನ ಫಲಾನುಭವಿಗಳನ್ನು ಕರೆದೊಯ್ಯಲಾಗುತ್ತಿದೆ. ಜನವರಿ 9 ರವರೆಗೆ ಶ್ರೀ ಭಗವನ್ ಮಹಾವೀರ ವಿಕಲಾಂಗ ಸಹಾಯ ಸಮಿತಿ ಜೈಪುರ, ಬೆಂಗಳೂರಿನ ರೋಟರಿ ಸಂಸ್ಥೆಯು ಬೆಂಗಳೂರಿನಲ್ಲಿ ಕೃತಕ ಕಾಲು ಮತ್ತು ಮುಂಗೈ ಬೃಹತ್ ಜೋಡಣಾ ಶಿಬಿರವನ್ನು ಆಯೋಜಿಸಿದೆ. ಈ ಶಿಬಿರಕ್ಕೆ ತೆರಳುವ ಫಲಾನುಭವಿಗಳ ವಾಹನಕ್ಕೆ ಶಾಸಕರಾದ ಸಿ. ಪುಟ್ಟರಂಗಶೆಟ್ಟಿ ಅವರು ಮತ್ತು ಚಾಮರಾಜನಗರ ಜಿಲ್ಲೆಯ ರೋಟರಿ ಸಂಸ್ಥೆಯ ಪದಾಧಿಕಾರಿಗಳು ಚಾಲನೆ ನೀಡಲಿದ್ದಾರೆ.

## ಡಿ. ದೇವರಾಜ ಅರಸು ವಿದೇಶಿ ವ್ಯಾಸಂಗ ವೇತನಕ್ಕಾಗಿ ಅರ್ಜಿ ಸಲ್ಲಿಕೆ ಅವಧಿ ವಿಸ್ತರಣೆ

**ಚಾಮರಾಜನಗರ:** ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯಿಂದ 2024-25ನೇ ಸಾಲಿನಲ್ಲಿ ವಿದೇಶಿ ವಿಶ್ವವಿದ್ಯಾಲಯಗಳಲ್ಲಿ ಸ್ನಾತಕೋತ್ತರ ಪದವಿ ಹಾಗೂ ಪಿಹೆಚ್‌ಡಿ ಮಾಡಲು ಹಿಂದುಳಿದ ವರ್ಗಗಳ ಪ್ರವರ್ಗ-1, 2ಎ, 3ಎ ಹಾಗೂ 3ಬಿ ಗಳಿಗೆ ಸೇರಿದ ಅರ್ಹ ವಿದ್ಯಾರ್ಥಿಗಳಿಂದ ಡಿ. ದೇವರಾಜ ಅರಸು ವಿದೇಶಿ ವ್ಯಾಸಂಗ ವೇತನಕ್ಕೆ ಆನ್‌ಲೈನ್ ಮೂಲಕ ಅರ್ಜಿ ಸಲ್ಲಿಸುವ ಅವಧಿಯನ್ನು ಜನವರಿ 15 ರವರೆಗೆ ವಿಸ್ತರಿಸಲಾಗಿದೆ. ಹೆಚ್ಚಿನ ಮಾಹಿತಿಗಾಗಿ ಇಲಾಖಾ ವೆಬ್ ಸೈಟ್ http://bcwd.karnataka.gov.in/ಅಥವಾ ಸಹಾಯವಾಣಿ ಸಂಖ್ಯೆ 8050770004 ಸಂಪರ್ಕಿಸಬಹುದು ಎಂದು ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ಜಿಲ್ಲಾ ಅಧಿಕಾರಿ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ವಿವಿಧೆಡೆ ವಿದ್ಯುತ್ ವ್ಯತ್ಯಯ

**ಚಾಮರಾಜನಗರ:** ಕರ್ನಾಟಕ ವಿದ್ಯುತ್ ಪ್ರಸರಣ ನಿಗಮದಿಂದ ಸಂತೇಮರಹಳ್ಳಿ ಉಪವಿಭಾಗ ವ್ಯಾಪ್ತಿಯ ಚಂದಕವಾಡಿ ವಿದ್ಯುತ್ ವಿತರಣಾ ಕೇಂದ್ರದಲ್ಲಿ ಕಾಮಗಾರಿಯನ್ನು ಜನವರಿ 6 ರಂದು ಹಮ್ಮಿಕೊಂಡಿರುವುದರಿಂದ ಅಂದು ಬೆಳಿಗ್ಗೆ 9 ರಿಂದ ಸಂಜೆ 5 ಗಂಟೆಯವರೆಗೆ ವಿವಿಧೆಡೆ ವಿದ್ಯುತ್ ಸರಬರಾಜಿನಲ್ಲಿ ವ್ಯತ್ಯಯವಾಗಲಿದೆ. ಹಿರೆಕೆರೆ, ಕಾಳಿಕಾಂಬಕಾಲೋನಿ, ಚಂದಕವಾಡಿ, ರೇಚಂಬಳ್ಳಿ, ಸರಗೂರು ಮೋಳೆ, ಅಯ್ಯನಪುರ, ಮಲ್ಲೇದೇವನಹಳ್ಳಿ, ನವೋದಯ, ಹೊಂಡರಬಾಳು, ಜ್ಯೋತಿಗೌಡನಪುರ ಹಾಗೂ ಸುತ್ತಮುತ್ತಲಿನ ಪ್ರದೇಶಗಳಲ್ಲಿ ವಿದ್ಯುತ್ ವ್ಯತ್ಯಯವಾಗಲಿದೆ. ಸಾರ್ವಜನಿಕರು ನಿಗಮದ ಜೊತೆ ಸಹಕರಿಸಬೇಕು. ವಿದ್ಯುತ್ ಸಂಬಂಧಿತ ದೂರು ಮತ್ತು ಸಹಾಯಕ್ಕಾಗಿ ಗ್ರಾಹಕರು ಉಚಿತ ದೂ.ಸಂ 1912 ಸಂಪರ್ಕಿಸುವಂತೆ ನಿಗಮದ ಕಾರ್ಯನಿರ್ವಾಹಕ ಎಂಜಿನಿಯರ್ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಕಾಣೆಯಾದ ವ್ಯಕ್ತಿ ಪತ್ತೆಗಾಗಿ ಮನವಿ

**ಕೋಲಾರ:** ಕಾಣೆಯಾದ ವ್ಯಕ್ತಿಯ ಚಹರೆ: ಹೆಸರು: ವೆಂಕಟರಮಣ, ತಂದೆಯ ಹೆಸರು: ನಾರಾಯಣಪ್ಪ, 48 ವರ್ಷ, 5.6 ಅಡಿ ಎತ್ತರ, ಒಕ್ಕಲಿಗರು ಜನಾಂಗ, ಮುಳಬಾಗಿಲು ತಾಲ್ಲೂಕು ಕಛೇರಿಯಲ್ಲಿ ರಾಜಸ್ವ ನಿರೀಕ್ಷಕರು, ಗುಂಡು ಮುಖ, ದೃಡಕಾಯ ಮೈಕಟ್ಟು, ಕಪ್ಪು ಮೈಬಣ್ಣ, ಬಲ ಭಾಗದ ಹೊಟ್ಟೆಯ ಮೇಲೆ ಕಪ್ಪು ಮಚ್ಚೆ ಇರುತ್ತದೆ. ಕನ್ನಡ, ತೆಲುಗು, ತಮಿಳು ಭಾಷೆ ಮಾತನಾಡುತ್ತಾರೆ. ಪಾಚಿ ಬಣ್ಣದ ಶರ್ಟ್ ಮತ್ತು ಕಪ್ಪು ಬಣ್ಣದ ಪ್ಯಾಂಟ್ ಧರಿಸಿರುತ್ತಾರೆ. ಈ ವ್ಯಕ್ತಿಯ ಬಗ್ಗೆ ಮಾಹಿತಿ ತಿಳಿದು ಬಂದಲ್ಲಿ ಕಂಟ್ರೋಲ್ ರೂಂ ಸಂಖ್ಯೆ: 08152-243066, ಕೋಲಾರ ಉಪ ವಿಭಾಗದ ಪೊಲೀಸ್ ಉಪಾಧೀಕ್ಷಕರು: 08152-225824, ಪೊಲೀಸ್ ವೃತ್ತ ನಿರೀಕ್ಷಕರು ದೂ.ಸಂ. 08152-224488, ಗಲ್ ಪೇಟೆ ಪೊಲೀಸ್ ಠಾಣೆ ದೂ. ಸಂ: 08152-240596 ಯನ್ನು ಸಂಪರ್ಕಿಸಬಹುದು ಎಂದು ಠಾಣೆಯ ಪೊಲೀಸ್ ಸಬ್ ಇನ್ಸ್‌ಪೆಕ್ಟರ್ ರವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಜನ ಸಂಪರ್ಕ ಸಭೆ

**ಕೋಲಾರ:** ಕೋಲಾರ ಜಿಲ್ಲಾ ಕರ್ನಾಟಕ ಲೋಕಾಯುಕ್ತ ಪೊಲೀಸ್ ಅಧೀಕ್ಷಕರವರು ಜನವರಿ 08, 2025 ಬುಧವಾರದಂದು ಬೆಳಿಗ್ಗೆ 11.00 ಗಂಟೆಯಿಂದ ಮಧ್ಯಾಹ್ನ 1.30 ಗಂಟೆಯವರೆಗೆ ಮುಳಬಾಗಿಲು ತಾಲ್ಲೂಕು ಪಂಚಾಯಿತಿ ಸಭಾಂಗಣದಲ್ಲಿ ಜನ ಸಂಪರ್ಕ ಸಭೆಯನ್ನು ಹಮ್ಮಿಕೊಂಡಿದ್ದಾರೆ. ಸರ್ಕಾರಿ ಕಛೇರಿಗಳಲ್ಲಿ ಕೆಲಸ ಮಾಡಿಕೊಡಲು ವಿಳಂಬ/ನಿರ್ಲಕ್ಷ್ಯ ಅಥವಾ ಸದರಿ ಅಧಿಕಾರಿ/ಸಿಬ್ಬಂದಿಯು ದುರಾಡಳಿತದಲ್ಲಿ ತೊಡಗಿದ್ದಲ್ಲಿ ಅಂತಹ ಅಧಿಕಾರಿ/ಸಿಬ್ಬಂದಿಗಳ ಮೇಲೆ ಲಿಖಿತ ಅಹವಾಲುಗಳನ್ನು ಸ್ವೀಕರಿಸಲಿದ್ದು, ಸಾರ್ವಜನಿಕರು ದೂರುಗಳಿದ್ದಲ್ಲಿ, ಸದರಿ ದಿನಾಂಕದಂದು ಲಿಖಿತ ದೂರುಗಳನ್ನು ದ್ವಿಪ್ರತಿಯಲ್ಲಿ ನೀಡಬಹುದು ಎಂದು ಕೋಲಾರ ಕರ್ನಾಟಕ ಲೋಕಾಯುಕ್ತದ ಪೊಲೀಸ್ ಅಧೀಕ್ಷಕರು ತಿಳಿಸಿದ್ದಾರೆ.

## ಖೋ-ಖೋ ವಿಶಕಪ್ : ನಿರ್ದೇಶಕರಾಗಿ ಲೋಕೇಶ್ವರ ಆಯ್ಕೆ



**ತಿಪಟೂರು :** ಮೊದಲ ಬಾರಿಗೆ ನವದೆಹಲಿಯಲ್ಲಿ ಜ 13 ರಿಂದ 19 ವರೆಗೆ ನಡೆಯುವ ಪ್ರಥಮ ಖೋ-ಖೋ ವಿಶ್ವಕಪ್ ಪಂದ್ಯಾವಳಿಗೆ ಅಂತರ ರಾಷ್ಟ್ರೀಯ ಖೋ-ಖೋ ಪಂದ್ಯಾವಳಿಯ ನಿರ್ದೇಶಕರಾಗಿ ಕರ್ನಾಟಕ ರಾಜ್ಯ ಖೋ ಖೋ ಸಂಸ್ಥೆ ಅಧ್ಯಕ್ಷ ತಿಪಟೂರಿನ ಲೋಕೇಶ್ವರನ್ನು ಭಾರತೀಯ ಖೋಖೋ ಫೆಡರೇಷನ್ ಸಂಸ್ಥೆ ಆಯ್ಕೆ ಮಾಡಲಾಗಿದೆ.

# ಭರವಸೆ ಇದ್ದರೆ ಭವಿಷ್ಯದ ದಾರಿ ಕಾಣುತ್ತದೆ

**ಕೊಲನಪಾಕ (ತೆಲಂಗಾಣ):** ಸಮಯ ಸ್ನೇಹ ಆರೋಗ್ಯ ಇವುಗಳಿಗೆ ಬೆಲೆ ಕಟ್ಟಲಾಗುವುದಿಲ್ಲ. ಕಳೆದುಕೊಂಡಾಗಲಷ್ಟೇ ಅವುಗಳ ನಿಜವಾದ ಬೆಲೆ ತಿಳಿಯುತ್ತದೆ. ಬದುಕಲ್ಲಿ ಭರವಸೆ ಇದ್ದರೆ ಭವಿಷ್ಯದ ದಾರಿ ಕಾಣುತ್ತದೆ ಎಂದು ಬಾಳೆಹೊನ್ನೂರು ಶ್ರೀ ರಂಭಾಪುರಿ ಡಾ.ವೀರಸೋಮೇಶ್ವರ ಜಗದ್ಗುರುಗಳು ಅಭಿಪ್ರಾಯಪಟ್ಟರು.

ಅವರು ಶನಿವಾರ ಶ್ರೀ ಜಗದ್ಗುರು ರೇಣುಕಾಚಾರ್ಯರು ಅವತರಿಸಿದ ತೆಲಂಗಾಣ ರಾಜ್ಯದ ಕೊಲನಪಾಕ ಸ್ವಯಂಭು ಶ್ರೀ ಸೋಮೇಶ್ವರ ಕ್ಷೇತ್ರದಲ್ಲಿ ಜರುಗಿದ ಧರ್ಮ ಜಾಗೃತಿ ಸಮಾರಂಭದ ಸಾನ್ನಿಧ್ಯ ವಹಿಸಿ ಆಶೀರ್ವಚನ ನೀಡುತ್ತಿದ್ದರು.

ಖರ್ಚು ಮಾಡುವ ಮುನ್ನ ಗಳಿಸು. ಪ್ರಾರ್ಥಿಸುವ ಮೊದಲು ನಂಬಿಕೆ ಇಡು. ಇವು ಸುಂದರ ಬದುಕಿನ ಸೂತ್ರಗಳು. ಗಳಿಕೆ ಮತ್ತು ನಂಬಿಕೆ ಇವೆರಡನ್ನು ಅಳವಡಿಸಿಕೊಂಡು ಬಾಳಿದರೆ ಜೀವನ ಸಾರ್ಥಕ. ಶ್ರೀಮಂತ ಆಹಾರದಲ್ಲಿ ರುಚಿ ಹುಡುಕುತ್ತಾನೆ. ಹಸಿದ ಬಡವ ಆಹಾರದಲ್ಲಿ ದೇವರನ್ನು ಕಾಣುತ್ತಾನೆ. ಸತ್ಯದ ದಾರಿ ಬಲು ಕಷ್ಟ. ಆದರೆ ಆ ದಾರಿ ನಮ್ಮನ್ನು ಸೋಲಲು ಬಿಡುವುದಿಲ್ಲ. ರೂಪ ಮತ್ತು ರೂಪಾಯಿ ಎಂದೂ ಶಾಶ್ವತವಲ್ಲ. ಮನುಷ್ಯನ ಒಳ್ಳೆಯ ಗುಣ ಒಂದೇ ಶಾಶ್ವತವೆಂದು ಶ್ರೀ ಜಗದ್ಗುರು ರೇಣುಕಾಚಾರ್ಯರು ಧರ್ಮ ಸಂಹಿತೆಯಲ್ಲಿ ಬೋಧಿಸಿದ್ದಾರೆ. ಏನು ಹೇಳಬೇಕೆನ್ನುವುದು ಜ್ಞಾನ. ಹೇಗೆ ಹೇಳಬೇಕೆಂಬುದು ವ್ಯಕ್ತಿತ್ವ. ಎಷ್ಟು ಹೇಳಬೇಕೆನ್ನುವುದು ಕೌಶಲ್ಯ. ಹೇಳಬೇಕೋ ಬೇಡವೋ ಎನ್ನುವುದು ವಿವೇಕ. ಮನೆ ಚಿಕ್ಕದಾದರೂ ಮನಸ್ಸು ದೊಡ್ಡದಾಗಿರಬೇಕು. ವಿಶ್ವ ಬಂಧುತ್ವದ ಶಾಂತಿ ಸಾಮರಸ್ಯದ ಸಂದೇಶ ಅನುಗ್ರಹಿಸಿದ ಶ್ರೀ ಜಗದ್ಗುರು ರೇಣುಕಾಚಾರ್ಯರು ಮಾಡಿದ ಸತ್ಕ್ರಾಂತಿಯನ್ನು ಯಾರೂ ಎಂದಿಗೂ ಮರೆಯಲಾಗದೆಂದರು.

ಮಳಲಿ ಸಂಸ್ಥಾನಮಠದ ಡಾ|| ನಾಗಭೂಷಣ ಶಿವಾಚಾರ್ಯ ಸ್ವಾಮಿಗಳು ಪ್ರಾಸ್ತಾವಿಕವಾಗಿ ಮಾತನಾಡಿದರು. ಮೇಹಕರ ಹಿರೇಮಠದ ರಾಜೇಶ್ವರ ಶಿವಾಚಾರ್ಯ ಸ್ವಾಮಿಗಳು ಕೊಲನಪಾಕ ಕ್ಷೇತ್ರದ ಹಿರಿಮೆಯನ್ನು ಕುರಿತು ಉಪದೇಶಾಮೃತವನ್ನಿತ್ತರು. ರಾಯಚೂರು ಶಾಂತಮಲ್ಲ ಶಿವಾಚಾರ್ಯರು, ತೆಂಡೇಕೆರೆ ಗಂಗಾಧರ ಶಿವಾಚಾರ್ಯರು, ಸಂಗೊಳ್ಳಿ ಹಿರೇಮಠದ ಗುರುಲಿಂಗ ಶಿವಾಚಾರ್ಯರು, ಜವಳಿ ಗಂಗಾಧರ ಶ್ರೀಗಳು, ಲಿಂಗಸುಗೂರು ಮಾತಾ ನಂದಿಕೇಶ್ವರಿ ಅಮ್ಮನವರು ಉಪಸ್ಥಿತರಿದ್ದರು. ಟ್ರಸ್ಟಿನ ಕಾರ್ಯದರ್ಶಿ ಅಣ್ಣಾರಾವ್ ಬಿರಾದಾರ ಸದಸ್ಯರಾದ ಗುರುಪಾದಪ್ಪ ಕಿಣಗಿ, ಅಮೃತಪ್ಪ ಮಲಕಪ್ಪಗೌಡರ, ಬಾರ್ಸಿ, ಫಂಡರಪುರ, ಸೋಲಾಪುರ, ಕಲಬುರ್ಗಿ ಭಕ್ತರು ಪೂಜೆಯಲ್ಲಿ ಪಾಲ್ಗೊಂಡಿದ್ದರು. ಪ್ರಾತ:ಕಾಲ ಸ್ವಯಂಭು ಶ್ರೀ ಸೋಮೇಶ್ವರ ಮಹಾಲಿಂಗ, ಶ್ರೀ ವೀರಭದ್ರಸ್ವಾಮಿ, ಚಂಡಿಕಾಂಬಾ ದೇವಿಗೆ ಶ್ರೀ ರಂಭಾಪುರಿ ಜಗದ್ಗುರುಗಳು ವಿಶೇಷ ಪೂಜೆ ಸಲ್ಲಿಸಿದರು. ಕಲಬುರ್ಗಿ ಶ್ರೀನಿವಾಸಪುರದ ಗಿರಿಯಪ್ಪ ಮುತ್ತ್ಯಾ ಬಂದ ಎಲ್ಲ ಭಕ್ತ ಸಮುದಾಯಕ್ಕೆ ಅನ್ನ ದಾಸೋಹ ಸೇವೆ ಸಲ್ಲಿಸಿದರು. ಸಾವಿರಾರು ಭಕ್ತರು ಪಾಲ್ಗೊಂಡು ಶ್ರೀ ರಂಭಾಪುರಿ ಜಗದ್ಗುರುಗಳ ದರ್ಶನಾಶೀರ್ವಾದ ಪಡೆದರು.



### ಶಾಸಕರು, ಜಿಲ್ಲಾಧಿಕಾರಿಗಳಿಂದ ಸಿದ್ದತೆಗಳ ಪರಿಶೀಲನೆ

# 13ರಿಂದ ಚಿಕ್ಕಲ್ಲೂರು ಜಾತ್ರೆ

**ಚಾಮರಾಜನಗರ:** ಕೊಳ್ಳೇಗಾಲ ತಾಲೂಕಿನ ಚಿಕ್ಕಲ್ಲೂರಿನಲ್ಲಿ ಜನವರಿ 13ರಿಂದ 5 ದಿನಗಳ ಕಾಲ ನಡೆಯುವ ಘನನೀಲ ಸಿದ್ದಾಪ್ಪಾಜಿಯವರ ಜಾತ್ರಾ ಮಹೋತ್ಸವದ ಪೂರ್ವಸಿದ್ದತೆಗಳನ್ನು ಶಾಸಕರಾದ ಎ.ಆರ್. ಕೃಷ್ಣಮೂರ್ತಿ, ಎಂ.ಆರ್. ಮಂಜುನಾಥ್ ಹಾಗೂ ಜಿಲ್ಲಾಧಿಕಾರಿ ಶಿಲ್ಪಾ ನಾಗ್ ಅವರು ಪರಿಶೀಲಿಸಿದರು.

ಕೊಳ್ಳೇಗಾಲ ತಾಲೂಕಿನ ಶ್ರೀಕ್ಷೇತ್ರ ಚಿಕ್ಕಲ್ಲೂರು ಹಳೇ ಮಠದ ಆವರಣದಲ್ಲಿ ಶುಕ್ರವಾರ (ಜ. 03) ನಡೆದ ಜಾತ್ರಾ ಮಹೋತ್ಸವದ ಪೂರ್ವಭಾವಿ ಸಭೆಯಲ್ಲಿ ಕ್ಷೇತ್ರದಲ್ಲಿನ ಮೂಲಸೌಲಭ್ಯಗಳ ಕುರಿತು ಶಾಸಕರು ಹಾಗೂ ಜಿಲ್ಲಾಧಿಕಾರಿಗಳು ಪರಿಶೀಲನೆ ನಡೆಸಿದರು.

ಶಾಸಕರಾದ ಎ.ಆರ್. ಕೃಷ್ಣಮೂರ್ತಿ ಅವರು ಮಾತನಾಡಿ ಚಿಕ್ಕಲ್ಲೂರಿನಲ್ಲಿ ಐತಿಹಾಸಿಕ ಪರಂಪರೆಯುಳ್ಳ ಚಿಕ್ಕಲ್ಲೂರು ಜಾತ್ರಾ ಮಹೋತ್ಸವಕ್ಕೆ ಜಿಲ್ಲೆ ಹಾಗೂ ಹೊರ ಜಿಲ್ಲೆಗಳಿಂದ ಲಕ್ಷಾಂತರ ಭಕ್ತಾಧಿಗಳು ಆಗಮಿಸಲಿದ್ದು, ಜನರ ಧಾರ್ಮಿಕ ಭಾವನೆಗಳನ್ನು ಗೌರವಿಸಬೇಕಿದೆ. ಕ್ಷೇತ್ರದಲ್ಲಿ ಕುಡಿಯುವ ನೀರು, ಸ್ವಚ್ಚತೆ, ರಸ್ತೆ ಸೇರಿದಂತೆ ಇನ್ನಿತರ ಮೂಲಸೌಕರ್ಯಗಳ ಸಂಪೂರ್ಣ ಅಭಿವೃದ್ಧಿಗೆ ಪೈಲಟ್ ಪ್ರಾಜೆಕ್ಟ್ ಯೋಜನೆ ರೂಪಿಸಬೇಕು ಎಂದರು.

ಕುಡಿನೀರಿಗಾಗಿ ಅಗತ್ಯವಿರುವೆಡೆ ಪೈಪ್‌ಲೈನ್ ವ್ಯವಸ್ಥೆ ಮಾಡಬೇಕು. ಜಾತ್ರಾ ಸಮಯದಲ್ಲಿ ರಸ್ತೆಬದಿ ವ್ಯಾಪಾರ ಮಾಡುವವರಿಗೆ ಸ್ಥಳ ಗುರುತು ಮಾಡಿಕೊಡಬೇಕು. ಸ್ವಚ್ಚತೆ ಕಾಪಾಡುವಂತೆ ತಿಳಿಹೇಳಬೇಕು. ಶ್ರೀಕ್ಷೇತ್ರದ ಸಮಗ್ರ ಅಭಿವೃದ್ಧಿ ಸಂಬಂಧ ಮಲೆ ಮಹದೇಶ್ವರ ಬೆಟ್ಟದಲ್ಲಿ ನಡೆಯಲಿರುವ ಸಚಿವ ಸಂಪುಟ ಸಭೆಯಲ್ಲಿ ಮುಖ್ಯಮಂತ್ರಿಗಳ ಗಮನ ಸೆಳೆಯಲಾಗುವುದು ಎಂದು ಶಾಸಕರಾದ ಎ.ಆರ್. ಕೃಷ್ಣಮೂರ್ತಿ ಅವರು ತಿಳಿಸಿದರು.

ಶಾಸಕರಾದ ಎಂ.ಆರ್. ಮಂಜುನಾಥ್ ಅವರು ಮಾತನಾಡಿ ಪಾರಂಪರಿಕ ಕ್ಷೇತ್ರ ಚಿಕ್ಕಲ್ಲೂರು ಜಾತ್ರೆಗೆ ಆಗಮಿಸುವ ಭಕ್ತಾಧಿಗಳ ಮೂಲಸೌಕರ್ಯಗಳ ಅಭಿವೃದ್ಧಿಗೆ ಮಾಸ್ಟರ್ ಪ್ಲಾನ್ ರೂಪಿಸುವ ಅಗತ್ಯವಿದೆ. ಕ್ಷೇತ್ರದ ಅಭಿವೃದ್ಧಿಯಲ್ಲಿ ದೇವಸ್ಥಾನ ಮಂಡಳಿಯು



ಸಹ ಕೈಜೋಡಿಸಬೇಕು. ಚಿಕ್ಕಲ್ಲೂರು ರಸ್ತೆ ಅಭಿವೃದ್ಧಿಗಾಗಿ 25 ಕೋಟಿ ಅನುದಾನ ಬಿಡುಗಡೆಯಾಗಿದ್ದು, ಇನ್ನು 2-3 ತಿಂಗಳಲ್ಲಿ ಕ್ಷೇತ್ರಕ್ಕೆ ಸುಸಜ್ಜಿತ ರಸ್ತೆ ನಿರ್ಮಿಸಲಾಗುವುದು. ಜಾತ್ರೆಗೆ ಆಗಮಿಸುವ ಭಕ್ತಾಧಿಗಳಿಗೆ ಯಾವುದೇ ತೊಂದರೆಯಾಗದಂತೆ ಅಧಿಕಾರಿಗಳು ನಿಗಾ ವಹಿಸಬೇಕು ಎಂದರು.

ಇದೇ ವೇಳೆ ಮಾತನಾಡಿದ ಜಿಲ್ಲಾಧಿಕಾರಿ ಶಿಲ್ಪಾ ನಾಗ್ ಅವರು ಚಿಕ್ಕಲ್ಲೂರು ಜಾತ್ರಾ ಮಹೋತ್ಸವದ ಅಂಗವಾಗಿ ಜನವರಿ 13ರಂದು ಚಂದ್ರಮಂಡಲೋತ್ಸವ, 14ರಂದು ಹುಲಿವಾಹನೋತ್ಸವ, 15ರಂದು ಮುಡಿಸೇವೆ ಮತ್ತು ರುದ್ರಾಕ್ಷಿ ಮಂಟಪ ಉತ್ಸವ, 16ರಂದು ಗಜವಾಹನೋತ್ಸವ ಹಾಗೂ ಪಂಕ್ತಿ ಸೇವೆ ಹಾಗೂ 17ರಂದು ಮುತ್ತರಾಯ ಸೇವೆಗಳು ನಡೆಯಲಿವೆ. 5 ದಿನಗಳ ಕಾಲ ನಡೆಯಲಿರುವ ಜಾತ್ರಾ ಮಹೋತ್ಸವದಲ್ಲಿ ಯಾವುದೇ ಲೋಪಗಳಿಗೆ ಅವಕಾಶವಾಗದಂತೆ ಕ್ರಮವಹಿಸಲು ಅಧಿಕಾರಿಗಳ ಸಮಿತಿ ರಚಿಸಿ ಕಾರ್ಯಗಳನ್ನು ಹಂಚಿಕೆ ಮಾಡಲಾಗಿದೆ. ವಹಿಸಲಾಗಿರುವ ಜವಾಬ್ದಾರಿಯನ್ನು ಸಮರ್ಪಕವಾಗಿ ನಿಭಾಯಿಸುವಂತೆ ಅಧಿಕಾರಿಗಳಿಗೆ ಸೂಚಿಸಿದರು.

ಜಾತ್ರೆಗೆ ಆಗಮಿಸುವ ಭಕ್ತಾಧಿಗಳಿಗೆ ಕುಡಿಯುವ ನೀರು, ಸ್ವಚ್ಚತೆ, ಸೇರಿದಂತೆ ಎಲ್ಲಾ ಮೂಲಸೌಲಭ್ಯಗಳನ್ನು ಒದಗಿಸಲಾಗುತ್ತಿದೆ. ಈ ಬಾರಿ 170 ಕೆ.ಎಸ್.ಆರ್.ಟಿ.ಸಿ ಬಸ್‌ಗಳನ್ನು ವ್ಯವಸ್ಥೆ ಮಾಡಲಾಗುತ್ತಿದೆ. ಜಾತ್ರೆ ನಡೆಯುವ 5 ದಿನಗಳಲ್ಲಿಯೂ ನಿರಂತರ ವಿದ್ಯುತ್ ವ್ಯವಸ್ಥೆ ಕಲ್ಪಿಸುವಂತೆ ಚೆಸ್ಕಾಂ ಅಧಿಕಾರಿಗಳಿಗೆ ಸೂಚಿಸಲಾಗಿದೆ. ಯಾವುದೇ ವಿದ್ಯುತ್ ಅವಘಡಗಳು ಹಾಗೂ ಅಗ್ನಿ ಆಕಸ್ಮಿಕಗಳ ಸಂಭವಿಸದಂತೆ ಸಂಬಂಧಪಟ್ಟ ಅಧಿಕಾರಿಗಳು ಎಚ್ಚರ ವಹಿಸಬೇಕು. ಜಾತ್ರಾ ಸ್ಥಳದಲ್ಲಿ ತಾತ್ಕಾಲಿಕ ಆರೋಗ್ಯ ಕೇಂದ್ರ ತೆರೆಯಬೇಕು. ಆಂಬುಲೆನ್ಸ್ ಸನ್ನದ್ಧ ಸ್ಥಿತಿಯಲ್ಲಿರಬೇಕು. ಆರೋಗ್ಯ ಅಧಿಕಾರಿಗಳು ನೀರಿನ ಮಾದರಿ ಸಂಗ್ರಹಿಸಿ ಪರೀಕ್ಷೆಗೊಳಪಡಿಸಬೇಕು. ಜಾತ್ರೆಯಲ್ಲಿ ಪ್ರಸಾದದ ಗುಣಮಟ್ಟ ಪರಿಶೀಲಿಸುವಂತೆ ಜಿಲ್ಲಾಧಿಕಾರಿ ಶಿಲ್ಪಾ ನಾಗ್ ಅವರು ಅಧಿಕಾರಿಗಳಿಗೆ ನಿರ್ದೇಶನ ನೀಡಿದರು.

ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಡಾ. ಬಿ.ಟಿ. ಕವಿತ ಅವರು ಮಾತನಾಡಿ ಚಿಕ್ಕಲ್ಲೂರು ಜಾತ್ರಾ ಅಂಗವಾಗಿ ಕಾನೂನು ಸುವ್ಯವಸ್ಥೆ ಕಾಪಾಡಲು ಹಾಗೂ ಬಂದೋಬಸ್ತ್‌ಗಾಗಿ 600ಕ್ಕೂ ಹೆಚ್ಚು ಪೊಲೀಸ್ ಅಧಿಕಾರಿ, ಸಿಬ್ಬಂದಿ ನಿಯೋಜಿಸಲಾಗಿದೆ. ಜಾತ್ರಾ ಸ್ಥಳದಿಂದ ಒಂದು ಕಿ.ಮೀ. ಅಂತರದಲ್ಲಿ ವಾಹನಗಳ ಪಾರ್ಕಿಂಗ್‌ಗಾಗಿ ವ್ಯವಸ್ಥೆ ಕಲ್ಪಿಸಲಾಗಿದ್ದು, ಸ್ಥಳ ಗುರುತಿಸಲಾಗಿದೆ. ಜಾತ್ರಾ ಆವರಣದಲ್ಲಿ ಸಿಸಿ ಟಿವಿ ಅಳವಡಿಸಲಾಗುತ್ತಿದೆ ಎಂದರು.

ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿವಾಹಕ ಅಧಿಕಾರಿ ಮೋನಾ ರೋತ್, ಉಪವಿಭಾಗಾಧಿಕಾರಿ ಬಿ.ಆರ್. ಮಹೇಶ್, ಡಿವೈಎಸ್‌ಪಿ ಧರ್ಮೇಂದ್ರ, ತಹಶೀಲ್ದಾರ್ ಬಸವರಾಜು, ಚಿಕ್ಕಲ್ಲೂರು ಮಠದ ಜ್ಞಾನಾನಂದ ಚನ್ನರಾಜೇ ಅರಸ್, ಭರತ್ ರಾಜೇ ಅರಸ್, ಸನ್ಮತಿ ಅರಸ್, ಇತರರು ಸಭೆಯಲ್ಲಿ ಉಪಸ್ಥಿತರಿದ್ದರು.

# ನಾಳೆಯಿಂದ ಯುವನಿಧಿ ವಿಶೇಷ ನೋಂದಣಿ ಅಭಿಯಾನ

**ಕೋಲಾರ:** ಕರ್ನಾಟಕ ಸರ್ಕಾರದ ಖಾತರಿ ಯೋಜನೆಗಳಲ್ಲಿ ಒಂದಾದ ಯುವನಿಧಿ ಯೋಜನೆ ರಾಜ್ಯದ ನಿರುದ್ಯೋಗಿ ಯುವಕ/ಯುವತಿಯರಿಗೆ ನಿರುದ್ಯೋಗಿ ಭತ್ಯೆಯನ್ನು ನೀಡಿ ಸಬಲೀಕರಣಗೊಳಿಸಲು ಜಾರಿಗೊಳಿಸಿದ ಮಹತ್ತರ ಯೋಜನೆಯಾಗಿರುತ್ತದೆ. ಈ ಯೋಜನೆಯಡಿ ನೋಂದಣಿಯಾಗುವ ಪದವೀಧಿರರಿಗೆ/ಸ್ನಾತಕೋತ್ತರ ಪದವೀಧರರಿಗೆ ರೂ.3000/- ಮತ್ತು ಡಿಪ್ಲೋಮಾ ತೇರ್ಗಡೆಯಾದವರಿಗೆ ಮಾಹೆಯಾನ ರೂ.1500/- ನಿರುದ್ಯೋಗ ಭತ್ಯೆಯನ್ನು ನೇರ ನಗದು ವರ್ಗಾವಣೆ ಮೂಲಕ ಪಾವತಿಸಲಾಗುತ್ತಿದೆ. ಯುವನಿಧಿ ಯೋಜನೆಗೆ ಅತಿ ಹೆಚ್ಚಿನ ಸಂಖ್ಯೆಯಲ್ಲಿ ಅರ್ಹ ಅಭ್ಯರ್ಥಿಗಳನ್ನು ನೋಂದಾಯಿಸಲು ಯುವನಿಧಿ ವಿಶೇಷ ನೋಂದಣಿ ಅಭಿಯಾನವನ್ನು ಜನವರಿ 06 ರಿಂದ 20ರ ವರೆಗೆ ಹಮ್ಮಿಕೊಳ್ಳಲಾಗಿದ್ದು, ಅಭ್ಯರ್ಥಿಗಳು ಜಿಲ್ಲಾ ಉದ್ಯೋಗ ವಿನಿಮಯ ಕಛೇರಿ, ಜಿಲ್ಲಾ ಕೌಶಲ್ಯಾಭಿವೃದ್ಧಿ ಕಛೇರಿ, ಬೆಂಗಳೂರು ಉತ್ತರ ವಿಶ್ವವಿದ್ಯಾಲಯ ಹಾಗೂ ಸರ್ಕಾರಿ ಪ್ರಥಮ ದರ್ಜೆ ಬಾಲಕ/ಬಾಲಕಿಯರ ಕಾಲೇಜು, ಕೋಲಾರ, ವೇಮಗಲ್, ಬಂಗಾರಪೇಟೆ, ಕೆ.ಜಿ.ಎಫ್, ಗುಟ್ಟಹಳ್ಳಿ, ಮುಳಬಾಗಿಲು, ಶ್ರೀನಿವಾಸಪುರ,




ಮಾಲೂರು ಕಾಲೇಜುಗಳಲ್ಲಿ ಯುವನಿಧಿ ಸಹಾಯವಾಣಿ ಮತ್ತು ನೋಂದಣಿ ಕೇಂದ್ರಗಳನ್ನು ತೆರೆಯಲಾಗಿದ್ದು, ಆಸಕ್ತ ಅರ್ಹ ಅಭ್ಯರ್ಥಿಗಳು ಈ ಕೇಂದ್ರಗಳಿಗೆ ಭೇಟಿ ನೀಡಿ ಯುವನಿಧಿ ಯೋಜನೆಯಡಿ, ನೋಂದಣಿ ಕೇಂದ್ರಗಳಲ್ಲಿ ಅಥವಾ ಅನ್‌ಲೈನ್ ಮೂಲಕ ವೆಬ್‌ಸೈಟ್ www.sevasindhu.karnataka.gov.in ನಲ್ಲಿ ನೋಂದಾಯಿಸಕೊಳ್ಳಬಹುದು.

ಈ ಯೋಜನೆಯಡಿ ನೋಂದಾಯಿಸಿಲು ಅಭ್ಯರ್ಥಿಗಳು ಪದವಿ/ಡಿಪ್ಲೋಮೊ ತೇರ್ಗಡೆ ಹೊಂದಿರುವ 180 ದಿನಗಳ ನಂತರವೂ ಉದ್ಯೋಗ ದೊರಕದೇ, ಉನ್ನತ ವ್ಯಾಸಂಗಕ್ಕೆ ದಾಖಲಾಗದೆ ಇರುವ ಅಭ್ಯರ್ಥಿಗಳು, ಸ್ವಯಂ ಉದ್ಯೋಗ ಕೈಗೊಳ್ಳದಿರುವ ಅಭ್ಯರ್ಥಿಗಳು, ಉನ್ನತ ವ್ಯಾಸಂಗ ಮುಂದುವರಿಸದೇ ಇರುವ ಅಭ್ಯರ್ಥಿಗಳು ಹಾಗೂ ಕರ್ನಾಟಕದಲ್ಲಿ ವಾಸವಿರುವವರು (ಕರ್ನಾಟಕದಲ್ಲಿ ಕನಿಷ್ಠ 06 ವರ್ಷಗಳ ವರೆಗೆ ಪದವಿ/ಸ್ನಾತಕೋತ್ತರ ಪದವಿ ಮತ್ತು ಡಿಪ್ಲೋಮೊವರೆಗೆ ಅಧ್ಯಯನ ಮಾಡಿದವರು) ಈ ಅರ್ಹತೆಗಳನ್ನು ಹೊಂದಿರಬೇಕಾಗಿರುತ್ತದೆ. ಅಭ್ಯಥಿಗಳು ನಿರುದ್ಯೋಗ ಭತ್ಯೆಯನ್ನು ಪಡೆಯಲು ಪ್ರತಿ ತಿಂಗಳ 01 ರಿಂದ 25ನೇ ತಾರೀಖಿನೊಳಗೆ ನಿರುದ್ಯೋಗಿ ಎಂದು ಸ್ವಯಂ ಘೋ?ಣೆಯನ್ನು ಆನ್‌ಲೈನ್‌ನಲ್ಲಿ ದಾಖಲು ಮಾಡುವುದು ಕಡ್ಡಾಯವಾಗಿರುತ್ತದೆ. ಯೋಜನೆಯ ಕುರಿತಾದ ಹೆಚ್ಚಿನ ಮಾಹಿತಿಗಾಗಿ www.sevasindhugs.karnataka.gov.in ಅಂತರ್ಜಾಲ ತಾಣ ಅಥವಾ ಸಹಾಯವಾಣಿ ಸಂಖ್ಯೆ 1800-599-7154 ಯಿಂದ ಪಡೆಯಬಹುದು ಎಂದು ಜಿಲ್ಲಾ ಉದ್ಯೋಗ ವಿನಿಮಯ ಕಛೇರಿಯ ಉದ್ಯೋಗಾಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಫೆಲೋಶಿಪ್‌ಗಾಗಿ ಅರ್ಜಿ ಆಹ್ವಾನ

**ಕೋಲಾರ:** ಪ್ರಸಕ್ತ ಸಾಲಿನಲ್ಲಿ ಪ್ರಥಮ ವರ್ಷದ ಪೂರ್ಣಾವಧಿ ಪಿ.ಎಚ್.ಡಿ ಅಧ್ಯಯನ ಪ್ರಾರಂಭಿಸಿರುವ ಕರ್ನಾಟಕ ರಾಜ್ಯದ ಹಿಂದುಳಿದ ವರ್ಗಗಳ ಪ್ರವರ್ಗ-1, 2ಎ, 3ಎ ಹಾಗೂ 3ಬಿ ಗೆ ಸೇರಿದ ಅರ್ಹ ಅಭ್ಯರ್ಥಿಗಳಿಂದ ಮಾಸಿಕ ವ್ಯಾಸಂಗ ವೇತನ/ಫೆಲೋಶಿಪ್ ಗಾಗಿ ಅರ್ಜಿ ಆಹ್ವಾನಿಸಲಾಗಿದೆ.

ಕರ್ನಾಟಕ ಶಾಸನಬದ್ದ ವಿಶ್ವ ವಿದ್ಯಾಲಯಗಳಲ್ಲಿ, ಅಧೀನಕ್ಕೆ ಒಳಪಡುವ ಸಂಸ್ಥೆಗಳಲ್ಲಿ ಪ್ರಥಮ ವರ್ಷದ ಪಿ.ಎಚ್.ಡಿ ಅಧ್ಯಯನ ಮಾಡುತ್ತಿರುವ ಹೊಸ ಅಭ್ಯರ್ಥಿಗಳು ಮಾತ್ರ ಆಫ್‌ಲೈನ್ ಮೂಲಕ ಅರ್ಜಿ ಜನವರಿ 20 ರಂದು ಸಂಜೆ 5.30 ರೊಳಗೆ ಸಲ್ಲಿಸಬಹುದು. ಕಾರ್ಯಕ್ರಮಗಳ ವಿವರ, ಅರ್ಹತೆ, ಸಲ್ಲಿಸಬೇಕಾದ ದಾಖಲೆಗಳು ಹಾಗೂ ಮಾಸಿಕ ವ್ಯಾಸಂಗ ವೇತನ/ಫೆಲೋಶಿಪ್‌ಗಾಗಿ ಸಂಬಂಧಿಸಿದ ಸರ್ಕಾರಿ ಆದೇಶಗಳ ಬಗ್ಗೆ ಮಾಹಿತಿಗಾಗಿ ಭೇಟಿ ನೀಡಬೇಕಾದ ವೆಬ್‌ಸೈಟ್ https://bcwd.karnataka.gov.in/ ನಲ್ಲಿ ವೀಕ್ಷಿಸಬಹುದು. ಇ-ಮೇಲ್ ಮುಖಾಂತರ bcwdhelpline@karnataka.gov.in ಹಾಗೂ ಸಹಾಯವಾಣಿ ಸಂಖ್ಯೆ. 8050770005 ಯನ್ನು ಸಂಪರ್ಕಿಸಬಹುದು. ಹೆಚ್ಚಿನ ವಿವರಗಳು ಇಲಾಖಾ ವೆಬ್‌ಸೈಟ್ https://bcwd.karnataka.gov.in ನಲ್ಲಿ ಲಭ್ಯವಿದ್ದು, ಅಭ್ಯರ್ಥಿಗಳು ಎಲ್ಲಾ ಮಾಹಿತಿಯನ್ನು ಓದಿ ತಿಳಿದುಕೊಂಡು ನಂತರ ಅರ್ಜಿ ಸಲ್ಲಿಸಬಹುದು ಎಂದು ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ಜಿಲ್ಲಾ ಅಧಿಕಾರಿ ತಿಳಿಸಿದ್ದಾರೆ.

# ವೈಕುಂಠ ದ್ವಾರ ಗೋಪುರ ಸಂಪ್ರೋಕ್ಷಣೆ



**ಮಾಲೂರು:** ತಾಲೂಕಿನ ಕುಡಿಯನೂರು ಗ್ರಾಮದ ಶ್ರೀ ಲಕ್ಷ್ಮಿ ವೆಂಕಟೇಶ್ವರ ದೇವಾಲಯ ಹರಿಹರ ಕ್ಷೇತ್ರದಲ್ಲಿ ಲೇಟ್ ಜಮೀನ್ದಾರ್ ರಾಜ ಅಯ್ಯಂಗಾರ್ ಕುಟುಂಬದವರಿಂದ ನಿರ್ಮಿಸಿರುವ ವೈಕುಂಠ ದ್ವಾರ ಗೋಪುರ ಸಂಪ್ರೋಕ್ಷಣೆ ಹಾಗೂ ಗೋಪುರದ ಮೇಲೆ ಕಳಶಗಳ ಸ್ಥಾಪನೆ ಕಾರ್ಯಕ್ರಮವು ಮುಗಳೂರು ಪ್ರಸಾದ್ ಅವರ ಅರ್ಚಕತ್ವದಲ್ಲಿ ನೆರವೇರಿತು.

ಕುಡಿಯನೂರು ಗ್ರಾಮದ ಶ್ರೀ ಲಕ್ಷ್ಮಿ ವೆಂಕಟೇಶ್ವರ ದೇವಾಲಯಕ್ಕೆ ಸಾವಿರಾರು ವರ್ಷಗಳ ಇತಿಹಾಸವಿದ್ದು ಮುಜರಾಯಿ ಇಲಾಖೆಗೆ ಸೇರಿದ ಈ ದೇವಾಲಯದಲ್ಲಿ ಭಕ್ತರ ಸಹಕಾರದಿಂದ ಪ್ರತಿ ವರ್ಷ ಬ್ರಹ್ಮ ರಥೋತ್ಸವ ಸೇರಿದಂತೆ ವಿವಿಧ ರೀತಿಯ ಕಾರ್ಯಕ್ರಮಗಳು ನಡೆಯುತ್ತದೆ. ಲೇಟ್ ಜಮೀನ್ದಾರ್ ರಾಜ ಅಯ್ಯಂಗಾರ್ ಕುಟುಂಬದವರು ದೇವಾಲಯದ ಉತ್ತರ ಭಾಗದಲ್ಲಿ ವೈಕುಂಠ ದ್ವಾರ ಗೋಪುರ ನಿರ್ಮಿಸಿ ಕೊಟ್ಟಿದ್ದು, ವೈಕುಂಠ ದ್ವಾರ ಗೋಪರ ಸಂಪ್ರೋಕ್ಷಣೆ ಹಾಗೂ ಕಳಶಗಳ ಸ್ಥಾಪನೆಯನ್ನು ಶುಕ್ರವಾರ ದೇವಾಲಯದ ಆವರಣದಲ್ಲಿ ಏರ್ಪಡಿಸಲಾಗಿತ್ತು, ಹೋಮ ಹವನ ಕಳಶ ಪೂಜೆ ಲಕ್ಷ್ಮಿ ವೆಂಕಟೇಶ್ವರ ಉತ್ಸವ ಮೂರ್ತಿಗಳ ಪ್ರಕಾರೋತ್ಸವ ನಡೆಯಿತು.

ವೈಕುಂಠ ದ್ವಾರ ಗೋಪುರ ಸಂಪ್ರೋಕ್ಷಣೆ ಹಾಗೂ ಮುಖ್ಯ ಗೋಪುರದ ಮೇಲೆ ಕಳಶಗಳ ಸ್ಥಾಪನೆ ಕಾರ್ಯಕ್ರಮಕ್ಕೆ ಆಗಮಿಸಿದ ಭಕ್ತಾದಿಗಳು ದೇವರ ದರ್ಶನ ಪಡೆದು ತೀರ್ಥ ಪ್ರಸಾದ ಸ್ವೀಕರಿಸಿದರು. ಈ ಸಂದರ್ಭದಲ್ಲಿ ದೇವಾಲಯದ ಪ್ರಧಾನ ಅರ್ಚಕ ಟಿಟಿಡಿ ಕೆಎಸ್ ಶ್ರೀನಿವಾಸ ಆಚಾರ್, ಅರ್ಚಕರಾದ ದ್ವಾರಕನಾಥ್, ಅರ್ಚಕಂ ವೆಂಕಟೇಶ್ , ರಾಜೇಶ್ ಮುಖಂಡರಾದ ಗೌರಿಶಂಕರ್ ಕೃಷ್ಣಪ್ಪ , ನಾರಾಯಣಸ್ವಾಮಿ, ವೆಂಕಟಸ್ವಾಮಿ, ವೆಂಕಟೇಶ್ ಇನ್ನಿತರರು ಹಾಜರಿದ್ದರು.ಆ

# ಹೆಣ್ಣುಮಕ್ಕಳ ಶಿಕ್ಷಣಕ್ಕಾಗಿ ಶಾಲೆ ತೆರೆದ ದಿವಂಗತ ಮಾಳಿಗೆಪ್ಪ,ಚನ್ನರಸಪ್ಪ ಪ್ರಾತಃ ಸ್ಮರಣೀಯರು; ಕೆ.ಎಚ್.ಮುನಿಯಪ್ಪ

**ವಿಜಯಪುರ:** 30 ವರ್ಷಗಳ ಹಿಂದೆ ಗ್ರಾಮೀಣ ಪ್ರದೇಶದ ಹೆಣ್ಣು ಮಕ್ಕಳು ಉನ್ನತ ಶಿಕ್ಷಣಕ್ಕಾಗಿ ಬೆಂಗಳೂರು ಮತ್ತಿತರೆ ದೂರದ ಊರುಗಳಿಗೆ ಶ್ರಮಪಟ್ಟು ಹೋಗಬೇಕಾದುದನ್ನು ಅರಿತು ಯಾವುದೇ ವಾಣಿಜ್ಯೋದ್ಯಮದ ಚಿಂತನೆ ಇಲ್ಲದೆ ಸೇವಾ ಮನೋಭಾವದಿಂದ ಪ್ರಾರಂಭಿಸಿದ ಪ್ರಗತಿ ಶಿಕ್ಷಣ ಸಂಸ್ಥೆ ಅಂದು ಕೇವಲ 38 ವಿದ್ಯಾರ್ಥಿಗಳಿಂದ ಪ್ರಾರಂಭಗೊಂಡು ಇಂದು 3500ಕ್ಕೂ ಹೆಚ್ಚು ಮಕ್ಕಳು ಇಲ್ಲಿ ಭವಿಷ್ಯ ರೂಪಿಸಿಕೊಳ್ಳುತ್ತಿರುವುದು ಅಭಿನಂದನೆಯ ವಿಷಯವೆಂದು ಜಿಲ್ಲಾ ಉಸ್ತುವಾರಿ ಸಚಿವ ಕೆಎಚ್ ಮುನಿಯಪ್ಪ ತಿಳಿಸಿದರು..

ಅವರು ಇಲ್ಲಿನ ಪ್ರಗತಿ ಶಿಕ್ಷಣ ಸಂಸ್ಥೆಗಳ ಆವರಣದಲ್ಲಿ ಪ್ರಗತಿ ಪ್ರಾಥಮಿಕ ಮತ್ತು ಪ್ರೌಢಶಾಲೆಯ 29 ನೇ ವಾರ್ಷಿಕೋತ್ಸವದ 2ನೇ ದಿನದ ಸಾಂಸ್ಕೃತಿಕ ಸಂಜೆ ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡುತ್ತಿದ್ದರು.

ಪ್ರಗತಿ ಶಿಕ್ಷಣ ಸಂಸ್ಥೆಗಳ ವ್ಯವಸ್ಥಾಪಕ ನಿರ್ದೇಶಕರಾದ ಕೃಪಾಶಂಕರ್ ರವರು ಮಾತನಾಡಿ, ಪ್ರಗತಿ ಮಹೋತ್ಸವ 2024-25ರ ಪ್ರಮುಖ ಘೋಷ ವಾಕ್ಯವೇ ಒಂದು ಪುಸ್ತಕ ಸಾವಿರಾರು ಕಲ್ಪನೆಗಳು ಎಂಬುದಾಗಿದ್ದು



ಮಕ್ಕಳಲ್ಲಿ ಓದನ್ನು ಹೆಚ್ಚಿಸಬೇಕೆಂಬ ಉದ್ದೇಶದಿಂದ ವಾರ್ಷಿಕೋತ್ಸವ ಕಾರ್ಯಕ್ರಮದಲ್ಲಿ ಪುಸ್ತಕ ಮೇಳವನ್ನು ಹಮ್ಮಿಕೊಳ್ಳಲಾಗಿದ್ದು, ಮಕ್ಕಳ ಕೈಗೆಟುಕುವಂತೆ ಕೇವಲ ಹತ್ತು ರೂಪಾಯಿ 20 ರೂಪಾಯಿಗಳ ರಿಯಾಯಿತಿ ಬೆಲೆಯಲ್ಲಿ ಪುಸ್ತಕಗಳು ಮಕ್ಕಳಿಗೆ ನೀಡಲಾಗುತ್ತಿದೆ ಎಂದು ತಿಳಿಸಿದರು.

ಪ್ರಗತಿ ಶಿಕ್ಷಣ ಸಂಸ್ಥೆಗಳ ಆಡಳಿತ ಅಧಿಕಾರಿಗಳಾದ ರಜತಾ ಪಟೇಲ್ ರವರು ಮಾತನಾಡಿ ಈ ಸಾಲಿನಿಂದ ಮಕ್ಕಳ ಆಕ್ಟಿವಿಟಿ ಲ್ಯಾಬ್ ಅನ್ನು ಪ್ರಾರಂಭಿಸುತ್ತಿದ್ದು ಬಾಲ್ಯದಿಂದಲೇ ಮಕ್ಕಳು ತಮ್ಮ ದಿನನಿತ್ಯದ ಕೆಲಸಗಳನ್ನು ಯಾರದೇ ಸಹಾಯವಿಲ್ಲದೆ ಮಾಡಿಕೊಂಡು ಹೋಗಬೇಕಾದ ತರಬೇತಿಗಳನ್ನು ನೀಡಲಾಗುತ್ತಿದೆ ಎಂದು ತಿಳಿಸಿದರು. ಶ್ರೀ ನಗರೇಶ್ವರ ಎಜುಕೇಶನ್ ಟ್ರಸ್ಟ್ ಅಧ್ಯಕ್ಷರಾದ ಎಮ್ ಸತೀಶ್ ಕುಮಾರ್ ರವರು ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದರು. ಕಾರ್ಯದರ್ಶಿ ಎಂ ಶಂಕರ್, ಟ್ರಸ್ಟಿಗಳಾದ ಸುಧಾ ಸತೀಶ್ ಕುಮಾರ್, ಭಾವನ, ನಂದಿನಿ ಮಧುಕರ್, ಪ್ರಗತಿ ಆಂಗ್ಲ ಪ್ರಾಥಮಿಕ ಪಾಠಶಾಲೆಯ ಮುಖ್ಯೋಪಾಧ್ಯಾಯರಾದ ಪ್ರಕಾಶ್, ಪ್ರೌಢಶಾಲಾ ಮುಖ್ಯೋಪಾಧ್ಯಾಯರಾದ ಬಸವರಾಜು, ಸಂಸ್ಥೆಯ ಹಿತೈಷಿಗಳಾದ ನಿವೃತ್ತ ಶಿಕ್ಷಕ ವಿ ಸಿ ಚೆನ್ನಬಸವರಾಜು, ಉಪಸ್ಥಿತರಿದ್ದರು.

ಈ ಸಾಲಿನ ರೋಲಿಂಗ್ ಷೀಲ್ಡನ್ನು ಪ್ರಗತಿ ಪ್ರೌಢಶಾಲೆ ಪಡೆದುಕೊಂಡಿತು.

ಜಗ ಮುಗಿಸುವ ವಿದ್ಯುತ್ ದೀಪಾಲಂಕಾರಗಳೊಂದಿಗೆ ಸುಶ್ರಾವ್ಯ ಸಂಗೀತದು ದೊಂದಿಗೆ ಒಂದು ಸಾವಿರಕ್ಕೂ ಹೆಚ್ಚು ಮಕ್ಕಳು ಐವತ್ತಕ್ಕೂ ಹೆಚ್ಚು ಆಕರ್ಷಣೀಯ ಕಾರ್ಯಕ್ರಮಗಳನ್ನು ನೀಡಿದ್ದು, ಪ್ರಾಥಮಿಕ ಶಾಲಾ ಮಕ್ಕಳ ಸಂಪೂರ್ಣ ರಾಮಾಯಣ ನೃತ್ಯರೂಪಕ, ಪ್ರೌಢಶಾಲೆಯ ವಿದ್ಯಾರ್ಥಿಗಳ ಕಂಸವದೆ ದೃಶ್ಯ ರೂಪಕ, ಭರತನಾಟ್ಯ ಸ್ವಾತಂತ್ರ್ಯ ಹೋರಾಟಗಾರರ ನೆನಪಿನ ರೂಪಕಗಳು ಮುಂತಾಗಿ ಸಂಪೂರ್ಣ ಕಾರ್ಯಕ್ರಮಗಳು ಪೋಷಕರನ್ನು ವೇದಿಕೆಯ ಬಳಿ ಹಿಡಿದಿಟ್ಟುಕೊಂಡಿತ್ತು.

# ಸಂಜೆ ಟಿಪ್ಸ್



## ಕನ್ನಡ ಪುಸ್ತಕ ಉಡುಗೊರೆ

ಬೆಂಗಳೂರಿನ ಬ್ಯಾಂಕರ್ಸ್ ಕನ್ನಡಿಗರ ಬಳಗದ ವತಿಯಿಂದ ಬೆಂಗಳೂರಿನ ಎಳ್ಳುಕುಂಟೆ ಸರಕಾರಿ ಹಿರಿಯ ಪ್ರಾಥಮಿಕ ಶಾಲೆಯ ಗ್ರಂಥಾಲಯಕ್ಕೆ ಕನ್ನಡ ಪುಸ್ತಕಗಳನ್ನು ಉಡುಗೊರೆಯಾಗಿ ನೀಡಲಾಯಿತು. ಕೆನರಾ ಬ್ಯಾಂಕ್ ನ ನಿವೃತ್ತ ಮುಖ್ಯ ಗ್ರಾಹಕ ಸೇವಾಧಿಕಾರಿ ಶ್ರೀ ಬಿ ಎನ್ ಎಸ್ ರತ್ನಾಕರ್ ರವರು ಪುಸ್ತಕಗಳನ್ನು ಶಾಲೆಯ ಮುಖ್ಯೋಪಾಧ್ಯಾಯ ಶ್ರೀ ಎಂ ಶ್ರೀನಾಥ್ ರವರಿಗೆ ಹಸ್ತಾಂತರಿಸಿದರು. ಈ ಸಂದರ್ಭದಲ್ಲಿ ಬಳಗದ ಅಧ್ಯಕ್ಷ ಶ್ರೀಎಂ ವೆಂಕಟೇಶ ಶೇಷಾದ್ರಿ ರವರು ಉಪಸ್ಥಿತರಿದ್ದರು.

## ನಿಮಗಿದು ಗೊತ್ತೇ?

ಎಂ. ವೆಂಕಟೇಶ್ ಶೇಷಾದ್ರಿ

**4. ಹೊತ್ತಿತೋ ಹೊತ್ತಿತು ಕನ್ನಡದ ದೀಪ ಮುಗಿಯಿತೋ ಮುಗಿಯಿತು ಶತಮಾನಗಳ ಶಾಪ.. ಈ ಗೀತೆ ರಚಿಸಿದವರು ಯಾರು ?**

## ಪಾಕ ಶಾಲೆ

### ಮೂಲಂಗಿ ಮೊಸರು ಬಜ್ಜಿ



**ಬೇಕಿರುವ ಸಾಮಗ್ರಿ**

ಮೂಲಂಗಿ- 3, ಮೊಸರು- 3/4 ಬಟ್ಟಲು, ಉಪ್ಪು- ಅಗತ್ಯಕ್ಕೆ ತಕ್ಕಷ್ಟು, ಕೊತ್ತಂಬರಿ ಸೊಪ್ಪು- ಸಣ್ಣಗೆ ಕತ್ತರಿಸಿದ್ದು ಸ್ವಲ್ಪ, ಹಸಿಮೆಣಸಿನಕಾಯಿ-1, ತೆಂಗಿನಕಾಯಿ ತುರಿ- 1 ಸಣ್ಣ ಬಟ್ಟಲು, ಸಾಸಿವೆ- ಸ್ವಲ್ಪ, ಜೀರಿಗೆ-ಸ್ವಲ್ಪ, ಕಡಲೆ ಬೇಳೆ- ಸ್ವಲ್ಪ, ಉದ್ದಿನ ಬೇಳೆ- ಸ್ವಲ್ಪ, ಎಣ್ಣೆ- 1 ಚಮಚ

**ಮಾಡುವ ವಿಧಾನ**

ಮೊದಲಿಗೆ ಮೂಲಂಗಿ ತುದಿಗಳನ್ನು ಕತ್ತರಿಸಿ, ಮೇಲ್ಭಾಗದಲ್ಲಿ ಇರುವಂತಹ ಸಿಪ್ಪೆ ತೆಗೆದುಹಾಕಿ. ಚೆನ್ನಾಗಿ ತೊಳೆದು ಸಣ್ಣದಾಗಿ ಸಣ್ಣಗೆ ಹೆಚ್ಚಿಕೊಳ್ಳಿ. ಮೊಸರಿನೊಂದಿಗೆ ಸ್ವಲ್ಪ ಉಪ್ಪು ಸೇರಿಸಿ ಚೆನ್ನಾಗಿ ಕಲಸಿ ಒಂದು ಪ್ಯಾನ್ ತೆಗೆದುಕೊಂಡು ಅದರಲ್ಲಿ ಸ್ವಲ್ಪ ಎಣ್ಣೆ ಹಾಕಿ, ಸಾಸಿವೆ, ಉದ್ದಿನಬೇಳೆ, ಕಡಲೇ ಬೇಳೆ, ಜೀರಿಗೆ ಎಲ್ಲವನ್ನು ಕೆಂಪಗೆ ಹುರಿದುಕೊಳ್ಳಿ. ಸಣ್ಣದಾಗಿ ಹೆಚ್ಚಿದ ಕೊತ್ತಂಬರಿ ಸೊಪ್ಪನ್ನು ಇದರಲ್ಲಿ ಹಾಕಿ, ಹಸಿಮೆಣಸಿನಕಾಯಿ ಸೇರಿಸಿ ಚೆನ್ನಾಗಿ ಹುರಿಯಿರಿ ಮತ್ತು ಎಲ್ಲವನ್ನೂ ಮಿಶ್ರಣ ಮಾಡಿದರೆ ರುಚಿಕರವಾದ ಮೂಲಂಗಿ ಮೊಸರು ಬಜ್ಜಿ ಸವಿಯಲು ಸಿದ್ಧ.

## ಮೂಳೆ ನೋವಿಗೆ ಪರಿಹಾರ

**ಹೆಲ್ತ್ ಟಿಪ್ಸ್**



ವೃತ್ತಾಕಾರದ ಮೆದುವಾದ ಮೂಳೆ ನಮ್ಮ ಬೆನ್ನಿನಲ್ಲಿ ಕಾಣಿಸುತ್ತದೆ. ಅದು ಬೆನ್ನೆಲುಬಾದ ಸ್ಪೈನ್ನ ಮುಖ್ಯ ಭಾಗ. ಅದನ್ನೇ ಡಿಸ್ಕ್ ಎಂದು ಕರೆಯುತ್ತೇವೆ. ಬೆನ್ನು ಮೂಳೆಯಲ್ಲಿ ಒಟ್ಟು 26 ಮೂಳೆಗಳಿದ್ದು, ಇದರ ಪ್ರತಿಯೊಂದು ಮೂಳೆಗೂ ಕೊಂಡಿಯಾಗಿ ಕೆಲಸ ನಿರ್ವಹಿಸುವ ಮೆದು ಮೂಳೆ ಇದು.

ಸ್ಪಂಜಿನಂತೆ ಇದರ ರಚನೆ ಇದೆ. ಸ್ವಲ್ಪ ತೇವಾಂಶವನ್ನೊಳಗೊಂಡ ಎರಡು ಬೆನ್ನುಮೂಳೆಗಳ ಚಲನವಲನಗಳಲ್ಲಿ ಭಾಗಿಯಾಗಿ ನಮ್ಮ ದೇಹವನ್ನು ಹಿಂದಕ್ಕೆ ಮುಂದಕ್ಕೆ ಎಡ, ಬಲಕ್ಕೆ ದೇಹವನ್ನು ತಿರುಗಿಸಲು ಸಹಾಯವಾಗುತ್ತದೆ.

ಇಂತಹ ಡಿಸ್ಕ್ ಕೂಡ ಕೆಲವೊಮ್ಮೆ ತೊಂದರೆಗೆ ಒಳಗಾಗುತ್ತದೆ. ಸಾಮಾನ್ಯ ತೊಂದರೆಗಳೆಂದರೆ ಉರಿ ಊತ, ಡಿಸ್ಕ್ ಪ್ರೊಲಾಪ್ಸ್ ಅಂದರೆ ಡಿಸ್ಕ್ ಹಿಂದಕ್ಕೆ ಅಥವಾ ಮುಂದಕ್ಕೆ ಸರಿಯುವುದು. ಡಿಸ್ಕ್ನಲ್ಲಿರುವ ತೇವಾಂಶ ಕಡಿಮೆಯಾಗಿ ತೊಂದರೆ ಆಗುವುದು, ಮೂಳೆ ಸವೆತದಿಂದ ಡಿಸ್ಕ್ನಲ್ಲಿ ತೊಂದರೆ ಕಾಣಿಸಿಕೊಳ್ಳುವುದು, ಪೋಷಕಾಂಶದ ಕೊರತೆ, ಕೆಲವೊಮ್ಮೆ ಡಿಸ್ಕ್ನಲ್ಲಿ ಊತ ಕಾಣಿಸಿಕೊಂಡು ದಪ್ಪಗಾಗುತ್ತದೆ. ವಯಸ್ಸಾದಂತೆ ಡಿಸ್ಕ್ ಸಣ್ಣಗಾಗುವುದರಿಂದ ಹಲವಾರು ತೊಂದರೆಗಳು ಕಾಣಿಸುತ್ತವೆ.

ಡಿಸ್ಕ್ ತೊಂದರೆಯಿಂದ ಹಲವಾರು ರೀತಿಯ ತೊಂದರೆಗಳು ಕಾಣಿಸುತ್ತವೆ.

ಇದು ಬೆನ್ನುಹುರಿ ಮೇಲೆ ಪರಿಣಾಮ ಬೀರುತ್ತದೆ. ಕುತ್ತಿಗೆಯ ಹಿಂಭಾಗದಲ್ಲಿ ಹಾಗೂ ಕೈಗಳಲ್ಲೂ ನೋವು ಕಾಣಿಸಿಕೊಳ್ಳುತ್ತದೆ.

ಇದು ಸಾಮಾನ್ಯವಾಗಿ 40 ವರ್ಷಗಳ ನಂತರ ಕಾಣಿಸುತ್ತದೆ. ಒಂದೇ ಕಡೆ ಸರಿಯಿಲ್ಲದ ಭಂಗಿಯಲ್ಲಿ ಕುಳಿತು ಕೆಲಸ ಮಾಡುವುದು, ಭಾರವಾದ ವಸ್ತುಗಳನ್ನು ಪದೇ ಪದೆ ಎತ್ತುವುದರಿಂದ ಅನುವಂಶೀಯ ಕಾರಣದಿಂದ ಕೂಡ ಈ ಸಮಸ್ಯೆ ಉಂಟಾಗುವ ಸಾಧ್ಯತೆ ಹೆಚ್ಚು. ಅತಿಯಾದ ತೂಕ ಇರುವವರಲ್ಲಿ ಡಿಸ್ಕ್ ಸವೆತ ವೇಗವಾಗಿ ಆಗುತ್ತದೆ. ಕೆಳಭಾಗದ ಬೆನ್ನಿನಲ್ಲಿ ತೀವ್ರವಾಗಿ ಕಂಡುಬರುವ ನೋವು. ಒತ್ತಡ ಮತ್ತು ಬೆನ್ನಿನ ಭಾಗದಲ್ಲಿ ಭಾರವಾದಂತೆ ಅನಿಸುತ್ತದೆ. ಬೆಳಗಿನ ಜಾವದಲ್ಲಿ ಬೆನ್ನುನೋವು ತೀವ್ರವಾಗುತ್ತದೆ. ಸ್ಪರ್ಶದಲ್ಲಿ ವ್ಯತ್ಯಾಸ, ಮೂತ್ರ ವಿಸರ್ಜನೆಗೆ ತೊಂದರೆ ಮತ್ತು ನಿದ್ರೆ ಸಮಸ್ಯೆ. ಸಯಾಟಿಕಾ ತೊಂದರೆ ಕಾಣಿಸಿಕೊಳ್ಳಬಹುದು. ರೋಗ ಲಕ್ಷಣಗಳು ನಿಧಾನವಾಗಿ ಅಭಿವೃದ್ಧಿ ಹೊಂದುತ್ತಾ ಹೋಗುತ್ತದೆ. ಆದರೆ ಕೆಲವು ಸಂದರ್ಭದಲ್ಲಿ ಇದು ಆರಂಭವಾಗುತ್ತದೆ ಅಥವಾ ಅಧಿಕವಾಗುತ್ತದೆ. ತೀವ್ರತರ ನೋವು ಯಾವಾಗ ಕಾಣಿಸುತ್ತದೆ. ಅಂದರೆ ನಿಂತ ಮೇಲೆ ಅಥವಾ ಕುಳಿತ ಮೇಲೆ ರಾತ್ರಿ ವೇಳೆಯಲ್ಲಿ ಸೀನು, ಕೆಮ್ಮು ಅಥವಾ ನಗುವಾಗ ಮತ್ತು ಕುತ್ತಿಗೆಯನ್ನು ಹಿಂದಕ್ಕೆ ಬಾಗಿಸಿದಾಗ ಅಥವಾ ನಡೆದಾಗ ಕಾಣಿಸಬಹುದು.

## ಚಳಿಗಾಲಕ್ಕೆ ಸೌಂದರ್ಯ ಸಲಹೆಗಳು

**ಬ್ಯೂಟಿ ಟಿಪ್ಸ್**



ಉಳಿದ ಸಮಯಕ್ಕಿಂತ ಚಳಿಗಾಲದಲ್ಲಿ ಸೌಂದರ್ಯ ಸಮಸ್ಯೆ ಹೆಚ್ಚಾಗಿಯೇ ಕಂಡು ಬರುತ್ತದೆ. ತ್ವಚೆ ಒಡೆಯುವುದು, ಪಾದಗಳಲ್ಲಿ ಬಿರುಕು, ತುಟಿ ಒಣಗಿ ಬಿರುಕು ಕಂಡು ಬರುವುದು, ಕೂದಲು ಒಣಗುವುದು ಈ ರೀತಿಯ ನಾನಾ ಸಮಸ್ಯೆಗಳು ಕಂಡು ಬರುತ್ತದೆ. ಮುಖದ ಕಾಂತಿಗೆ ದೇಹದಲ್ಲಿ ನೀರಿನಂಶ ಹೆಚ್ಚಾಗಿ ಇರಬೇಕಾಗುತ್ತದೆ. ಅದಕ್ಕಾಗಿ ಪ್ರತಿನಿತ್ಯ ಸಾಕಷ್ಟು ನೀರು ಕುಡಿಯಬೇಕಾಗುತ್ತದೆ.ಕೆಫಿನ್ ಅಂಶವಿರುವ ತಿನಿಸುಗಳನ್ನು ಮತ್ತು ಮದ್ಯವನ್ನು ತೆಗೆದುಕೊಳ್ಳದಿದ್ದರೆ ಒಳ್ಳೆಯದು. ಚಳಿಗಾಲದಲ್ಲಿ ಸ್ನಾನಕ್ಕೆ ಉಗುರು ಬೆಚ್ಚಗಿನ ನೀರನ್ನು ಬಳಸಬೇಕು. ಚಳಿ ಎಂಬ ಕಾರಣದಿಂದ ಅತಿ ಹೆಚ್ಚು ಬಿಸಿಯಾದ ನೀರು ಬಳಸುವುದು ಚರ್ಮಕ್ಕೆ ಒಳ್ಳೆಯದಲ್ಲ. ಆದಷ್ಟು ಮೈಗೆ ಮಾಶ್ಚರೈಸಿಂಗ್ ಸೋಪು ಬಳಸುವುದು ಒಳ್ಳೆಯದು. ಚಳಿಗಾಲದಲ್ಲಿ ವಾರಕ್ಕೊಮ್ಮೆ ಎಣ್ಣೆಯಿಂದ ದೇಹವನ್ನು ಮಸಾಜ್ ಮಾಡಿ ಸ್ನಾನ ಮಾಡುವುದರಿಂದ ದೇಹದ ಕಾಂತಿ ಹೆಚ್ಚುತ್ತದೆ. ಚಳಿಗಾಲದಲ್ಲಿ ತುಟಿ ಒಣಗುವುದು ಸಾಮಾನ್ಯ. ಆದ್ದರಿಂದ ತುಟಿಗೆ ತುಪ್ಪ ಅಥವಾ ಹಾಲಿನ ಕೆನೆಯನ್ನು ಹಚ್ಚುವುದರಿಂದ ತುಟಿ ಒಡೆಯುವುದಿಲ್ಲ. ಚಳಿಗಾಲದಲ್ಲಿ ತ್ವಚೆ ಒಡೆಯುವುದರಿಂದ ಹೊರಗಡೆ ಹೋಗುವಾಗ ಮಾಯಿಶ್ಚರೈಸರ್ ಹಚ್ಚಿ. ಪ್ರತಿನಿತ್ಯ ಸ್ನಾನ ಮಾಡುವ ಮುಂಚೆ 2 ಚಮಚ ಸಕ್ಕರೆಗೆ 2 ಚಮಚ ಎಣ್ಣೆ ಹಾಕಿ ಮಿಶ್ರಣ ಮಾಡಿ ಮೈ ಸ್ಕಬ್ ಮಾಡಿ. ಇದು ನಿರ್ಜಿವ ತ್ವಚೆಯನ್ನು ಹೋಗಲಾಡಿಸಿ, ತ್ವಚೆಯ ಹೊಳಪು ಹೆಚ್ಚಿಸುತ್ತದೆ. ಚಳಿಗಾಲದಲ್ಲಿ ಕೂದಲು ಕವಲೊಡೆದು ಉದುರಲಾರಂಭಿಸುತ್ತದೆ. ಈ ಸಮಯದಲ್ಲಿ ಎಣ್ಣೆಯನ್ನು ಹಾಗೇ ತಲೆಗೆ ಹಚ್ಚುವುದಕ್ಕಿಂತ ಬಿಸಿ ಮಾಡಿ ಹಚ್ಚಿದರೆ ಒಳ್ಳೆಯದು.

# ಗೇಮ್ ಚೇಂಜರ್ ಟ್ರೇಲರ್ ರಿಲೀಸ್..



ಗ್ಲೋಬಲ್ ಸ್ಟಾರ್ ರಾಮ್ ಚರಣ್ ಹಾಗೂ ಆರ್.ಶಂಕರ್ ಕಾಂಬಿನೇಷನ್ ಗೇಮ್ ಚೇಂಜರ್ ಸಿನಿಮಾದ ಟ್ರೇಲರ್ ಬಿಡುಗಡೆಯಾಗಿ, ಪ್ರೇಕ್ಷಕ ಮೆಚ್ಚುಗೆ ಪಡೆದುಕೊಳ್ಳುತ್ತಿದೆ. ಹೈದ್ರಾಬಾದ್ ನಲ್ಲಿ ಇತ್ತೀಚೆಗೆ ಅದ್ಧೂರಿಯಾಗಿ ನಡೆದ ಟ್ರೇಲರ್ ರಿಲೀಸ್ ಕಾರ್ಯಕ್ರಮಕ್ಕೆ ನಿರ್ದೇಶಕ ರಾಜಮೌಳಿ ವಿಶೇಷ ಅಥಿತಿಯಾಗಿ ಆಗಮಿಸಿದ್ದರು. ಗೇಮ್ ಚೇಂಜರ್ ಟ್ರೇಲರ್ ರಿಲೀಸ್ ಮಾಡಿ ಜಕ್ಕಣ್ಣ ಇಡೀ ತಂಡಕ್ಕೆ ಶುಭಾಷಯ ತಿಳಿಸಿದರು.

2 ನಿಮಿಷ 40 ಸೆಕೆಂಡ್ ಗಳಿರುವ ಗೇಮ್ ಚೇಂಜರ್ ಟ್ರೇಲರ್ ನಲ್ಲಿ ರಾಮ್ ಚರಣ್ ಡಬಲ್ ರೋಲ್ ನಲ್ಲಿ ಅಬ್ಬರಿಸಿದ್ದಾರೆ. ಒಮ್ಮೆ ರಾಜಕಾರಣಿ ಪಾತ್ರದಲ್ಲಿ, ಇನ್ನೊಂದು ಐಎಎಸ್ ಅಧಿಕಾರಿಯಾಗಿ ಕಾಣಿಸಿಕೊಂಡಿದ್ದಾರೆ. ಐಎಎಸ್ ಅಧಿಕಾರಿಯಾಗಿ ರಾಜಕೀಯದಲ್ಲಿ ನಡೆಯುವ ಭ್ರಷ್ಟಾಚಾರದ ವಿರುದ್ಧ ರಾಮ್ ಹೇಗೆಲ್ಲಾ ಹೋರಾಟ ಮಾಡ್ತಾರೆ ಅನ್ನೋದನ್ನು ಟ್ರೇಲರ್ ನಲ್ಲಿ ಕಟ್ಟಿಕೊಡಲಾಗಿದೆ. ಇದರೊಂದಿಗೆ ಆಕ್ಷನ್ ದೃಶ್ಯಗಳು ಅಬ್ಬರಿಸಿರುವ ಚೆರ್ರಿಗೆ ಜೋಡಿಯಾಗಿ ನಟಿ ಕಿಯಾರಾ ಅಡ್ವಾಣಿ ಮಿಂಚಿದ್ದಾರೆ.

'ಆರ್ಆರ್ಆರ್' ಬಳಿಕ ರಾಮ್ಚರಣ್ ನಟಿಸಿದ ಯಾವುದೇ ಸಿನಿಮಾ ರಿಲೀಸ್ ಆಗಿಲ್ಲ. ಹೀಗಾಗಿ ಮೆಗಾ ಫ್ಯಾನ್ಸ್ 'ಗೇಮ್ ಚೇಂಜರ್' ದರ್ಶನಕ್ಕೆ ಕಾಯುತ್ತಿದ್ದಾರೆ. ತಮಿಳಿನ ಖ್ಯಾತ ನಿರ್ದೇಶಕ ಶಂಕರ್ ಗೇಮ್ ಚೇಂಜರ್ ಗೆ ಆಕ್ಷನ್ ಕಟ್ ಹೇಳಿದ್ದಾರೆ. ಶ್ರೀ ವೆಂಕಟೇಶ್ವರ ಕ್ರಿಯೇಷನ್ಸ್ ಮತ್ತು ಜೀ ಸ್ಟುಡಿಯೋಸ್ ಬ್ಯಾನರ್‌ನಲ್ಲಿ ದಿಲ್ ರಾಜು ಮತ್ತು ಸಿರಿಶ್ ನಿರ್ಮಿಸುತ್ತಿರುವ ಈ ಚಿತ್ರವನ್ನು ನಿರ್ಮಿಸಿದ್ದಾರೆ. ರಾಮ್, ಕಿಯಾರಾ ಅಡ್ವಾಣಿ ಜೊತೆಗೆ ಅಂಜಲಿ, ಎಸ್ ಜೆ ಸೂರ್ಯ, ಶ್ರೀಕಾಂತ್, ಸುನಿಲ್, ಸಮುದ್ರಕನಿ ಮತ್ತು ಜಯರಾಮ್ ಮತ್ತಿತರರು ತಾರಾಬಳಗದಲ್ಲಿದ್ದಾರೆ. ಕಾರ್ತಿಕ್ ಸುಬ್ಬರಾಜ್ ಕಥೆ ಬರೆದಿದ್ದಾರೆ. ಎಸ್.ಯು.ವೆಂಕಟೇಶನ್ ಮತ್ತು ವಿವೇಕ್ ಬರಹಗಾರರಾಗಿ ಕೆಲಸ ಮಾಡಿದ್ದಾರೆ. ಹರ್ಷಿತ್ ಚಿತ್ರದ ಸಹ ನಿರ್ಮಾಪಕರಾಗಿ ಸಾಥ್ ಕೊಟ್ಟಿದ್ದಾರೆ. ಸಾಯಿ ಮಾಧವ್ ಬುರ್ರಾ ಸಂಭಾಷಣೆ ಬರೆದಿದ್ದಾರೆ. ಎಸ್ ಥಮನ್ ಸಂಗೀತ ಸಂಯೋಜಿಸಿದ್ದಾರೆ ಮತ್ತು ಎಸ್ ತಿರುನಾವುಕ್ಕರಸು ಛಾಯಾಗ್ರಹಣವನ್ನು ನಿಭಾಯಿಸಿದ್ದಾರೆ. ಅವಿನಾಶ್ ಕೊಲ್ಲಾ ಆಕ್ಷನ್ ಕೊರಿಯೋಗ್ರಾಫರ್ ಆಗಿ ಕಾರ್ಯನಿರ್ವಹಿಸಿದ್ದು, ಅನ್ಬೀರವ್ ಆಕ್ಷನ್ ದೃಶ್ಯಗಳನ್ನು ಸಂಯೋಜಿಸಿದ್ದು, ಪ್ರಭುದೇವ, ಗಣೇಶ್ ಆಚಾರ್ಯ, ಪ್ರೇಮ್ ರಕ್ಷಿತ್, ಬಾಸ್ಕೊ ಮಾರ್ಟಿನ್, ಜಾನಿ ಮತ್ತು ಸ್ಯಾಂಡಿ ನೃತ್ಯ ನಿರ್ದೇಶಕರಾಗಿ ಕೆಲಸ ಮಾಡಿದ್ದಾರೆ. ಈ ಚಿತ್ರವು ತೆಲುಗು, ಕನ್ನಡ, ತಮಿಳು ಮತ್ತು ಹಿಂದಿಯಲ್ಲಿ ಜನವರಿ 10, 2025 ರಂದು ಅದ್ಧೂರಿಯಾಗಿ ಬಿಡುಗಡೆಯಾಗಲಿದೆ.

## ವಿಶ್ವಪಿಕಲ್ ಬಾಲ್ ಲೀಗ್ ನಲ್ಲಿ ಪ್ರಿಯಾ, ಅಟ್ಲಿ ಹೂಡಿಕೆ



ಬೆಂಗಳೂರು ಫ್ರಾಂಚೈಸಿ ಬೆಂಗಳೂರು ಜವಾನ್ ತಂಡಕ್ಕೆ ಇವರೇ ಮಾಲೀಕರು ವಿಶ್ವ ಪಿಕಲ್ ಬಾಲ್ ಲೀಗ್ ನಲ್ಲಿ ಭಾಗವಹಿಸುತ್ತಿರುವ ಬೆಂಗಳೂರು ಫ್ರಾಂಚೈಸಿಯಾದ ಬೆಂಗಳೂರು ಜವಾನ್ ತಂಡದ ಮೇಲೆ ಸೆಲೆಬ್ರಿಟಿಗಳಾದ ಪ್ರಿಯಾ ಅಟ್ಲೀ ಹಾಗೂ ಸಿನೆಮಾ ನಿರ್ಮಾಪಕ ಅಟ್ಲೀ ಅವರುಗಳು ಹೂಡಿಕೆ ಮಾಡುವ ತಂಡವನ್ನು ಖರೀದಿಸಿದ್ದಾರೆ. ಈ ಮೂಲಕ ಇಬ್ಬರೂ ಸೆಲೆಬ್ರಿಟಿಗಳು ಜಗತ್ತಿನ ಕ್ರೀಡಾಲೋಕಕ್ಕೆ ಕಾಲಿಟ್ಟಿದ್ದಾರೆ.

ಇಬ್ಬರೂ ಸೆಲೆಬ್ರಿಟಿಗಳು ಪಿಕಲ್ ಬಾಲ್ ಕ್ರೀಡೆಯ ಅಭಿಮಾನಿಗಳು, ವಿಶ್ವ ಪಿಕಲ್ ಬಾಲ್ ಲೀಗ್ ಇನ್ನಷ್ಟು ಬೆಳೆಯಲು ತಮ್ಮದೇ ಆದ ಪಾತ್ರ ನಿರ್ವಹಿಸಲಿದ್ದಾರೆ.

ಈ ಲೀಗ್ನ ಸಹ ಸಂಸ್ಥಾಪಕರಾದ ಟೆನಿಸ್ ಕ್ರೀಡೆಯ ಭಾರತೀಯ ಮಾಜಿ ಆಟಗಾರರಾದ ಗೌರವ್ ನಾಟೇಕರ್ ಹಾಗೂ ಆರತಿ ಪೊನ್ನಪ್ಪ ನಾಟೇಕರ್ ಅವರು ಇದೇ ಜನವರಿ 24ರಂದು ಲೀಗ್ ಉದ್ಘಾಟಿಸಲಿದ್ದಾರೆ. ಈ ಲೀಗ್?ನಲ್ಲಿ ಆರು ಫ್ರಾಂಚೈಸಿಗಳಿದ್ದು, ಭಾರತದಿಂದ 48 ಆಟಗಾರರು ಪಾಲ್ಗೊಳ್ಳಲಿದ್ದಾರೆ.

ಭಾರತೀಯ, ಹ್ಯಾಮರ್ ಥಾಕರೆ ಎಂದೇ ಖ್ಯಾತಿಯ ವೃಶಾಲಿ ಥಾಕರೆ ಬೆಂಗಳೂರು ಜವಾನ್ಸ್ ತಂಡದಲ್ಲಿದ್ದಾರೆ. ಇವರ ಜತೆ ಜ್ಯಾಕ್ ಫೋಸ್ಟರ್, ಕ್ಯಾಟರೀನಾ ಸ್ಟೆವರ್ಟ್, ಟ್ರಾಂಗ್ ಹ್ಯೂಂ ಮೆಕ್ ಕ್ಲೈನ್, ಮಾರ್ಸೆಲೋ ಜಾರ್ಡಿಮ್, ಅಲೆಜಾಂಡ್ರಾ ಬೊಬಾರಿಯಾ, ಫೆಲಿಕ್ಸ್ ಗ್ರುನರ್ಟ್, ಮಾವ್ರೋ ಗಾರ್ಸಿಯಾ ಮುಂತಾದವರು ತಂಡದ ಭಾಗವಾಗುವ ಮೂಲಕ, ಫ್ರಾಂಚೈಸಿಗೆ ಬಲ ತುಂಬಿದ್ದಾರೆ.

ಇದೇ ತಿಂಗಳ 24ರಂದು ಲೀಗ್ ಪಂದ್ಯಾವಳಿ ಆರಂಭವಾಗುತ್ತಿದ್ದು, ಬೆಂಗಳೂರು ಫ್ರಾಂಚೈಸಿ ಮಾಲೀಕರಾದ ಅಟ್ಲೀ ಹಾಗೂ ಪ್ರಿಯಾ ಅವರು ಲೀಗ್ ಆರಂಭದ ಕುರಿತು ಸಂತಸ ವ್ಯಕ್ತಪಡಿಸಿದ್ದಾರೆ. ಹಲವು ವರ್ಷಗಳಿಂದ ಸಿನೆಮಾ ಜಗತ್ತು ಎಂಬುದು ನಮ್ಮಲ್ಲಿ ಉತ್ಸಾಹ ಮೂಡುವಂತೆ ಮಾಡುತ್ತಿದೆ. ಜನಸಾಮಾನ್ಯರ ಅಭಿರುಚಿಯಾದ ಸಿನೆಮಾ ನಿರ್ಮಿಸುತ್ತಲೇ ನಮ್ಮ ಚಿತ್ತ ಇರುತ್ತದೆ. ಸಿನೆಮಾಗೆ ಇರುವ ಜನರಲ್ಲಿರುವ ಸಮನಾದ ಆಸಕ್ತಿ, ಕ್ರೀಡೆಯತ್ತಲೂ ಇದೆ. ಕ್ರೀಡೆಯ ಪ್ರತೀ ಕ್ಷಣದ ಫಲಿತಾಂಶ ಹೆಚ್ಚು ಭಾವನಾತ್ಮಕಾವಾಗಿ ಕೂಡಿರುತ್ತದೆ. ಇದು ಸಮುದಾಯಗಳ ಒಗ್ಗಟ್ಟು ಹಾಗೂ ಬದಲಾವಣೆ ತರಲು ಕಾರಣವಾಗುತ್ತದೆ.

ಈ ಲೀಗ್?ನಿಂದಾಗಿ ಸಿನೆಮಾ ಹಾಗೂ ಕ್ರೀಡಾಭಿಮಾನಿಗಳು, ಕ್ರೀಡಾಪಟುಗಳು ಹಾಗೂ ಸೆಲೆಬ್ರಿಟಿಗಳು ಕೂಡಾ ಒಂದೇ ಕಡೆ ಜಮಾಯಿಸುವಂತೆ ಮಾಡಿದೆ. ನಾವು ಸಿನೆಮಾ ಕ್ಷೇತ್ರದಿಂದ ಬಂದಿದ್ದು, ಕ್ರೀಡೆಯ ಅನುಭವ ಪಡೆಯಲು ಈ ಲೀಗ್ ಒಂದು ಹೆಜ್ಜೆಯಾಗಿದೆ. ಈ ಮೂಲಕ ನಮ್ಮಲ್ಲೂ ಕ್ರೀಡೆ ಕುರಿತು ಪ್ರೀತಿ ಹಾಗೂ ಕ್ರೀಡಾಮನೋಭಾವ, ಸಂಸ್ಕೃತಿ ಬೆಳೆಸಿಕೊಳ್ಳಲು ಸಹಾಯಕವಾಗಿದೆ. ಅದರಲ್ಲೂ ಬೆಂಗಳೂರು ನಗರದ ಜತೆ ನಮಗೆ ಹೇಳಿಕೊಳ್ಳಲಾಗದ ಬಾಂಧವ್ಯ ಇದೆ. ಕಾರಣ, ಇಲ್ಲಿನ ಸ್ಥಳೀಯದ ಕ್ರೀಡಾ ಪ್ರೀತಿ ಹಾಗೂ ಅಭಿಮಾನ, ಸ್ನೇಹಿತರ ಬಳಗ. ನಗರದೊಂದಿಗಿನ ನಮ್ಮ ನಂಟು ಹೆಚ್ಚು ಆಳವಾಗಿ ಬೆಸೆದಿದ್ದು, ಗಣನೀಯವಾಗಿ ಬೆಳೆದಿದೆ ಎಂದರು. ಪ್ರಿಯಾ ಹಾಗೂ ಅಟ್ಲೀ ಅವರನ್ನು ಡಬ್ಲ್ಯು.ಪಿ.ಬಿ.ಎಲ್ ಲೀಗ್ಗೆ ಸ್ವಾಗತಿಸಿದ ಸಹ ಸಂಸ್ಥಾಪಕ, ಸಿಇಓ ಗೌರವ್ ನಾಟೇಕರ್ ಮಾತನಾಡಿ, ಕ್ರೀಡೆ ಕುರಿತಂತೆ ಕ್ರೀಡಾಭಿಮಾನಿಗಳ ಅನುಭವದ ಮಾತು ಮತ್ತು ಮನೋರಂಜನೆಯು ಜತೆಗೆ ನಮ್ಮ ಭಾರತ ದೇಶದಲ್ಲಿ ಕ್ರೀಡಾಪ್ರೇಮವು ಡಬ್ಲ್ಯು.ಪಿ.ಬಿ.ಎಲ್ ಅ ಗುರಿಯನ್ನು ಮರು ವ್ಯಾಖ್ಯಾನಿಸಲಿದೆ. ಹೀಗಾಗಿ ನಮಗೂ ಅತೀವ ಉತ್ಸಾಹ ಇದೆ ಎಂದು ಫ್ರಾಂಚೈಸಿ ಮಾಲೀಕರು ಹೇಳಿದರು.

ಕ್ರೀಡೆ ಹಾಗೂ ಮನೋರಂಜನೆ ಕ್ಷೇತ್ರದ ಕುರಿತಂತೆ ಫ್ರಾಂಚೈಸಿ ಮಾಲೀಕರಾದ ಪ್ರಿಯಾ ಹಾಗೂ ಅಟ್ಲೀ ಅವರುಗಳ ಪ್ರೀತಿ ಹಾಗೂ ಲೀಗ್ ಪಂದ್ಯಾವಳಿಯು, ಪಿಕಲ್ ಬಾಲ್ ಕ್ರೀಡೆಗೆ ಹೆಚ್ಚಿನ ಪೋಷಣೆ ಸಿಗಲಿದೆ. ಈ ಫ್ರಾಂಚೈಸಿಯ ಜತೆಗಾರಿಕೆ, ಭಾರತೀಯ ಕ್ರೀಡಾ ಕ್ಷೇತ್ರದಲ್ಲಿ ಹೊಸ ಶಕೆಯನ್ನು ಉಂಟು ಮಾಡಲಿದೆ.

ಹೀಗಾಗಿ, ಕ್ರೀಡಾ ಕ್ಷೇತ್ರ, ಮನೋರಂಜನೆ ಹಾಗೂ ಸಮುದಾಯದ ಹೊಸ ಔನ್ನತ್ಯಕ್ಕೆ ನೀವೂ ಸಿದ್ದರಾಗಿ, ಇದೇ ಜನವರಿ 24, 2025 ರಂದು ಡಬ್ಲ್ಯು.ಪಿ.ಬಿ.ಎಲ್ ಲೀಗ್ ಆರಂಭವಾಗಲಿದ್ದು, ಕೇಂದ್ರಬಿಂದು ಎನಿಸಲಿದೆ.

## ರಾಶಿ ಭವಿಷ್ಯ



**ಜಯಶ್ರೀ.ಬಿ.ಆರ್**
ಖ್ಯಾತ ಜ್ಯೋತಿಷಿ
ದೂರವಾಣಿ–9964739507
www.jyotishyavaastu.com

**ಮೇಷ:** ವ್ಯಾಪಾರದಲ್ಲಿ ಲಾಭ, ಕುಟುಂಬದಲ್ಲಿ ಪ್ರೀತಿಯ ವಾತಾವರಣ, ವಾದ ವಿವಾದಗಳಲ್ಲಿ ಜಯ, ಆಭರಣ ಖರೀದಿಗಾಗಿ ಸ್ನೇಹಿತರಿಂದ ಸಹಾಯ.

**ವೃಷಭ:** ಧನವ್ಯಯ, ದೃಷ್ಟಿ ದೋಷ ತೊಂದರೆ, ದಂಡ ಕಟ್ಟುವಿರಿ ಜಾಗ್ರತೆ, ಮನಸ್ಸಿಗೆ ಬೇಸರ, ಅನಾರೋಗ್ಯ.

**ಮಿಥುನ:** ಗುರು ಹಿರಿಯರಲ್ಲಿ ಭಕ್ತಿ, ಶತ್ರುನಾಶ, ದೂರ ಪ್ರಯಾಣ, ನಂಬಿದ ಜನರಿಂದ ಮೋಸ, ನಾನಾ ರೀತಿಯ ಸಂಪಾದನೆ.

**ಕಟಕ:** ಉದ್ಯೋಗದಲ್ಲಿ ಬಡ್ತಿ, ವಿವಾಹ ನಿಶ್ಚಯ ಯೋಗ, ವ್ಯವಹಾರದಲ್ಲಿ ಏರುಪೇರು, ಮನಸ್ತಾಪ, ಶತ್ರು ಭಾದೆ.

**ಸಿಂಹ:** ಭೂ ಲಾಭ, ವಾಹನ ಕೊಂಡುಕೊಳ್ಳುವಿಕೆ, ರಾಜಕೀಯ ಕ್ಷೇತ್ರದಲ್ಲಿ ಮನ್ನಣೆ, ದಾನ ಧರ್ಮದಲ್ಲಿ ಆಸಕ್ತಿ, ದುಃಖದಾಯಕ ಪ್ರಸಂಗಗಳು.

**ಕನ್ಯಾ:** ಖರ್ಚು ಜಾಸ್ತಿ, ಅನಾರೋಗ್ಯ, ಕುಟುಂಬದಲ್ಲಿ ಪ್ರೀತಿಯ ವಾತಾವರಣ, ವಾಹನ ಚಾಲಕರಿಗೆ ತೊಂದರೆ.

**ತುಲಾ:** ದೂರ ಪ್ರಯಾಣ, ರಿಯಲ್ ಎಸ್ಟೇಟ್ ವ್ಯಾಪಾರದವರಿಗೆ ಲಾಭ, ಇಷ್ಟ ವಸ್ತುಗಳ ಖರೀದಿ, ವಿಕ್ರಯಗಳಿಂದ ಲಾಭ.

**ವೃಶ್ಚಿಕ:** ಅತಿಯಾದ ಭಯ, ಅನಾರೋಗ್ಯ, ಸ್ನೇಹಿತರಿಂದ ಸಹಾಯ, ದಾಂಪತ್ಯದಲ್ಲಿ ಕಲಹ, ದ್ರವ್ಯ ನಷ್ಟ, ಶತ್ರುಗಳಿಂದ ತೊಂದರೆ.

**ಧನಸ್ಸು:** ದೂರ ಪ್ರಯಾಣ, ಆರ್ಥಿಕ ಪರಿಸ್ಥಿತಿ ಚೇತರಿಕೆ, ಭಯಭೀತಿ ನಿವಾರಣೆ, ಧನ ಲಾಭ, ಶತ್ರು ನಾಶ.

**ಮಕರ:** ಆಪ್ತರೊಡನೆ ಕಲಹ, ಶೀತ ಸಂಬಂಧ ರೋಗಗಳು, ಮಾತಾ ಪಿತರಲ್ಲಿ ದ್ವೇಷ, ತಾಳ್ಮೆಯಿಂದ ವರ್ತಿಸಿ.

**ಕುಂಭ:** ಬಂಧುಗಳ ಭೇಟಿ, ವ್ಯವಹಾರದಲ್ಲಿ ಏರುಪೇರು, ಆರೋಗ್ಯದಲ್ಲಿ ಚೇತರಿಕೆ, ಅನ್ಯರಿಗೆ ಉಪಕಾರ ಮಾಡುವಿರಿ.

**ಮೀನ:** ಅಲಂಕಾರಿಕ ವಸ್ತುಗಳಿಂದ ಲಾಭ, ಮನಸ್ಸಿನಲ್ಲಿ ಭಯ ಭೀತಿ, ಆಲಸ್ಯ ಮನೋಭಾವ, ಸಾಮಾನ್ಯ ಸೌಖ್ಯಕ್ಕೆ ಧಕ್ಕೆ.

## ರಾಷ್ಟ್ರೀಯ ಪಕ್ಷಿ ದಿನ

ಪಕ್ಷಿಗಳು ಯಾವಾಗಲೂ ನಮ್ಮ ಹೃದಯದಲ್ಲಿ ವಿಶೇಷ ಸ್ಥಾನವನ್ನು ಪಡೆದಿವೆ, ಅದಕ್ಕಾಗಿಯೇ ನಾವು ಅವುಗಳನ್ನು ಪ್ರತಿ ಜನವರಿ 5 ರಂದು ರಾಷ್ಟ್ರೀಯ ಪಕ್ಷಿ ದಿನದಂದು ಆಚರಿಸುತ್ತೇವೆ! ಪಕ್ಷಿಗಳು ಅದ್ಭುತವಾಗಿದ್ದರೂ, ಅವು ನಿರ್ದಿಷ್ಟ ಬೆದರಿಕೆಯ ಅಡಿಯಲ್ಲಿ ಒಂದು ಬೃಹತ್ ಪ್ರಾಣಿ ಗುಂಪು. ಮತ್ತು ಕಲ್ಲಿದ್ದಲು ಗಣಿಯಲ್ಲಿ ಕ್ಯಾನರಿ ಎಂಬ ಪದಗುಚ್ಛವನ್ನು ಒಂದು ಕಾರಣಕ್ಕಾಗಿ ಪಕ್ಷಿಗಳ ಹೆಸರನ್ನು ಇಡಲಾಗಿದೆ – ಅವು ನಮ್ಮ ಗ್ರಹದ ಪರಿಸರ ಆರೋಗ್ಯದ ಮಾಪಕಗಳಾಗಿವೆ. ಕಾನೂನುಬಾಹಿರ ಸಾಕುಪ್ರಾಣಿ ವ್ಯಾಪಾರ, ರೋಗ ಮತ್ತು ಆವಾಸಸ್ಥಾನದ ನಷ್ಟದಿಂದಾಗಿ ಅನೇಕ ಪಕ್ಷಿ ಪ್ರಭೇದಗಳು ಬೆದರಿಕೆಗೆ ಒಳಗಾಗಿವೆ ಎಂಬ ಅಂಶವು ಪಕ್ಷಿಗಳ ಅಗತ್ಯತೆಗಳ ಬಗ್ಗೆ ಸಾರ್ವಜನಿಕ ಜಾಗೃತಿ ಮೂಡಿಸಲು ಎಂದಿಗಿಂತಲೂ ಹೆಚ್ಚು ಮುಖ್ಯವಾಗಿದೆ.ಅವರು ನಿಮ್ಮ ಹಿತ್ತಲಿನ ಸ್ಟಾರ್ ಕಾರ್ಡಿನಲ್ ಆಗಿರಲಿ ಅಥವಾ ಉದ್ಯಾನವನದಲ್ಲಿ ಹಿಂಡು ಹಿಂಡಾಗಿ ಹೋಗುವ ಸಾಮಾನ್ಯ ಪಾರಿವಾಳಗಳಾಗಿರಲಿ, ಪಕ್ಷಿಗಳು ಯಾವಾಗಲೂ ನಮ್ಮ ಹೃದಯದಲ್ಲಿ ಆಕರ್ಷಣೆ, ಪ್ರೀತಿ ಮತ್ತು ಆರಾಧನೆಯ ಸ್ಥಾನವನ್ನು ಹೊಂದಿವೆ. ಹದ್ದು ಮೇಲೇರುವುದನ್ನು ನೋಡುವಾಗ ಮಾತ್ರ ಟ್ಯಾಪ್ ಮಾಡಬಹುದಾದ ಒಂದು ನಿರ್ದಿಷ್ಟ ವಿಸ್ಮಯವಿದೆ. ದುರದೃಷ್ಟವಶಾತ್, ಹೆಚ್ಚಿನ ಪಕ್ಷಿಗಳು ಅಳಿವಿನಂಚಿನಲ್ಲಿರುವ ಅಥವಾ ರಕ್ಷಿಸಲ್ಪಟ್ಟಿವೆ, ಇದು ಹೆಚ್ಚಾಗಿ ಆವಾಸಸ್ಥಾನದ ನಷ್ಟ ಅಥವಾ ಅಕ್ರಮ ಸಾಕುಪ್ರಾಣಿ ವ್ಯಾಪಾರದ ಕಾರಣದಿಂದಾಗಿರುತ್ತದೆ. ಅದಕ್ಕಾಗಿಯೇ ಏವಿಯನ್ ವೆಲ್ಫೇರ್ ಒಕ್ಕೂಟವು ರಾಷ್ಟ್ರೀಯ ಪಕ್ಷಿ ದಿನವನ್ನು ರಚಿಸಿತು: ಈ ಪ್ರಮುಖ ಪ್ರಾಣಿಗಳ ಹೆಚ್ಚು ಸಮರ್ಥನೀಯ ಸಂಬಂಧವನ್ನು ರಚಿಸಲು ಅಗತ್ಯವಾದ ಬದಲಾವಣೆಯನ್ನು ನಾವು ಹೇಗೆ ಪ್ರಾರಂಭಿಸಬಹುದು.

ಕಷ್ಟಗಳು ಮತ್ತು ಅವಸ್ಥೆಗಳ ಬಗ್ಗೆ ಅರಿವು ಮೂಡಿಸಲು ಮತ್ತು ಅವುಗಳೊಂದಿಗೆ ಆರೋಗ್ಯಕರ,

ಡೈನೋಸಾರ್ಗಳ ವಿಕಸನಕ್ಕೆ ಹತ್ತಿರವಾದ ಪ್ರಾಣಿಗಳಾಗಿದ್ದು, ಪಕ್ಷಿಗಳನ್ನು ಸಾಮಾನ್ಯವಾಗಿ ಹಿಂದಿನದಕ್ಕೆ ಜೀವಂತ ಕೊಂಡಿಗಳೆಂದು ಪರಿಗಣಿಸಲಾಗುತ್ತದೆ. ಅವು ಸಾಮಾನ್ಯವಾಗಿ ಪರಿಸರ ವ್ಯವಸ್ಥೆಗಳಲ್ಲಿ ಕೀಸ್ಟೋನ್ ಜಾತಿಗಳಾಗಿವೆ, ಅದರ ಆರೋಗ್ಯ ಮತ್ತು ಚೈತನ್ಯವನ್ನು ಸೂಚಿಸುತ್ತವೆ. ಉದಾಹರಣೆಗೆ, ಮರಕುಟಿಗಗಳು ಬಿಟ್ಟುಹೋದ ರಂಧ್ರಗಳನ್ನು ಅನೇಕವೇಳೆ ಇತರ ಪ್ರಾಣಿಗಳ ದೊಡ್ಡ ಮನೆಗಳಾಗಿ ಬಳಸಲಾಗುತ್ತದೆ. ಇದರರ್ಥ ಮರಕುಟಿಗಗಳು ಆಹಾರದ ಮೂಲದಿಂದ – ಅಥವಾ ಸರಿಯಾದ ರೀತಿಯ ಮರಗಳಿಂದ ಹೊರಗುಳಿದಿದ್ದರೆ – ಎಲ್ಲಾ ಪ್ರಾಣಿಗಳು ತಮ್ಮ ಪೆಕಿಂಗ್ ಕೌಶಲ್ಯವನ್ನು ಅವಲಂಬಿಸಿವೆ. ರಾಷ್ಟ್ರೀಯ ಪಕ್ಷಿ ದಿನವು ತುಲನಾತ್ಮಕವಾಗಿ ಹೊಸದಾಗಿದ್ದರೂ, 2002 ರಲ್ಲಿ ಸ್ಥಾಪಿಸಲಾಯಿತು, ಪಕ್ಷಿಗಳು ಎದುರಿಸಬೇಕಾದ ಪ್ರತಿಕೂಲತೆಯು ಪ್ರಾಣಿ ಸಾಮ್ರಾಜ್ಯಕ್ಕೆ ಏನೂ ಅಲ್ಲ. ಡೋಡೋ, ಲ್ಯಾಬ್ರಡಾರ್ ಬಾತುಕೋಳಿ, ಅಥವಾ ಪ್ಯಾಸೆಂಜರ್ ಪಾರಿವಾಳವನ್ನು ಕೇಳಿ, ಅನೇಕ ಸ್ಥಳೀಯ ಅಮೆರಿಕನ್ ಬುಡಕಟ್ಟು ಜನಾಂಗದವರು ಪವಿತ್ರವೆಂದು ಪರಿಗಣಿಸುತ್ತಾರೆ ಮತ್ತು ಆಗಾಗ್ಗೆ ಅದರ ಅಂತ್ಯದವರೆಗೆ ಅಮೇರಿಕನ್ ಕಲೆಯ ಅನೇಕ ಕೃತಿಗಳ ವಿಷಯವಾಗಿದೆ.

# ಜಾತಿ ರಾಜಕೀಯ ಹೆಸರಲ್ಲಿ ಕೆಲವರಿಂದ ಶಾಂತಿ ಕದಡುವ ಯತ್ನ: ಪ್ರಧಾನಿ ಮೋದಿ



**ನವದೆಹಲಿ:** ಕೆಲವರು ಜಾತಿ ರಾಜಕೀಯ ಹೆಸರಿನಲ್ಲಿ ವಿಷ ಹರಡುವ ಮೂಲಕ ಶಾಂತಿ ಕದಡುವ ಯತ್ನವನ್ನು ನಡೆಸುತ್ತಿದ್ದಾರೆ. ಗ್ರಾಮದಲ್ಲಿ ಸಾಮರಸ್ಯ ಮತ್ತು ಶಾಂತಿ ಬಲಗೊಳಿಸುವಲ್ಲಿ ನಾವು ಕಾರ್ಯ ನಿರ್ವಹಿಸಬೇಕಿದೆ ಎಂದು ಪ್ರಧಾನಿ ನರೇಂದ್ರ ಮೋದಿ ತಿಳಿಸಿದರು.

ದೆಹಲಿಯ ಭಾರತ್ ಮಂಟಪ್ನಲ್ಲಿ ಗ್ರಾಮೀಣ ಭಾರತ್ ಮಹೋತ್ಸವ ಕಾರ್ಯಕ್ರಮಕ್ಕೆ ಚಾಲನೆ ನೀಡಿ ಮಾತನಾಡಿದ ಅವರು, 2014ರಲ್ಲಿ ಪ್ರಧಾನಿಯಾದಾಗಿನಿಂದ ಪ್ರತಿ ಕ್ಷಣವೂ ಗ್ರಾಮೀಣ ಭಾರತ ಸಬಲೀಕರಣಕ್ಕೆ ನಿರಂತರವಾಗಿ ಕಾರ್ಯ ನಿರ್ವಹಿಸುತ್ತಿದ್ದೇನೆ ಎಂದರು.

2025ರ ವರ್ಷದ ಆರಂಭದಲ್ಲೇ ಗ್ರಾಮೀಣ ಭಾರತ್ ಮಹೋತ್ಸವ್ ಬೃಹತ್ ಕಾರ್ಯಕ್ರಮವನ್ನು ಭಾರತದ ಅಭಿವೃದ್ಧಿ ಕಾರ್ಯಕ್ರಮದಲ್ಲಿ ಪರಿಚಯಿಸಲಾಗಿದೆ. ಇದು ಹೊಸ ಗುರುತು ಸೃಷ್ಟಿಸಲಿದ್ದು, ಈ ಕಾರ್ಯಕ್ರಮ ಆಯೋಜಿಸಿದ್ದಕ್ಕೆ ನಬಾರ್ಡ್ ಮತ್ತು ಇತರೆ ಉದ್ಯೋಗಿಗಳಿಗೆ ಶುಭಾಶಯ ತಿಳಿಸಿದರು.

ಗ್ರಾಮೀಣ ಪ್ರದೇಶಗಳು ಎದುರಿಸುತ್ತಿರುವ ಸವಾಲಿನ ನಡುವೆ ನಾನು ನನ್ನ ಬಾಲ್ಯವನ್ನು ಗ್ರಾಮೀಣ ಪ್ರದೇಶದಲ್ಲಿ ಕಳೆದ. ಇದರಿಂದಾಗಿ ಅಲ್ಲಿನ ಸವಾಲುಗಳನ್ನು ಎದುರಿಸುವುದು ಕಲಿತೆ ಹಾಗೇ ಅವರ ಸಾಮರ್ಥ್ಯ ಅರಿತೆ. ಗ್ರಾಮೀಣ ಪ್ರದೇಶದ ಜನರು ಕಠಿಣ ಶ್ರಮದ ಹೊರತಾಗಿ ಅವರು ಸೀಮಿತ ಸೌಲಭ್ಯದಿಂದಾಗಿ ಅವಕಾಶದ ಕೊರತೆಯನ್ನು ಎದುರಿಸುತ್ತಿದ್ದಾರೆ ಎಂದರು.

2014ರಿಂದ ನಾನು ಕಚೇರಿ ಅಧಿಕಾರ ವಹಿಸಿಕೊಂಡಾಗಿನಿಂದಾಗಲೂ ಪ್ರತಿ ಘಳಿಗೆ ಗ್ರಾಮೀಣ ಭಾರತದ ಸೇವೆಗಾಗಿ ಕಾರ್ಯ ನಿರ್ವಹಿಸುತ್ತಿದ್ದೇನೆ. ಗ್ರಾಮೀಣ ಜನರಿಗೆ ಘನತೆಯ ಬದುಕು ರೂಪಿಸುವುದು ನಮ್ಮ ಸರ್ಕಾರದ ಮೊದಲ ಆದ್ಯತೆ ಆಗಿದೆ. ನಮ್ಮ ಗುರಿ ಗ್ರಾಮೀಣ ಭಾರತವನ್ನು ಸಬಲೀಕರಣಗೊಳಿಸುವುದು. ಅವರಿಗೆ ಅವಕಾಶಗಳ ನೀಡುವ ಮೂಲಕ ಮುನ್ನಡೆ ಸಾಧಿಸಲು ಸಹಾಯ ಮಾಡಿ, ವಲಸೆ ತಪ್ಪಿಸಿ, ಆರಾಮದಾಯಕ ಬದುಕು ಕಲ್ಪಿಸುವುದಾಗಿದೆ. ಇದನ್ನು ಸಾಧಿಸಲು ಪ್ರತಿ ಗ್ರಾಮದಲ್ಲಿ ಮೂಲಭೂತ ಸೌಲಭ್ಯದ ಖಾತ್ರಿಯ ಪ್ರಚಾರವನ್ನು ನಾವು ಆರಂಭಿಸಿದ್ದಾಗಿ ತಿಳಿಸಿದರು.

# ಚೀನಾ; ಭಾರತದ ಭೂ ಭಾಗದಲ್ಲಿ 2 ಕೌಂಟಿ ರಚನೆ

**ನವದೆಹಲಿ:** ಭಾರತದೊಂದಿಗೆ ಸ್ನೇಹ ಹಸ್ತ ಚಾಚಿ ನಂತರ ಮತ್ತೆ ಕ್ಯಾತೆ ತೆಗೆಯುವ ಚಾಳಿಯನ್ನು ಚೀನಾ ಮುಂದುವರಿಸಿದೆ. ಲಡಾಕ್ನಲ್ಲಿ ಮತ್ತೆ ಕಿರಿಕ್ ಮಾಡಿದ್ದು, ಚೀನಾ ಭಾರತದ ಭೂಭಾಗದಲ್ಲಿ ಅಕ್ರಮವಾಗಿ ಎರಡು ಕೌಂಟಿಗಳನ್ನು ನಿರ್ಮಿಸಿದೆ. ಚೀನಾದ ಈ ನಡೆಯನ್ನು ಭಾರತ ಬಲವಾಗಿ ಖಂಡಿಸಿದೆ.



ಚೀನಾದ ಈ ಪ್ರಯತ್ನಕ್ಕೆ ಭಾರತ ಸರ್ಕಾರ ಶುಕ್ರವಾರ ತೀಕ್ಷ್ಣವಾಗಿ ಪ್ರತಿಕ್ರಿಯಿಸಿದೆ. ಭಾರತೀಯ ಭೂಪ್ರದೇಶದಲ್ಲಿ ಅಕ್ರಮ ಚೀನೀ ಆಕ್ರಮಣವನ್ನು ನಾವು ಎಂದಿಗೂ ಒಪ್ಪಿಕೊಂಡಿಲ್ಲ ಎಂದು ವಿದೇಶಾಂಗ ಸಚಿವಾಲಯ ಖಾರವಾಗಿ ಉತ್ತರಿಸಿದೆ.

ಈ ಬಗ್ಗೆ ಮಾತನಾಡಿರುವ ಭಾರತೀಯ ವಿದೇಶಾಂಗ ಇಲಾಖೆಯ ವಕ್ತಾರ ರಣಧೀರ್ ಜೈಸ್ವಾಲ್ ಮಾತನಾಡಿ ಭಾರತೀಯ ಭೂಪ್ರದೇಶವನ್ನು ಅತಿಕ್ರಮಿಸಿರುವ ಚೀನಾದ ಕ್ರಮವನ್ನು ಭಾರತ ಎಂದಿಗೂ ಒಪ್ಪಿಕೊಂಡಿಲ್ಲ. ಚೀನಾದ ಹೋಟಾನ್ ಪ್ರಿಫೆಕ್ಚರ್ನಲ್ಲಿ ಎರಡು ಹೊಸ ಕೌಂಟಿಗಳ ಸ್ಥಾಪನೆಗೆ ಸಂಬಂಧಿಸಿದ ಪ್ರಕಟಣೆಯನ್ನು ನಾವು ನೋಡಿದ್ದೇವೆ. ಈ ಕೌಂಟಿಗಳೆಂದು ಕರೆಯಲ್ಪಡುವ ಅಧಿಕಾರ ವ್ಯಾಪ್ತಿಯ ಭಾಗಗಳು ಭಾರತದ ಕೇಂದ್ರಾಡಳಿತ ಪ್ರದೇಶವಾದ ಲಡಾಖ್ನಲ್ಲಿವೆ ಎಂದು ಹೇಳಿದ್ದಾರೆ. ಹೊಸ ಕೌಂಟಿಗಳ ನಿರ್ಮಾಣವು ಪ್ರದೇಶದ ಮೇಲೆ ನಮ್ಮ ಸಾರ್ವಭೌಮತ್ವದ ಬಗ್ಗೆ ಭಾರತದ ದೀರ್ಘಕಾಲೀನ ಮತ್ತು ಸ್ಥಿರವಾದ ನಿಲುವಿನ ಮೇಲೆ ಪರಿಣಾಮ ಬೀರುವುದಿಲ್ಲ ಅಥವಾ ಚೀನಾದ ಅಕ್ರಮ ಮತ್ತು ಬಲವಂತದ ಆಕ್ರಮಣಕ್ಕೆ ಒಪ್ಪಿಗೆ ನೀಡುವುದಿಲ್ಲ'' ಎಂದು ಜೈಸ್ವಾಲ್ ಹೇಳಿದ್ದಾರೆ.

# ಶೌಚಾಲಯದಲ್ಲಿ ಗುಂಡು ಹಾರಿಸಿಕೊಂಡು ಯೋಧ ಆತ್ಮಹತ್ಯೆ!

**ಸೂರತ್:** ಸೂರತ್ ಅಂತಾರಾಷ್ಟ್ರೀಯ ವಿಮಾನ ನಿಲ್ದಾಣದಲ್ಲಿ ಕೇಂದ್ರೀಯ ಕೈಗಾರಿಕಾ ಭದ್ರತಾ ಪಡೆಗೆ (ಸಿಐಎಸ್‌ಎಫ್) ಸೇರಿದ ಯೋಧರೊಬ್ಬರುತಮ್ಮ ಸೇವಾ ಶಸ್ತ್ರಾಸ್ತ್ರದಿಂದ ಗುಂಡು ಹಾರಿಸಿಕೊಂಡು ಆತ್ಮಹತ್ಯೆ ಮಾಡಿಕೊಂಡಿರುವ ಆಘಾತಕಾರಿ ಘಟನೆಯೊಂದು ವರದಿಯಾಗಿದೆ ಸಿಐಎಸ್‌ಎಫ್ ಸಿಬ್ಬಂದಿ,ಕರ್ತವ್ಯ ನಿರತ ಯೋಧರಾದ ಕಿಸಾನ್ ಸಿಂಗ್ (32) ಆತ್ಮಹತ್ಯೆಗೆ ಶರಣಾಗಿರುವ ವ್ಯಕ್ತಿ ಎಂದು ತಿಳಿದು ಬಂದಿದೆ. ಇಂದು(ಜ.4) ಮಧ್ಯಾಹ್ನ 2.10ರ ಸುಮಾರಿಗೆ ವಿಮಾನ ನಿಲ್ದಾಣದ ಶೌಚಾಲಯದಲ್ಲಿ ತಮ್ಮ ಸರ್ವೀಸ್ ರೈಫಲ್ನಿಂದ ಹೊಟ್ಟೆಗೆ ಗುಂಡು ಹಾರಿಸಿಕೊಂಡು ಆತ್ಮಹತ್ಯೆ ಮಾಡಿಕೊಂಡಿದ್ದಾರೆ ಎಂದು ಪೊಲೀಸ್ ಅಧಿಕಾರಿಯೊಬ್ಬರು ತಿಳಿಸಿದ್ದಾರೆ. ತಕ್ಷಣ ಅವರನ್ನು ಖಾಸಗಿ ಆಸ್ಪತ್ರೆಗೆ ಸಾಗಿಸಲಾಯಿತು. ಆದರೆ ಅಲ್ಲಿನ ವೈದ್ಯರು ಅವರು ಮೃತಪಟ್ಟಿರುವುದಾಗಿ ತಿಳಿಸಿದ್ದಾರೆ. ಆತ್ಮಹತ್ಯೆಗೆ ನಿಖರ ಕಾರಣ ಈವರೆಗೂ ತಿಳಿದು ಬಂದಿಲ್ಲ. ಈ ಬಗ್ಗೆ ಹೆಚ್ಚಿನ ತನಿಖೆ ನಡೆಯುತ್ತಿದೆ ಎಂದೂ ಅಧಿಕಾರಿಗಳು ತಿಳಿಸಿದ್ದಾರೆ. ಹಾಗೆ ಭಾರತದಾದ್ಯಂತ ವಿಮಾನ ನಿಲ್ದಾಣಗಳನ್ನು ಭದ್ರಪಡಿಸುವ ಜವಾಬ್ದಾರಿಯನ್ನು ಹೊಂದಿರುವ ಅರೆಸೈನಿಕ ಪಡೆ ಸಿಐಎಸ್‌ಎಫ್ ಕೂಡ ಈ ವಿಷಯದ ಬಗ್ಗೆ ಅಧಿಕೃತ ಹೇಳಿಕೆಯನ್ನು ಬಿಡುಗಡೆ ಮಾಡಿಲ್ಲ ಎನ್ನಲಾಗಿದೆ. ಕೆಲ ದಿನಗಳ ಹಿಂದೆಯಷ್ಟೇ ಛತ್ತೀಸಗಢದ ಸಶಸ್ತ್ರ ಪಡೆಯ (ಸಿಎಎಫ್) ಯೋಧಯೊಬ್ಬರು ಗುಂಡು ಹಾರಿಸಿಕೊಂಡು ಆತ್ಮಹತ್ಯೆ ಮಾಡಿಕೊಂಡಿರುವ ಘಟನೆ ರಾಯಪುರದಲ್ಲಿ ನಡೆದಿದೆ ಎಂದು ಪೊಲೀಸರು ತಿಳಿಸಿದ್ದರು. ಮೃತರನ್ನು ಸಿಎಎಫ್ನ 14ನೇ ಬೆಟಾಲಿಯನ್ಗೆ ಸೇರಿದ ಅನಿಲ್ ಸಿಂಗ್ ಗಹರ್ವಾರ್ ಎಂದು ಗುರುತಿಸಲಾಗಿತ್ತು. ರಾಖಿ ಪೊಲೀಸ್ ಠಾಣೆ ವ್ಯಾಪ್ತಿಯ ಪೊಲೀಸ್ ಹೆಡ್ಕ್ವಾರ್ಟರ್ನಲ್ಲಿ ಅನಿಲ್ ತಮ್ಮ ಸರ್ವೀಸ್ ರೈಫಲ್ನಿಂದಲೇ ಗುಂಡು ಹಾರಿಸಿಕೊಂಡು ತಡರಾತ್ರಿ ಆತ್ಮಹತ್ಯೆ ಮಾಡಿಕೊಂಡಿದ್ದಾರೆ ಎಂದು ಅಧಿಕಾರಿಯೊಬ್ಬರು ತಿಳಿಸಿದ್ದರು.




# ಡೇಟಿಂಗ್ ಆಪ್‌ನಲ್ಲಿ 500, ಸ್ನ್ಯಾಪ್ ಚಾಟ್‌ನಲ್ಲಿ 200 ಮಹಿಳೆಯರಿಗೆ ವಂಚನೆ, ಅಮೆರಿಕ ಮಾಡೆಲ್ ಅರೆಸ್ಟ್

**ನವದೆಹಲಿ:** ಡೇಟಿಂಗ್ ಆಪ್‌ನಲ್ಲಿ ಸ್ನ್ಯಾಪ್‌ಚಾಟ್‌ನಲ್ಲಿ 200 ಮಹಿಳೆಯರಿಗೆ ಅಮೆರಿಕ ಮಾಡೆಲ್ ಎಂದು ಹೇಳಿ ವಂಚಿಸಿದ್ದ 23 ವರ್ಷದ ಯುವಕನನ್ನು ದೆಹಲಿ ಪೊಲೀಸರು ಬಂಧಿಸಿದ್ದಾರೆ.

ತುಷಾರ್ ಬಿಶ್ತ್ ಬಂಧಿತ ಆರೋಪಿ. 18 ರಿಂದ 30 ವರ್ಷ ವಯಸ್ಸಿನ ಹುಡುಗಿಯರು ಮತ್ತು ಮಹಿಳೆಯರನ್ನು ಗುರಿಯಾಗಿಸಿಕೊಂಡು ಈತ ನಕಲಿ ಪ್ರೊಫೈಲ್ ರಚಿಸಿ ಕೃತ್ಯ ಎಸಗಿ ವಂಚಿಸುತ್ತಿದ್ದ.

ದೆಹಲಿ ನಿವಾಸಿ ತುಷಾರ್ ಬಿಬಿಎ ಪದವಿ ಓದಿದ್ದಾನೆ. ಕಳೆದ ಮೂರು ವರ್ಷಗಳಿಂದ ನೋಯ್ಡಾದ ಖಾಸಗಿ ಕಂಪನಿಯೊಂದರಲ್ಲಿ ಟೆಕ್ನಿಕಲ್ ರಿಕ್ರೂಟರ್ ಆಗಿ ಕೆಲಸ ಮಾಡುತ್ತಿದ್ದರೆ ರಾತ್ರಿ ವಂಚನೆ ಕೆಲಸಕ್ಕೆ ಇಳಿಯುತ್ತಿದ್ದ.

**ವಂಚನೆ ಹೇಗೆ?:** ನಾನು ಒಂದು ಪ್ರಾಜೆಕ್ಟ್‌ಗಾಗಿ ಭಾರತಕ್ಕೆ ಬಂದಿದ್ದೇನೆ ಎಂದು ಹೇಳಿ ಆರಂಭದಲ್ಲಿ ಪರಿಚಯ ಮಾಡಿಕೊಳ್ಳುತ್ತಿದ್ದ. ಚಾಟಿಂಗ್‌ನಲ್ಲಿ ಮೋಡಿ ಮಾಡಿ ಯುವತಿಯರು ತನ್ನ ಬಲೆಗೆ ಬೀಳಿಸುತ್ತಿದ್ದ. ನಂತರ ಅವರ ಖಾಸಗಿ ಚಿತ್ರವನ್ನು ಕಳುಹಿಸುವಂತೆ ಮನವಿ ಮಾಡುತ್ತಿದ್ದ. ಈತನ ಮಾತಿಗೆ ಮರುಳಾದ ಯುವತಿಯರು, ಮಹಿಳೆಯರು ತಮ್ಮ ಖಾಸಗಿ ಫೋಟೋ, ವಿಡಿಯೋಗಳನ್ನು ಕಳುಹಿಸುತ್ತಿದ್ದರು.

ಫೋಟೋ ಸಿಕ್ಕಿದ ಕೂಡಲೇ ಆತ ಹಣ ಕೇಳಲು ಆಂಭಿಸುತ್ತಿದ್ದ. ಹಣ ನೀಡದೇ ಇದ್ದರೆ ವಿಡಿಯೋ, ಫೋಟೋವನ್ನು ಆನ್‌ಲೈನ್‌ನಲ್ಲಿ ಅಪ್‌ಲೋಡ್ ಮಾಡುವುದಾಗಿ ಅಥವಾ ಡಾರ್ಕ್ ವೆಬ್‌ನಲ್ಲಿ ಮಾರಾಟ ಮಾಡುವುದಾಗಿ ಬೆದರಿಕೆ ಹಾಕುತ್ತಿದ್ದ. ಈತನ ಬ್ಲ್ಯಾಕ್ ಮೇಲ್‌ಗೆ ಹೆದರಿ ಹಲವು ಯುವತಿಯರು ಕೇಳಿದ್ದಷ್ಟು ಹಣವನ್ನು ನೀಡುತ್ತಿದ್ದರು.

**ಸಿಕ್ಕಿಬಿದ್ದಿದ್ದು ಹೇಗೆ?** ದೆಹಲಿ ವಿಶ್ವವಿದ್ಯಾನಿಲಯದ ವಿದ್ಯಾರ್ಥಿನಿಯೊಬ್ಬಳು ಈತನ ನಾಟಕಕ್ಕೆ ಬಲಿಯಾಗಿ ತನ್ನ ಖಾಸಗಿ ಫೋಟೋ, ವಿಡಿಯೋವನ್ನು ವಾಟ್ಸಪ್‌ನಲ್ಲಿ ಕಳುಹಿಸಿದ್ದಳು. ನಂತರದ ದಿನಗಳಲ್ಲಿ ವೈಯಕ್ತಿಕ ಭೇಟಿ ಮಾಡಬೇಕೆಂದು ಈಕೆ ಕೋರಿದಾಗ ತುಷಾರ್ ಪ್ರತಿಬಾರಿಯೂ ಕೆಲಸದ ನೆಪ ಹೇಳಿ ಭೇಟಿಯನ್ನು ತಪ್ಪಿಸುತ್ತಿದ್ದ. ಹೀಗಿದ್ದರೂ ವಿದ್ಯಾರ್ಥಿನಿ ತುಷಾರ್‌ನನ್ನು ನಂಬಿದ್ದಳು.

ಒಂದು ದಿನ ವಿದ್ಯಾರ್ಥಿನಿಯ ಮೊಬೈಲ್ ಫೋನಿಗೆ ಖಾಸಗಿ ವಿಡಿಯೋ ಬಂದಿದೆ. ತನ್ನ ವಿಡಿಯೋ ನೋಡಿ ಶಾಕ್ ಆಗಿದ್ದಾಳೆ. ಈ ವೇಳೆ ಈ ವಿಡಿಯೋ ಬಂದಿದ್ದು ಬೇರೆ ಯಾರಿಂದಲೂ ಅಲ್ಲ, ಅಮೆರಿಕದ ಮಾಡೆಲ್ ಎಂದು ಪರಿಚಯ ಮಾಡಿಕೊಂಡ ವ್ಯಕ್ತಿಯಿಂದಲೇ ಬಂದಿರುವುದು ತಿಳಿಯುತ್ತದೆ.

ನಂತರ ಚಾಟ್ ವೇಳೆ ತುಷಾರ್ ಹಣ ಕೇಳಿದ್ದಾನೆ. ಯುವತಿ ತನ್ನ ಕೈಲಾದಷ್ಟು ಹಣವನ್ನು ನೀಡಿದ್ದಾಳೆ. ಹಣ ಸಿಕ್ಕಿದ ಬಳಿಕ ಮತ್ತಷ್ಟು ಹಣವನ್ನು ಪಾವತಿ ಮಾಡಬೇಕೆಂದು ಬೇಡಿಕೆ ಇಟ್ಟಿದ್ದಾನೆ. ಈ ವೇಳೆ ಯುವತಿ ನಾನು ಶ್ರೀಮಂತ ಕುಟುಂಬದಿಂದ ಬಂದವಳಲ್ಲ, ನನ್ನ ಬಳಿ ಇಷ್ಟೇ ಹಣ ಇರುವುದು ಎಂದಿದ್ದಾಳೆ. ಹೀಗಿದ್ದರೂ ಆತ ಹೆಚ್ಚಿನ ಹಣಕ್ಕೆ ಬೇಡಿಕೆ ಇಡುತ್ತಲೇ ಇದ್ದ. ಪರಿಸ್ಥಿತಿಯ ಗಂಭೀರತೆಯನ್ನು ಅರಿತ ವಿದ್ಯಾರ್ಥಿನಿ ತನ್ನ ಮನೆಯವರಿಗೆ ತಿಳಿಸಿ ಪೊಲೀಸ್ ಠಾಣೆಗೆ ತೆರಳಿ ದೂರು ನೀಡಿದ್ದಾಳೆ.

ಪೊಲೀಸರು ತಾಂತ್ರಿಕ ವಿವರಗಳನ್ನು ಬಳಸಿಕೊಂಡು ತುಷಾರ್ ಬಿಶ್ತ್‌ನನ್ನು ಪತ್ತೆಹಚ್ಚಿ ಬಂಧಿಸಿದ್ದಾರೆ. ವಿಚಾರಣೆ ವೇಳೆ 500ಕ್ಕೂ ಹೆಚ್ಚು ಮಹಿಳೆಯರಿಗೆ ಕಿರುಕುಳ ನೀಡಿದ್ದೇನೆ ಎಂದು ಒಪ್ಪಿಕೊಂಡಿದ್ದಾನೆ. ತನಿಖೆ ವೇಳೆ ಫೋನಿನಲ್ಲಿ ಸಂಗ್ರಹವಾಗಿದ್ದ ಮಹಿಳೆಯರ ಖಾಸಗಿ ವಿಡಿಯೋಗಳನ್ನು ಪೊಲೀಸರು ಪತ್ತೆ ಮಾಡಿದ್ದಾರೆ.

# ದೇವೇಂದ್ರ ಫಡ್ನವಿಸ್‌ಗೆ ಸಾಮ್ನಾ ಶ್ಲಾಘನೆ





**ಮುಂಬೈ:** ಮಹಾರಾಷ್ಟ್ರದಲ್ಲಿ ರಾಜಕೀಯ ಮರು ಧ್ರುವೀಕರಣವಾಗಲಿದೆಯೆ ಎಂಬ ಚರ್ಚೆ ಮುನ್ನೆಲೆಗೆ ಬಂದಿದೆ. ಅದಕ್ಕೆ ಕಾರಣವಾಗಿರುವುದು ಶಿವಸೇನೆ ಮುಖವಾಣಿ 'ಸಾಮ್ನಾ', ಮುಖ್ಯಮಂತ್ರಿ ದೇವೇಂದ್ರ ಫಡ್ನವಿಸ್ ರನ್ನು ಮುಕ್ತ ಕಂಠದಿಂದ ಶ್ಲಾಘಿಸಿರುವುದು.

ಇತ್ತೀಚೆಗೆ, ಛತ್ತೀಸ್ ಗಢ ರಾಜ್ಯದ ಗಡಿಗೆ ಹೊಂದಿಕೊಂಡಂತಿರುವ ನಕ್ಸಲ್ ಪೀಡಿತ ಗಡ್ಚಿರೋಲಿ ಜಿಲ್ಲೆಗೆ ಭೇಟಿ ನೀಡಿದ್ದ ಮುಖ್ಯಮಂತ್ರಿ ದೇವೇಂದ್ರ ಫಡ್ನವಿಸ್, ಅಲ್ಲಿ ಅಭಿವೃದ್ಧಿ ಕಾಮಗಾರಿಗಳಿಗೆ ಚಾಲನೆ ನೀಡಿದ್ದರು. ಇದರ ಬೆನ್ನಿಗೇ, ದೇವೇಂದ್ರ ಫಡ್ನವಿಸ್ ರ ನಡೆಯನ್ನು ಶ್ಲಾಘಿಸಿರುವ 'ಸಾಮ್ನಾ' ''ದೇವೇಂದ್ರ ಫಡ್ನವಿಸ್ ಗಡ್ಚಿರೋಲಿ ಜಿಲ್ಲೆಯಲ್ಲಿ ಹಲವು ಅಭಿವೃದ್ಧಿ ಯೋಜನೆಗಳಿಗೆ ಶಿಲಾನ್ಯಾಸ ನೆರವೇರಿಸಿದ್ದಾರೆ. ಈ ನಡೆಯಿಂದ ಗಡ್ಚಿರೋಲಿಯಲ್ಲಿ ಮಾತ್ರವಲ್ಲದೆ, ಇಡೀ ಮಹಾರಾಷ್ಟ್ರದಲ್ಲಿ ಪ್ರಗತಿಯ ಹೊಸ ಯುಗಕ್ಕೆ ನಾಂದಿಯಾಗಲಿದೆ. ನಾವು ಅವರನ್ನು ಅಭಿನಂದಿಸುತ್ತೇವೆ ಹಾಗೂ ಅವರ ಈ ಉಪಕ್ರಮಗಳಿಂದ ಆದಿವಾಸಿಗಳ ಬದುಕು ಬದಲಾವಣೆ ಯಾಗಲಿದೆ ಎಂದು ಆಶಿಸುತ್ತೇವೆ'' ಎಂದು ಲೇಖನವೊಂದರಲ್ಲಿ ಶ್ಲಾಘಿಸಿದೆ.

''ಒಂದು ವೇಳೆ ದೇವ ಭಾವು ಏನಾದರೂ ನಕ್ಸಲೀಯರ ಜಿಲ್ಲೆಯಾದ ಗಡ್ಚಿರೋಲಿಗೆ ಉಕ್ಕು ನಗರ ಎಂಬ ನೂತನ ಗುರುತು ನೀಡಲು ಬಯಸಿದರೆ, ಆಗ ಅದು ಸ್ವಾಗತಾರ್ಹವಾಗಲಿದೆ ಹಾಗೂ ಅವರು ಶ್ಲಾಘನೆಗೆ ನಿಜಕ್ಕೂ ಅರ್ಹರಾಗಲಿದ್ದಾರೆ'' ಎಂದೂ ಪ್ರಶಂಸಿಸಿದೆ.

'ಸಾಮ್ನಾ'ದಲ್ಲಿ ಪ್ರಕಟವಾಗಿರುವ ಲೇಖನವನ್ನು ಸಮರ್ಥಿಸಿರುವ 'ಸಾಮ್ನಾ' ಪತ್ರಿಕೆಯ ಕಾರ್ಯಕಾರಿ ಸಂಪಾದಕ ಸಂಜಯ್ ರಾವತ್, ''ನಾವು ವಿರೋಧ ಪಕ್ಷದಲ್ಲಿದ್ದರೂ, ಗಡ್ಚಿರೋಲಿ ಜಿಲ್ಲೆಯ ನಿಯಂತ್ರಣವನ್ನು ಫಡ್ನವಿಸ್ ತೆಗೆದುಕೊಂಡಿರುವುದರಿಂದ ಈ ಶ್ಲಾಘನೆ ಮತ್ತು ಸ್ವಾಗತ'' ಎಂದು ಸಮರ್ಥಿಸಿಕೊಂಡಿದ್ದಾರೆ. ಅವರೊಂದಿಗೆ, ಎನ್ಸಿಪಿ ವರಿಷ್ಠ ಶರದ್ ಪವಾರ್ ಅವರ ಪುತ್ರಿ ಸುಪ್ರಿಯಾ ಸುಳೆ ಕೂಡಾ ದೇವೇಂದ್ರ ಫಡ್ನವಿಸ್ ನಡೆಯನ್ನು ಪ್ರಶಂಸಿಸಿದ್ದು, ''ತಮ್ಮ ಸಂಪೂರ್ಣ ಸಾಮರ್ಥ್ಯದೊಂದಿಗೆ ಕೆಲಸ ಮಾಡುತ್ತಿರುವುದು ಕೇವಲ ಓರ್ವ ವ್ಯಕ್ತಿ ಮಾತ್ರ. ಉಳಿದವರು ಎಲ್ಲಿಯೂ ಕಾಣುತ್ತಲೇ ಇಲ್ಲ. ದೇವೇಂದ್ರ ಫಡ್ನವಿಸ್ ಮಾತ್ರ ಕಾರ್ಯಾಚರಣೆಯ ಹುಮ್ಮಸ್ಸಿನಲ್ಲಿದ್ದಾರೆ. ಇದು ಒಳ್ಳೆಯದಾಗಿದ್ದು, ನಾನು ಅವರಿಗೆ ಒಳಿತನ್ನು ಬಯಸುತ್ತೇನೆ. ಇದು ಸಕಾರಾತ್ಮಕ ಬೆಳವಣಿಗೆಯಾಗಿದ್ದು, ಈ ಹಿಂದೆ ಗಡ್ಚಿರೋಲಿ ಜಿಲ್ಲೆಯ ಉಸ್ತುವಾರಿ ಸಚಿವರಾಗಿದ್ದ ಆರ್.ಆರ್.ಪಾಟೀಲ್ ಮಾತ್ರ ಜಿಲ್ಲೆಯ ಪ್ರವಾಸ ಕೈಗೊಂಡು, ಪ್ರಶಂಸಾರ್ಹ ಕೆಲಸ ಮಾಡಿದ್ದರು. ಇಂದು ದೇವೇಂದ್ರ ಫಡ್ನವಿಸ್ ಕೂಡಾ ಪಾಟೀಲರ ಪರಂಪರೆಯನ್ನು ಮುಂದುವರಿಸಿರುವುದು ಒಳ್ಳೆಯ ಭಾವನೆ ಮೂಡಿಸುತ್ತಿದೆ'' ಎಂದು ಶ್ಲಾಘಿಸಿದ್ದಾರೆ.

# ಸ್ಕೀಡ್ ಆಗಿ ಪ್ರಪಾತಕ್ಕೆ ಬಿದ್ದ ಸೇನಾ ವಾಹನ: ನಾಲ್ವರು ಯೋಧರು ಹುತಾತ್ಮ



**ಶ್ರೀನಗರ(ಜಮ್ಮು ಮತ್ತು ಕಾಶ್ಮೀರ):** ಉತ್ತರ ಕಾಶ್ಮೀರದ ಬಂಡಿಪೋರಾ ಜಿಲ್ಲೆಯ ಎಸ್. ಕೆ.ಪಯೀನ್ ಪ್ರದೇಶದ ವುಲ್ಲರ್ ವ್ಯೂಪಾಯಿಂಟ್ ಬಳಿ ಯೋಧರನ್ನು ಕರೆದೊಯ್ಯುತ್ತಿದ್ದ ವಾಹನ ಸ್ಕಿಡ್ ಆಗಿ ರಸ್ತೆ ಮೇಲಿಂದ ಪ್ರಪಾತಕ್ಕೆ ಬಿದ್ದ ಪರಿಣಾಮ ಕನಿಷ್ಠ ನಾಲ್ವರು ಸೈನಿಕರು ಸಾವನ್ನಪ್ಪಿದ್ದಾರೆ ಮತ್ತು ಓರ್ವ ಸೈನಿಕ ಗಂಭೀರವಾಗಿ ಗಾಯಗೊಂಡಿದ್ದಾನೆ ಎಂದು ಅಧಿಕಾರಿಗಳು ತಿಳಿಸಿದ್ದಾರೆ.

ಗಾಯಗೊಂಡ ಸೈನಿಕರನ್ನು ತಕ್ಷಣ ಚಿಕಿತ್ಸೆಗಾಗಿ ಹತ್ತಿರದ ಆಸ್ಪತ್ರೆಗೆ ರವಾನಿಸಲಾಗಿದೆ ಎಂದು ಅಧಿಕಾರಿಯೊಬ್ಬರು ಮಾಹಿತಿ ನೀಡಿದ್ದಾರೆ.

ಬಂಡಿಪೋರಾ ಜಿಲ್ಲಾಸ್ಪತ್ರೆಯ ವೈದ್ಯಕೀಯ ಅಧೀಕ್ಷಕ ಡಾ.ಮಸರತ್ ಇಕ್ಬಾಲ್ ವಾನಿ ಮಾತನಾಡಿ, ಅಪಘಾತದ ಮಾಹಿತಿ ಸಿಕ್ಕ ತಕ್ಷಣ ನಾವು ನಮ್ಮ ಆಂಬ್ಯುಲೆನ್ಸ್ ಅನ್ನು ಕಳುಹಿಸಿದ್ದೆವು. ಗಾಯಗೊಂಡ ಸಿಬ್ಬಂದಿಯನ್ನು ತಕ್ಷಣ ಸ್ಥಳೀಯ ಆಸ್ಪತ್ರೆಗೆ ಕರೆದೊಯ್ಯಲಾಯಿತು ಮತ್ತು ನಂತರ ಹೆಚ್ಚಿನ ಚಿಕಿತ್ಸೆಗಾಗಿ ಶ್ರೀನಗರ ಆಸ್ಪತ್ರೆಗೆ ರವಾನಿಸಲಾಯಿತು ಎಂದು ಹೇಳಿದರು.

ಲೆಫ್ಟಿನೆಂಟ್ ಗವರ್ನರ್ ಮನೋಜ್ ಸಿನ್ಹಾ ಪ್ರತಿಕ್ರಿಯಿಸಿ, ಬಂಡಿಪೋರಾದಲ್ಲಿ ಸಂಭವಿಸಿದ ಅಪಘಾತದಲ್ಲಿ ಭಾರತೀಯ ಸೇನಾ ಸಿಬ್ಬಂದಿಯ ಪ್ರಾಣಹಾನಿಯಿಂದ ತೀವ್ರ ದುಃಖಿತನಾಗಿದ್ದೇನೆ. ಅವರ ಸೇವೆ ಮತ್ತು ಬದ್ಧತೆಗೆ ರಾಷ್ಟ್ರವು ಕೃತಜ್ಞವಾಗಿದೆ. ಮೃತರಿಗೆ ನನ್ನ ಸಂತಾಪಗಳು. ಗಾಯಗೊಂಡವರು ಶೀಘ್ರವಾಗಿ ಚೇತರಿಸಿಕೊಳ್ಳಲಿ ಎಂದು ಪ್ರಾರ್ಥಿಸುತ್ತೇನೆ ಎಂದು ತಿಳಿಸಿದ್ದಾರೆ.

ಮೃತರಿಗೆ ಜಮ್ಮು ಮತ್ತು ಕಾಶ್ಮೀರದ ಮುಖ್ಯಮಂತ್ರಿ ಒಮರ್ ಅಬ್ದುಲ್ಲಾ ಮತ್ತು ಲೋಕಸಭಾ ವಿಪಕ್ಷ ನಾಯಕ ರಾಹುಲ್ ಗಾಂಧಿ ಸಂತಾಪ ಸೂಚಿಸಿದ್ದಾರೆ.

# ವಿದೇಶದಲ್ಲಿದ್ದುಕೊಂಡೇ ಪತ್ನಿಗೆ ತ್ರಿವಳಿ ತಲಾಖ್ ನೀಡಿದ ಪತಿ

**ಮುಂಬೈ:** ವರದಕ್ಷಿಣೆ ಬೇಡಿಕೆಗಾಗಿ ಪತಿ ಮತ್ತು ಆತನ ಕುಟುಂಬಸ್ಥರು ಕಿರುಕುಳ ನೀಡುತ್ತಿದ್ದಾರೆ ಎಂದು ಮಹಿಳೆಯೊಬ್ಬರು ಆರೋಪಿಸಿದ್ದಾರೆ. ಜತೆಗೆ ಪತಿ ವಿದೇಶದಲ್ಲಿದ್ದುಕೊಂಡು ತನಗೆ ವಿಚ್ಛೇದನ ನೀಡಿದ್ದಾರೆ ಎಂದು ತಿಳಿಸಿದ್ದಾರೆ. ಮಹಿಳೆಯ ಪತಿ ಇಂಗ್ಲೆಂಡ್ನಲ್ಲಿದ್ದು ಆತ ಈಕೆಗೆ ವಿಡಿಯೊ ಕರೆ ಮೂಲಕ ತ್ರಿವಳಿ ತಲಾಖ್ ನೀಡಿದ್ದಾನೆ ಎಂದು ತಿಳಿದು ಬಂದಿದೆ. ಮುಸ್ಲಿಂ ಮಹಿಳೆಯರ (ವಿವಾಹ ಹಕ್ಕುಗಳ ರಕ್ಷಣೆ) ಮಸೂದೆ ಮತ್ತು ಭಾರತೀಯ ನ್ಯಾಯ ಸಂಹಿತಾ ಅಡಿಯಲ್ಲಿ ಆಕೆಯ ಪತಿ ಹಾಗೂ ಕುಟುಂಬಸ್ಥರ ವಿರುದ್ಧ ಪೊಲೀಸರು ಪ್ರಕರಣ ದಾಖಲಿಸಿದ್ದಾರೆ. ಮಹಿಳೆ ಮುಂಬೈನ ಸೀವುಡ್ಸ್ ನಿವಾಸಿ. ಆಕೆ ಪೊಲೀಸರಿಗೆ ದೂರು ನೀಡಿದ್ದು, ಪತಿ ಹಾಗೂ ಆತನ ಕುಟುಂಬಸ್ಥರ ವಿರುದ್ಧ ವರದಕ್ಷಿಣೆ ಆರೋಪ ಹೊರಿಸಿದ್ದಾರೆ. ಅವರ ಪತಿ ಪತಿ ಇಂಗ್ಲೆಂಡ್ನಲ್ಲಿದ್ದು ಆತ ವಿಡಿಯೊ ಕರೆ ಮೂಲಕ ತ್ರಿವಳಿ ತಲಾಖ್ ನೀಡಿದ್ದಾರೆ ಎಂದು ತಿಳಿಸಿದ್ದಾರೆ. ಈ ಬಗ್ಗೆ ಮಾತನಾಡಿದ ಮಹಿಳೆ 2022ರಲ್ಲಿ ಆಕಿಬ್ ಭಟಿವಾಲಾ ಅವರೊಂದಿಗೆ ಮುಸ್ಲಿಂ ಪದ್ಧತಿಯಂತೆ ವಿವಾಹವಾಗಿರುವುದಾಗಿ ವಿವರಿಸಿದ್ದಾರೆ. ಆರಂಭದಲ್ಲಿ ಎಲ್ಲವೂ ಸರಿಯಾಗಿ ಇತ್ತು. ನಂತರ ವಡಾಲಾದಲ್ಲಿರುವ ಅತ್ತೆಯ ನಿವಾಸಕ್ಕೆ ತೆರಳಿದ ನಂತರ ಕಿರುಕುಳ ಪ್ರಾರಂಭವಾಯಿತು. ಅತ್ತೆ ಕೂಡ ತಮ್ಮೊಂದಿಗೆ ಇಂಗ್ಲೆಂಡ್ಗೆ ಬಂದಿದ್ದರು. ಅಲ್ಲಿಂದ ಅವರು ವರದಕ್ಷಿಣೆ ಕಿರುಕುಳ ಪ್ರಾರಂಭಿಸಿದ್ದರು ಎಂದು ಹೇಳಿದ್ದಾರೆ.ಕೌಟುಂಬಿಕ ಕಲಹದ ಹಿನ್ನೆಲೆಯಲ್ಲಿ ಪತಿ ತನ್ನ ಚಿನ್ನಾಭರಣಗಳನ್ನು ಮುಟ್ಟುಗೋಲು ಹಾಕಿಕೊಂಡು ಭಾರತಕ್ಕೆ ವಾಪಸ್ ಕಳುಹಿಸಿದ್ದು, ಸಂಪರ್ಕ ಕಡಿತಗೊಳಿಸಿದ್ದಾರೆ ಎಂದು ಸಂತ್ರಸ್ತೆ ದೂರಿದ್ದಾರೆ. ಇದಾದ ಬಳಿಕ ವಿಡಿಯೊ ಕರೆಯಲ್ಲಿ ತ್ರಿವಳಿ ತಲಾಖ್ ಮೂಲಕ ವಿಚ್ಛೇದನ ನೀಡಿದ್ದಾರೆ ಎಂದು ತಿಳಿಸಿದ್ದಾರೆ. ಇಷ್ಟಾದರೂ ತಾನು ಗಂಡನ ಮನೆಗೆ ಹಿಂದಿರುಗಿದ ನಂತರವೂ ಅವರು ಮನೆ ಒಳಗೆ ಪ್ರವೇಶ ನಿರಾಕರಿಸಿದರು ಎಂದು ಮಾಹಿತಿ ನೀಡಿದ್ದಾರೆ. ಮುಂಬೈ ಪೊಲೀಸರು ಪತಿ ಮತ್ತು ಅತ್ತೆಯ ವಿರುದ್ಧ ವರದಕ್ಷಿಣೆ ಕಿರುಕುಳ ಪ್ರಕರಣದ ತನಿಖೆ ನಡೆಸುತ್ತಿದ್ದಾರೆ.

# ಪತ್ನಿಯ ಕಿರುಕುಳದ ಬಗ್ಗೆ ವೀಡಿಯೋ ಮಾಡಿ ವ್ಯಕ್ತಿ ಆತ್ಮಹತ್ಯೆ

**ಗಾಂಧಿನಗರ:** ಕೆಲ ದಿನಗಳ ಹಿಂದೆಯಷ್ಟೇ ಉತ್ತರ ಪ್ರದೇಶ ಮೂಲದ ಅತುಲ್ ಸುಭಾಷ್ ಖಿನ್ನತೆಗೆ ಒಳಗಾಗಿ 40ಕ್ಕೂ ಹೆಚ್ಚು ಪುಟಗಳ ಡೆತ್ ನೋಟ್ ಬರೆದಿಟ್ಟು ಆತ್ಮಹತ್ಯೆ ಮಾಡಿಕೊಂಡಿದ್ದ ಪ್ರಕರಣ ಇಡೀ ದೇಶಾದ್ಯಂತ ಸದ್ದು ಮಾಡಿತ್ತು. ಇದೀಗ ಅಂತಹದ್ದೇ ಪ್ರಕರಣ ಗುಜರಾತ್‌ನಲ್ಲಿ ನಡೆದಿದೆ. ಪತ್ನಿಯ ಕಿರುಕುಳದ ಬಗ್ಗೆ ವೀಡಿಯೋ ಮಾಡಿಟ್ಟು ಗುಜರಾತ್‌ನ 39 ವರ್ಷದ ವ್ಯಕ್ತಿ ಆತ್ಮಹತ್ಯೆ ಮಾಡಿಕೊಂಡಿದ್ದಾನೆ. ಅಲ್ಲದೇ ನನ್ನ ಪತ್ನಿಗೆ ತಕ್ಕ ಪಾಠ ಕಲಿಸಿ ಎಂದು ವೀಡಿಯೋದಲ್ಲಿ ಹೇಳಿದ್ದಾನೆಂದು ವರದಿಯಾಗಿದೆ. ವಿಡಿಯೋ ಆಧರಸಿ ಮಹಿಳೆ ವಿರುದ್ಧ ಗುಜರಾತ್‌ನ ಬೊಟಾಡ್ ಪೊಲೀಸರು ಮೃತನ ಪತ್ನಿ ವಿರುದ್ಧ ಪ್ರಕರಣ ದಾಖಲಿಸಿದ್ದಾರೆ.

**ಏನಿದು ಪ್ರಕರಣ?:** ಕಳೆದ ಡಿಸೆಂಬರ್ 30ರಂದು ಬೋಟಾಡ್‌ನ ಜಮ್ರಾಲಾ ಗ್ರಾಮದಲ್ಲಿ ವ್ಯಕ್ತಿಯೊಬ್ಬರ ಶವ ಮನೆಯ ಚಾವಣಿಗೆ ನೇಣು ಬಿಗಿದ ಸ್ಥಿತಿಯಲ್ಲಿ ಪತ್ತೆಯಾಗಿತ್ತು. ಬಳಿಕ ಮೃತನ ಕುಟುಂಬಸ್ಥರಿಗೆ ಆತನ ಮೊಬೈಲ್‌ನಲ್ಲಿದ್ದ ವಿಡಿಯೋ ರೆಕಾರ್ಡಿಂಗ್ ಸಿಕ್ಕಿತ್ತು. ಈ ವೀಡಿಯೋನಲ್ಲಿ ಮೃತನು, ನನ್ನ ಸಾವಿಗೆ ಕಾರಣವಾದ ನನ್ನ ಹೆಂಡತಿಗೆ ತಕ್ಕ ಪಾಠ ಕಲಿಸಿ ಎಂದೂ ಹೇಳಿಕೊಂಡಿದ್ದಾನೆ. ಮಹಿಳೆ ತನ್ನ ಪತಿಗೆ ಮಾನಸಿಕ ಕಿರುಕುಳ ನೀಡಿದ್ದಾಳೆ, ಆತ್ಮಹತ್ಯೆ ಮಾಡಿಕೊಳ್ಳಲು ಪ್ರೇರೇಪಿಸುವಂತೆ ಮಾಡಿರುವ ಬಗ್ಗೆಯೂ ಆತ ಹೇಳಿಕೊಂಡಿದ್ದಾನೆಂದು ಬೋಟಾಡ್ ಗ್ರಾಮಾಂತರ ಠಾಣೆ ಪೊಲೀಸರು ವಿವರಿಸಿದ್ದಾರೆ.

# ಕೇಜ್ರಿವಾಲ್ ವಿರುದ್ಧ ಪರ್ವೇಶ್ ವರ್ಮಾ ಸ್ಪರ್ಧೆ



**ನವದೆಹಲಿ:** ಮುಂಬರಲಿರುವ ದೆಹಲಿ ವಿಧಾನಸಭೆ ಚುನಾವಣೆಗೆ ಬಿಜೆಪಿ) ತನ್ನ 29 ಅಭ್ಯರ್ಥಿಗಳ ಮೊದಲ ಪಟ್ಟಿಯನ್ನು ಬಿಡುಗಡೆ ಮಾಡಿದೆ

ಮಾಜಿ ಮುಖ್ಯಮಂತ್ರಿ ಹಾಗೂ ಎಎಪಿ ಮುಖ್ಯಸ್ಥ ಅರವಿಂದ ಕೇಜ್ರಿವಾಲ್ ವಿರುದ್ಧ ಮಾಜಿ ಸಂಸದ ಪರ್ವೇಶ್ ಸ್ಪರ್ಧಿಸಲಿದ್ದು, ಮುಖ್ಯಮಂತ್ರಿ ಅತಿಶಿ ಹೆಸರು ಘೋಷಣೆಯಾಗಿರುವ ಕಲ್ಕಾಜಿ ಕ್ಷೇತ್ರದಿಂದ ಮಾಜಿ ಸಂಸದ ರಮೇಶ್ ಬಿಧುರಿ ಅವರನ್ನು ಬಿಜೆಪಿ ಚುನಾವಣಾ ಕಣಕ್ಕಿಳಿಸಿದೆ. ಪಕ್ಷದ ರಾಷ್ಟ್ರೀಯ ಪದಾಧಿಕಾರಿಗಳಾದ ದುಶ್ಯಂತ್ ಕುಮಾರ್ ಗೌತಮ್ ಹಾಗೂ ಆಶಿಶ್ ಸೂದ್ ಅವರನ್ನು ಕ್ರಮವಾಗಿ ಕರೋಲ್ ಬಾಗ್ ಹಾಗೂ ಜನಕಪುರಿ ಕ್ಷೇತ್ರದಿಂದ, ಅರವಿಂದರ್ ಸಿಂಗ್ ಲವ್ಲಿ ಅವರನ್ನು ಗಾಂಧಿನಗರ, ಎಎಪಿ ಮಾಜಿ ನಾಯಕ ಕೈಲಾಶ್ ಗೆಹಲೋತ್ ಅವರನ್ನು ಬಿಜ್ವಾಸನ್ನಿಂದ ಸ್ಪರ್ಧೆಗೆ ಇಳಿಸಿದೆ. ದೆಹಲಿ ಬಿಜೆಪಿ ಮಾಜಿ ಅಧ್ಯಕ್ಷ ಸತೀಶ್ ಉಪಾಧ್ಯಾಯ ಅವರು ಮಾಳವೀಯ ನಗರದಿಂದ ಸ್ಪರ್ಧಿಸಲಿದ್ದಾರೆ.

70 ಸದಸ್ಯ ಬಲದ ದೆಹಲಿ ವಿಧಾನಸಭೆಗೆ ಫೆಬ್ರುವರಿಯಲ್ಲಿ ಚುನಾವಣೆ ನಡೆಯಲಿದೆ ಎಂದು ಮೂಲಗಳು ತಿಳಿಸಿವೆ.

ಫೆಬ್ರವರಿಯಲ್ಲಿ ನಡೆಯಲಿರುವ ದೆಹಲಿ ವಿಧಾನಸಭಾ ಚುನಾವಣೆಗೆ ತನ್ನ ಅಭ್ಯರ್ಥಿಗಳ ಮೂರನೇ ಪಟ್ಟಿಯನ್ನು ಕಾಂಗ್ರೆಸ್ ಶುಕ್ರವಾರ ಬಿಡುಗಡೆ ಮಾಡಿದ್ದು, ಕೇವಲ ಒಂದು ಕ್ಷೇತ್ರಕ್ಕೆ ಮಾತ್ರ ಅಭ್ಯರ್ಥಿ ಹೆಸರನ್ನು ಘೋಷಿಸಲಾಗಿದೆ. ಅಖಿಲ ಭಾರತ ಮಹಿಳಾ ಕಾಂಗ್ರೆಸ್ನ ರಾಷ್ಟ್ರೀಯ ಅಧ್ಯಕ್ಷೆ ಅಲ್ಕಾ ಲಾಂಬಾ ಅವರನ್ನು ಕಲ್ಕಾಜಿ ಕ್ಷೇತ್ರದಲ್ಲಿ ಕಣಕ್ಕಿಳಿಸಲು ಕೇಂದ್ರ ಚುನಾವಣಾ ಸಮಿತಿ ಅನುಮೋದಿಸಿದೆ ಎಂದು ಅಖಿಲ ಭಾರತ ಕಾಂಗ್ರೆಸ್ ಸಮಿತಿ ಹೇಳಿದೆ. ಅಲ್ಕಾ ಲಾಂಬಾ ಈ ಹಿಂದೆ 2015ರಲ್ಲಿ ಚಾಂದಿನಿ ಚೌಕ ಕ್ಷೇತ್ರದಿಂದ ಎಎಪಿ ಅಭ್ಯರ್ಥಿಯಾಗಿ ಸ್ಪರ್ಧಿಸಿ ಗೆಲುವು ಸಾಧಿಸಿದ್ದರು. ಬಳಿಕ ಸೆಪ್ಟೆಂಬರ್ 2019ರಲ್ಲಿ ಕಾಂಗ್ರೆಸ್ಗೆ ಸೇರ್ಪಡೆಯಾಗಿದ್ದರು.

# ವಿಶ್ವದ ಅತ್ಯಂತ ಹಿರಿಯ ವ್ಯಕ್ತಿ, ಜಪಾನ್‌ನ ಮಹಿಳೆ ನಿಧನ



**ಟೋಕಿಯೊ:** ವಿಶ್ವದ ಅತ್ಯಂತ ಹಿರಿಯ ವ್ಯಕ್ತಿ ಎಂಬ ದಾಖಲೆ ಬರೆದಿದ್ದ ಜಪಾನ್ನ ಮಹಿಳೆ ಟೊಮಿಕೊ ಇಟೂಕಾ 116ನೇ ವಯಸ್ಸಿನಲ್ಲಿ ನಿಧನರಾಗಿದ್ದಾರೆ ಎಂದು ಅಧಿಕಾರಿಗಳು ಶನಿವಾರ ಹೇಳಿದ್ದಾರೆ.

ಹ್ಯೋಗೊ ಪ್ರಾಂತದ ಅಶಿಯಾ ನಗರದಲ್ಲಿ ನೆಲೆಸಿದ್ದ ಇಟೂಕಾ ಆಸ್ಪತ್ರೆಯಲ್ಲಿ ಡಿಸೆಂಬರ್ 29ರಂದು ಸಾವನ್ನಪ್ಪಿದ್ದಾರೆ ಎಂದು ನಗರದ ಮೇಯರ್ ಹೇಳಿದ್ದಾರೆ. ಸ್ಪೇನ್ನ ಮರಿಯಾ ಬ್ರನ್ಯಾಸ್ 2024ರ ಆಗಸ್ಟ್ ನಲ್ಲಿ 117ನೇ ವಯಸ್ಸಿನಲ್ಲಿ ಮೃತಪಟ್ಟ ಬಳಿಕ ವಿಶ್ವದ ಅತೀ ಹಿರಿಯ ವ್ಯಕ್ತಿ ಎಂದು ಹೆಸರು ಪಡೆದಿದ್ದ ಇಟೂಕಾ 4 ಮಕ್ಕಳು ಹಾಗೂ ಐವರು ಮೊಮ್ಮಕ್ಕಳನ್ನು ಅಗಲಿದ್ದಾರೆ.

ಜಪಾನ್ನಿಲ್ಲ ಸಾಮಾನ್ಯವಾಗಿ ಮಹಿಳೆಯರು ದೀರ್ಘಾಯುಷ್ಯವನ್ನು ಹೊಂದಿರುತ್ತಾರೆ. ಆದರೆ ವೃದ್ಧ ಜನಸಂಖ್ಯೆಯು ಹೆಚ್ಚುತ್ತಿರುವುದರಿಂದ ವೈದ್ಯಕೀಯ ಮತ್ತು ಕಲ್ಯಾಣ ವೆಚ್ಚ ಏರುತ್ತಿದ್ದು ಹದಗೆಡುತ್ತಿರುವ ಜನಸಂಖ್ಯಾ ಬಿಕ್ಕಟ್ಟನ್ನು ದೇಶ ಎದುರಿಸುತ್ತಿದೆ. 2024ರ ಸೆಪ್ಟಂಬರ್ ವರೆಗಿನ ಅಂಕಿಅಂಶದ ಪ್ರಕಾರ ಜಪಾನ್ನಕಲ್ಲಿ 100 ಅಥವಾ ಅದಕ್ಕೂ ಹೆಚ್ಚು ವಯಸ್ಸಿನ 95,000ಕ್ಕೂ ಅಧಿಕ ಜನರಿದ್ದು ಇವರಲ್ಲಿ 88%ದಷ್ಟು ಮಹಿಳೆಯರು ಎಂದು ತಿಳಿದುಬಂದಿದೆ.

# ರೆನಾಲ್ಟ್ ಇಂಡಿಯಾ; '3-ವರ್ಷ 1,00,000 ಕಿ.ಮೀ ವಾರಂಟಿ' ಪರಿಚಯ




ರೆನಾಲ್ಟ್ ಗ್ರೂಪ್ನ ಸಂಪೂರ್ಣ ಮಾಲೀಕತ್ವದ ಅಧೀನ ಸಂಸ್ಥೆಯಾದ ರೆನಾಲ್ಟ್ ಇಂಡಿಯಾ, ತನ್ನ ಗ್ರಾಹಕರಿಗಾಗಿ ಸಾಮಾನ್ಯ ''3-ವರ್ಷ ಅಥವಾ 1,00,000 ಕಿ.ಮೀ ವಾರಂಟಿ'' ಯನ್ನು ಹೆಮ್ಮೆಯಿಂದ ಪರಿಚಯಿಸುತ್ತಿದೆ. ಜನವರಿ 1, 2025ರಿಂದ ಈ ವಾರಂಟಿ, ವಸ್ತು, ವರ್ಕ್‌ಮನ್ ಶಿಪ್(ಕೆಲಸದ ಕೌಶಲ್ಯ), ಅಥವಾ ಉತ್ಪಾದನಾ ದೋಷಗಳಿಗೆ ಸಂಬಂಧಿಸಿದ ಎಲ್ಲಾ ಮೆಕಾನಿಕಲ್ ಮತ್ತು ಎಲೆಕ್ಟ್ರಿಕಲ್ ವೈಫಲ್ಯಗಳು ಅಥವಾ ದೋಷಗಳನ್ನು ಪೂರೈಸಿ ಪ್ರತಿಯೊಬ್ಬ ರೆನಾಲ್ಟ್ ಮಾಲೀಕರಿಗೆ ಮನಶ್ಶಾಂತಿ ಖಾತರಿಪಡಿಸುತ್ತದೆ.

ತನ್ನ ಗ್ರಾಹಕ-ಮೊದಲು ದೃಷ್ಟಿಕೋನವನ್ನು ಇನ್ನಷ್ಟು ಬಲಪಡಿಸುತ್ತಾ, ರೆನಾಲ್ಟ್ ಈಗ ಉದ್ದಿಮೆಯಲ್ಲೇ ಅತ್ಯುತ್ತಮವಾದ 7-ವರ್ಷ ಅಥವಾ ಅನಿಯಮಿತ ಕಿ.ಮೀ ವಿಸ್ತರಿತ ವಾರಂಟಿ ಪ್ಯಾಕೇಜ್ ಒದಗಿಸುತ್ತಿದೆ. ಈ ಸೌಲಭ್ಯವು ಈಗ ಸಾಮಾನ್ಯ ವಾರಂಟಿ ಅವಧಿಯಲ್ಲಿ ಯಾವುದೇ ಸಮಯದಲ್ಲಾದರೂ ಖರೀದಿಗೆ ಲಭ್ಯವಿದೆ. ಸಾಮಾನ್ಯ ಹಾಗೂ ವಿಸ್ತರಿತ ವಾರಂಟಿ ಪ್ರೋಗ್ರಾಮ್ ಗಳೆರಡೂ ಕಾಂಪ್ಲಿಮೆಂಟರಿ 24X7 ರಸ್ತೆಬದಿ ನೆರವು ಒಳಗೊಂಡಿದ್ದು ಮಾಲೀಕತ್ವದ ಅನುಭವವನ್ನು ಹೆಚ್ಚಿಸುವುದಕ್ಕಾಗಿ ಅಪಘಾತ ಟೋಯಿಂಗ್‌ಅನ್ನು ಕೂಡ ಪೂರೈಸುತ್ತದೆ.

ರೆನಾಲ್ಟ್ ಇಂಡಿಯಾದ ವ್ಯವಸ್ಥಾಪಕ ನಿರ್ದೇಶಕ ಹಾಗೂ ಕಂಟ್ರಿ ಸಿಇಒ ಶ್ರೀ ವೆಂಕಟ್ರಾಮ್ ಎಮ್., ನಮ್ಮ ಗ್ರಾಹಕರ ವಿಶ್ವಾಸವನ್ನು ಗಳಿಸಿರುವ ವಿನೂತನ, ವಿಶ್ವಸನೀಯ ಪರಿಹಾರಗಳನ್ನು ಒದಗಿಸುವ ಒಂದು ಪರಂಪರೆ ರೆನಾಲ್ಟ್ ಇದೆ. 2025ರಲ್ಲಿ ಖರೀದಿಸಿದ ಎಲ್ಲಾ ವಾಹನಗಳ ಮೇಲೆ ಸಾಮಾನ್ಯ 3-ವರ್ಷ ವಾರಂಟಿಯ ಪರಿಚಯದೊಂದಿಗೆ ನಾವು ನಮ್ಮ ಕಾರುಗಳ ಗುಣಮಟ್ಟದಲ್ಲಿ ನಮ್ಮ ಆತ್ಮವಿಶ್ವಾಸವನ್ನು ಮತ್ತು ಮಾಲೀಕತ್ವ ಅನುಭವವನ್ನು ಹೆಚ್ಚಿಸುವ ನಮ್ಮ ಬದ್ಧತೆಯನ್ನು ಮರುಖಾತರಿಪಡಿಸುತ್ತಿದ್ದೇವೆಎಂದು ಹೇಳಿದರು.

# ಸೈನಿಕರಿದ್ದ ಬಸ್ ಮೇಲೆ ಬಾಂಬ್ ದಾಳಿ; ನಾಲ್ವರು ಸಾವು



**ನವದೆಹಲಿ:** ಪಾಕಿಸ್ತಾನದ ಬಲೂಚಿಸ್ತಾನದ ಟರ್ಬತ್ನಲ್ಲಿ ಭೀಕರ ಬಾಂಬ್ ದಾಳಿ ನಡೆದಿದ್ದು, ಪಾಕಿಸ್ತಾನಿ ಸೈನಿಕರನ್ನು ಕರೆದೊಯ್ಯುತ್ತಿದ್ದ ಮಿಲಿಟರಿ ವಾಹನದ ಮೇಲೆ ಬಾಂಬ್ ಹಾಕಲಾಗಿದೆ. ಈ ದುರಂತ ನಡೆಯುವ ವೇಳೆ ಆ ವಾಹನದಲ್ಲಿ 48 ಪಾಕಿಸ್ತಾನಿ ಸೈನಿಕರಿದ್ದರು. ಅವರಲ್ಲಿ ನಾಲ್ವರು ಬಾಂಬ್ ದಾಳಿಯಲ್ಲಿ ಸುಟ್ಟು ಕರಕಲಾಗಿದ್ದಾರೆ. ಉಳಿದವರು ಪ್ರಾಣಾಪಾಯದಿಂದ ಪಾರಾಗಿದ್ದಾರೆ. ಅವರನ್ನು ಆಸ್ಪತ್ರೆಗೆ ಸಾಗಿಸಲಾಗಿದೆ.

ಈ ಘಟನೆಯ ನಂತರ ಹೆಚ್ಚಿನ ಸಂಖ್ಯೆಯಲ್ಲಿ ಪಾಕಿಸ್ತಾನಿ ಸೈನಿಕರು ಮತ್ತು ಆಂಬುಲೆನ್ಸ್‌ಗಳು ಸ್ಥಳಕ್ಕೆ ಧಾವಿಸಿವೆ. ಟರ್ಬತ್ ಬಳಿಕ ಹೈವೇಯಲ್ಲೇ ಮಿಲಿಟರಿ ಬಸ್ ಮೇಲೆ ಬಾಂಬ್ ದಾಳಿ ನಡೆಸಲಾಗಿದೆ. ಇದರ ಪರಿಣಾಮವಾಗಿ ಬಸ್ಗೆ ಬೆಂಕಿ ಹೊತ್ತಿಕೊಂಡು ಸಂಪೂರ್ಣವಾಗಿ ಸುಟ್ಟು ಕರಕಲಾಗಿದೆ.

ಟರ್ಬತ್ನಲ್ಲಿ ಬಸ್ ಮೇಲೆ ಬಾಂಬ್ ದಾಳಿ ನಡೆದಿದ್ದು, ಗಾಯಗೊಂಡವರಲ್ಲಿ ಐವರ ಸ್ಥಿತಿ ಚಿಂತಾಜನಕವಾಗಿದೆ ಎಂದು ಪೊಲೀಸರು ತಿಳಿಸಿದ್ದಾರೆ. ಪೊಲೀಸರು ಮತ್ತು ಭದ್ರತಾ ಪಡೆಗಳು ಪ್ರದೇಶವನ್ನು ಸುತ್ತುವರಿದಿವೆ. ಗಾಯಗೊಂಡವರಲ್ಲಿ ಎಸ್‌ಎಸ್ಪಿ ಗಂಭೀರ ಅಪರಾಧ ವಿಭಾಗದ ಜೊಹೈಬ್ ಮೊಹ್ಸಿನ್ ಮತ್ತು ಅವರ ಕುಟುಂಬದ 6 ಸದಸ್ಯರು ಬಾಂಬ್ ಸ್ಫೋಟದ ಸಮಯದಲ್ಲಿ ಆ ಮಾರ್ಗದಲ್ಲಿ ಹಾದುಹೋಗುತ್ತಿದ್ದರು.

ಈ ಬಾಂಬ್ ದಾಳಿಯ ಹಿಂದೆ ನಿಷೇಧಿತ ಬಲೂಚ್ ಲಿಬರೇಶನ್ ಆರ್ಮಿ (ಃಐಂ) ಕೈವಾಡವಿರುವ ಬಗ್ಗೆ ಅನುಮಾನ ವ್ಯಕ್ತವಾಗಿದೆ. ಬಲೂಚಿಸ್ತಾನದ ಮುಖ್ಯಮಂತ್ರಿ ಮಿರ್ ಸರ್ಫ್ರಾಜ್ ಬುಗ್ತಿ ಅವರು ಈ ಬಾಂಬ್ ಸ್ಫೋಟವನ್ನು ಖಂಡಿಸಿದ್ದಾರೆ. ಅಮೂಲ್ಯ ಜೀವಗಳ ನಷ್ಟದ ಬಗ್ಗೆ ದುಃಖವನ್ನು ವ್ಯಕ್ತಪಡಿಸಿದ್ದಾರೆ. ಮುಗ್ಧ ವ್ಯಕ್ತಿಗಳನ್ನು ಗುರಿಯಾಗಿಸಿ ಕೊಲ್ಲುವವರು ಮನುಷ್ಯರೆಂದು ಹೇಳಿಕೊಳ್ಳಲು ಅನರ್ಹರು ಎಂದು ಬುಗ್ತಿ ಟೀಕಿಸಿದ್ದಾರೆ.

Postal Registration No.KA/BGW-1823/2019-2021, Posted at Patrika Channel, RMS Bhavan, Bengaluru PSO, Mysore Road, Bengaluru- 560020, RNI No.KARKAN/2002/08054

# ಮಾವನಿಂದ ಸೊಸೆಗೆ ತೊಟ್ಟಿಲು ಗಿಫ್ಟ್



## ಧನರಾಜ್‌ಗೆ ಕೊಟ್ಟ ಮಾತನ್ನು ಉಳಿಸಿದ ಗೋಲ್ಡ್

ಬಿಗ್ ಬಾಸ್ ಸ್ಪರ್ಧಿ ಧನರಾಜ್ ಅವರ ಪುತ್ರಿ ಪ್ರಸಿದ್ಧಿಗೆ ಗೋಲ್ಡ್ ಸುರೇಶ್ ತೊಟ್ಟಿಲನ್ನು ಉಡುಗೊರೆಯಾಗಿ ನೀಡಿದ್ದಾರೆ. ಈ ಮೂಲಕ ಧನರಾಜ್ ಅವರಿಗೆ ಕೊಟ್ಟ ಮಾತನ್ನು ಉಳಿಸಿಕೊಂಡಿದ್ದಾರೆ.

ಧನರಾಜ್ ಅವರ ಬೆಂಗಳೂರಿನ ನಿವಾಸಕ್ಕೆ ಭೇಟಿ ನೀಡಿದ ಸುರೇಶ್ ಅವರು ತೊಟ್ಟಿಲನ್ನು ಹಸ್ತಾಂತರ ಮಾಡಿದ್ದಾರೆ.

ಬಿಗ್ ಬಾಸ್ ನಲ್ಲಿಯಲ್ಲಿದ್ದಾಗ ಗೋಲ್ಡ್ ಸುರೇಶ್, ಧನರಾಜ್, ಹನುಮಂತ ಜೊತೆಯಾಗಿ ಹೆಚ್ಚು ಸಮಯ ಬೆರೆಯುತ್ತಿದ್ದರು. ಹನುಮಂತ ಮತ್ತು ಧನರಾಜ್ ಅವರು ಸುರೇಶ್ ಅವರನ್ನು ''ಮಾವ ಮಾವ'' ಎಂದೇ ಕರೆಯುತ್ತಿದ್ದರು.

ಧನರಾಜ್ ಮತ್ತು ಸುರೇಶ್ ಮಾತುಕತೆಯ ಸಮಯದಲ್ಲಿ ಮಾವನಾಗಿ ನಾನು ನಿನ್ನ ಮಗಳಿಗೆ ತೊಟ್ಟಿಲು ನೀಡುತ್ತೇನೆ ಎಂದು ಹೇಳಿದ್ದರು. ಈ ಮಾತಿನಂತೆ ಗೋಲ್ಡ್ ಸುರೇಶ್ ಧನರಾಜ್ ನಿವಾಸಕ್ಕೆ ಆಗಮಿಸಿ ತೊಟ್ಟಿಲನ್ನು ನೀಡಿದ್ದಾರೆ.

ಬಿಗ್ ಬಾಸ್ ಮನೆಯಿಂದ ಸುರೇಶ್ ಅವರು ದಿಢೀರ್ ನಿರ್ಗಮಿಸಿದ್ದರು. 12ನೇ ವಾರದಲ್ಲಿ ನಿರ್ಗಮಿಸಿದ ಸಮಯದಲ್ಲಿ ಹಲವಾರು ಅಂತೆ ಕಂತೆ ಸುದ್ದಿಗಳು ಪ್ರಕಟವಾಗಿತ್ತು. ಈ ಅಂತೆ ಕಂತೆ ಸುದ್ದಿಗಳಿಗೆ ಸುರೇಶ್ ಅವರು ಸ್ಪಷ್ಟನೆ ನೀಡಿ ನಾನು ಬಿಗ್ ಬಾಸ್ ಮನೆಯಿಂದ ನಿರ್ಗಮಿಸಿದ್ದು ಯಾಕೆ ಎಂದು ತಿಳಿಸಿದ್ದರು.

ನಾನು ಬಿಗ್ ಬಾಸ್ ಮನೆಗೆ ಹೋದರೆ ನನ್ನ ಬಿಸಿನೆಸ್ ಯಾರಿಗೆ ಬಿಟ್ಟು ಹೋಗಲಿ ಎಂಬ ಯೋಚನೆ ನನಗೆ ಮೊದಲೇ ಬಂದಿತ್ತು. ಈ ಸಂದರ್ಭದಲ್ಲಿ ನನ್ನ ವ್ಯವಹಾರವನ್ನು ಪತ್ನಿಗೆ ಬಿಟ್ಟು ಹೋಗಿದ್ದೆ. ಆದರೆ ಆಕೆಗೆ ಬಿಸಿನೆಸ್ ಅನ್ನು ನಿರ್ವಹಣೆ ಮಾಡಲು ಸಾಧ್ಯವಾಗಲಿಲ್ಲ. ವ್ಯವಹಾರದ ಬಗ್ಗೆ ಜ್ಞಾನನೇ ಇಲ್ಲದಿರುವ ವ್ಯಕ್ತಿಗೆ ನಾನು ವಹಿಸಿ ಬಂದಿದ್ದೆ. ನನ್ನ ಕಂಪನಿಯಲ್ಲಿ ಕೆಲ ನಿರ್ಧಾರಗಳನ್ನು ನಾನೇ ತೆಗೆದುಕೊಳ್ಳಬೇಕಾಗುತ್ತದೆ. ಹಾಗಾಗಿ ನಾನೇ ಬಿಗ್ ಬಾಸ್ ಮನೆಯಿಂದ ಹೊರ ಬರಬೇಕಾಯಿತು. ಅದು ಬಿಟ್ಟು ಆತಂಕ ಪಡುವಂತಹದ್ದು ಏನು ಆಗಿಲ್ಲ ಎಂದು ತಿಳಿಸಿದ್ದರು.



# ಚಹಲ್, ಧನಶ್ರೀ ದಾಂಪತ್ಯದಲ್ಲಿ ಬಿರುಕು

## ಮದ್ವೆಯಾಗಿ 4 ವರ್ಷದ ಬಳಿಕ ಡಿವೋರ್ಸ್?

ಟೀಂ ಇಂಡಿಯಾದ ಸ್ಪಿನ್ನರ್ ಯಜುವೇಂದ್ರ ಚಹಲ್ ಮತ್ತು ನಟಿ ಧನಶ್ರೀ ನಡುವಿನ ದಾಂಪತ್ಯ ಜೀವನದಲ್ಲಿ ಒಡಕು ಮೂಡಿದ್ದು, ಶೀಘ್ರವೇ ಡಿವೋರ್ಸ್ ಪಡೆದುಕೊಳ್ಳಲಿದ್ದಾರೆ ಎಂದು ವರದಿಯಾಗಿದೆ.

ಆಪ್ತ ಮೂಲಗಳ ಪ್ರಕಾರ ಇಬ್ಬರು ಪ್ರತ್ಯೇಕವಾಗುವುದು ನಿಜ. ವಿಚ್ಛೇದನ ಪ್ರಕ್ರಿಯೆಗಳು ಇನ್ನೂ ಅಂತಿಮಗೊಂಡಿಲ್ಲ. ಎಲ್ಲಾ ಷರತ್ತುಗಳು ಪೂರ್ಣಗೊಂಡ ಬಳಿಕ ಅಧಿಕೃತವಾಗಿ ಘೋಷಣೆ ಮಾಡುವ ಸಾಧ್ಯತೆಯಿದೆ.

ಇಬ್ಬರು ಪ್ರತ್ಯೇಕವಾಗಲು ನಿಖರವಾದ ಕಾರಣ ತಿಳಿದು ಬಂದಿಲ್ಲ. ಆದರೆ ದಂಪತಿ ಪ್ರತ್ಯೇಕವಾಗಿ ತಮ್ಮ ಜೀವನವನ್ನು ಮುಂದುವರಿಸಲು ನಿರ್ಧರಿಸಿದ್ದಾರೆ ಎಂದು ವರದಿಯಾಗಿದೆ. ಈ ವದಂತಿಗೆ ಪೂರಕ ಎಂಬಂತೆ ಇಬ್ಬರೂ ಇನ್‌ಸ್ಟಾದಲ್ಲಿ ಅನ್‌ಫಾಲೋ ಮಾಡಿದ್ದಾರೆ. ಚಹಲ್ ಅವರು ಧನಶ್ರೀ ಜೊತೆಗಿನ ಫೋಟೋ ಡಿಲೀಟ್ ಮಾಡಿದ್ದರೆ ಧನಶ್ರೀ ಚಹಲ್ ಅವರೊಂದಿಗೆ ಫೋಟೋ ಡಿಲೀಟ್ ಮಾಡಿಲ್ಲ.

ಭಾರತದ ಖ್ಯಾತ ಜೋಡಿಗಳಲ್ಲಿ ಒಬ್ಬರಾಗಿದ್ದ ಚಹಲ್ ಮತ್ತು ಧನಶ್ರೀ 2020ರ ಡಿಸೆಂಬರ್‌ನಲ್ಲಿ ಮದುವೆಯಾಗಿದ್ದರು. ಆ ಬಳಿಕ ಜೊತೆಯಾಗಿ ಕಾಣಿಸಿಕೊಳ್ಳುತ್ತಿದ್ದ ಈ ಜೋಡಿ ಬ್ರೇಕ್ ಅಪ್ ಗೆ ಮುಂದಾಗಿದ್ದಾರೆ ಎಂದು ಎರಡು ವರ್ಷದ ಹಿಂದೆ ಸುದ್ದಿ ಪ್ರಕಟವಾಗಿತ್ತು. ನಂತರ ಇಬ್ಬರು ಜೊತೆಯಾಗಿ ಕಾಣಿಸಿಕೊಳ್ಳುವ ಮೂಲಕ ವದಂತಿಗೆ ತೆರೆ ಎಳೆದಿದ್ದರು. ಕೊರೋನಾ ಕಾಲದ ಲಾಕ್‌ಡೌನ್ ಸಂದರ್ಭದಲ್ಲಿ ಇಬ್ಬರ ನಡುವೆ ಪ್ರೀತಿ ಬೆಳೆದಿತ್ತು ಧನಶ್ರೀ ಎಂದು ಹೇಳಿದ್ದರು.

ಹಿಂದೆ ಚಹಲ್ ಹೊಸ ಜೀವನ ಆರಂಭ ಎಂದು ಪೋಸ್ಟ್ ಹಾಕಿಕೊಂಡಿದ್ದರು. ಅದೇ ಸಮಯಕ್ಕೆ ಧನಶ್ರೀ ತಮ್ಮ ಇನ್‌ಸ್ಟಾಗ್ರಾಮ್ ಖಾತೆಯಲ್ಲಿದ್ದ ಸರ್ ನೇಮ್ ಚಹಲ್ ಪದವನ್ನು ಕಿತ್ತುಹಾಕಿ ಧನಶ್ರೀ ವರ್ಮಾ ಎಂದು ಬದಲಾವಣೆ ಮಾಡಿಕೊಂಡಿದ್ದರು.

ಸದ್ಯ ಟೀಂ ಇಂಡಿಯಾ ತಂಡದಲ್ಲಿ ಸ್ಥಾನ ಪಡೆಯಲು ಚಹಲ್ ವಿಫಲರಾಗಿದ್ದು 2023ರ ಜನವರಿಯಲ್ಲಿ ಕೊನೆಯ ಏಕದಿನ ಪಂದ್ಯವಾಡಿದ್ದರೆ, 2023ರ ಆಗಸ್ಟ್‌ನಲ್ಲಿ ಕೊನೆಯ ಟಿ20 ಪಂದ್ಯ ಆಡಿದ್ದರು.

ಐಪಿಎಲ್ 2025 ರ ಮೆಗಾ ಹರಾಜಿಗೆ ಮೊದಲು ಚಹಲ್ ಅವರನ್ನು ರಾಜಸ್ಥಾನ್ ರಾಯಲ್ಸ್ ತಂಡದಿಂದ ಕೈಬಿಟ್ಟಿತ್ತು. ನಂತರ ನಡೆದ ಹರಾಜು ಪ್ರಕ್ರಿಯೆಯಲ್ಲಿ ಪಂಜಾಬ್ ಕಿಂಗ್ಸ್ 18 ಕೋಟಿ ರೂ. ನೀಡಿ ಚಹಲ್ ಅವರನ್ನು ಖರೀದಿಸಿತ್ತು. ಚಹಲ್ 160 ಐಪಿಎಲ್ ಪಂದ್ಯವಾಡಿ 22.44 ರ ಸರಾಸರಿಯಲ್ಲಿ 205 ವಿಕೆಟ್ ಪಡೆದಿದ್ದಾರೆ.



# ಅಮೆರಿಕದಲ್ಲಿ ಸರ್ಜರಿ ನಂತರ ಡಿಸ್ಚಾರ್ಜ್ ಆದ ನಟ ಶಿವಣ್ಣ



ಕ್ಯಾನ್ಸರ್‌ನಿಂದ ಬಳಲುತ್ತಿದ್ದ ನಟ ಶಿವರಾಜ್ ಕುಮಾರ್ ಅವರು ಅಮೆರಿಕದಲ್ಲಿ ಸರ್ಜರಿ ನಂತರ ಆಸ್ಪತ್ರೆಯಿಂದ ಡಿಸ್ಚಾರ್ಜ್ ಆಗಿದ್ದಾರೆ.

ಕೆಲ ದಿನಗಳ ಹಿಂದಷ್ಟೇ ನಟ ಶಿವಣ್ಣಗೆ ಅಮೆರಿಕಾದ ಮಿಯಾಮಿ ಕ್ಯಾನ್ಸರ್ ಇನ್ಸ್ಟಿಟ್ಯೂಟ್ ನಲ್ಲಿ ಸರ್ಜರಿ ನಡೆದಿತ್ತು. ಯಶಸ್ವಿ ಸರ್ಜರಿ ಬಳಿಕ ಡಿಸ್ಚಾರ್ಜ್ ಆಗಿದ್ದಾರೆ. ಸರ್ಜರಿ ಬಳಿಕ ಎರಡು ಚೆಕಪ್ ಬಾಕಿ ಇದ್ದು, ನಂತರ ಸಂಪೂರ್ಣ ಗುಣಮುಖರಾಗಿ ಜ.24ರ ಬಳಿಕ ಬೆಂಗಳೂರಿಗೆ ವಾಪಸಾಗಲಿದ್ದಾರೆ.

ಯಶಸ್ವಿ ಶಸ್ತ್ರಚಿಕಿತ್ಸೆ ಬಳಿಕ ಗುಣಮುಖರಾದ ಶಿವಣ್ಣ ಕೆಲ ದಿನಗಳ ಹಿಂದಷ್ಟೇ ಅಭಿಮಾನಿಗಳಿಗೆ ವೀಡಿಯೋ ಸಂದೇಶ ಕಳುಹಿಸಿದ್ದರು. ಕ್ಯಾನ್ಸರ್ ನಿಂದ ಗುಣಮುಖರಾಗಿರುವ ಬಗ್ಗೆ ಸಂತಸ ಹಂಚಿಕೊಂಡಿದ್ದರು. ಶೀಘ್ರವೇ ಬೆಂಗಳೂರಿಗೆ ವಾಪಸ್ ಆಗಿ ಸಿನಿಮಾ ಶೂಟಿಂಗ್‌ನಲ್ಲಿ ಪಾಲ್ಗೊಳ್ಳುವುದಾಗಿ ತಿಳಿಸಿದ್ದರು.

ತನಗೆ ಚಿಕಿತ್ಸೆ ನೀಡಿದ ವೈದ್ಯರು, ಈ ವೇಳೆ ಜೊತೆಗೆ ನಿಂತು ಧೈರ್ಯ ತುಂಬಿದ ಆಪ್ತರು ಮತ್ತು ತನಗಾಗಿ ಪ್ರಾರ್ಥಿಸಿದ ಸಮಸ್ತ ಅಭಿಮಾನಿಗಳಿಗೂ ಶಿವಣ್ಣ ಕೃತಜ್ಞತೆ ಸಲ್ಲಿಸಿದ್ದರು.

# ಟೀಮ್ ಇಂಡಿಯಾ ವಿರುದ್ಧ 10 ವರ್ಷಗಳ ಬಳಿಕ ಸರಣಿ ಗೆದ್ದ ಆಸ್ಟ್ರೇಲಿಯಾ



ಸಿಡ್ನಿ ಕ್ರಿಕೆಟ್ ಗ್ರೌಂಡ್ ನಲ್ಲಿ ನಡೆದ ಭಾರತದ ವಿರುದ್ಧದ 5ನೇ ಟೆಸ್ಟ್ ಪಂದ್ಯದಲ್ಲಿ ಆಸ್ಟ್ರೇಲಿಯಾ ತಂಡ ಭರ್ಜರಿ ಜಯ ಸಾಧಿಸಿದೆ. ಈ ಜಯದೊಂದಿಗೆ ಆಸೀಸ್ ಪಡೆ ಬಾರ್ಡರ್-ಗವಾಸ್ಕರ್ ಟೆಸ್ಟ್ ಸರಣಿಯನ್ನು 3-1 ಅಂತರದಿಂದ ಗೆದ್ದುಕೊಂಡಿದೆ. ಈ ಮೂಲಕ ಭಾರತದ ವಿರುದ್ಧ 10 ವರ್ಷಗಳ ಬಳಿಕ ಟೆಸ್ಟ್ ಸರಣಿ ಗೆಲ್ಲುವಲ್ಲಿ ಕೊನೆಗೂ ಆಸ್ಟ್ರೇಲಿಯಾ ತಂಡ ಯಶಸ್ವಿಯಾಗಿದೆ. ಭಾರತದ ವಿರುದ್ಧ ಆಸ್ಟ್ರೇಲಿಯಾ ಕೊನೆಯ ಬಾರಿಗೆ ಬಾರ್ಡರ್-ಗವಾಸ್ಕರ್ ಟೆಸ್ಟ್ ಸರಣಿ ಗೆದ್ದಿದ್ದು 2014-15 ರಲ್ಲಿ. ಇದಾದ ಬಳಿಕ ಟೀಮ್ ಇಂಡಿಯಾ ಸತತ 4 ಬಾರಿ ಸರಣಿ ಗೆದ್ದುಕೊಂಡಿತ್ತು. ಇದೀಗ 10 ವರ್ಷಗಳ ಬಳಿಕ ಮತ್ತೆ ಸರಣಿ ವಶಪಡಿಸಿಕೊಳ್ಳುವಲ್ಲಿ ಆಸೀಸ್ ಪಡೆ ಯಶಸ್ವಿಯಾಗಿದೆ.

ಇದಕ್ಕೂ ಮುನ್ನ ಈ ಪಂದ್ಯದಲ್ಲಿ ಟಾಸ್ ಗೆದ್ದ ಟೀಮ್ ಇಂಡಿಯಾ ನಾಯಕ ಜಸ್ ಪ್ರೀತ್ ಬುಮ್ರಾ ಬ್ಯಾಟಿಂಗ್ ಆಯ್ದುಕೊಂಡಿದ್ದರು. ಅದರಂತೆ ಮೊದಲು ಬ್ಯಾಟ್ ಮಾಡಿದ ಭಾರತ ತಂಡವು ಕೇವಲ 185 ರನ್ ಗಳಿಗೆ ಆಲೌಟ್ ಆಗಿತ್ತು. ಇದರ ಬೆನ್ನಲ್ಲೇ ಪ್ರಥಮ ಇನಿಂಗ್ಸ್ ಶುರು ಮಾಡಿದ ಆಸ್ಟ್ರೇಲಿಯಾ ತಂಡವನ್ನು 181 ರನ್ ಗಳಿಗೆ ಆಲೌಟ್ ಮಾಡುವಲ್ಲಿ ಭಾರತೀಯ ಬೌಲರ್ ಗಳು ಯಶಸ್ವಿಯಾದರು.

ಮೊದಲ ಇನಿಂಗ್ಸ್ ನಲ್ಲಿನ 4 ರನ್ ಗಳ ಮುನ್ನಡೆಯೊಂದಿಗೆ ದ್ವಿತೀಯ ಇನಿಂಗ್ಸ್ ಆರಂಭಿಸಿದ ಟೀಮ್ ಇಂಡಿಯಾ ಉತ್ತಮ ಬ್ಯಾಟಿಂಗ್ ಪ್ರದರ್ಶಿಸುವಲ್ಲಿ ವಿಫಲವಾಯಿತು. ಇದಾಗ್ಯೂ ಮಧ್ಯಮ ಕ್ರಮಾಂಕದಲ್ಲಿ ಕಣಕ್ಕಿಳಿದ ವಿಕೆಟ್ ಕೀಪರ್ ಬ್ಯಾಟರ್ ರಿಷಭ್ ಪಂತ್ 33 ಎಸೆತಗಳಲ್ಲಿ 4 ಸಿಕ್ಸ್ ಹಾಗೂ 6 ಫೋರ್ ಗಳೊಂದಿಗೆ 61 ರನ್ ಬಾರಿಸಿದರು.

ಆದರೆ ಪಂತ್ ಔಟಾದ ಬಳಿಕ ದಿಢೀರ್ ಕುಸಿತಕ್ಕೊಳಗಾದ ಟೀಮ್ ಇಂಡಿಯಾ ಮೂರನೇ ದಿನದಾಟದ ಆರಂಭದಲ್ಲೇ ನಾಲ್ಕು ವಿಕೆಟ್ ಕಳೆದುಕೊಂಡು 157 ರನ್ ಗಳಿಗೆ ಸರ್ವಪತನ ಕಂಡಿತು. ಅತ್ತ ಮೊದಲ ಇನಿಂಗ್ಸ್ ನಲ್ಲಿನ 4 ರನ್ ಗಳ ಹಿನ್ನಡೆಯೊಂದಿಗೆ ಆಸ್ಟ್ರೇಲಿಯಾ ತಂಡವು ದ್ವಿತೀಯ ಇನಿಂಗ್ಸ್ ನಲ್ಲಿ 162 ರನ್ ಗಳ ಗುರಿ ಪಡೆಯಿತು.

ಈ ಸುಲಭ ಗುರಿಯನ್ನು ಬೆನ್ನತ್ತಲು ಬಂದ ಆಸ್ಟ್ರೇಲಿಯಾ ತಂಡಕ್ಕೆ ಯುವ ಸ್ಫೋಟಕ ದಾಂಡಿಗ ಸ್ಯಾಮ್ ಕೊನ್ ಸ್ಟಾಸ್ ಭರ್ಜರಿ ಆರಂಭ ಒದಗಿಸಿದರು. ಇತ್ತ ಬೆನ್ನು ನೋವಿನ ಕಾರಣ 3ನೇ ದಿನದಾಟದಲ್ಲಿ ಬುಮ್ರಾ ಕೂಡ ಕಣಕ್ಕಿಳಿದಿರಲಿಲ್ಲ. ಇದರ ಸಂಪೂರ್ಣ ಲಾಭ ಪಡೆದ ಆಸ್ಟ್ರೇಲಿಯನ್ನರು ಮೊದಲ ಮೂರು ಓವರ್ ಗಳಲ್ಲೇ 35 ರನ್ ಚಚ್ಚಿದರು.

ಇದಾಗ್ಯೂ ಟೀಮ್ ಇಂಡಿಯಾ 4 ವಿಕೆಟ್ ಕಬಳಿಸಿದರೂ ಆಸ್ಟ್ರೇಲಿಯಾ ತಂಡವು ಯಾವುದೇ ಒತ್ತಡಕ್ಕೆ ಒಳಗಾಗಲಿಲ್ಲ. ಅದರಂತೆ ಮೂರನೇ ದಿನದಾಟದಲ್ಲೇ 162 ರನ್ ಗಳ ಗುರಿ ಮುಟ್ಟುವ ಮೂಲಕ 6 ವಿಕೆಟ್ ಗಳ ಭರ್ಜರಿ ಜಯ ಸಾಧಿಸಿದೆ. ಈ ಗೆಲುವಿನೊಂದಿಗೆ 5 ಪಂದ್ಯಗಳ ಬಾರ್ಡರ್-ಗವಾಸ್ಕರ್ ಸರಣಿಯನ್ನು ಆಸ್ಟ್ರೇಲಿಯಾ 3-1 ಅಂತರದಿಂದ ಗೆದ್ದುಕೊಂಡಿದೆ.

# ವಿಶ್ವ ಟೆಸ್ಟ್ ಚಾಂಪಿಯನ್ ಶಿಪ್ ಫೈನಲ್ ರೇಸ್‌ನಿಂದ ಹೊರಬಿದ್ದ ಟೀಮ್ ಇಂಡಿಯಾ



ಸತತ ಮೂರನೇ ಬಾರಿಗೆ ವಿಶ್ವ ಟೆಸ್ಟ್ ಚಾಂಪಿಯನ್ ಶಿಪ್ ಫೈನಲ್ ಗೇರುವ ಟೀಮ್ ಇಂಡಿಯಾದ ಕನಸು ಕಮರಿದೆ. ಅದು ಕೂಡ ಪ್ರತಿಷ್ಠಿತ ಬಾರ್ಡರ್ -ಗವಾಸ್ಕರ್ ಟ್ರೋಫಿ ಸರಣಿಯನ್ನು 3-1 ಅಂತರದಿಂದ ಸೋಲುವ ಮೂಲಕ. ಸಿಡ್ನಿಯಲ್ಲಿ ನಡೆದ ಕೊನೆಯ ಟೆಸ್ಟ್ ಪಂದ್ಯದಲ್ಲಿ ಭಾರತ ತಂಡ ಗೆದ್ದಿದ್ದರೆ ವಿಶ್ವ ಟೆಸ್ಟ್ ಚಾಂಪಿಯನ್ ಶಿಪ್ ಫೈನಲ್ ರೇಸ್ ನಲ್ಲಿ ಉಳಿದುಕೊಳ್ಳುತ್ತಿತ್ತು.

ಆದರೆ ನಿರ್ಣಾಯಕ ಪಂದ್ಯದಲ್ಲಿ ಭಾರತ ತಂಡವನ್ನು 6 ವಿಕೆಟ್ ಗಳಿಂದ ಬಗ್ಗು ಬಡಿದು ಆಸ್ಟ್ರೇಲಿಯಾ ತಂಡವು ವಿಶ್ವ ಟೆಸ್ಟ್ ಚಾಂಪಿಯನ್ ಶಿಪ್ ಫೈನಲ್ ಆಡುವುದನ್ನು ಖಚಿತಪಡಿಸಿಕೊಂಡಿದೆ. ಇತ್ತ ಟೀಮ್ ಇಂಡಿಯಾ ವಿಶ್ವ ಟೆಸ್ಟ್ ಚಾಂಪಿಯನ್ ಶಿಪ್ ಅಂಕ ಪಟ್ಟಿಯಲ್ಲಿ ಮೂರನೇ ಸ್ಥಾನದಲ್ಲೇ ಉಳಿದು ಕೊಂಡಿದೆ.

ಈ ಬಾರಿಯ ವಿಶ್ವ ಟೆಸ್ಟ್ ಚಾಂಪಿಯನ್ ಶಿಪ್ ಸರಣಿಯಲ್ಲಿ ಭಾರತ ತಂಡವು 19 ಪಂದ್ಯಗಳನ್ನಾಡಿತ್ತು. ಈ ವೇಳೆ 8 ಜಯ ಹಾಗೂ 2 ಡ್ರಾಗಳೊಂದಿಗೆ ಅಂಕ ಪಟ್ಟಿಯಲ್ಲಿ ಅಗ್ರಸ್ಥಾನ ಅಲಂಕರಿಸುವಲ್ಲಿ ಯಶಸ್ವಿಯಾಗಿತ್ತು. ಆದರೆ ನ್ಯೂಝಿಲೆಂಡ್ ಮತ್ತು ಆಸ್ಟ್ರೇಲಿಯಾ ವಿರುದ್ಧ 6 ಪಂದ್ಯಗಳಲ್ಲಿ ಸೋಲುವ ಮೂಲಕ ಇದೀಗ ಫೈನಲ್ ರೇಸ್ ನಿಂದ ಹೊರಬಿದ್ದಿದೆ.

ಅಲ್ಲದೆ 19 ಪಂದ್ಯಗಳಲ್ಲಿ 9 ಜಯ, 3 ಡ್ರಾ, ಹಾಗೂ 8 ಸೋಲುಗಳೊಂದಿಗೆ 2023-25ರ ವಿಶ್ವ ಟೆಸ್ಟ್ ಚಾಂಪಿಯನ್ ಶಿಪ್ ಸರಣಿಯನ್ನು ಅಂತ್ಯಗೊಳಿಸಿದೆ. ಈ ಮೂಲಕ ಸತತ ಮೂರನೇ ಬಾರಿ ಫೈನಲ್ ಗೇರುವ ಅವಕಾಶವನ್ನು ಟೀಮ್ ಇಂಡಿಯಾ ಕೈಚೆಲ್ಲಿಕೊಂಡಿದೆ.

ಪ್ರಸ್ತುತ ಅಂಕ ಪಟ್ಟಿಯಲ್ಲಿ ಅಗ್ರಸ್ಥಾನದಲ್ಲಿರುವ ಸೌತ್ ಆಫ್ರಿಕಾ ತಂಡದ ಫೈನಲ್ ಆಡುವುದು ಖಚಿತವಾಗಿದೆ. ಇದೀಗ ಟೀಮ್ ಇಂಡಿಯಾ ಫೈನಲ್ ರೇಸ್ ನಿಂದ ಹೊರಬಿದ್ದಿದ್ದರಿಂದ ಆಸ್ಟ್ರೇಲಿಯಾ ಕೂಡ ವಿಶ್ವ ಟೆಸ್ಟ್ ಚಾಂಪಿಯನ್ ಶಿಪ್ ಫೈನಲ್ ಆಡುವುದು ಕನ್ಫರ್ಮ್ ಆಗಿದೆ. ಹೀಗಾಗಿ ಈ ಬಾರಿಯ ವಿಶ್ವ ಟೆಸ್ಟ್ ಚಾಂಪಿಯನ್ ಶಿಪ್ ಫೈನಲ್ ಪಂದ್ಯದಲ್ಲಿ ಆಸ್ಟ್ರೇಲಿಯಾ ಮತ್ತು ಸೌತ್ ಆಫ್ರಿಕಾ ಮುಖಾಮುಖಿಯಾಗಲಿದೆ.

# ಕೇಂದ್ರ ಸರ್ಕಾರದ ರಾಷ್ಟ್ರೀಯ ಗ್ರಾಮೀಣ ಸಾಕ್ಷರತಾ ಮಿಷನ್ ಸಹಯೋಗದಿಂದ ಮಕ್ಕಳಿಗೆ ಬ್ಯಾಗ್ ವಿತರಣೆ



**ಬೆಂಗಳೂರು:** ಕಮಲಾನಗರದ ಶಕ್ತಿ ಗಣಪತಿ ನಗರ ವಾರ್ಡ್ನಲ್ಲಿರುವ ಗಂಗಾಧರೇಶ್ವರ ಶಾಲೆಯಲ್ಲಿ ಇಂದು ಕೇಂದ್ರ ಸರ್ಕಾರದ ರಾಷ್ಟ್ರೀಯ ಗ್ರಾಮೀಣ ಸಾಕ್ಷರತಾ ಮಿಷನ್ ಸಹಯೋಗದೊಂದಿಗೆ ಸಮೃದ್ಧಿ ಭಾರತ ಫೌಂಡೇಶನ್ ಆಯೋಜಿಸಿದ್ದ ಶಾಲಾ ಬ್ಯಾಗ್ ವಿತರಣಾ ಕಾರ್ಯಕ್ರಮದಲ್ಲಿ ಮಕ್ಕಳಿಗೆ ಸ್ಥಳೀಯ ಶಾಸಕರಾದ ಕೆ.ಗೋಪಾಲಯ್ಯನವರು ಬ್ಯಾಂಗ್ ವಿತರಿಸಿದರು.

ಕಾರ್ಯಕ್ರಮದಲ್ಲಿ ಮಾತನಾಡಿದ ಶಾಸಕರು ನಾವು ದೇವರಲ್ಲಿ ಕೇಳಿಕೊಳ್ಳುದು ಮಕ್ಕಳಿಗೆ ವಿದ್ಯಾ ಬುದ್ಧಿ ಕೊಡಲೆಂದು ನಾನು ಅಧ್ಯಾಪಕರಲ್ಲಿ ವಿನಂತಿಸಿಕೊಳ್ಳುವುದೇನೆಂದರೆ ವಿದ್ಯಾರ್ಥಿಗಳಿಗೆ ಮೊದಲನೇ ಪಾಠ ನಮ್ಮ ಸಂಸ್ಕೃತಿ ಸಂಸ್ಕಾರ ವನ್ನು ಕಲಿಸಿಕೊಡಬೇಕು ಮಕ್ಕಳಲ್ಲಿ ತಂದೆ ತಾಯಿ ಮತ್ತು ನಮ್ಮ ದೇಶ ನಮ್ಮ ನಾಡು ನಮ್ಮ ಭಾಷೆಯನ್ನು ಪ್ರೀತಿಸುವ ಗುಣ ಬೆಳೆಯಬೇಕು ತಂದೆ ತಾಯಿಯಂದಿರು ಅವರಿಗೆಷ್ಟೇ ಕಷ್ಟವಿದ್ದರೂ ತಮ್ಮ ಮಕ್ಕಳನ್ನು ವಿದ್ಯಾವಂತರನ್ನಾಗಿ ಮಾಡಬೇಕು ಅವರಿಗೆ ಒಳ್ಳೆಯ ಭವಿಷ್ಯ ಕೊಡಬೇಕು ಎಂಬ ಹೆಬ್ಬಯಕೆಯಿಂದ ಶಾಲೆಗೆ ಕಳಿಸುತ್ತಾರೆ ಅದು ಮಕ್ಕಳಿಗೆ ತಿಳಿಯಬೇಕು.

ಅನೇಕ ಶಾಲೆಗಳಂತೆ ಈ ಶಾಲೆಯು ಸಣ್ಣಮಟ್ಟದಿಂದ ಬೆಳೆದು ಇಂದು ಮುನ್ನೂರಕ್ಕಿಂತ ಹೆಚ್ಚು ಮಕ್ಕಳು ವಿದ್ಯಾಭ್ಯಾಸ ಮಾಡುತ್ತಿದ್ದಾರೆ, ಪೋಷಕರುಗಳಿಗೆ ತಿಳಿಸುವುದೇನೆಂದರೆ, ತಮ್ಮ ಮಕ್ಕಳು ಓದುವುದರೊಂದಿಗೆ ಅವರಿಗೆ ಕ್ರೀಡೆಯು ಬೇಕು ಯಾವ ಕ್ರೀಡೆಗಳಲ್ಲಿ ಆಸಕ್ತಿ ಇರುತ್ತದೆಯೋ ದೃತ್ಯ ಸಂಗೀತ ಸೇರಿದಂತೆ ಯಾವುದರಲ್ಲಿ ಇರುತ್ತದೆ ಅದಕ್ಕೂ ಕೂಡ ಪೋಷಕರು ಪ್ರೋತ್ಸಾಹ ನೀಡಬೇಕು, ಇಲ್ಲಿರುವಂತಹ ಕಾರ್ಪೊರೇಷನ್ ಶಾಲೆಯಲ್ಲಿ ಸುಮಾರು 600 ಕ್ಕಿಂತ ಹೆಚ್ಚು ಮಕ್ಕಳು ವಿದ್ಯಾಭ್ಯಾಸ ಮಾಡುತ್ತಿದ್ದು ಎರಡು ವರ್ಷದಿಂದ ಕಾಲೇಜು ಸಹ ಇಲ್ಲಿ ಪ್ರಾರಂಭವಾಗಿದೆ ಪಕ್ಕದಲ್ಲಿರುವಂತ ಶ್ರೀ ಅಟಲ್ ಬಿಹಾರಿ ವಾಜಪೇಯಿ ಸರ್ಕಾರಿ ಶಾಲೆಯಲ್ಲಿ ಆರುನೂರ ಕಿಂತ ಹೆಚ್ಚು ಮಕ್ಕಳು ಓದುತ್ತಿದ್ದಾರೆ ಇಲ್ಲಿನ ಹೆರಿಗೆ ಆಸ್ಪತ್ರೆ ಎರಡು ವರ್ಷದ ಹಿಂದೆ ಪ್ರಾರಂಭವಾಗಿದ್ದು ನಮ್ಮ ಕ್ಷೇತ್ರದಲ್ಲಿ ಆಸ್ಪತ್ರೆಗಳು ಡಯಾಲಿಸಿಸ್ ಸೆಂಟರ್ ಕ್ರೀಡಾಂಗಣಗಳು ಇರಲಿಲ್ಲ ಈಗ ಎಲ್ಲವೂ ಕ್ಷೇತ್ರದಲ್ಲಿ ನಿರ್ಮಾಣಗೊಂಡಿವೆ ಈ ರೆಫೆಡಲ್ ಸುಸಜ್ಜಿತ ಆಸ್ಪತ್ರೆಯಲ್ಲಿ ವರ್ಷಕ್ಕೆ 900ಕ್ಕಿಂತ ಹೆಚ್ಚು ನವಜಾತ ಶಿಶುಗಳು ಜನಿಸುತ್ತಿವೆ,

ನೀವುಗಳು ಒಳ್ಳೆಯ ಶಾಲೆಗೆ ನಿಮ್ಮ ಮಕ್ಕಳನ್ನು ಸೇರಿಸಿದ್ದೀರಿ ಅವರುಗಳಿಗೆ ಉಜ್ವಲ ಭವಿಷ್ಯ ಸಿಗಲಿ ಎಂದು ಹಾರೈಸುತ್ತೇನೆ ಎಂದರು.

ಈ ಸಂದರ್ಭದಲ್ಲಿ ಉತ್ತರ ಜಿಲ್ಲಾ ಘಟಕದ ಬಿಜೆಪಿ ಅಧ್ಯಕ್ಷ ಎಸ್ ಹರೀಶ್ ಉಪಾಧ್ಯಕ್ಷ ಜಯರಾಮಯ್ಯ ಫೌಂಡೇಶನ್ ಅಧ್ಯಕ್ಷ ಮಂಜುನಾಥ್ ವಿ ಗೌಡ ಗೌರವಾಧ್ಯಕ್ಷ ಜಯಸಿಂಹ ಮುಖಂಡರುಗಳಾದ ಬಿ ಡಿ ಶ್ರೀನಿವಾಸ್, ನಿಸರ್ಗ ಜಗದೀಶ್ ಗುಂಡಣ್ಣ ಸೇರಿದಂತೆ ಶಾಲಾ ಶಿಕ್ಷಕರು, ವಿದ್ಯಾರ್ಥಿಗಳು, ಪೋಷಕರು ಪಾಲ್ಗೊಂಡಿದ್ದರು.

# ವರುಣಾದಿಂದ ನಾನು ಸ್ಪರ್ಧೆ ಮಾಡಿದ್ರೆ ನಿಮ್ಮ ಸಿದ್ದರಾಮಯ್ಯ ಸ್ಥಿತಿ ಏನಾಗೋದು?

**ಶಿವಮೊಗ್ಗ:** ಕಳೆದ ಬಾರಿ ವರುಣಾದಿಂದ ನಾನು ಸ್ಪರ್ಧೆ ಮಾಡಿದ್ರೆ ನಿಮ್ಮ ಸಿದ್ದರಾಮಯ್ಯ ಅವರ ಸ್ಥಿತಿ ಏನಾಗೋದು ಯೋಚಿಸಿ ಎಂದು ಕಾಂಗ್ರೆಸಿಗರ ವಿರುದ್ಧ ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ ವಿಜಯೇಂದ್ರ ವಾಗ್ದಾಳಿ ನಡೆಸಿದ್ದಾರೆ.

ಶಿವಮೊಗ್ಗದಲ್ಲಿ ಅವರು ಸುದ್ದಿಗೋಷ್ಠಿ ನಡೆಸಿದರು. ಈ ವೇಳೆ, ನಾನು ಮೊದಲ ಬಾರಿ ಶಾಸಕ ಆಗಿರಬಹುದು. ಆದರೆ ಕೆ.ಆರ್.ಪೇಟೆ, ಶಿರಾ ಕ್ಷೇತ್ರದಲ್ಲಿ ಗೆಲುವಿಗೆ ಶ್ರಮಿಸಿದ್ದೇನೆ. ಕಳೆದ ಬಾರಿ ವರುಣಾದಿಂದ ಸ್ಪರ್ಧೆ ಮಾಡಿದ್ದರೆ ನಿಮ್ಮ ಸಿದ್ದರಾಮಯ್ಯ ಸ್ಥಿತಿ ಏನು ಎಂಬುದನ್ನು ಯೋಚಿಸಿ ಎಂದು ಕಾಂಗ್ರೆಸ್ ವಿರುದ್ಧ ಕಿಡಿಕಾರಿದ್ದಾರೆ.

ಸಚಿನ್ ಪಾಂಚಾಳ ಆತ್ಮಹತ್ಯೆ ಕೇಸ್ ವಿಚಾರವಾಗಿ, ಈಶ್ವರಪ್ಪ ಪ್ರಕರಣದಲ್ಲಿ ಇದೇ ಪ್ರಿಯಾಂಕ್ ಖರ್ಗೆ ರಾಜೀನಾಮೆಗೆ ಆಗ್ರಹಿಸಿದ್ದರು. ತನಿಖೆಗೆ ಎದುರಿಸಿ ಎಂದಿದ್ದರು. ಈಗ ಅವರು ಸಹ ಅದೇ ರೀತಿ ರಾಜೀನಾಮೆ ಕೊಟ್ಟು ತನಿಖೆ ಎದುರಿಸಲಿ ಎಂದು ಆಗ್ರಹಿಸಿದ್ದಾರೆ.

ಪ್ರಿಯಾಂಕ್ ಖರ್ಗೆ ಅವರ ಎಡಗೈ ಭಂಟನಿಂದ ಸಚಿನ್ ಪಾಂಚಾಳ ಆತ್ಮಹತ್ಯೆ ಆಗಿದೆ. ಇದನ್ನು ವಿರೋಧಿಸಿ ಕಲಬುರಗಿಯಲ್ಲಿ ದೊಡ್ಡ ಮಟ್ಟದಲ್ಲಿ ಹೋರಾಟ ಆಯೋಜನೆ ಮಾಡಿದ್ದೇವೆ. ಶಿಕಾರಿಪುರದಲ್ಲಿ ನಮ್ಮ ಮುಖಂಡರು ಮೃತಪಟ್ಟಿದ್ದರು ಹೀಗಾಗಿ ಭಾಗವಹಿಸಲು ಸಾಧ್ಯವಾಗಿಲ್ಲ. ನಮ್ಮ ಮುಖಂಡರು ಹೋರಾಟದಲ್ಲಿ ಭಾಗವಹಿಸುತ್ತಿದ್ದಾರೆ. ನಮಗೆ ಪೊಲೀಸರಿಂದ ನ್ಯಾಯ ಸಿಗುವ ವಿಶ್ವಾಸ ಇಲ್ಲ. ಸಚಿನ್ ಸಹೋದರಿ ಅವರ ಕುಟುಂಬ ಸಿಬಿಐ ತನಿಖೆಗೆ ಆಗ್ರಹಿಸಿದ್ದಾರೆ ಎಂದು ಮಾಹಿತಿ ಹಂಚಿಕೊಂಡಿದ್ದಾರೆ.



ಮಹಾರಾಷ್ಟ್ರದ ಸುಪಾರಿ ಕಿಲ್ಲರ್ ಬಳಸಿಕೊಂಡು ಶಾಸಕ ಮತ್ತಿಮೋಡ್, ಹಿಂದೂ ಮುಖಂಡರ ಹತ್ಯೆಗೆ ಸಂಚು ಮಾಡಿದ್ದಾರೆ. ವಿಪಕ್ಷ ನಾಯಕರು ಬೆಳೆದರೆ ಗುಲ್ಬರ್ಗಾದಲ್ಲಿ ಇವರ ಬೇಳೆ ಬೇಯಿಸಲು ಸಾಧ್ಯವಿಲ್ಲ ಎಂದು ಹತ್ಯೆ ಮಾಡಲು ಹೊರಟಿದ್ದಾರೆ. ಪ್ರಿಯಾಂಕ್ ಖರ್ಗೆಯವರೇ ನಿಮಗೆ ಸಲಹೆ ಕೊಡ್ತೇನೆ. ನೀವು ಪ್ರಾಮಾಣಿಕರಾಗಿದ್ದರೆ ಸಿಬಿಐ ತನಿಖೆಗೆ ವಹಿಸಿ. ಸಿದ್ದರಾಮಯ್ಯ ಅವರನ್ನು ನಂಬಬೇಡಿ. ನಿಮ್ಮ ಪಕ್ಷದಲ್ಲಿ ಹಲವು ಷಡ್ಯಂತ್ರ ನಡೆಯುತ್ತಿದೆ. ನಿಮಗೆ ಸಿದ್ದರಾಮಯ್ಯ ಅವರಿಂದ ನ್ಯಾಯ ಸಿಗಲ್ಲ. ನಿಮಗೆ ಮುಖ್ಯಮಂತ್ರಿ ಆಗುವ ಆಸೆ ಇದ್ದರೆ ಸಿಬಿಐ ತನಿಖೆಗೆ ವಹಿಸಿ ಎಂದಿದ್ದಾರೆ. ಕಾಂಗ್ರೆಸ್ ಸರ್ಕಾರ ಎರಡು ವರ್ಷದಲ್ಲಿ ಏನು ಸಾಧನೆ ಆಗಿದೆ ಎಂದು ಸಿದ್ದರಾಮಯ್ಯ ಅವರ ಮಂತ್ರಿಗಳು ಹೇಳಬೇಕು. ಎರಡು ವರ್ಷದಲ್ಲಿ ಅವರ ಸಾಧನೆ ಶೂನ್ಯ. ಈ ಅವಧಿಯಲ್ಲಿ ಯಾವೊಬ್ಬ ಶಾಸಕ ಶಂಕುಸ್ಥಾಪನೆ ಗುದ್ದಲಿ ಪೂಜೆ ಮಾಡಿಲ್ಲ. ನಾವು ಹೇಳಿದರೆ ವಿಪಕ್ಷ ಶಾಸಕರ ಟೀಕೆ ಅಂತಾರೆ. ಕಾಂಗ್ರೆಸ್ ಶಾಸಕರು ಆಡಳಿತ ಪಕ್ಷದ ಶಾಸಕರು ಆರೋಪ ಮಾಡ್ತಿದ್ದಾರೆ. ಕಾಗವಾಡ ಶಾಸಕ, ಆರ್ ವಿ ದೇಶಪಾಂಡೆ ಆರೋಪ ಮಾಡಿದ್ದಾರೆ. ಕ್ಷೇತ್ರಕ್ಕೆ ಅನುದಾನ ತರಲು ಪರದಾಡ್ತಿದ್ದಾರೆ ಎಂದು ಆರೋಪಿಸಿದ್ದಾರೆ.

Printed, Published & Owned by N.Venugopal Krishna, Printed at DASHAPRAMATHI MUDRANALAYA, No.433/1, Chikkavitalenahalli Village, Thagachagere Post, Kasaba Hobli, Channapatna Taluk, Ramanagar District, Pin-562160. Published at No.15, Ground Floor, 12th Block, 5th Main, Kumara Park (West), Behind BDA Head Office, Bengaluru-560020. Editor: N.Venugopal Krishna, Mobile No.+91 94835 89085, email: sanjemugilu@gmail.com